ಮೈಸೂರು ಮಿತ್ರ


ಮೈಸೂರು-ಮಂಡ್ಯ-ಚಾಮರಾಜನಗರ-ಕೊಡಗು-ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | 45 | ಜನವರಿ 11 ಶನಿವಾರ 2025

ಸಂಪುಟ: 45 | ಸಂಚಿಕೆ: 265 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ-ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com



ಮೈಸೂರು ವಿಮಾನ ನಿಲ್ದಾಣ ಅಭಿವೃದ್ಧಿಗೆ ತ್ವರಿತ ಕ್ರಮ

- ತವರು ಮೈಸೂರು ಅಭಿವೃದ್ಧಿ ಸಂಬಂಧ ಬೆಂಗಳೂರಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸಭೆ
- ಜ.15ರಂದು ಖುದ್ದು ವಿಮಾನಯಾನ ಸಚಿವರ ಭೇಟಿಗೆ ಮುಖ್ಯಮಂತ್ರಿ ನಿರ್ಧಾರ
- ಖಾಸಗಿ ಬಡಾವಣೆಗಳ ಸಮಸ್ಯೆ ಸಂಬಂಧ ಪಾಲಿಕೆ, ಮುಡಾ ಪ್ರತ್ಯೇಕ ಸಭೆ
- ಲ್ಯಾನ್ಸ್‌ಡೌನ್ ಬಿಲ್ಡಿಂಗ್ ಪುನರ್ ನಿರ್ಮಾಣಕ್ಕೆ ಕ್ರಮ; ದೇವರಾಜ ಮಾರುಕಟ್ಟೆ ಮಳಿಗೆ ತೆರವಿಗೂ ಸೂಚನೆ
- ಮೈಸೂರು ನಗರದ 46 ಕಿ.ಮೀ. ರಸ್ತೆ ಮೇಲ್ದರ್ಜೆಗೆ; ಹಳೇ ಡಿಸಿ ಕಚೇರಿ ಮ್ಯೂಸಿಯಂ ಮಾಡಲು 13 ಕೋಟಿ ರೂ. ಯೋಜನೆ


ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಬೆಂಗಳೂರಲ್ಲಿ ಮೈಸೂರು ಅಭಿವೃದ್ಧಿಗೆ ಸಂಬಂಧಿಸಿದಂತೆ ಸ್ಥಳೀಯ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ಸಭೆ ನಡೆಸಿದರು.

ಬೆಂಗಳೂರು, ಜ.10(ಕೆಎಂಶಿ)- ಮೈಸೂರಿನ ಮಂಡಕಳ್ಳಿ ವಿಮಾನ ನಿಲ್ದಾಣ ರನ್‌ವೇ ವಿಸ್ತರಣೆ ಯೋಜನೆ ಕೈಗೆತ್ತಿಕೊಂಡು, ತ್ವರಿತವಾಗಿ ಪೂರ್ಣಗೊಳಿಸುವಂತೆ ಕೇಂದ್ರ ನಾಗರಿಕ ವಿಮಾನಯಾನ ಸಚಿವ ಕೆ.ರಾಮಮೋಹನ್ ನಾಯ್ಡು ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಖುದ್ದಾಗಿ ಭೇಟಿ ಮಾಡಿ ಮನವಿ ಮಾಡಲು ನಿರ್ಧರಿಸಿದ್ದಾರೆ.

ಇದೇ 14ರಂದು ಎರಡು ದಿನಗಳ ದೆಹಲಿ ಪ್ರವಾಸ ಕೈಗೊಳ್ಳುತ್ತಿರುವ ಮುಖ್ಯಮಂತ್ರಿ ಅವರು, 15ರಂದು ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಿದ್ದಾರೆ. ಮೈಸೂರು ಅಭಿವೃದ್ಧಿಗೆ ಸಂಬಂಧಿಸಿದಂತೆ ಗೃಹ ಕಚೇರಿ ಕೃಷ್ಣಾದಲ್ಲಿ, ಸ್ಥಳೀಯ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳ ಸಭೆಯಲ್ಲಿ ಈ ವಿಷಯ ತಿಳಿಸಿದ್ದಲ್ಲದೆ, ವಿಮಾನ ನಿಲ್ದಾಣ ವಿಸ್ತರಣೆ ಯೋಜನೆಗಾಗಿ ಭೂಸ್ವಾಧೀನ ಪ್ರಕ್ರಿಯೆ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದು, ಇನ್ನು ಉಳಿದಿರುವ 46 ಎಕರೆ ಭೂಸ್ವಾಧೀನ ಕಾರ್ಯವನ್ನು ಪೂರ್ಣಗೊಳಿಸಿ ರೈತರಿಗೆ ಪರಿಹಾರ ನೀಡುವಂತೆಯೂ ಸೂಚಿಸಿದರು.

20 ವರ್ಷದಿಂದ ನೀವೇ ಮುಡಾ ಸದಸ್ಯರಾಗಿದ್ದೂ ಅವ್ಯವಸ್ಥೆ ಹೇಗಾಯ್ತು?

ಮುಡಾ ಅವ್ಯವಸ್ಥೆ ಬಗ್ಗೆ ಎಲ್ಲಾ ಪಕ್ಷದ ಶಾಸಕರ ವಿರುದ್ಧ ಸಿಎಂ ಸಿದ್ದರಾಮಯ್ಯ ಇಂದು ಗರಂ ಆದರು. ಇಂದಿನ ಸಭೆಯಲ್ಲಿ ಮೈಸೂರಿನ ಖಾಸಗಿ ಬಡಾವಣೆಗಳಲ್ಲಿನ ಮೂಲಭೂತ ಸವಲತ್ತುಗಳ ಕೊರತೆ, ಕಳಪೆ ನಿರ್ವಹಣೆ, ನೀರು-ಒಳಚರಂಡಿ ವ್ಯವಸ್ಥೆ ಸರಿಯಾಗಿ ಇಲ್ಲದಿರುವ ಬಗ್ಗೆ ಶಾಸಕರು, ಸಿಎಂ ಗಮನಕ್ಕೆ ತಂದರು. ಈ ವೇಳೆ ಸಿಎಂ, **'ಎಲ್ಲಾ ಪಕ್ಷದ ಶಾಸಕರು ನೀವುಗಳೇ ಸುಮಾರು 20 ವರ್ಷಗಳಿಂದ ಮುಡಾ ಸದಸ್ಯರಿದ್ದೀರಿ. ನೀವುಗಳು ಸದಸ್ಯರಾಗಿದ್ದೂ ಯಾಕೆ ಹೀಗಾಯ್ತು? ಯಾಕೆ ಅವ್ಯವಸ್ಥೆ ಆಗಲು ಬಿಟ್ಟಿದ್ದೀರಿ ಎಂದು ಅಸಮಾಧಾನ ಹೊರಹಾಕಿದ್ದಾರೆ.**

950 ಬಡಾವಣೆ ಸಮಸ್ಯೆ: ಹೊಸ ಬಡಾವಣೆ ಮಾಡುವಾಗ ವಿದ್ಯುತ್ ಸಂಪರ್ಕ, ರಸ್ತೆ, ಒಳಚರಂಡಿ ಇತ್ಯಾದಿ ಸೌಲಭ್ಯ ಕಲ್ಪಿಸುವುದು ಬಡಾವಣೆ ಅಭಿವೃದ್ಧಿ ಮಾಡುವವರ ಜವಾಬ್ದಾರಿ. ಬಳಿಕ ನಗರ ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಬೇಕಾಗಿತ್ತು. ಇಂತಹ ಸುಮಾರು 950 ಬಡಾವಣೆ ಹಸ್ತಾಂತರಿಸದೇ ಇರುವುದರಿಂದ ಸಮಸ್ಯೆ ಮುಂದುವರೆದಿದೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಬಳಿಕ ನಗರಪಾಲಿಕೆ, ಮುಡಾ ಕುರಿತಾಗಿ ಪ್ರತ್ಯೇಕ ಸಭೆ ಕರೆಯುವಂತೆ ಮುಖ್ಯಮಂತ್ರಿಗಳು ಸೂಚನೆ ನೀಡಿದರು.

ಲ್ಯಾನ್ಸ್‌ಡೌನ್ ಕಟ್ಟಡ ಅದೇ ಮಾದರಿ ಪುನರ್ ನಿರ್ಮಾಣ: ಶಿಥಿಲಗೊಂಡ ಲಾನ್ಸ್‌ಡೌನ್ ಕಟ್ಟಡ ತೆರವುಗೊಳಿಸಿ, ಅದೇ ಮಾದರಿಯಲ್ಲಿ ಕಟ್ಟಡ ಕಾಮಗಾರಿ ಆರಂಭಿಸಲು ಕ್ರಮ ಕೈಗೊಳ್ಳಬೇಕು. ಈ ಕುರಿತಾದ ಎಲ್ಲಾ ಕಾನೂನು ತೊಡಕುಗಳನ್ನು ಬಗೆಹರಿಸಬೇಕು ಎಂದು ಇದೇ ಸಂದರ್ಭದಲ್ಲಿ ಅಧಿಕಾರಿಗಳಿಗೆ ಆದೇಶಿಸಿದರು.

ದೇವರಾಜ ಮಾರುಕಟ್ಟೆ ಮಳಿಗೆ ತೆರವಿಗೆ ಕ್ರಮ: ಶಿಥಿಲಾವಸ್ಥೆಯಲ್ಲಿರುವ ದೇವರಾಜ ಮಾರುಕಟ್ಟೆ ಮಳಿಗೆ ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕು. ದಳವಾಯಿ ಕೆರೆಗೆ ಕೊಳಚೆ ನೀರು ಸೇರುವುದನ್ನು ತಡೆಗಟ್ಟಿ, ಅದನ್ನು ಅಭಿವೃದ್ಧಿಪಡಿಸಲು 25 ಕೋಟಿ ರೂ. ಪ್ರಸ್ತಾವನೆ ಸಿದ್ಧಪಡಿಸಲಾಗಿದೆ.

■ 6ನೇ ಪುಟಕ್ಕೆ

ಯಾವ ರಸ್ತೆಗೂ ನನ್ನ ಹೆಸರಿಡಿ ಅಂತಾ ಯಾರಿಗೂ ಹೇಳಿಲ್ಲ

- ಕೆಆರ್‌ಎಸ್ ರಸ್ತೆಗೆ ತಮ್ಮ ಹೆಸರು ನಾಮಕರಣ ಪ್ರಸ್ತಾಪ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರು ವಿಮಾನ ನಿಲ್ದಾಣದಲ್ಲಿ ಇದೇ ಮೊದಲ ಬಾರಿ ಪ್ರತಿಕ್ರಿಯೆ
- ಮೈಸೂರು ವಿಶ್ವವಿದ್ಯಾನಿಲಯದವರು ಡಾಕ್ಟರೇಟ್ ಕೊಡ್ತೇವೆ ಎಂದಾಗಲೇ ನಿರಾಕರಿಸಿದೆ


ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಮೈಸೂರು ವಿಮಾನ ನಿಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಮೈಸೂರು, ಜ.10(ಎಸ್‌ಬಿಡಿ)- ಯಾವ ರಸ್ತೆಗೂ ನನ್ನ ಹೆಸರಿಡಿ ಎಂದು ಹೇಳಿಲ್ಲ. ಕೆಆರ್‌ಎಸ್ ರಸ್ತೆಗೆ ಬೇರೆ ಹೆಸರಿದ್ದರೆ ಬದಲಾವಣೆ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸ್ಪಷ್ಟವಾಗಿ ಹೇಳಿದರು.

ಖಾಸಗಿ ಕಾರ್ಯಕ್ರಮ ನಿಮಿತ್ತ ಶುಕ್ರವಾರ ಮೈಸೂರಿಗೆ ಆಗಮಿಸಿದ್ದ ಅವರು ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡುವ ವೇಳೆ ಒಂಟಿಕೊಪ್ಪಲು ಶ್ರೀ ಲಕ್ಷ್ಮಿ ವೆಂಕಟರಮಣ ಸ್ವಾಮಿ ದೇವಸ್ಥಾನದಿಂದ ರಾಯಲ್ ಇನ್ ಹೋಟೆಲ್‌ವರೆಗಿನ ಕೆಆರ್‌ಎಸ್ ರಸ್ತೆಗೆ 'ಸಿದ್ದರಾಮಯ್ಯ ಆರೋಗ್ಯ ಮಾರ್ಗ' ನಾಮಕರಣ ಪ್ರಸ್ತಾಪ ಸಂಬಂಧ ಮೊದಲ ಬಾರಿ ಪ್ರತಿಕ್ರಿಯೆ ನೀಡಿದರು. ರಸ್ತೆಗೆ ಹೆಸರಿಡಿ ಎಂದು ನಾನು ಈವರೆಗೆ ಹೇಳಿಯೇ ಇಲ್ಲ. ನಾನು ರಾಜಕೀಯಕ್ಕೆ ಮೊನ್ನೆ ಬಂದವನಲ್ಲ. 45 ವರ್ಷದಿಂದ ರಾಜಕಾರಣದಲ್ಲಿದ್ದೇನೆ. ಯಾರಿಗೂ ನನ್ನ ಹೆಸರಿಡಿ ಎಂದು ಕೇಳಿಲ್ಲ. ಮೈಸೂರು ವಿಶ್ವವಿದ್ಯಾನಿಲಯದವರು ನನಗೆ ಡಾಕ್ಟರೇಟ್ ಕೊಡುತ್ತೇವೆ ಎಂದಾಗಲೇ ನಾನು ಬೇಡ ಎಂದೆ. ಡಾಕ್ಟರೇಟ್ ತೆಗೆದುಕೊಳ್ಳುವಷ್ಟು ಯೋಗ್ಯತೆ ನನಗಿಲ್ಲ ಎಂದು ನಿರಾಕರಿಸಿದೆ. ಆ ರಸ್ತೆಗೆ ಬೇರೆ ಹೆಸರಿದ್ದರೆ ಬದಲಾವಣೆ ಬೇಡ ಎಂದು ಕಡ್ಡಿ ತುಂಡಾದಂತೆ ಹೇಳಿದರು. ಆ ರಸ್ತೆಯ ಶ್ರೀ ವೆಂಕಟರಮಣ ದೇವಸ್ಥಾನದಿಂದ ರಿಂಗ್‌ರಸ್ತೆ ಜಂಕ್ಷನ್‌ವರೆಗೆ ಯಾವುದೇ ಹೆಸರಿಲ್ಲ ಎಂಬ ಕಾಂಗ್ರೆಸ್ ಸ್ಥಳೀಯ ನಾಯಕರ ವಾದಕ್ಕೆ ಪ್ರತಿಕ್ರಿಯಿಸಿದ ಸಿಎಂ, ಅದರ ಬಗ್ಗೆ ನನಗೇನೂ ಗೊತ್ತಿಲ್ಲ. ನಾನು ಹೆಸರಿಡಿ ಎಂದು ಕೇಳಿಯೂ ಇಲ್ಲ. ಈ ಬಗ್ಗೆ ಯಾರೂ ನನ್ನೊಂದಿಗೆ ಮಾತನಾಡಿಲ್ಲ.

■ 6ನೇ ಪುಟಕ್ಕೆ

ಖೋ ಖೋ ವಿಶ್ವಕಪ್‌ಗೆ ಮೈಸೂರು ಗ್ರಾಮೀಣ ಪ್ರತಿಭೆ ಚೈತ್ರ ಆಯ್ಕೆ ■ ಪುಟ-4

ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯು ಪರೀಕ್ಷಾ ಅಂತಿಮ ವೇಳಾಪಟ್ಟಿ ಪ್ರಕಟ



ಬೆಂಗಳೂರು, ಜ.10- ರಾಜ್ಯದಲ್ಲಿ 2024-25ನೇ ಸಾಲಿನ ಶೈಕ್ಷಣಿಕ ವರ್ಷದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯ ಅಂತಿಮ ವೇಳಾಪಟ್ಟಿ ಪ್ರಕಟಗೊಂಡಿದೆ. ಮಾರ್ಚ್ 1ರಿಂದ ಮಾರ್ಚ್ 20ರವರೆಗೆ ದ್ವಿತೀಯ ಪಿಯು ಪರೀಕ್ಷೆ -1 ಹಾಗೂ ಮಾರ್ಚ್ 21ರಿಂದ ಏಪ್ರಿಲ್ 4ರವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ -1 ನಡೆಯಲಿದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಪ್ರಕಟಣೆಯಲ್ಲಿ ತಿಳಿಸಿದೆ.

ದ್ವಿತೀಯ ಪಿಯು ಎಲ್ಲ ಅಂತಿಮ ಪರೀಕ್ಷೆಯು ಬೆಳಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ನಡೆಯಲಿವೆ. ಎಲ್ಲ ವಿಷಯಗಳಿಗೂ ವಿಷಯ ಸಂಕೇತಗಳನ್ನು ಕೊಡಲಾಗಿದ್ದು, ಆಯಾ ವಿಷಯಕ್ಕೆ ಸಂಬಂಧಿಸಿದಂತೆ ಗರಿಷ್ಠ 80 ಅಂಕಗಳಿಗೆ ಲಿಖಿತ ಪರೀಕ್ಷೆಗಳು ನಡೆಯಲಿವೆ.

ಪಿಯುಸಿ ಪರೀಕ್ಷೆ 1ರ ವೇಳಾಪಟ್ಟಿ

- ಮಾ.1- ಕನ್ನಡ, ಅರೇಬಿಕ್
- ಮಾ.3- ಗಣಿತ, ಶಿಕ್ಷಣ ಶಾಸ್ತ್ರ, ತರ್ಕಶಾಸ್ತ್ರ, ವ್ಯವಹಾರ ಅಧ್ಯಯನ
- ಮಾ.4- ತಮಿಳು, ತೆಲುಗು, ಮಲೆಯಾಳಂ, ಮರಾಠಿ, ಉರ್ದು, ಸಂಸ್ಕೃತ
- ಮಾ.5- ರಾಜ್ಯಶಾಸ್ತ್ರ, ಸಂಖ್ಯಾಶಾಸ್ತ್ರ
- ಮಾ.7- ಇತಿಹಾಸ, ಭೌತಶಾಸ್ತ್ರ
- ಮಾ.10- ಐಚ್ಛಿಕ ಕನ್ನಡ, ಲೆಕ್ಕಶಾಸ್ತ್ರ, ಭೂಗರ್ಭ ಶಾಸ್ತ್ರ, ಗೃಹ ವಿಜ್ಞಾನ
- ಮಾ.12- ಮನಃಶಾಸ್ತ್ರ, ರಸಾಯನಶಾಸ್ತ್ರ, ಮೂಲ ಗಣಿತ
- ಮಾ.13- ಅರ್ಥಶಾಸ್ತ್ರ
- ಮಾ.15- ಇಂಗ್ಲಿಷ್
- ಮಾ.17 - ಭೂಗೋಳ ಶಾಸ್ತ್ರ
- ಮಾ.18- ಜೀವಶಾಸ್ತ್ರ, ಸಮಾಜ ಶಾಸ್ತ್ರ, ವಿದ್ಯುನ್ಮಾನಶಾಸ್ತ್ರ, ಗಣಕ ವಿಜ್ಞಾನ
- ಮಾ.19- ಹಿಂದೂಸ್ಥಾನಿ ಸಂಗೀತ, ಮಾಹಿತಿ ತಂತ್ರಜ್ಞಾನ, ಆಟೋಮೊಬೈಲ್,
- ಮಾ.20- ಹಿಂದಿ

ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ರಾಜ್ಯಾದ್ಯಂತ ಏಕಕಾಲಕ್ಕೆ ನಡೆಯಲಿದೆ. ಮಾ.21ರಿಂದ ಏ.4ರವರೆಗೆ ಪರೀಕ್ಷೆ ನಡೆಯಲಿದ್ದು, ಶಾಲಾ ಅಭ್ಯರ್ಥಿ, ಪುನರಾವರ್ತಿತ ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ ಹಾಗೂ ಪುನರಾವರ್ತಿತ ಖಾಸಗಿ ಅಭ್ಯರ್ಥಿಗಳು ಏಕಕಾಲದಲ್ಲಿ ಪರೀಕ್ಷೆಯನ್ನು ಎದುರಿಸಲಿದ್ದಾರೆ. ಎಲ್ಲ ಪರೀಕ್ಷೆಗಳು ಬೆಳಗ್ಗೆ 10 ಗಂಟೆಗೆ ಆರಂಭವಾಗಿ ಮಧ್ಯಾಹ್ನ 1.15 ಗಂಟೆಗೆ ಮುಕ್ತಾಯಗೊಳ್ಳಲಿವೆ.

ಎಸ್‌ಎಸ್‌ಎಲ್‌ಸಿ ಪರೀಕ್ಷೆ ವೇಳಾಪಟ್ಟಿ


- ಮಾ.21 - ಕನ್ನಡ (ಪ್ರಥಮ ಭಾಷೆಗಳು)
- ಮಾ.24 -ಗಣಿತ (ಐಚ್ಛಿಕ-ಸಮಾಜ ಶಾಸ್ತ್ರ)
- ಮಾ.26 - ಇಂಗ್ಲಿಷ್ (ದ್ವಿತೀಯ ಭಾಷೆ-ಕನ್ನಡ)
- ಮಾ.29 - ಸಮಾಜ ವಿಜ್ಞಾನ
- ಏ.02 - ವಿಜ್ಞಾನ
- ಏ.04 - ಹಿಂದಿ (ತೃತೀಯ ಭಾಷೆಗಳು)

ಮಹದೇಶ್ವರಬೆಟ್ಟದಲ್ಲಿ ಫೆ.15ಕ್ಕೆ ಕ್ಯಾಬಿನೆಟ್ ಸಭೆ ನಿಶ್ಚಿತ



ಬೆಂಗಳೂರು, ಜ.10- ಈಗಾಗಲೇ ರಾಜ್ಯ ಸರ್ಕಾರ ನಿರ್ಧರಿಸಿದಂತೆ ಬರುವ ಫೆ.15ರಂದು ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ರಾಜ್ಯದ ಸಚಿವ ಸಂಪುಟ ಸಭೆ ಜರುಗಲಿದೆ. ಇದರಲ್ಲಿ ಯಾವುದೇ ಬದಲಾವಣೆಗಳು ಆಗಿಲ್ಲ ಎಂದು ಸರ್ಕಾರದ ಅಪರ ಕಾರ್ಯದರ್ಶಿ (ಸಚಿವ ಸಂಪುಟ) ಆರ್.ಚಂದ್ರಶೇಖರ್ ತಿಳಿಸಿದ್ದಾರೆ.

ಕೆಲವು ಮಾಧ್ಯಮಗಳಲ್ಲಿ ಸಚಿವ ಸಂಪುಟ ಸಭೆಯು ಚಿಕ್ಕಬಳ್ಳಾಪುರ ಜಿಲ್ಲೆಯ ನಂದಿ ಬೆಟ್ಟಕ್ಕೆ ಸ್ಥಳಾಂತರಿಸಲಾಗಿದೆ ಎಂದು ಸುದ್ದಿ ಪ್ರಕಟವಾಗಿದೆ. ಆದರೆ ಯಾವುದೇ ಬದಲಾವಣೆಗಳಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಪೂರ್ವ ನಿರ್ಧಾರದಂತೆ ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ಬೆಟ್ಟದಲ್ಲಿಯೇ ಸಚಿವ ಸಂಪುಟ ಸಭೆ ಜರುಗಲಿದೆ ಎಂದು ಅವರು ಪ್ರಕಟಣೆಯಲ್ಲಿ ಸ್ಪಷ್ಟಪಡಿಸಿದ್ದಾರೆ.



ಬಿಜೆಪಿ ಮಾಜಿ ಶಾಸಕರು, ಚುನಾವಣೆಯಲ್ಲಿ ಪರಾಜಿತರಾದವರ ಸಭೆ

ವಿಜಯೇಂದ್ರ ಪರ ಜೈ...ಜೈ...

- ಯತ್ನಾಳ್ ಬಣದ ವಿರುದ್ಧ ಇನ್ನೂ ಕ್ರಮ ಕೈಗೊಳ್ಳದ್ದಕ್ಕೆ ಅಸಮಾಧಾನ
- ಯಡಿಯೂರಪ್ಪೋತ್ಸವದ ಮೂಲಕ ಶಕ್ತಿ ಪ್ರದರ್ಶನ ಪ್ರಸ್ತಾಪ


ತಮ್ಮ ಬಣದ ಶಕ್ತಿ ಪ್ರದರ್ಶನ ಎಂಬಂತೆ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಬಿ.ವೈ. ವಿಜಯೇಂದ್ರ ಸಭೆ ನಡೆಸಿದರು.

> ನಾವು ಪಕ್ಷ ಸಂಘಟನೆ ಬಗ್ಗೆ ಗಮನಹರಿಸೋಣ. ಭಿನ್ನಾಭಿಪ್ರಾಯ ಹೊಂದಿರುವವರ ಬಗ್ಗೆ ಮಾತನಾಡುವುದು ಬೇಡ. ಯತ್ನಾಳ್ ಬಣದ ವಿರುದ್ಧ ಯಾರೂ ಬಹಿರಂಗವಾಗಿ ಮಾತನಾಡಬಾರದು. ಯಾರೋ ಒಬ್ಬಿಬ್ಬರು ಹಗುರವಾಗಿ ಮಾತನಾಡುತ್ತಾರೆ ಎಂದು ತಲೆ ಕೆಡಿಸಿಕೊಳ್ಳಬೇಡಿ. ಎಲ್ಲವನ್ನೂ ಹೈಕಮಾಂಡ್ ಗಮನಿಸುತ್ತಿದೆ. ಯಾರಿಗೆ ಏನು ಮಾಡಬೇಕು ಎಂಬುದು ವರಿಷ್ಠರಿಗೆ ಗೊತ್ತಿದೆ. ನಾವು ವಿಜಯೇಂದ್ರ ನಾಯಕತ್ವದಲ್ಲಿ ಸಂಘಟನೆ ಮಾಡೋಣ. - ಬಿ.ಎಸ್.ಯಡಿಯೂರಪ್ಪ, ಮಾಜಿ ಮುಖ್ಯಮಂತ್ರಿ

ಬೆಂಗಳೂರು, ಜ. 10-ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದ ಚುನಾವಣೆ ಪ್ರಕ್ರಿಯೆ ಆರಂಭವಾಗುತ್ತಿದ್ದಂತೆಯೇ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತು ಅವರ ಪುತ್ರ ಬಿ.ವೈ. ವಿಜಯೇಂದ್ರ ಪಕ್ಷದ ಮಾಜಿ ಶಾಸಕರು ಹಾಗೂ ಚುನಾವಣೆಯಲ್ಲಿ ಪರಾಜಿತರಾದವರ ಸಭೆ ನಡೆಸಿ, ಮೊದಲ ಹಂತದ ಶಕ್ತಿ ಪ್ರದರ್ಶಿಸಿದ್ದಾರೆ.

ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ನಡೆದ ಈ ಸಭೆಯಲ್ಲಿ 130ಕ್ಕೂ ಹೆಚ್ಚು ಪರಾಜಿತರು ಹಾಗೂ ಮಾಜಿ ಶಾಸಕರು ಭಾಗವಹಿಸಿದ್ದರು. ವಿಜಯೇಂದ್ರ ಅವರೇ ಅಧ್ಯಕ್ಷರಾಗಿ ಮುಂದುವರೆಯಬೇಕೆಂದು ಎಲ್ಲರೂ ಒಕ್ಕೊರಲಿನಿಂದ ಒತ್ತಾಯಿಸಿದರು. ಇದೇ ವೇಳೆ ವಿಜಯೇಂದ್ರ ವಿರುದ್ಧ ತೊಡೆ ತಟ್ಟಿರುವ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಈವರೆಗೂ ಹೈಕಮಾಂಡ್ ಕ್ರಮ ಕೈಗೊಳ್ಳದೇ ಇರುವ ಬಗ್ಗೆ ಅಸಮಾಧಾನ ವ್ಯಕ್ತವಾಯಿತು.

ಸಭೆಯಲ್ಲಿ ಒಕ್ಕೊರಲ ಆಗ್ರಹ

- ವಿಜಯೇಂದ್ರ ರಾಜ್ಯಾಧ್ಯಕ್ಷರಾಗಿ ಮುಂದುವರೆಯಬೇಕು
- ವಿಜಯೇಂದ್ರ ನೇತೃತ್ವದಲ್ಲೇ ಚುನಾವಣೆಗೆ ಹೋಗಬೇಕು
- ಯತ್ನಾಳ್ ಬಣದ ವಿರುದ್ಧ ಕೂಡಲೇ ಶಿಸ್ತಿನ ಕ್ರಮ ಕೈಗೊಳ್ಳಬೇಕು
- ಯಡಿಯೂರಪ್ಪ ಹೆಸರಲ್ಲಿ ಶಕ್ತಿ ಪ್ರದರ್ಶನ ಮಾಡಬೇಕು

ಯತ್ನಾಳ್ ತಂಡ ಕೆಲವೆಡೆ ಸಭೆಗಳನ್ನು ನಡೆಸಿ ಶಕ್ತಿ ಪ್ರದರ್ಶಿಸಿರುವ ಹಿನ್ನೆಲೆಯಲ್ಲಿ ದಾವಣಗೆರೆಯಲ್ಲಿ 'ಯಡಿಯೂರಪ್ಪೋತ್ಸವ'ದ ಮೂಲಕ ಶಕ್ತಿ ಪ್ರದರ್ಶಿಸುವುದಾಗಿ ರೇಣುಕಾಚಾರ್ಯ ಸೇರಿದಂತೆ ಕೆಲವರು ಸಭೆಯಲ್ಲಿ ಪ್ರಸ್ತಾಪಿಸಿದರು. ಅಲ್ಲದೇ, ಅಮಿತ್ ಶಾ ಹೇಳಿಕೆ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಆಗಿರುವ ಡ್ಯಾಮೇಜ್ ಕಂಟ್ರೋಲ್ ಮಾಡಲು ಬಿಜೆಪಿ ಸಂಗಮ ಅಭಿಯಾನ ಕೈಗೊಳ್ಳುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು. ಸಭೆಯಲ್ಲಿ ವಿಜಯೇಂದ್ರ ಪರ ಧ್ವನಿ ಎತ್ತಿದ ನಾಯಕರು,

■ 6ನೇ ಪುಟಕ್ಕೆ



ಗಣರಾಜ್ಯೋತ್ಸವ ಪರೇಡ್‌ಗೆ ಮೈಸೂರಿನ ವಿದ್ಯಾರ್ಥಿಗಳು


ಪಿ.ಕೆ.ಪ್ರತೀಕ್ಷಾ


ಕೆ.ಎಸ್.ಕಾವೇರಮ್ಮ

ಮೈಸೂರು, ಜ. 10– ನವದೆಹಲಿಯಲ್ಲಿ ಜ.26 ರಂದು ನಡೆಯಲಿರುವ 76ನೇ ಗಣರಾಜ್ಯೋತ್ಸವದ ಪರೇಡ್‌ನಲ್ಲಿ ಮೈಸೂರಿನ ಜಯಲಕ್ಷ್ಮೀಪುರಂನ ಸಂತ ಜೋಸೆಫರ ಪ್ರಥಮ ದರ್ಜೆ ಕಾಲೇಜಿನ ಅಂತಿಮ ವರ್ಷದ ಬಿಸಿಎ ವಿದ್ಯಾರ್ಥಿನಿ ಕೆ.ಎಸ್. ಕಾವೇರಮ್ಮ ಮತ್ತು ಶೇಷಾದ್ರಿಪುರಂ ಸ್ವತಂತ್ರ ಪದವಿಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವಿದ್ಯಾರ್ಥಿ ಪಿ.ಕೆ. ಪ್ರತೀಕ್ಷಾ ಭಾಗವಹಿಸಲಿದ್ದಾರೆ. ಅವರು ಎನ್‌ಸಿಸಿ ಕರ್ನಾಟಕ–ಗೋವಾ ನಿರ್ದೇಶನಾಲಯವನ್ನು ಪ್ರತಿನಿಧಿಸಲಿದ್ದಾರೆ.

ಗಣರಾಜ್ಯೋತ್ಸವ ಪರೇಡ್‌ಗೆ 'ನಟನ' ಕಲಾವಿದರು



ಮೈಸೂರು, ಜ.10–ಜ.26ರ ದೆಹಲಿಯ 'ಗಣರಾಜ್ಯೋತ್ಸವ ಪರೇಡ್'ನಲ್ಲಿ ಕಾರ್ಯಕ್ರಮದಲ್ಲಿ ಈ ಬಾರಿ ಕರ್ನಾಟಕದಿಂದ ಖ್ಯಾತ ಕಲಾನಿರ್ದೇಶಕ ಶಶಿಧರ ಅಡಪ ವಿನ್ಯಾಸದ ನಾಡಿನ ವಿಶೇಷ ವಾಸ್ತುಶಿಲ್ಪ, ಪ್ರವಾಸಿ ತಾಣವಾದ ಲಕ್ಕುಂಡಿ ದೇವಾಲಯದ ಸ್ತಬ್ಧಚಿತ್ರವು ಪ್ರದರ್ಶನಗೊಳ್ಳಲಿದೆ. ಈ ಸ್ತಬ್ಧಚಿತ್ರದ ಪ್ರದರ್ಶನವನ್ನು ನೀಡಲು 'ನಟನ'ದ ಕಲಾವಿದರು ಆಯ್ಕೆಯಾಗಿದ್ದಾರೆ.

ನಾಳೆ 'ಇದ್ದಾಗ ನಿಮ್ದು ಕದ್ದಾಗ ನಮ್ದು' ನಾಟಕ

ಮೈಸೂರು, ಜ.10(ಜಿಎ)–ರಂಗರಥ ಹಾಗೂ ಸಂಚಲನ ಮೈಸೂರು ಸಂಸ್ಥೆಯಿಂದ ನಗರದ ಕಿರು ರಂಗಮಂದಿರದಲ್ಲಿ ಜ.12ರಂದು ಸಂಜೆ 7ಗಂಟೆಗೆ 'ಇದ್ದಾಗ ನಿಮ್ದು ಕದ್ದಾಗ ನಮ್ದು' ನಾಟಕ ಪ್ರದರ್ಶನ ಆಯೋಜಿಸಲಾಗಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ನಿರ್ದೇಶಕ ಆಸಿಫ್ ಕ್ಷತ್ರಿಯ ಈ ವಿಷಯ ತಿಳಿಸಿ, ಈ ನಾಟಕವು ದಾರಿಯೊ ಫೋ ರಚನೆಯ ದಿ ವರ್ಚುಯಸ್ ಬರ್ಗ್ಲರ್‌ನ ಕನ್ನಡಾನುವಾದ, ಕೆ.ವಿ.ಅಕ್ಷರ ಅನುವಾದಿಸಿದ್ದಾರೆ. ಸಂಪೂರ್ಣ ಹಾಸ್ಯ ಪ್ರಧಾನವಾಗಿದ್ದು, ಮಾನವ ಸಂಬಂಧಗಳ ಮೌಲ್ಯವನ್ನು ತೋರುವ ಸಾಂಸಾರಿಕ ಆಯಾಮವೂ ಹೊಂದಿದೆ. ಸದಭಿರುಚಿಯ ಉತ್ತಮ ಸಂದೇಶವನ್ನು ನೀಡುತ್ತದೆ. ಸಹ ನಿರ್ದೇಶಕರಾದ ಶ್ವೇತಾ ಶ್ರೀನಿವಾಸ್ ಅವರು ನಾಟಕದಲ್ಲಿ ವಸ್ತ್ರ ಹಾಗೂ ನೃತ್ಯ ವಿನ್ಯಾಸವನ್ನು ನಿರ್ವಹಿಸಿದ್ದಾರೆ. ಭಿನ್ನಷಡ್ಜ ಅವರ ಸಂಗೀತವಿದೆ. ಜನರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸಹಕರಿಸಬೇಕು ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ರಂಗ ಶಿಕ್ಷಕ ಚಂದ್ರಶೇಖರ್ ಆಚಾರ್ ಹೆಗ್ಗೋಡು, ಕಲಾವಿದರಾದ ದಿಗ್ವಿಜಯ ಹೆಗ್ಗೋಡು, ಅನುಷ್ ಕೃಷ್ಣ ಉಪಸ್ಥಿತರಿದ್ದರು.

ಸಿ.ವಾಣಿ ರಾಘವೇಂದ್ರ ಕರ್ನಾಟಕ ಅಚೀವರ್ಸ್ ಬುಕ್ ಆಫ್ ರೆಕಾರ್ಡ್‌ಗೆ ಸಾಧನೆ

ಮೈಸೂರು, ಜ.10–ಜಾನಪದ ಕಲೆಯ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಮೈಸೂರಿನ ಸಾಹಿತಿ ಹಾಗೂ ಸದ್ವಿವೇಕ ಸಂಸ್ಥೆಯ ಶಿಕ್ಷಕಿ ಸಿ.ವಾಣಿ ರಾಘವೇಂದ್ರ ದಾಖಲೆ ನಿರ್ಮಿಸಿದ್ದಾರೆ. ಕರ್ನಾಟಕ ಅಚೀವರ್ಸ್ ಬುಕ್ ಆಫ್ ರೆಕಾರ್ಡ್ ಕರ್ನಾಟಕದ ಸಾಧಕರ ದಾಖಲೆ ಪುಸ್ತಕ ವಿಭಾಗದಲ್ಲಿ 20 ನಿಮಿಷ 20 ಸೆಕೆಂಡ್‌ಗಳಲ್ಲಿ ಜಾನಪದ ಕಲಾ ಕಾವ್ಯ ರಚನೆಯಲ್ಲಿ ಯಶಸ್ವಿಯಾಗಿದ್ದಾರೆ.



ಸಿ.ವಾಣಿ ರಾಘವೇಂದ್ರ

ಚಿತ್ರದುರ್ಗದ ವೆುದೇಹಳ್ಳಿಯ ವೈ.ಆರ್.ಆದಿಶೇಷ ರೋಟರಿ ಭವನದಲ್ಲಿ ನಡೆದ KABR-Karnataka Achievers Book of Records" ಮತ್ತು ಜಾನಪದ ಕಲೆಯ ಮಹತ್ವದ ಸಾಧನೆಯನ್ನು ಪರಿಗಣಿಸಿ 'ಕರ್ನಾಟಕ ಅಚೀವರ್ಸ್ ಬುಕ್ ಆಫ್ ರೆಕಾರ್ಡ್'ನಲ್ಲಿ ಭಾಗವಹಿಸಿದ ಸಿ. ವಾಣಿ ರಾಘವೇಂದ್ರ ಅವರನ್ನು ಗೌರವಿಸಲಾಯಿತು.

ಶ್ರೀ ಕನಕ ಪ್ರೀತಿಶ್ ಕರುನಾಡ ಹಣತೆ ಕವಿ ಬಳಗದ ಸಂಸ್ಥಾಪಕರು ಹಾಗೂ ಡಾ. ಶ್ರೀ ಮಹಂತ ಸ್ವಾಮೀಜಿ, ಶ್ರೀ ಜಗದ್ಗುರು ತೋಂಟದರಿಯ ಶಾಖಾ ಮಠ, ನವದೆಹಲಿ, ಭಾರತ, ಕರ್ನಾಟಕ ಅಚೀವರ್ಸ್ ಬುಕ್ ಆಪ್ ರೆಕಾರ್ಡ್ಸ್ (ಕೆಎಬಿಆರ್) ರಾಯಭಾರಿ ಹಾಗೂ ಕರ್ನಾಟಕ ಅಚೀವರ್ಸ್ ಬುಕ್ ಆಪ್ ರೆಕಾರ್ಡ್ಸ್ (ಕೆಎಬಿಆರ್) ಮುಖ್ಯ ಸಂಪಾದಕರಾದ ಡಾ. ಅಂಬಿಕಾ ಹಣಚೆಟ್ ಉಪಸ್ಥಿತರಿದ್ದರು.

ಹುಟ್ಟುಹಬ್ಬದ ಶುಭಾಶಯ



ರಾಜ್ಯ ಬಿಜೆಪಿ ಅಸಂಘಟಿತ ಕಾರ್ಮಿಕರ ಪ್ರಕೋಷ್ಠದ ರಾಜ್ಯ ಸಮಿತಿ ಸದಸ್ಯ ಆರ್.ಪರಮೇಶ ಅವರಿಗೆ ಮಾಜಿ ಸಂಸದ ಪ್ರತಾಪ್ ಸಿಂಹ, ಬಿಜೆಪಿ ಮುಖಂಡರಾದ ಎನ್.ವಿ. ಫಣೀಶ್, ಪಡುವಾರಹಳ್ಳಿ ಶ್ರೀರಾಮ್, ಸೋಮಶೇಖರ್ ರಾಜು, ಉಮೇಶ್, ಸುಬ್ಬಯ್ಯ, ಪ್ರಶಾಂತ್‌ಗೌಡ, ದಿನೇಶ್ ಗೌಡ, ಎಸ್.ಕೆ.ದಿನೇಶ್, ಶ್ರವಣ್, ಪ್ರಮೋದ್ ಗೌಡ, ಕಿರಣ್, ನಾಗೇಶ್ ಯಾದವ್, ಬೆಳಕು ಮಂಜು, ಸುರೇಂದ್ರ, ವಿನೋದ್ ಮತ್ತಿತರರು ಹುಟ್ಟುಹಬ್ಬದ ಶುಭಾಶಯ ಕೋರಿದರು.

ನಾಳೆ ಬೃಹತ್ ರಕ್ತದಾನ ಶಿಬಿರ

ಮೈಸೂರು, ಜ. 10–ರಾಷ್ಟ್ರೀಯ ಯುವ ದಿನಾಚರಣೆ ಅಂಗವಾಗಿ ಶ್ರೀ ಜನಜಾಗರಣ ಟ್ರಸ್ಟ್, ಮೈಸೂರಿನ ರಕ್ತದಾನ ಗೋ ಭಕ್ತ ಸಂಘಟನೆ ಟ್ರಸ್ಟ್, ತೇರಾ ಪಂತ್ ಯುವ ಪರಿಷತ್, ಕರ್ನಾಟಕ ಕುಮಾವತ್ ಸಮಾಜ, ಲಯನ್ಸ್ ಬ್ಲಡ್ ಸೆಂಟರ್ ಜೀವಧಾರ ವತಿಯಿಂದ ಜ.12 ರಂದು ಜೆಎಲ್‌ಬಿ ರಸ್ತೆಯಲ್ಲಿರುವ ಮಾಧವ ಕೃಪಾದಲ್ಲಿ ಬೃಹತ್ ರಕ್ತದಾನ ಶಿಬಿರ ಏರ್ಪಡಿಸಲಾಗಿದೆ.

ನಿಧನ



ಕುಲ್ಲೇಟಿರ ಬಿ.ಅಪ್ಪಣ್ಣ

ಮೈಸೂರು, ಜ.10(ಬಿಎಲ್‌ಯು)–ಮೈಸೂರಿನ ವಿಜಯನಗರ ನಿವಾಸಿ, ನಿವೃತ್ತ ಲೆಫ್ಟಿನೆಂಟ್ ಕರ್ನಲ್ ಕುಲ್ಲೇಟಿರ ಬಿ.ಅಪ್ಪಣ್ಣ (89) ಇಂದು ನಿಧನ ಹೊಂದಿದರು. ಮೃತರು ಪತ್ನಿ ಸರಸು ಅಪ್ಪಣ್ಣ (ತಾಮನೆ ಸಣ್ಣುವಂಡ) ಸೇರಿದಂತೆ ಅಪಾರ ಬಂಧು–ಬಾಂಧವರನ್ನು ಅಗಲಿದ್ದಾರೆ. ಮೈಸೂರಿನ ವಿಜಯನಗರದ ಮುಕ್ತಿಧಾಮದಲ್ಲಿ ನಾಳೆ (ಜನವರಿ 11) ಮೃತರ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜನವರಿ 17ರಿಂದ ಮೈಸೂರಲ್ಲಿ ವೀರಶೈವ ಲಿಂಗಾಯತ ಗ್ಲೋಬಲ್ ಬಿಸಿನೆಸ್ ಕಾನ್‌ಕ್ಲೇವ್

ಮೈಸೂರಿನತ್ತ ಹೂಡಿಕೆದಾರರನ್ನು ಆಕರ್ಷಿಸಲು ಸಮಾವೇಶ, ಪ್ರತಿನಿತ್ಯ ಚರ್ಚೆ, ವಿಚಾರ ಸಂಕಿರಣ, ಸಂಗೀತ ರಸದೌತಣ



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ವೀರಶೈವ ಲಿಂಗಾಯತ ಗ್ಲೋಬಲ್ ಬಿಸಿನೆಸ್ ಕಾನ್‌ಕ್ಲೇವ್ ಚೇರ್ಮನ್ ಬಿ.ಎಸ್.ಪ್ರಶಾಂತ್ ಮಾತನಾಡಿದರು.

ಮೈಸೂರು, ಜ.10(ಜಿಎ)– ಅಂತರರಾಷ್ಟ್ರೀಯ ಲಿಂಗಾಯತ ಯೂಥ್ ಫೋರಂ(ಐಎಲ್‌ವೈಎಫ್) ನಿಂದ ನಗರದ ಮಹಾರಾಜ ಮೈದಾನದಲ್ಲಿ ಜ.17ರಿಂದ 19 ರವರೆಗೆ ವೀರಶೈವ ಲಿಂಗಾಯತ ಗ್ಲೋಬಲ್ ಬಿಸಿನೆಸ್ ಕಾನ್‌ಕ್ಲೇವ್ ಸಮಾವೇಶ ಆಯೋಜಿಸಲಾಗಿದೆ ಎಂದು ಕಾನ್‌ಕ್ಲೇವ್ ಚೇರ್ಮನ್ ಬಿ.ಎಸ್.ಪ್ರಶಾಂತ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು, ಕರ್ನಾಟಕದ ಸಾಂಸ್ಕೃತಿಕ ರಾಜಧಾನಿ ಮಾತ್ರವಲ್ಲದೇ ಅತ್ಯಂತ ವೇಗವಾಗಿ ಅಭಿವೃದ್ಧಿ ಹೊಂದುತ್ತಿರುವ ಕರ್ನಾಟಕದ ನಗರಗಳಲ್ಲಿ ಒಂದಾಗಿದೆ. ಈ ಸಮಾವೇಶವು ಜಾಗತಿಕ ಹಂತದಲ್ಲಿ ನಗರದ ಸಾಮರ್ಥ್ಯವನ್ನು ಪ್ರದರ್ಶನವನ್ನು ಹೊಂದಿದ್ದು, ಮೈಸೂರಿನತ್ತ ಹೂಡಿಕೆದಾರರನ್ನು ಆಕರ್ಷಿಸುವುದು, ವ್ಯಾಪಾರ ವಹಿವಾಟು ಹೆಚ್ಚಾಗುವಂತೆ ಮಾಡುವುದರ ಜೊತೆಗೆ ನಗರದ ಉನ್ನತೀಕರಣ ಈ ಸಮಾವೇಶದ ಮುಖ್ಯ ಉದ್ದೇಶವಾಗಿದೆ ಎಂದರು.

ಜ.17ರಂದು ಬೆಳಿಗ್ಗೆ 10.30ಕ್ಕೆ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಕಾರ್ಯಕ್ರಮ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಸಚಿವ ಎಂ.ಬಿ. ಪಾಟೀಲ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಶಾಸಕ ಹೆಚ್.ಎಂ.ಗಣೇಶ್ ಪ್ರಸಾದ್, ಎಂಎಸ್‌ಎಂಇ ನಿರ್ದೇಶಕ ನಿತೀಶ್ ಪಾಟೀಲ್, ನ್ಯಾಯಮೂರ್ತಿ ಸುಭಾಷ್ ಬಿ.ಹಾಡಿ ಸೇರಿದಂತೆ ಮತ್ತಿತರು ಆಗಮಿಸಲಿದ್ದಾರೆ.

ಅಂದು ಮಧ್ಯಾಹ್ನ ಜ್ಯೋತಿ ಲ್ಯಾಬರೇಟರಿಯ ಜಂಟಿ ವ್ಯವಸ್ಥಾಪಕ ನಿರ್ದೇಶಕ ಕೆ.ಉಲ್ಲಾಸ್ ಕಾಮತ್ 'ಮೈಕ್ರೋ ಮತ್ತು ಕುಟುಂಬದ ಉದ್ಯಮ' ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಸಂಜೆ 6.30ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮವನ್ನು ನಟ ಡಾಲಿ ಧನಂಜಯ್ ಉದ್ಘಾಟಿಸಲಿದ್ದಾರೆ. ನಂತರ 7 ಗಂಟೆಗೆ ಖ್ಯಾತ ಗಾಯಕ ವಾಸುಕಿ ವೈಭವ್ ಸಂಗೀತ ಸಂಜೆ ನಡೆಸಿಕೊಡಲಿದ್ದಾರೆ ಎಂದರು.

ಜ.18ರಂದು ಬೆಳಗ್ಗೆ 10.30ರಿಂದ 12.30ರವರೆಗೆ ಆರೋಗ್ಯ ಕುರಿತಂತೆ ಎಂ.ಎಸ್ ರಾಮಯ್ಯ ಆಸ್ಪತ್ರೆಯ ಅಧ್ಯಕ್ಷ ಡಾ.ನಾಗೇಂದ್ರ ಸ್ವಾಮಿ, ಜೆಎಸ್‌ಎಸ್‌ನ ಕುಲಪತಿ ಡಾ.ಬಸವನಗೌಡಪ್ಪ, ಫೋರ್ಟಿಸ್ ಆಸ್ಪತ್ರೆಯ ಮುಖ್ಯಸ್ಥ ಡಾ.ವಿವೇಕ್ ಜಾವಲಿ, ಬೀದರ್ ಜಿಪಂ ಸಿಇಓ ಡಾ.ಗಿರೀಶ್ ದಿಲೀಪ್ ಬಡೋಲೆ ಮತ್ತು ಕೆಪಿಎಸ್‌ಇ ಸದಸ್ಯ ಡಾ.ಹೆಚ್.ಎಸ್.ನಾಗೇಂದ್ರ ಚರ್ಚಿಸಲಿದ್ದಾರೆ. ನಂತರ 2.30ರಿಂದ 4 ಗಂಟೆವರೆಗೆ ಮೈಸೂರಿನ ಡಿಆರ್‌ಸಿಯ ವೈಶಾಲಿ ಹನುಮಂತು, ಆಕೃತಿ ಎಕೋ ಫ್ರೆಂಡ್ಲಿಯ ಮುಖ್ಯಸ್ಥೆ ವರ್ಷ ಶ್ರೀಕಂಠಸ್ವಾಮಿ ಮತ್ತು ತೀರ್ಥ ಎಸ್. ಸ್ವಾಮಿ ಅವರು ಮಹಿಳಾ ಉದ್ಯಮ ಕುರಿತು ಮಾತನಾಡಲಿದ್ದಾರೆ. ಸಂಜೆ 4 ಗಂಟೆಯಿಂದ 5ಗಂಟೆವರೆಗೆ ವಿಆರ್‌ಎಲ್‌ನ ಡಾ.ಆನಂದ್ ಸಂಕೇಶ್ವರ್ ತೆಗೆದುಕೊಳ್ಳಬೇಕಾದ ನಿರ್ಧಾರ ಬಗ್ಗೆ ವಿವರಿಸಲಿದ್ದಾರೆ ಎಂದು ಅವರು, ಸಂಜೆ 7 ಗಂಟೆಗೆ ಖ್ಯಾತ ಗಾಯಕರಾದ ರಾಜೇಶ್ ಕೃಷ್ಣನ್ ಮತ್ತು ಅರ್ಚನಾ ಉಡುಪ ಸಂಗೀತ ಸುಧೆ ಹರಿಸಲಿದ್ದಾರೆ ಎಂದು ತಿಳಿಸಿದರು.

ಜ.19ರಂದು 11ಗಂಟೆಯಿಂದ 12ರವರೆಗೆ 'ವಿನ್ಯಾಸ ಮತ್ತು ನವೀನ ಪ್ಯಾಕೇಜಿಂಗ್ ಪ್ರಾಮುಖ್ಯತೆ' ಕುರಿತು ದಾವಣಗೆರೆಯ ಜಿಎಂ ಗ್ರೂಪ್‌ನ ಅನಿತ ಸಿದ್ದೇಶ್ವರ್, ಮಲ್ಲಪ್ಪ ಫ್ಲೋರ್ ಶಾಪ್‌ನ ಮುಖ್ಯಸ್ಥ ಎಂ.ಎಸ್. ಮೋಹನ್, ವಿಜಯ ಕರದಂಟ್‌ನ ಮಾಲೀಕ ಸುನೀಲ್ ನಾಗತನ್, ಐಟಿಸಿ ಫುಡ್ ಲಿಮಿಟೆಡ್‌ನ ಉಪಾಧ್ಯಕ್ಷ ಕಲ್ಯಾಣ್ ಮುಖರ್ಜಿ ಚರ್ಚಿಸಲಿದ್ದಾರೆ. ನಂತರ 12 ಗಂಟೆಯಿಂದ 1 ಗಂಟೆವರೆಗೆ ಮುರಗೇಶ್ ನಿರಾಣಿ ಗ್ರೂಪ್‌ನ ವ್ಯವಸ್ಥಾಪಕ ನಿರ್ದೇಶಕ ವಿಜಯ್ ಎಂ.ನಿರಾಣಿ 'ಕಬ್ಬು ಉದ್ಯಮದಲ್ಲಿ ಅವಕಾಶ' ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ. ಮಧ್ಯಾಹ್ನ 1.30ರಿಂದ 2.30ರವರೆಗೆ 'ಮುಂದಿನ ಪೀಳಿಗೆಯ ನಾಯಕರಿಗೆ ಅಧಿಕಾರ ನೀಡುವುದು' ಕುರಿತು ಭಾಮ್ಯಾಸ್ ಗ್ರೂಪ್‌ನ ಮುಖ್ಯಸ್ಥ ಡಿ.ಎಸ್.ಮಲ್ಲಿಕಾರ್ಜುನ, ಸ್ಟೇಪ್‌ನ ಸಿಇಓ ಬಿ.ಶಿವಶಂಕರ್, ಕಾನೂನು ಸಲಹೆಗಾರ ಡಾ.ಎಂ.ಎನ್. ಭೀಮೇಶ್ ಮಾತನಾಡಲಿದ್ದಾರೆ ಎಂದರು.

ಸಂಜೆ 4.30ಕ್ಕೆ ಸಮಾರೋಪ ನಡೆಯಲಿದ್ದು, ಕೇಂದ್ರ ಸಚಿವ ವಿ.ಸೋಮಣ್ಣ, ಸಚಿವ ಈಶ್ವರ್ ಖಂಡ್ರೆ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಎಂಎಲ್‌ಎ ಶ್ರೀವಿಜಯಾನಂದ ಕಾಶಪ್ಪನವರ್, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ, ಕೆ.ಹರೀಶ್‌ಗೌಡ, ಎಂಎಲ್‌ಸಿ ಕೆ.ಎಸ್.ನವೀನ್, ಅಶೋಕ ಐರನ್ ಎಂಡಿ ಜಯಂತ್ ಹುಮಬರ್‍ವಾಡಿ ಆಗಮಿಸಲಿದ್ದಾರೆ. ಸಂಜೆ 7ಗಂಟೆಗೆ ಖ್ಯಾತ ಗಾಯಕಿ ಅನನ್ಯ ಭಟ್ ಸಂಗೀತ ಸಂಜೆ ನಡೆಸಿಕೊಡಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಉಪಾಧ್ಯಕ್ಷ ಕೆ.ಎಚ್.ಕಿರಣ್, ಮೈಸೂರು ಚಾಪ್ಟರ್ ಅಧ್ಯಕ್ಷ ಕೆ.ಎಸ್.ಮಹದೇವ ಪ್ರಸಾದ್, ಚಾಮರಾಜನಗರ ಉಪಾಧ್ಯಕ್ಷ ಎಂ.ಮಹೇಶ್, ಜಂಟಿ ಕಾರ್ಯದರ್ಶಿ ತೀರ್ಥಾ ಎಸ್.ಸ್ವಾಮಿ, ಹೆಚ್.ಎಸ್.ವೀರೇಶ್ ಉಪಸ್ಥಿತರಿದ್ದರು.

ನಾಳೆ ಮೈಸೂರಲ್ಲಿ ಜಕಣಾಚಾರಿ ಸಂಸ್ಕರಣಾ ದಿನಾಚರಣೆ

ಮೈಸೂರು, ಜ.10(ಜಿಎ)–ಮೈಸೂರು ಜಿಲ್ಲಾ ಅಮರಶಿಲ್ಪಿ ವೇದಿಕೆಯಿಂದ ಹೆಬ್ಬಾಳಿನ ಲಕ್ಷ್ಮೀಕಾಂತನಗರದ ಅಮರಶಿಲ್ಪಿ ಜಕ್ಕಣಾಚಾರಿ ವೃತ್ತದಲ್ಲಿ ಜ.12ರಂದು ಸಂಜೆ 4ಗಂಟೆಗೆ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಆಯೋಜಿಸಲಾಗಿದೆ ಎಂದು ವೇದಿಕೆ ಅಧ್ಯಕ್ಷ ಕೆಂಪರಾಜು ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದಿನ ಕಾರ್ಯಕ್ರಮವನ್ನು ಶಾಸಕ ಕೆ.ಹರೀಶ್ ಗೌಡ ಉದ್ಘಾಟಿಸುವರು. ಶಿಲ್ಪಿ ಅರುಣ್ ಯೋಗಿರಾಜ್ ಪುಷ್ಪಾರ್ಚನೆ ಮಾಡುವರು. ನಗರ ಪಾಲಿಕೆ ಮಾಜಿ ಸದಸ್ಯೆ ಲಕ್ಷ್ಮೀ ಶಿವಣ್ಣ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಹುಣಸೂರು ಶ್ರೀನಿವಾಸ್ ಮತ್ತು ಗಾಯಕಿ ಭವ್ಯಾ ತಂಡದಿಂದ ಸಂಜೆ 3.30ಕ್ಕೆ ರಸಮಂಜರಿ ಹಮ್ಮಿಕೊಳ್ಳಲಾಗಿದೆ ಎಂದರು. ನಿರ್ದೇಶಕ ಈಶ್ವರಚಾರ್ ಮಾತನಾಡಿ, ವೃತ್ತದಲ್ಲಿ ಜಕಣಾಚಾರಿ ಪ್ರತಿಮೆ ಸ್ಥಾಪನೆಗೆ ಪಾಲಿಕೆ ಮುಂದಾಗಬೇಕು. ಸಮುದಾಯಕ್ಕೆ ಅಗತ್ಯ ಸೌಲಭ್ಯ ಕಲ್ಪಿಸಲು ಜನಪ್ರತಿನಿಧಿಗಳು, ಸರ್ಕಾರ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ವೇದಿಕೆ ಉಪಾಧ್ಯಕ್ಷ ಎನ್. ಸ್ವಾಮಿ, ಮಹಿಳಾ ಘಟಕದ ಉಪಾಧ್ಯಕ್ಷೆ ಕೆ.ಎನ್.ಶಾಂತಮ್ಮ, ಪ್ರಧಾನ ಕಾರ್ಯದರ್ಶಿ ಮಹೇಶ್, ಸಹ ಕಾರ್ಯದರ್ಶಿ ಜಗದೀಶಚಾರ್, ಖಜಾಂಚಿ ಎನ್.ಬಸವರಾಜು, ಗೌರವ ಸಲಹೆಗಾರ ನಾಗರಾಜಚಾರ್, ಮಹಿಳಾ ಸಂಘಟನಾ ಕಾರ್ಯದರ್ಶಿ ಎಚ್.ಎಸ್.ಸವಿತಾ ಶಾಸ್ತ್ರಿ, ನಿರ್ದೇಶಕ ಮಂಜು ಉಪಸ್ಥಿತರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

11.01.2025 ಶನಿವಾರ, ಮಳೆ ನಕ್ಷತ್ರ: ಪೂಷಾ, 29.12.2024 ರಿಂದ 16.01.2025 ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಪುಷ್ಯ ಮಾಸ, ಶುಕ್ಲ ಪಕ್ಷ, ತಿಥಿ: ದ್ವಾದಶಿ, ನಕ್ಷತ್ರ: ರೋಹಿಣಿ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ

■ **ಪಾಳ್ಯಂ ಶ್ರೀ ಶಾಸ್ತಾ ಪೀಠಂ, ಅಭಯುದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ :** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು ಕುಂಭಾಭಿಷೇಕ ಪೂಜಾ ಮಹೋತ್ಸವ, 108 ಕಳಸಗಳ ವಾರ್ಷಿಕ ಕುಂಭಾಭಿಷೇಕ, ಮಹತೋಭಾರ ಶ್ರೀ ಧರ್ಮಶಾಸ್ತಾ ಸ್ವಾಮಿಯವರಿಗೆ ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಆವರಣ, ರಾಘವೇಂದ್ರನಗರ.

■ **ಮಾತೃ ಮಂಡಲಿ ಬಾಲಕಿಯರ ಪದವಿಪೂರ್ವ ಕಾಲೇಜು :** ವಾರ್ಷಿಕ ಎನ್‌ಎಸ್‌ಎಸ್ ಶಿಬಿರ, ಬೆಳಗ್ಗೆ 7ಕ್ಕೆ ಸಮಾಜ ಸೇವಕ ಮಂಜುನಾಥ್ ಅವರಿಂದ ಧ್ವಜಾರೋಹಣ, ಮಧ್ಯಾಹ್ನ 3.30ಕ್ಕೆ ಕನ್ನಡ ಉಪನ್ಯಾಸಕ ಸ್ವಾಮಿಗೌಡ ಅವರಿಂದ ವ್ಯಕ್ತಿ ವಿಕಸನ ಕುರಿತು ಉಪನ್ಯಾಸ, ಉಪಸ್ಥಿತರು : ಉಪನ್ಯಾಸಕ ಟಿ.ಡಿ. ರಾಧಾಕೃಷ್ಣ, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಸಿ. ಚಂದ್ರಶೇಖರ್, ಸ್ಥಳ: ಮಾತೃ ಮಂಡಲಿ ಶಿಶು ವಿಕಾಸ ಕೇಂದ್ರ, ಗೋಕುಲಂ 3ನೇ ಹಂತ.

■ **ಕಾವೇರಿ ಆಯುರ್ವೇದ ಆಸ್ಪತ್ರೆ :** ನೆಗಡಿ, ಕೆಮ್ಮು ಮತ್ತು ಅಸ್ತಮಾಕ್ಕೆ ಉಚಿತ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 9 ಗಂಟೆಯಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಮೂತ್ರಪಿಂಡ (ಕಿಡ್ನಿ) ಕಾಯಿಲೆ, ಸಂಧಿವಾತ, ಮಂಡಿ ನೋವು, ಕೀಲು ನೋವು ಮತ್ತು ಆರೋಗ್ಯಾಯುಷ್ಯ ಆರೋಗ್ಯ ವರ್ಧಕ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ರಿಂದ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ರಿಂದ.

■ **ಮೈಸೂರು ಜಿಲ್ಲಾ ಪತ್ರಕರ್ತರ ಸಂಘ :** ನೂತನ ವರ್ಷದ ಕ್ಯಾಲೆಂಡರ್, ಡೈರಿ ಬಿಡುಗಡೆ ಹಾಗೂ ಸಾಧಕ ಪತ್ರಕರ್ತರಿಗೆ ಅಭಿನಂದನಾ ಕಾರ್ಯಕ್ರಮ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಕ್ಯಾಲೆಂಡರ್ ಬಿಡುಗಡೆ : ಶಾಸಕ ಜಿ.ಟಿ. ದೇವೇಗೌಡ, ಡೈರಿ ಬಿಡುಗಡೆ : ಸಿದ್ಧಾರ್ಥ ಗ್ರೂಪ್ ಮುಖ್ಯಸ್ಥ ಪಿ.ವಿ. ಗಿರಿ, ಮುಖ್ಯ ಅತಿಥಿಗಳು : ವಿಂಡ್ ಫ್ಲವರ್ ವ್ಯವಸ್ಥಾಪಕ ನಿರ್ದೇಶಕ ತರುಣ್ ಗಿರಿ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಕೆ. ದೀಪಕ್, ಸನ್ಮಾನ : ರಾಜ್ಯ ಸರ್ಕಾರದ ಅಭಿವೃದ್ಧಿ ಪತ್ರಿಕೋದ್ಯಮ ಪ್ರಶಸ್ತಿ ಪಡೆದ ಚಿ.ಜ. ರಾಜೀವ್, ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಟಿ. ಗುರುರಾಜ್, ಜೆ. ಜಯಂತ್, ಪಿ. ಶಿಲ್ಪಾ, ಪಿಎಚ್.ಡಿ. ಪದವೀರ ನಾಗರಾಜ್ ನವೀಮನೆ, ಸ್ಥಳ: ಜಿಲ್ಲಾ ಪತ್ರಕರ್ತರ ಭವನ, ತ್ಯಾಗರಾಜ ರಸ್ತೆ, ಬೆಳಗ್ಗೆ 10ಕ್ಕೆ.

■ **ವಿಶ್ವೇಶ್ವರಯ್ಯ ಡೆವಲಪ್‌ಮೆಂಟ್ ಆರ್ಗನೈಜೇಷನ್ :** ಲಾಲ್ ಬಹದ್ದೂರ್ ಜೈ ಜವಾನ್ ಜೈ ಕಿಸಾನ್ ದಿವಸ್ ಮತ್ತು ರಾಷ್ಟ್ರ ರಕ್ಷಾ ಸಮ್ಮಾನ್ ಹಾಗೂ ಕೃಷಿ ಸಮ್ಮಾನ್ ಪ್ರಶಸ್ತಿ ಪ್ರಧಾನ ಸಮಾರಂಭ, ಉದ್ಘಾಟನೆ : ಡಾ. ಕೆ. ರಾಧಾಕೃಷ್ಣ, ಅಧ್ಯಕ್ಷತೆ : ಕಮಾಂಡರ್ ಅರುಣ್ ಜಗನ್ನಾಥ್ ರಾವ್, ಮುಖ್ಯ ಅತಿಥಿಗಳು : ಬ್ರಿಗೇಡಿಯರ್ ಜಿ. ಕುಮಾರಸ್ವಾಮಿ, ಸಿ.ಎಂ. ಶ್ರೀಧರ್, ಬಿ.ಕೆ. ಮಹದೇವಮೂರ್ತಿ, ಸಿ. ಕುಪ್ಪುಸ್ವಾಮಿ, ಕೆ. ಗೋವಿಂದರಾಜು, ಕೆ.ಪಿ. ಹರೀಶ್, ಆರ್. ರಂಜಿತಾ, ಸ್ಥಳ: ಕಲಾಮಂದಿರ, ಬೆಳಗ್ಗೆ 10ಕ್ಕೆ.

■ **ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘ:** ಗ್ರಾಪಂ ನೌಕರರಾದ ಬಿಲ್ ಕಲೆಕ್ಟರ್, ಡಾಟಾ ಎಂಟ್ರಿ ಆಪರೇಟರ್‌ಗಳ ಮೈಸೂರು ವಿಭಾಗ ಮಟ್ಟದ ಸಮಾವೇಶ, ಉದ್ಘಾಟನೆ: ಸಂಘದ ರಾಜ್ಯಾಧ್ಯಕ್ಷ ಎಂ.ಬಿ.ನಾಡಗೌಡ, ಮುಖ್ಯ ಅತಿಥಿಗಳು: ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ. ರಾಮಕೃಷ್ಣ, ರಾಜ್ಯ ಉಪಾಧ್ಯಕ್ಷ ಎಂ.ಎಂ.ಶಿವಕುಮಾರ್, ರಾಜ್ಯ ಸಹ ಕಾರ್ಯದರ್ಶಿಗಳಾದ ಸಿದ್ದರಾಜು, ಟಿ.ಎಸ್. ದಿನೇಶ್, ಅಧ್ಯಕ್ಷತೆ: ಮೈಸೂರು ಜಿಲ್ಲಾಧ್ಯಕ್ಷ ಕೆ. ಬಸವರಾಜು, ಸ್ಥಳ: ಶ್ರೀ ವಿದ್ಯಾಭಾರತಿ ಕಲ್ಯಾಣ ಮಂಟಪ, ಗನ್‌ಹೌಸ್ ಸಮೀಪ, ಬೆಳಗ್ಗೆ 10.30ಕ್ಕೆ.

■ **ನವದೆಹಲಿಯ ಕೇಂದ್ರ ಜವಳಿ ಮಂತ್ರಾಲಯದ ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ನಿಗಮ :** 'ಸಿಲ್ಕ್ ಫ್ಯಾಬ್' ರೇಷ್ಮೆ ಸೀರೆಗಳು ಮತ್ತು ಕೈಮಗ್ಗ ಉತ್ಪನ್ನಗಳ ಪ್ರದರ್ಶನ ಮತ್ತು ಮೇಳ, ಸ್ಥಳ: ಜೆಎಸ್‌ಎಸ್ ಅರ್ಬನ್ ಹಾತ್, ಹೆಬ್ಬಾಳು ಕೈಗಾರಿಕಾ ಪ್ರದೇಶ, ಬೆಳಗ್ಗೆ 11 ರಿಂದ ರಾತ್ರಿ 8.30 ರವರೆಗೆ.

■ **ಶ್ರೀ ವಿವೇಕಾನಂದ ಪದವಿಪೂರ್ವ ಕಾಲೇಜು :** ಪಠ್ಯೇತರ ಚಟುವಟಿಕೆಗಳ ಸಮಾರೋಪ ಸಮಾರಂಭ, ಕಾಲೇಜು ವಾರ್ಷಿಕೋತ್ಸವ, ಅಧ್ಯಕ್ಷತೆ : ವಿಶ್ರಾಂತ ಕುಲಪತಿ ಡಾ. ಜೆ. ಶಶಿಧರ ಪ್ರಸಾದ್, ಮುಖ್ಯ ಅತಿಥಿಗಳು : ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಂ. ಮರಿಸ್ವಾಮಿ, ಸಂಗೀತ ವಿವಿ ಕುಲಸಚಿವ ಡಾ. ಎಂ.ಜಿ. ಮಂಜುನಾಥ, ಶ್ರೀ ಕುವೆಂಪು ವಿದ್ಯಾ ಪರಿಷತ್ ಅಧ್ಯಕ್ಷ ಡಾ. ಡಿ.ಕೆ. ರಾಜೇಂದ್ರ, ಕಾರ್ಯದರ್ಶಿ ಶಿವಸುಂದರ ಸತ್ಯೇಂದ್ರ, ಧರ್ಮದರ್ಶಿ ಜಿ. ರಮೇಶ, ಸ್ಥಳ: ಶ್ರೀ ಕುವೆಂಪು ರಂಗ ಮಂದಿರ, ಜಯಲಕ್ಷ್ಮೀಪುರಂ, ಬೆಳಗ್ಗೆ 11ಕ್ಕೆ.

■ **ಶಾರದಾ ವಿಲಾಸ ಪದವಿಪೂರ್ವ ಕಾಲೇಜು :** ವಿದ್ಯಾರ್ಥಿ ವೇದಿಕೆ ಸಮಾರೋಪ ಸಮಾರಂಭ, ಮುಖ್ಯ ಅತಿಥಿಗಳು : ಶ್ರೀ ಛಾಯಾದೇವಿ ಶಿಕ್ಷಣ ಮಹಾವಿದ್ಯಾಲಯ ಪ್ರಾಂಶುಪಾಲ ಡಾ. ಅಂಥೋಣಿ ಪಾಲ್‌ರಾಜ್, ಉಪಸ್ಥಿತರು : ಶಾರದಾ ವಿಲಾಸ ಶಿಕ್ಷಣ ಸಂಸ್ಥೆ ಅಧ್ಯಕ್ಷ ಡಾ. ಬಿ.ಎಂ. ಸುಬ್ರಾಯ, ಕಾರ್ಯದರ್ಶಿ ಆರ್. ದಿನೇಶ್, ಅಧ್ಯಕ್ಷತೆ : ಕಾಲೇಜು ಪ್ರಿನ್ಸಿಪಾಲ್ ಸಿ.ಕೆ. ಅಶೋಕ್‌ಕುಮಾರ್, ಸ್ಥಳ: ಶಾರದಾ ವಿಲಾಸ ಶತಮಾನೋತ್ಸವ ಭವನ, ಕೃಷ್ಣಮೂರ್ತಿಪುರಂ, ಬೆಳಗ್ಗೆ 11ಕ್ಕೆ.

■ **ಕುವೆಂಪು ಪ್ರೌಢಶಾಲೆ, ಹಿರಣ್ಮಯಿ ಪ್ರತಿಷ್ಠಾನ, ಕಾವೇರಿ ಬಳಗ :** ಸ್ವಾಮಿ ವಿವೇಕಾನಂದ ಜಯಂತಿ, ಅಧ್ಯಕ್ಷತೆ : ಕುವೆಂಪು ಪ್ರೌಢಶಾಲೆ ಮುಖ್ಯ ಶಿಕ್ಷಕ ಶಂಕರೇಗೌಡ, ಉದ್ಘಾಟನೆ: ವಿಶ್ರಾಂತ ಶಿಕ್ಷಕ ಜಿ.ವಿ. ರಾಜಶೆಟ್ಟಿ, ಪ್ರಧಾನ ಭಾಷಣ: ಸಾಹಿತಿ ಬನ್ನೂರು ಕೆ. ರಾಜು, ಪ್ರಾಸ್ತಾವಿಕ ಭಾಷಣ: ಹಿರಣ್ಮಯಿ ಪ್ರತಿಷ್ಠಾನ ಅಧ್ಯಕ್ಷ ಎ. ಸಂಗಪ್ಪ, ಉಪಸ್ಥಿತರು: ಶ್ರೀಮತಿ ಎನ್.ಕೆ. ಕಾವೇರಿಯಮ್ಮ, ಮನೋಹರ್, ಸ್ಥಳ: ಕುವೆಂಪು ಪ್ರೌಢಶಾಲೆ, ಸರಸ್ವತಿಪುರಂ, ಮಧ್ಯಾಹ್ನ 2.30ಕ್ಕೆ.

■ **ಮೈಸೂರು ಮಹಾನಗರ ಮತ್ತು ಜಿಲ್ಲಾ ನಾಗರೀಕ ಸಮಿತಿ ಹಾಗೂ ಮಂಡ್ಯ ಜಿಲ್ಲಾ ಬಳಗ :** ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ಎಂ. ಕೃಷ್ಣ ಅವರಿಗೆ ಶ್ರದ್ಧಾಂಜಲಿ ಕಾರ್ಯಕ್ರಮ, ಸ್ಮರಣೆ ನುಡಿ : ವಿಧಾನ ಪರಿಷತ್ ಮಾಜಿ ಸಭಾಪತಿ ಬಿ.ಎಲ್. ಶಂಕರ್, ಮಾಜಿ ಸಚಿವ ಎಂ. ಶಿವಣ್ಣ, ಮೈಸೂರು ವಿವಿ ವಿಶ್ರಾಂತ ರಾಜ್ಯಶಾಸ್ತ್ರ ಪ್ರಾಧ್ಯಾಪಕ ಡಾ. ಎಚ್.ಎಂ. ರಾಜಶೇಖರ, ಮುಖ್ಯಮಂತ್ರಿಗಳ ಮಾಜಿ ಮಾಧ್ಯಮ ಕಾರ್ಯದರ್ಶಿ ಎಚ್.ಬಿ. ದಿನೇಶ್, ನಿರ್ವಹಣೆ : ವಾಗ್ಮಿ ಪ್ರೊ. ಎಂ. ಕೃಷ್ಣೇಗೌಡ, ಸ್ಥಳ: ಸಾಹುಕಾರ್ ಎಸ್. ಚನ್ನಯ್ಯ ಸಭಾಂಗಣ, ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜು, ಗೋಕುಲಂ, ಸಂಜೆ 4ಕ್ಕೆ.

■ **ಪ್ರಿಯದರ್ಶಿನಿ ಅಶೋಕ ಪ್ರಾಥಮಿಕ ಶಾಲೆ, ಸಂಬುದ್ಧ ಸ್ವತಂತ್ರ ಪದವಿಪೂರ್ವ ಕಾಲೇಜು, ಮಹರ್ಷಿ ಮಾತಂಗ ಸಂಸ್ಕೃತ ಪಾಠಶಾಲೆ, ಬಾಬು ಜಗಜೀವನರಾಂ ಬಾಲಕರ ವಿದ್ಯಾರ್ಥಿ ನಿಲಯ :** ಸಂಪ್ರಿಯೋತ್ಸವ, ಉದ್ಘಾಟನೆ: ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಪ್ರೊ. ಶಬ್ಬೀರ್ ಮುಸ್ತಾಫಾ, ಅಧ್ಯಕ್ಷತೆ : ಶಾಸಕ ತನ್ವೀರ್‌ಸೇಠ್, ಉಪಸ್ಥಿತರು: ಬಿಇಓ ಎಸ್.ರೇವಣ್ಣ, ಸಾಹಿತಿ ಟಿ.ಸತೀಶ್ ಜವರೇಗೌಡ, ಕನ್ನಡ ಸಾಹಿತ್ಯ ಪರಿಷತ್ ಮಾಜಿ ಜಿಲ್ಲಾಧ್ಯಕ್ಷ ಡಾ.ವೈ.ಡಿ.ರಾಜಣ್ಣ, ಡಿಡಿಪಿಯು ಸಿ.ಚಲುವಯ್ಯ, ಸಂಸ್ಥೆ ಅಧ್ಯಕ್ಷ ಪುಟ್ಟಸಿದ್ದಯ್ಯ, ಕಾರ್ಯದರ್ಶಿ ದಾಸನೂರು ಕೂಸಣ್ಣ, ಸಹ ಕಾರ್ಯದರ್ಶಿ ಡಿ.ಪಿ. ಶಿವಪ್ರಸಾದ್, ಖಜಾಂಚಿ ಎಂ.ಎಲ್. ಅಶೋಕ, ಸ್ಥಳ: ಶಾಲೆ ಆವರಣ, ರಾಜೀವ್‌ನಗರ 1ನೇ ಹಂತ, ಸಂಜೆ 4ಕ್ಕೆ.

■ **ಕಲಾಸುರುಚಿ:** ಕಥೆ ಕೇಳೋಣ ಬನ್ನಿ ಕಾರ್ಯಕ್ರಮ, ಕಥೆ ಹೇಳುವವರು: ಡಾ.ಪಳನಿಸ್ವಾಮಿ ಮುಡುಗೂರು, ಸಹ ಪ್ರಾಧ್ಯಾಪಕರು, ಜೆಎಸ್‌ಎಸ್ ವಿಶೇಷ ಚೇತನರ ಪಾಲಿಟೆಕ್ನಿಕ್, ಜೆಎಸ್‌ಎಸ್ ತಾಂತ್ರಿಕ ಶಿಕ್ಷಣ ಸಂಸ್ಥೆಗಳ ಸಮುಚ್ಚಯ, ಮೈಸೂರು, ಸ್ಥಳ: ಸುರುಚಿ ರಂಗಮನೆ, ಚಿತ್ರಭಾನು ರಸ್ತೆ, ಕುವೆಂಪು ನಗರ, ಸಂಜೆ 4.30 ರಿಂದ 5.30 ರವರೆಗೆ

■ **ಹರಿ ವಿದ್ಯಾಲಯ :** ಸಂಸ್ಥೆ ಸಂಸ್ಥಾಪಕರಾದ ಹೊಸಮನೆ ಅಲಮೇಲಮ್ಮ ರಾಮಸ್ವಾಮಿ ಅಯ್ಯಂಗಾರ್ ಮತ್ತು ಸಂಸ್ಥಾಪಕ ಅಧ್ಯಕ್ಷ ಎಂ.ವಿ.ವೆಂಕಟೇಶಯ್ಯ ಸ್ಮರಣಾರ್ಥ ವಾರ್ಷಿಕ ಸಂಗೀತ ಹಾಗೂ ಕಲಾ ಉತ್ಸವ, ಸಂಕ್ರಾಂತಿ ಸಂಭ್ರಮದಲ್ಲಿ ಪ್ರಸಿದ್ಧ ಸಂಗೀತ ವಿದ್ವಾಂಸ ಜಿ.ಕೆ.ಮನಮೋಹನ್ ಹಾಗೂ ವೃಂದದವರ ಶಾಸ್ತ್ರೀಯ ಗಾಯನ, ವಿದ್ವಾನ್ ಕೇಶವ ಮೋಹನಕುಮಾರ್–ವಯೋಲಿನ್, ವಿದ್ವಾನ್ ಅನಿರುದ್ಧ್ ಎಸ್.ಭಟ್–ಮೃದಂಗ, ಸ್ಥಳ: ಶ್ರೀ ವೇದಾಂತ ದೇಶಿಕ ಮಂಟಪ, ಹರಿ ವಿದ್ಯಾಲಯ, ಬೋಗಾದಿ, ಸಂಜೆ 5ಕ್ಕೆ.

■ **ಕಲಾಸೌರಭ ಗಾಯನ ತಂಡ :** ಮೈಸೂರಿನ ಕಲಾಸೌರಭ ಗಾಯನ ತಂಡದವರಿಂದ ಕಲಾಸೌರಭಯಾನ, ನವರಸ ಗಾನ ಕಾರ್ಯಕ್ರಮ, ಸ್ಥಳ: ನಾದಬ್ರಹ್ಮ ಸಂಗೀತ ಸಭಾಂಗಣ, ಜೆಎಲ್‌ಬಿ ರಸ್ತೆ, ಸಂಜೆ 5.30ಕ್ಕೆ.


■ **ಕಲಾಸಂದೇಶ ಪ್ರತಿಷ್ಠಾನ :** ಸಂಜೆ 6 ರಿಂದ ನೃತ್ಯೋಪಾಸನ–2025, ಉದ್ಘಾಟನೆ : ಶಾಸ್ತ್ರೀಯ ಸಂಗೀತ ವಿದ್ವಾಂಸ ಕಲೋತ್ತುಂಗ ಡಾ. ರಾ.ಸ. ನಂದಕುಮಾರ್, ಮುಖ್ಯ ಅತಿಥಿಗಳು : ಭರತನಾಟ್ಯ ವಿದ್ವಾಂಸರಾದ ವಿದುಷಿ ಶ್ರೀಮತಿ ಮೇಘಾ ಪಿ. ರಾವ್, ಸಭಾಧ್ಯಕ್ಷತೆ : ಕಲಾಸಂದೇಶ ಪ್ರತಿಷ್ಠಾನ ಅಧ್ಯಕ್ಷ ಡಾ. ಡಿ. ಉಮಾಪತಿ, ಸಂಜೆ 6.30 ರಿಂದ ಶ್ರೀಮತಿ ಹರ್ಷಿಣಿ ಪ್ರಜ್ವಲ್ ಅವರಿಂದ ಭರತನಾಟ್ಯ ಮಾರ್ಗ ಪ್ರಸ್ತುತಿ, ಸಂಜೆ 7.45 ರಿಂದ ಶ್ರೀಮತಿ ಅನೂಷಾ ವರುಣ್ ಅವರಿಂದ ಭರತನಾಟ್ಯ ಮಾರ್ಗ ಪ್ರಸ್ತುತಿ, ಕೆ. ಸಂದೇಶ್ ಭಾರ್ಗವ್–ನಟ್ಟುವಾಂಗ, ವಿದುಷಿ ಶ್ರೀಮತಿ ಕಾಂಚನಾ ಎಸ್. ಶ್ರೀರಂಜನಿ – ಹಾಡುಗಾರಿಕೆ, ವಿದ್ವಾನ್ ಎಚ್.ಎಲ್. ಶಿವಶಂಕರಸ್ವಾಮಿ– ಮೃದಂಗ, ವಿದ್ವಾನ್ ಕೆ. ಮುರಳೀಧರ್ ಉಡುಪಿ–ಕೊಳಲು, ವಿದ್ವಾನ್ ಎಂ.ಡಿ. ಅರ್ಜುನ್–ಪಿಟೀಲು, ವಿದ್ವಾನ್ ಎಚ್.ಎಲ್. ಅನಂತಕೃಷ್ಣಸ್ವಾಮಿ – ರಿದಂ ಪ್ಯಾಡ್, ಸ್ಥಳ : ರಮಾಗೋವಿಂದ ರಂಗ ಮಂದಿರ, ರಾಮಕೃಷ್ಣನಗರ.

■ **ಶ್ರೀ ವೇಣುಗೋಪಾಲಸ್ವಾಮಿ ದೇವಸ್ಥಾನ :** ತಿರುಪ್ಪಾವೈ ಪ್ರವಚನ ಕಾರ್ಯಕ್ರಮ, ಮೈಸೂರು ಮಹಾರಾಣಿ ಕಲಾ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕಿ, ವಿದುಷಿ ಡಾ. ಕೆ.ಎಲ್. ಪ್ರಸನ್ನಾಕ್ಷಿ ವಿದ್ವನ್ಮಣಿ, ದರ್ಶನ ವಾರಿಧಿ ಡಾ.ಕೆ.ಎಲ್. ಪ್ರಸನ್ನಾಕ್ಷಿ ಅವರಿಂದ, ಸ್ಥಳ: ದೇವಸ್ಥಾನದ ಆವರಣ, ತ್ಯಾಗರಾಜ ರಸ್ತೆ, ಸಂಜೆ 6.30ಕ್ಕೆ

■ **ಕಲಾ ಸುರುಚಿ, ಕುತೂಹಲಿ – ಕನ್ನಡ ಮತ್ತು ದಿ ಅಕಾಡೆಮಿ ಟ್ರಸ್ಟ್ :** ಸೈನ್ಸ್ ಸಂಜೆ ಕಾರ್ಯಕ್ರಮದ ಅಂಗವಾಗಿ ಎಸ್‌ವಿವೈಎಂ ಆರೋಗ್ಯ ವಿಭಾಗದ ಮುಖ್ಯಸ್ಥ ಡಾ. ಜಿ.ಎಸ್.ಕುಮಾರ್ ಅವರು 'ಇಂದಿನ ಮಗಳು ನಾಳಿನ ತಾಯಿ' ಕುರಿತು ಕನ್ನಡದಲ್ಲಿ ಭಾಷಣ, ಸ್ಥಳ: ಸುರುಚಿ ರಂಗಮನೆ, ಚಿತ್ರಭಾನು ರಸ್ತೆ, ಕುವೆಂಪುನಗರ, ಸಂಜೆ 6.30 ರಿಂದ.

■ **ಶ್ರೀ ಮಹಾಜನ ಸಭಾ :** ಧನುರ್ಮಾಸದ ಪ್ರಯುಕ್ತ ಶ್ರೀ ವೈಷ್ಣವ ಭಕ್ತಪರಾಯಣೆ ಅಂಡಾಳ್ (ಗೋದಾ ದೇವಿ) ವಿರಚಿತ ಮೇಲುಕೋಟೆ ಶ್ರೀ ಮುಡುಂಬೆ ರಾಮಾನುಜನ್ ಅವರಿಂದ ತಿರುಪ್ಪಾವೈ ಪಾಶುರಗಳ ಪ್ರವಚನ, ಸ್ಥಳ: ಶ್ರೀರಾಮ ಮಂದಿರ, ಕೃಷ್ಣಮೂರ್ತಿಪುರಂ, ಸಂಜೆ 630 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 CFTRI ಶೋಧ ಅನುಶೋಧ– ಪ್ರಾಯೋಜಿತ ಬಾನುಲಿ ಸರಣಿ, ಪ್ರಾಯೋಜಕರು : CSIR, CFTRI, Mysuru, 6.40 ಅರಿವಿನ ಶಿಖರ–ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎಂ.ಎಸ್. ಲಕ್ಷ್ಮೀಶ, ವ್ಯಾಖ್ಯಾನ–ಡಾ. ಹೆಚ್.ಎಂ. ಕಲಾಶ್ರೀ, 6.50 ರೈತರಿಗೆ ಸಲಹೆ, 7.15 ಜೀವನ ಜೋಪಾನ–ಹೆಚ್‌ಐವಿ–ಅಂದು ಇಂದು, ಪ್ರಾಯೋಜಕರು – ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಮಂಡಳಿ, 8.30 ಹಾದಿಯಲ್ಲಿ ಕಂಡ ಮುಖ– ಬಾನುಲಿ ಸರಣಿ, ಪ್ರಸ್ತುತಿ : ಅಬ್ದುಲ್ ರಶೀದ್, 9.00 ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ–ಟಿ. ವಿ. ಶಂಕರನಾರಾಯಣ – ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ 'ನಮ್ಮೂರ್ ಹೆಸರು', ಪ್ರಸ್ತುತಿ : ಡಾ. ಮೈಸೂರು ಉಮೇಶ್

ಮಧ್ಯಾಹ್ನ: 12.05 ವನಿತಾ ವಿಹಾರ, 12.35 ಆಯುಷ್ ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ, 12.45 ಜನಪದ ಸಂಗೀತ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 2.40 ಹಿಂದಿ ಚಿತ್ರಗೀತೆಗಳು, 3.00 ಹಳ್ಳಿ ಹಾಡು, 3.30 ಮಕ್ಕಳ ಮಂಟಪ–ತಲಕಾಡಿನ ಹೊಸಬೀದಿಯಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 4.00 ನಾಟಕ 'ಕುಮುದಿನಿ', ರಚನೆ–ಡಾ. ಜಿ. ಸಿ. ಸುವರ್ಣ, ನಿರ್ಮಾಣ–ವಿ.ಮ. ಜಗದೀಶ್, 4.30 ನೆನಪಿನಂಗಳ (ಧ್ವನಿ ಭಂಡಾರದಿಂದ) ಹಿರಿಯ ರಂಗಕರ್ಮಿ ಪ್ರಸನ್ನ ಅವರೊಂದಿಗೆ ಹೆಚ್.ಶ್ರೀನಿವಾಸ್ ಅವರು ನಡೆಸಿದ್ದ ಸಂವಾದದ ಮೊದಲ ಭಾಗ, 6.50 ಕೃಷಿರಂಗ:ಕಿಸಾನ್‌ವಾಣಿ– ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ ಪ್ರಾಯೋಜಿತ ಕಾರ್ಯಕ್ರಮ. ಸಾವಯವ ಬೇಸಾಯದ ಪ್ರಾಮುಖ್ಯತೆ ಕುರಿತು ಸಂವಾದ. ಭಾಗವಹಿಸುತ್ತಾರೆ ಚಾಮರಾಜನಗರ ಜಿಲ್ಲೆ ಹನೂರು ತಾಲೂಕು ಕೆಂಪನಹಟ್ಟಿಯ ಕೃಷಿಕ ದಂಪತಿ ರಮೇಶ್ ನಾಗರಾಜ್ ನಲ್ಗೆ ಮತ್ತು ಅಶ್ವಿನಿ ರಮೇಶ್ ನಲ್ಗೆ, ಪ್ರಸ್ತುತಿ: ಎನ್. ಕೇಶವಮೂರ್ತಿ, 8.00 ಸವಿನೆನಪು– ಹಳೆಯ ಕನ್ನಡ ಚಿತ್ರಗೀತೆಗಳು, 9.30 ಯುವವಾಣಿ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ, ಎಸ್.ಮಹದೇವನ್–ವೀಣಾ ವಾದನ

ಎರಡೂವರೆ ವರ್ಷ ಯಾಕೆ, ಮುಂದೆ ಐದು ವರ್ಷ ಸಿಎಂ ಆಗಿ

- ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಸಚಿವ ಕೆ.ಎನ್.ರಾಜಣ್ಣ ಸಲಹೆ
- ಈ ದೇಶದ ಶೇ.90ರಷ್ಟು ರಾಜಕಾರಣಿಗಳು ಭ್ರಷ್ಟರು!



ಕೆ.ಎನ್.ರಾಜಣ್ಣ

ಬೆಂಗಳೂರು, ಜ.10– ಎರಡೂವರೆ ವರ್ಷಕ್ಕೆ ಯಾಕೆ ಪ್ರಯತ್ನಿಸುತ್ತೀರಿ? ಮುಂದಿನ ಐದು ವರ್ಷದ ಅವಧಿಗೆ ಮುಖ್ಯಮಂತ್ರಿ ಆಗಿ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್‌ಗೆ ಸಹಕಾರ ಸಚಿವ ಕೆ.ಎನ್ ರಾಜಣ್ಣ ಸಲಹೆ ನೀಡಿದ್ದಾರೆ.

ಮಾಧ್ಯಮದೊಂದಿಗೆ ಮಾತನಾಡಿದ ಅವರು, ಡಿ.ಕೆ.ಶಿವಕುಮಾರ್ ಹಣೆಯಲ್ಲಿ ಬರೆದಿದ್ದರೆ ಸಿಎಂ ಆಗ್ತಾರೆ ಎಂಬ ಎಸ್.ಟಿ. ಸೋಮಶೇಖರ್ ಹೇಳಿಕೆಗೆ ಪ್ರತಿಕ್ರಿಯಿಸಿ, ಸಿಎಂ ಆಗೇ ಬಿಡುತ್ತಾರೆ ಅಂತನೂ ಹೇಳಿಲ್ಲ. ಆಗಲ್ಲ ಅಂತಾನೂ ಹೇಳಿಲ್ಲ. ಅವರ ಹಣೆಯಲ್ಲಿ ಬರೆದಿದ್ದರೆ ಆಗ್ತಾರೆ ಎಂದಿದ್ದಾರೆ. ಹಣೆಯಲ್ಲಿ ಬರೆದಿದ್ದರೆ ಆಗುತ್ತದೆ. ಎಲ್ಲರದ್ದು ವಿಧಿ ಏನು ಅಂತ ಮೊದಲೇ ತೀರ್ಮಾನ ಆಗಿರುತ್ತದೆ. ಅದರ ಪ್ರಕಾರ ಆಗುತ್ತದೆ. ಡಿಕೆ ಶಿವಕುಮಾರ್ ಎರಡೂವರೆ ವರ್ಷಕ್ಕೆ ಯಾಕೆ ಸಿಎಂ ಆಗಲು ಪ್ರಯತ್ನಿಸುತ್ತೀರಿ? ಮುಂದಿನ ಐದು ವರ್ಷದ ಅವಧಿಗೆ ಸಿಎಂ ಆಗಿ ಎಂದರು.

ಮುಂದಿನ ಚುನಾವಣೆ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲೇ ನಡೆಸೋಣ. ಆಗ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಅವರೇ 5 ವರ್ಷ ಸಿಎಂ ಆಗಲಿ ಎಂದರು

ಇದೇ ವೇಳೆ ಡಿಕೆಶಿಯಿಂದ ಪ್ರತ್ಯಂಗಿ ಹೋಮ ವಿಚಾರವಾಗಿ, ನನಗೆ ಪೂಜೆ, ಪುನಸ್ಕಾರ, ವಾಮಾಚಾರದ ಬಗ್ಗೆ ನಂಬಿಕೆ ಇಲ್ಲ. ಅಸಹಾಯಕರಿಗೆ ಒಳ್ಳೆಯದು ಮಾಡಿದರೆ ಅದೇ ಒಳ್ಳೆಯದು. ಯಾರೋ ಒಬ್ಬ ಅಸಹಾಯಕನಿಗೆ ತೊಂದರೆ ನೀಡಿದರೆ ಶಾಪ ಹಾಕುತ್ತಾನೆ. ಅದೇ ನಮಗೆ ಕೆಟ್ಟದಾಗುತ್ತದೆ. ಹಿಂದೆ ನನ್ನ ವಿರುದ್ಧ ಮಾಟ, ವಾಮಾಚಾರದ ಪ್ರಯೋಗ ನಡೆದಿತ್ತು. ಆ ಅನುಭವ ನನಗೆ ಆಗಿದೆ. ನಾನು ಯಾರಿಗೂ ಹೆದರಿಸುವವನಲ್ಲ ಎಂದು ಹೇಳಿದರು.

ಕೇಂದ್ರ ಸಚಿವ ಕುಮಾರಸ್ವಾಮಿ ಈ ಸರ್ಕಾರದಲ್ಲಿ ರೇಟ್ ಕಾರ್ಡ್ ಫಿಕ್ಸ್ ಆಗಿದೆ ಎಂದರೆ ಅವರ ಕಾಲದಲ್ಲಿ ರೇಟ್ ಕಾರ್ಡ್ ಎಷ್ಟಿತ್ತು ಅಂತ ಹೇಳಬೇಕಲ್ಲ. ಒಂದು ತಿಳ್ಕೊಳ್ಳಿ ಈ ದೇಶದಲ್ಲಿ ಶೇ.90 ರಷ್ಟು ರಾಜಕಾರಣಿಗಳು ಭ್ರಷ್ಟರೆ. ಎಲ್ಲಿಂದ ದುಡ್ಡು ತರ್ತಾರೆ ಮನೆಯಿಂದ ಕೊಡ್ತಾರಾ? ಬೇರೆಯವರ ಹತ್ತಿರ ತಗೊಂಡು ಕೊಡಬೇಕು ಎಂದು ವಾಗ್ದಾಳಿ ನಡೆಸಿದ್ದಾರೆ.

ಐದು ವರ್ಷ ಸಿದ್ದರಾಮಯ್ಯನವರೇ ಸಿಎಂ



ಎಂ.ಬಿ.ಪಾಟೀಲ್

ವಿಜಯನಗರ: ಐದು ವರ್ಷಗಳ ಕಾಲ ಸಿದ್ದರಾಮಯ್ಯನವರೇ ಸಿಎಂ ಆಗಿ ಮುಂದುವರೆಯುತ್ತಾರೆ ಎಂದು ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ಹೇಳಿದರು.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಸಿಎಂ ಸ್ಥಾನ ಬದಲಾವಣೆ ವಿಚಾರ ಇಲ್ಲ. ಸದ್ಯಕ್ಕೆ ಸಿಎಂ ಖುರ್ಚಿ ಖಾಲಿ ಇಲ್ಲ. ಐದು ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಆಗಿ ಮುಂದುವರೆಯಲಿದ್ದಾರೆ ಎಂದರು. ಸಚಿವ ಜಾರಕಿಹೊಳಿ ಮನೆಯಲ್ಲಿ ಸಿಎಂಗೆ ಔತಣಕೂಟ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅವರು, ಡಿ.ಕೆ.ಶಿವಕುಮಾರ್ ವಿದೇಶ ಪ್ರವಾಸದಲ್ಲಿದ್ದರು. ಹಾಗಾಗಿ ಔತಣ ಕೂಟದಲ್ಲಿ ಭಾಗಿಯಾಗಿರಲಿಲ್ಲ. ಸಚಿವರು, ಶಾಸಕರು ಕೂಡಿ ಊಟ ಮಾಡಿದರೆ ಏನು ತಪ್ಪಿಲ್ಲ. ಒಮ್ಮೊಮ್ಮೆ ನಾನು ಮತ್ತು ಬಸವರಾಜ ಬೊಮ್ಮಾಯಿ ಅವರೊಡನೆ ಕೂಡಿ ಊಟ ಮಾಡ್ತೀವಿ, ಅದರಲ್ಲಿ ತಪ್ಪೇನು ಎಂದು ಪ್ರಶ್ನಿಸಿದರು.

ಸಂಕ್ರಮಣ ಹಬ್ಬದ ಬಳಿಕ ಆಪರೇಷನ್ ಆಗುತ್ತೆ ಎನ್ನುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಈಗಾಗಲೇ ಜೆಡಿಎಸ್ ಶಾಸಕರು ನಮ್ಮ ಜೊತೆ ಇದ್ದಾರೆ. ಹಾಗೆ ಬಿಜೆಪಿಯ ಕೆಲವರು ನಮ್ಮ ಸಂಪರ್ಕದಲ್ಲಿದ್ದಾರೆ. ಅವರು ನಮ್ಮ ಪಕ್ಷಕ್ಕೆ ಬರಲು ತುದಿಗಾಲ ಮೇಲೆ ನಿಂತಿದ್ದಾರೆ. ರಾಜಕೀಯ ಬೆಳವಣಿಗೆ ಏನಾದರೂ ಆದರೆ ಅವರೆಲ್ಲರನ್ನು ಪಕ್ಷಕ್ಕೆ ಕರೆತರುತ್ತೇವೆ ಎಂದರು.

ಡಿಕೆಶಿ ಜೈಲಿಗೆ ಹೋಗಿ ನಂತರ ಸಿಎಂ ಆಗ್ತಾರೆ!

ಜ್ಯೋತಿಷಿ ದ್ವಾರಕನಾಥ್ ಭವಿಷ್ಯವಾಣಿ ನಿಜವಾಗಲಿದೆ: ಎಸ್.ಟಿ.ಸೋಮಶೇಖರ್



ಸೋಮಶೇಖರ್

ಬೆಂಗಳೂರು: ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಖಂಡಿತವಾಗಿಯೂ ಮುಂದಿನ ಮುಖ್ಯಮಂತ್ರಿಯಾಗುತ್ತಾರೆ ಎಂದು ಬಿಜೆಪಿ ಬಂಡಾಯ ನಾಯಕ ಮತ್ತು ಮಾಜಿ ಸಚಿವ ಎಸ್.ಟಿ. ಸೋಮಶೇಖರ್ ವಿಶ್ವಾಸ ವ್ಯಕ್ತ ಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಖ್ಯಾತ ಜ್ಯೋತಿಷಿ ದ್ವಾರಕನಾಥ್ ಅವರು ಸುಮಾರು 25 ವರ್ಷಗಳ ಹಿಂದೆಯೇ ಶಿವಕುಮಾರ್ ಭವಿಷ್ಯದಲ್ಲಿ ಜೈಲಿಗೆ ಹೋಗುತ್ತಾರೆ ಆನಂತರ ಸಿಎಂ ಆಗುತ್ತಾರೆ ಎಂದು ಭವಿಷ್ಯ ನುಡಿದಿದ್ದರು ಎಂದು ಹೇಳಿದರು. ಶಿವಕುಮಾರ್ ಜೈಲುವಾಸದ ಅವರ ಮೊದಲ ಭವಿಷ್ಯವಾಣಿ ಈಗಾಗಲೇ ನಿಜವಾಗಿದೆ. ಅವರು ಮುಂದಿನ ಸಿಎಂ ಆಗುತ್ತಾರೆ ಎಂದು ನನಗೆ ವಿಶ್ವಾಸವಿದೆ ಎಂದು ಅವರು ಹೇಳಿದರು.


ಡಿಕೆ ಶಿವಕುಮಾರ್ ದೇವಸ್ಥಾನಕ್ಕೆ ಭೇಟಿ ನೀಡುತ್ತಿರುವುದನ್ನು ಲೇವಡಿ ಮಾಡಿದ್ದ ವಿಜಯಪುರ ಶಾಸಕ ಯತ್ನಾಳ್ ವಿರುದ್ಧ ಶಾಸಕ ಸೋಮಶೇಖರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಯತ್ನಾಳ್ ಅವರದ್ದು ನೋಡಿಕೊಳ್ಳಲಿ. ಶಿವಕುಮಾರ್‌ಗೂ ಯತ್ನಾಳ್‌ಗೂ ಏನು ಸಂಬಂಧ ಶಿವಕುಮಾರ್ ಅವರು, ಯತ್ನಾಳ್ ವಿರುದ್ಧ ಕನಕಪುರದಲ್ಲಿ ಕೇಸ್ ಹಾಕಿದ್ದಾರೆ. ಮೊದಲು ಯತ್ನಾಳ್‌ಗೆ ಆ ಕೇಸ್ ಅಟೆಂಡ್ ಮಾಡಲು ಹೇಳಿ. ಶಿವಕುಮಾರ್ ಅವರನ್ನು ಟೀಕೆ ಮಾಡುವ ಬದಲು ನಿನ್ನದೇ ನೂರೆಂಟು ಇದೆ ಅದನ್ನು ನೋಡಿಕೋ ಎಂದರು. ಡಿಕೆಶಿಯನ್ನು ಹೊಗಳುವ, ತೆಗಳುವ ಕೆಲಸ ನಿನ್ನದಲ್ಲ. ಈಗ ವಕ್ಫ್, ವಿಜಯೇಂದ್ರ ಬಗ್ಗೆ ಏನೋ ಮಾಡ್ತಾ ಇದ್ದೀಯಲ್ಲ ಅದನ್ನು ನೆಮ್ಮದಿಯಾಗಿ ಮಾಡು. ಡಿಕೆ ಶಿವಕುಮಾರ್ ಬಗ್ಗೆ ನೀನು ಯಾಕೆ ತಲೆಕೆಡಿಸಿಕೊಳ್ಳುತ್ತೀಯಾ? ಅವರು ಟೆಂಪಲ್‌ಗೆ ಹೋಗ್ತಾರೋ, ಜ್ಯೋತಿಷಿ ಬಳಿ ಹೋಗ್ತಾರೋ ನಿನಗ್ಯಾಕೆ ಅದು. ಅದು ಅವರ ಹಣೇಬರಹ. ನಿನಗೆ ಡಿಕೆಶಿ ಬಗ್ಗೆ ಪದೇ ಪದೆ ಮಾತನಾಡಲು ಯಾರು ಹೇಳಿದ್ದು ಎಂದು ಏಕವಚನದಲ್ಲೇ ವಾಗ್ದಾಳಿ ನಡೆಸಿದರು.

ವಿಜಯೇಂದ್ರ ಒಬ್ಬ ಹುಟ್ಟು ಹೋರಾಟಗಾರ. ಅವರನ್ನು ತುಂಬಾ ವರ್ಷದಿಂದ ಹತ್ತಿರದಿಂದ ನೋಡಿದ್ದೇನೆ. ಉಪಚುನಾವಣೆಯಲ್ಲಿ ಎಲ್ಲೆಲ್ಲಿ ಜವಾಬ್ದಾರಿ ಕೊಟ್ಟಿದ್ದಾರೆ ಅಲ್ಲೆಲ್ಲ ಗೆಲ್ಲಿಸಿಕೊಂಡು ಬಂದಿದ್ದಾರೆ. ವಿಜಯೇಂದ್ರ ಎಲ್ಲೂ ದ್ವೇಷದ ರಾಜಕಾರಣ ಮಾಡಿರುವುದು ನಾನು ನೋಡಿಲ್ಲ. ಯಾರ ಮೇಲೂ ಎತ್ತಿ ಕಟ್ಟುವ ದ್ವೇಷದ ರಾಜಕಾರಣ ಮಾಡಿರುವುದನ್ನು ನೋಡಿಲ್ಲ ಎಂದು.

ವಿಜಯೇಂದ್ರ ಅವರು ಎಲ್ಲಾ ಸಮುದಾಯ ದವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಹೋಗುವುದನ್ನು ನೋಡಿದ್ದೇನೆ. ಹೈಕಮಾಂಡ್ ವಿಜಯೇಂದ್ರರನ್ನು ರಾಜ್ಯಾಧ್ಯಕ್ಷರನ್ನಾಗಿ ಮಾಡಿದೆ. ಎಲ್ಲರೂ ಅವರಿಗೆ ಗೌರವ ಕೊಡುವ ಕೆಲಸ ಮಾಡಬೇಕು. ಹೈಕಮಾಂಡ್ ನೇಮಕ ಮಾಡಿದ ಮೇಲೆ ವಿರೋಧ ಮಾಡುವ ಹಕ್ಕು ಯಾರಿಗೂ ಇಲ್ಲ ಎಂದರು.



ಉತ್ತರ ಕ್ರಿಯಾದಿ ಆಹ್ವಾನ ಪತ್ರಿಕೆ



ಶ್ರೀ ಚಿಕ್ಕರಂಗಯ್ಯ

ನಿವೃತ್ತ ಅಧೀಕ್ಷಕರು (ವಾರ್ತಾ ಮತ್ತು ಪ್ರಚಾರ ಇಲಾಖೆ)
ಇವರು ದಿನಾಂಕ: 03.01.2025 ಶುಕ್ರವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧ ಮೃತರ ಉತ್ತರ ಕ್ರಿಯಾದಿ ಕಾರ್ಯವನ್ನು ದಿನಾಂಕ: 13.01.2025 ಸೋಮವಾರ ಬೆಳಿಗ್ಗೆ 10 ಗಂಟೆಗೆ ಮೃತರ ಸ್ವಗೃಹ ಸಿಂಗಾರಿಪುರ ಗ್ರಾಮ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ಇಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.
ದುಃಖತಪ್ತರು: ಪತ್ನಿ ರಾಣಿ, ಮಕ್ಕಳು ಮತ್ತು ಕುಟುಂಬವರ್ಗದವರು
ಭೋಜನ: ದಿನಾಂಕ 14.01.2025 ಮಂಗಳವಾರ ಮಧ್ಯಾಹ್ನ 12.00 ಗಂಟೆಗೆ

ಮೈಸೂರು ಮಿತ್ರ
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು



10TH YEAR REMEMBRANCE



L. MALLAIAH
1932-2015
Proprietor
SUNLIGHT
CLEANERS & DYERS
K.R. Circle, Mysore
Son: Shankar.M & Family



23ನೇ ವರ್ಷದ ಪುಣ್ಯಸ್ಮರಣೆ
ಶ್ರೀ ಬಿ. ಹೊನ್ನೇಗೌಡರು
ನಿಧನ : 11-01-2002
ನಿಮ್ಮ ನೆನಪಿನಲ್ಲಿ
ಮಕ್ಕಳು, ಸೊಸೆಯಂದಿರು, ಅಳಿಯಂದಿರು ಮತ್ತು ಮೊಮ್ಮಕ್ಕಳು ಹಾಗೂ ಹೂಟಗಳ್ಳಿ ಗ್ರಾಮಸ್ಥರು, ಹೊನ್ನೇಗೌಡ ಬ್ಲಾಕ್, ಹೂಟಗಳ್ಳಿ

ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ
ಮೆಗಾ ಡೈರಿ ಸಂಕೀರ್ಣ, ಬನ್ನೂರು ರಸ್ತೆ, ಆಲನಹಳ್ಳಿ ಅಂಚೆ, ಮೈಸೂರು – 570028.
ದೂರವಾಣಿ ಸಂಖ್ಯೆ:0821-2474475, ಫ್ಯಾಕ್ಸ್ ನಂ.0821-2474476,
ಇ-ಮೇಲ್ : transportmymul@gmail.com ದಿನಾಂಕ: 10.01.2025

ಟೆಂಡರ್ ಪ್ರಕಟಣೆ (ಇ-ಟೆಂಡರ್ ಮುಖಾಂತರ ಮಾತ್ರ)

ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟಕ್ಕೆ ಅವಶ್ಯವಿರುವ ಈ ಕೆಳಕಂಡ ಸೇವೆಗಳನ್ನು ನೀಡಲು ಅರ್ಹ ಟೆಂಡರ್‌ದಾರರಿಂದ ಇ-ಪ್ರೊಕ್ಯೂರ್‌ಮೆಂಟ್ ಮುಖೇನ ಟೆಂಡರನ್ನು ಆಹ್ವಾನಿಸಲಾಗಿದೆ. ಟೆಂಡರ್ ದಾಸ್ತಾವೇಜುಗಳನ್ನು ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರ್‌ಮೆಂಟ್ ಪ್ಲಾಟ್ ಫಾರಂ ಅಡಿ **www.kppp.karnataka.gov.in** ಇ-ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಬಹುದಾಗಿರುತ್ತದೆ.

ಕ್ರ. ಸಂ	ಟೆಂಡರ್ ಪ್ರಕಟಣೆ	ಸೇವೆಯ ವಿವರ	ಟೆಂಡರ್ ಸಲ್ಲಿಸಲು ಕೊನೆಯ ದಿನಾಂಕ
1	IFT No: KMF/ 2024-25/ SE3052	ಮೈಸೂರು ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ವ್ಯಾಪ್ತಿಗೆ ಒಳಪಡುವ ಹಾ.ಉ.ಸ.ಸಂಘಗಳಿಗೆ ಮೇವು ಮತ್ತು ಬಿತ್ತನೆ ಬೀಜಗಳು/ಡಿ.ಸಿ.ಎಸ್ ಸಾಮಾಗ್ರಿಯ ಸಾಗಾಣಿಕೆಗಾಗಿ 3.5 ಟನ್ ಸಾಮರ್ಥ್ಯದ ವಾಹನ, ಹಾ.ಉ.ಸ.ಸಂಘಗಳು/ಬಿ.ಎಂ.ಸಿ ಕೇಂದ್ರಗಳ ಹಾಲಿನ ಗುಣಮಟ್ಟ ಪರೀಕ್ಷಿಸಲು ಹಾಲು ಪರೀಕ್ಷಾ ವಾಹನ, ಕ್ಯಾನ್ ಎತ್ತುವಳಿ ಮಾರ್ಗ ಹಾಗೂ ಕಛೇರಿ ಕೆಲಸಗಳಿಗಾಗಿ ಹಾಗೂ ಪಶುವೈದ್ಯಕೀಯ ತುರ್ತುಕರೆ ಮಾರ್ಗಗಳಿಗೆ/ಬಿ.ಎಂ.ಸಿ ಕೇಂದ್ರಗಳ ಪರಿವೀಕ್ಷಣೆಗಾಗಿ ಕಾರುಗಳು ಮತ್ತು ಪಶು ಆಹಾರ ಸಾಗಾಣಿಕೆ ಮಾಡಲು 25-30 ಮೆ.ಟನ್ ಸಾಮರ್ಥ್ಯದ ವಾಹನಗಳನ್ನು ವಿವಿಧ ಮಾರ್ಗಗಳಿಗೆ ಎರಡು ವರ್ಷಗಳ ಅವಧಿಗೆ ಅರ್ಹ ಗುತ್ತಿಗೆದಾರರನ್ನು ನಿಯೋಜಿಸಿಕೊಳ್ಳಲು ಇ-ಪೋರ್ಟಲ್‌ನಲ್ಲಿ ಟೆಂಡರ್ ಆಹ್ವಾನಿಸಲಾಗಿದೆ.	07.02.2025 ಸಂಜೆ 5.00 ಗಂಟೆಯವರೆಗೆ

ಹೆಚ್ಚಿನ ಮಾಹಿತಿಗಾಗಿ ಅಧೀಕ್ಷಕರು(ಸಾರಿಗೆ)ರವರನ್ನು (ದೂ.ಸಂ:0821-2473923 / 6366430832) ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ.
ಸಹಿ/-, ವ್ಯವಸ್ಥಾಪಕ ನಿರ್ದೇಶಕರು
ಮೈಸೂರು ಜಿಲ್ಲಾ ಸಹಕಾರಿ ಹಾಲು ಒಕ್ಕೂಟ ನಿ.,

ನೋಂದಣಿ ಸಂಖ್ಯೆ: ಎಂವೈಇ+4-00254-2023-24 (ಕಛೇರಿ) 0821-4262418
ಶ್ರೀರಾಮ ಮಂದಿರ
ನಯನಜ ಕ್ಷತ್ರಿಯ ಕನ್ನಡಿಗರ ಟ್ರಸ್ಟ್ (ರಿ.)
ವಾದ್ಯ ಸಂಗೀತ ಪಾಠಶಾಲೆ
ನಂ. 778/ಬಿ, ಎಲ್-3, 778ಎಲ್-2/2, ಕುಂಬಾರಗೇರಿ, ಲಷ್ಕರ್ ಮೊಹಲ್ಲಾ, ಮೈಸೂರು.

ಪ್ರತಿಭಾ ಪುರಸ್ಕಾರ ದಿ: 09.01.2025

ಪ್ರತಿವರ್ಷದಂತೆ ಈ ವರ್ಷವು ಕೂಡ ನಮ್ಮ ಮೇಲ್ಕಂಡ ಟ್ರಸ್ಟ್ ವತಿಯಿಂದ 175ನೇ ವರ್ಷದ ಶ್ರೀ ತ್ಯಾಗರಾಜ ಆರಾಧನಾ ಮಹೋತ್ಸವವನ್ನು ದಿನಾಂಕ 18-01-2025 ನೇ ಶನಿವಾರ ಬೆಳಗ್ಗೆ 7-30 ಗಂಟೆಗೆ ಏರ್ಪಡಿಸಿದ್ದು, ಈ ಮಹೋತ್ಸವದಲ್ಲಿ ಮೈಸೂರು ನಗರದಲ್ಲಿ ವಾಸವಾಗಿರುವ ನಮ್ಮ ನಯನಜ ಕ್ಷತ್ರಿಯ ಕನ್ನಡಿಗರ ಜನಾಂಗದ 2023-2024 ನೇ ಸಾಲಿನ ಎಸ್.ಎಸ್.ಎಲ್.ಸಿ., ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇಕಡ 80% ಹೆಚ್ಚು ಅಂಕ ಗಳಿಸಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ "ಪ್ರತಿಭಾ ಪುರಸ್ಕಾರ ನೀಡಲಾಗುವುದು.

ಜನಾಂಗದ ವಿದ್ಯಾರ್ಥಿಗಳು ತಮ್ಮ ಜಾತಿ ಪ್ರಮಾಣ ಪತ್ರ (ತಾಲ್ಲೂಕು ಕಛೇರಿಯಿಂದ ನೀಡುವ ಜಾತಿ ಪ್ರಮಾಣ ಪ್ರತಿ), ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ಅಂಕಪಟ್ಟಿಯ ಜೆರಾಕ್ಸ್ ಪ್ರತಿ, ಆಧಾರ್ ಜೆರಾಕ್ಸ್ ಪ್ರತಿ, ಭಾವಚಿತ್ರವನ್ನು ದಿನಾಂಕ 17-01-2025 ರೊಳಗೆ ಸಂಘದ ಕಛೇರಿಗೆ ನೀಡುವುದು.

ಕಛೇರಿ ವೇಳೆ : ಬೆಳಗ್ಗೆ 10.30 ರಿಂದ 1.00 ರವರೆಗೆ
ಸಂಜೆ: 5.00 ರಿಂದ 8.00 ರಿಂದ

ಸೂಚನೆ : ನಯನಜ ಕ್ಷತ್ರಿಯ ಕನ್ನಡಿಗರ ಜನಾಂಗದವರಿಗೆ ಮಾತ್ರ.

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
7892425049, 6360865466

ವಂದನೆಗಳೊಂದಿಗೆ
ಸಹಿ/- (ಗುಂಡಣ್ಣ)
ಕಾರ್ಯದರ್ಶಿಗಳು, ನಯನಜ ಕ್ಷತ್ರೀಯ ಕನ್ನಡಿಗರ ಟ್ರಸ್ಟ್ (ರಿ), ಮೈಸೂರು

ನಕ್ಕರೆ ಅದೇ ಸ್ವರ್ಗ

ಗುಂಡ ಎಮ್ಮೆ ಕಳೆದುಕೊಂಡು ಹುಚ್ಚನಂಗ ಹುಡುಕಾಡಿ ಮಂಗ್ಯಾನಂಗ ಮರ ಹತ್ತಿ ಕುಳಿತ. ಅದೇ ಮರದ ಕೆಳಗೆ ಲವರ್‌ಗಳು ಬಂದು ಕುಳಿತುಕೊಂಡರು.

ಹುಡುಗ : ಪ್ರಿಯೆ... ನಿನ್ನ ಕಣ್ಣಿನಲ್ಲಿ ಇಡೀ ಪ್ರಪಂಚಾನೇ ಕಾಣುತ್ತಿದೆ!

ಗುಂಡ : ಯಪ್ಪಾ ಸ್ವಲ್ಪ ನನ್ನ ಎಮ್ಮಿ ಎಲ್ಲಿ ನಿಂತದ ಅಂತ ನೋಡು!!

ಮೈಸೂರು ಮಿತ್ರ

ಶನಿವಾರ, 11 ಜನವರಿ 2025

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ತೆರೆದ ಮನಸ್ಸಿನಿಂದ ಎಲ್ಲವನ್ನೂ ಕೇಳಿಸಿಕೊಳ್ಳಬೇಕು,
ನಮಗೆ ಅಗತ್ಯವೆನಿಸಿದ್ದನ್ನು ಮಾತ್ರ ಉಳಿಸಿಕೊಳ್ಳಬೇಕು. –ಜೆ.ಜೆ. ಗ್ರೀನ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು	ಹಾಲಿಗೆ ಹುಳಿ ಹಿಂಡಿದರೆ ಮೊಸರು, ಮಣ್ಣಿಗೆ ನೀರು ಹಾಕಿದರೆ ಕೆಸರು.

ನಿಮ್ಮ ಪತ್ರಗಳು

■ ಮುಖ್ಯಮಂತ್ರಿಗಳಿಗೊಂದು ಪತ್ರ

ಮಾನ್ಯರೆ,

ಮೈಸೂರಿನ ಸಬ್ ಅರ್ಬನ್ ಬಸ್ ನಿಲ್ದಾಣವನ್ನು ಬನ್ನಿಮಂಟಪಕ್ಕೆ ಸ್ಥಳಾಂತರಿಸುತ್ತಿರುವುದು ಅವೈಜ್ಞಾನಿಕ. ಮೈಸೂರಿನ ಕೇಂದ್ರ ಬಸ್ ನಿಲ್ದಾಣವನ್ನು ಬನ್ನಿಮಂಟಪಕ್ಕೆ ಸ್ಥಳಾಂತರ ಮಾಡುತ್ತಿರುವುದು ದೂರದೃಷ್ಟಿ ಮತ್ತು ಪ್ರಜೆಗಳ ಹಿತಾಸಕ್ತಿ ಇಲ್ಲದ ಅಧಿಕಾರಿಗಳು ಮತ್ತು ಮೈಸೂರಿನ ರಾಜಕಾರಣಿಗಳು, ಬುದ್ಧಿಜೀವಿಗಳು ಹಾಗೂ ತಟಸ್ಥವಾಗಿರುವ ನಾಗರೀಕರ ವೈಫಲ್ಯ ಎಂದರೆ ತಪ್ಪಾಗಲಾರದು.

ಬನ್ನಿಮಂಟಪ ಮೈಸೂರಿನ ಉತ್ತರ ಭಾಗದ ತುದಿಯಲ್ಲಿ ಇರುವುದರಿಂದ ದಕ್ಷಿಣ, ಪೂರ್ವ ಮತ್ತು ಪಶ್ಚಿಮ ಭಾಗದ ಬಡಾವಣೆಗಳ ನಾಗರೀಕರಿಗೆ ಅನುಕೂಲಕ್ಕಿಂತ ಅನಾನುಕೂಲವೇ ಹೆಚ್ಚು, ದಕ್ಷಿಣ ಭಾಗದ ಜನರಿಗೆ ಹೊಸ ಬಸ್ ನಿಲ್ದಾಣ ಸುಮಾರು 12 ಕಿ.ಮೀ.ಗಳಾಗುತ್ತದೆ. ಇದರಿಂದ ದಕ್ಷಿಣ ಭಾಗದ ನಾಗರೀಕರಿಗೆ ಅನಾವಶ್ಯಕ ಹೊರೆಯಾಗಲಿದೆ.

ಕೇಂದ್ರ ಬಸ್ ನಿಲ್ದಾಣವನ್ನು ಮೈಸೂರಿನ ಮೆಡಿಕಲ್ ಕಾಲೇಜಿನ ಪ್ರಾಂಗಣಕ್ಕೋ ಅಥವಾ ರೈಲ್ವೆ ಸ್ಟೇಷನ್ ಹಿಂಭಾಗದ ಆರ್‌ಎಂಸಿಗೆ ಸ್ಥಳಾಂತರಿಸಿ ರೈಲ್ವೆ ನಿಲ್ದಾಣದ ಎದುರು ಇರುವ ಜೀವಣ್ಣರಾಯನ ಕೆರೆಯ ಜಾಗದಲ್ಲಿ ಸಿಟಿ ಬಸ್ ನಿಲ್ದಾಣ ಮಾಡಿ ಹಾಲಿ ಇರುವ ಮೆಡಿಕಲ್ ಕಾಲೇಜನ್ನು ಬನ್ನಿಮಂಟಪದ ಕೆಎಸ್‌ಆರ್‌ಟಿಸಿ ಜಾಗಕ್ಕೆ ಸ್ಥಳಾಂತರಿಸಿ ರೈಲ್ವೆ ಸ್ಟೇಷನ್ ಸುತ್ತಮುತ್ತ ಇರುವ ಜಾಗವನ್ನು ಒಂದೇ ಕಡೆ ಬೆಂಗಳೂರಿನ ಮೆಜೆಸ್ಟಿಕ್ ಮಾದರಿಯಲ್ಲಿ ನಿರ್ಮಿಸಿದರೆ ಪ್ರಯಾಣಿಕರಿಗೆ ಮತ್ತು ಮೈಸೂರಿನ ನಾಲ್ಕು ದಿಕ್ಕಿನ ಜನರಿಗೆ ಅನುಕೂಲವಾಗುವುದು. ಇದರಿಂದ ಹಾಲಿ ಕೇಂದ್ರ ಬಸ್ ನಿಲ್ದಾಣ ಮತ್ತು ಸಿಟಿಬಸ್ ನಿಲ್ದಾಣವನ್ನು ಕಮರ್ಷಿಯಲ್ ಕಾಂಪ್ಲೆಕ್ಸ್ ಮಾಡಿ ಆದಾಯ ಹೆಚ್ಚಿಸಿ ಕೊಳ್ಳಬಹುದು. ಹೀಗೆ ಮಾಡುವುದರಿಂದ ಸೆಂಟ್ರಲ್ ಸಿಟಿಯ ಟ್ರಾಫಿಕ್ ಗಣನೀಯವಾಗಿ ಕಡಿಮೆಯಾಗಿ ಪಾರಂಪರಿಕ ಕಟ್ಟಡಗಳೂ ಉಳಿಯುತ್ತವೆ ಮತ್ತು ಮೂರು ನಿಲ್ದಾಣಗಳೂ ಒಂದೇ ಕಡೆ ಬರುವುದರಿಂದ ಪ್ರವಾಸೋದ್ಯಮಕ್ಕೂ ಉತ್ತೇಜನ ಸಿಗಲಿದೆ.

ರೈಲ್ವೆ ಸ್ಟೇಷನ್ ಪಕ್ಕದಲ್ಲಿ ಕೇಂದ್ರ ಮತ್ತು ನಗರ ಬಸ್ ನಿಲ್ದಾಣಗಳನ್ನು ನಿರ್ಮಿಸುವುದರಿಂದ ಬೆಂಗಳೂರು ಮಾರ್ಗದ ಬಸ್ಸುಗಳು ಸಯ್ಯಾಜಿರಾವ್ ರಸ್ತೆಯ ಮೂಲಕ ತಲುಪುತ್ತವೆ. ಹುಣಸೂರು ರಸ್ತೆಯ ಮಾರ್ಗದ ಬಸ್ಸುಗಳು ರೈಲ್ವೆ ಸ್ಟೇಷನ್ ಸರ್ಕಲ್ ಮುಖಾಂತರ ಮೆಟ್ರೋಪೋಲ್ ಪಕ್ಕದಲ್ಲಿ ಹುಣಸೂರು ರಸ್ತೆ ತಲುಪಲಿವೆ. ನಂಜನಗೂಡು, ಕೊಳ್ಳೇಗಾಲ, ನರಸೀಪುರ ಮಾರ್ಗದ ಬಸ್ಸುಗಳು ಜೆಎಲ್‌ಬಿ ರಸ್ತೆ ಮೂಲಕ ಎಲೆ ತೋಟ ಸರ್ಕಲ್ ಮೂಲಕ ಅಥವಾ ನೂರಡಿ ರಸ್ತೆಯ ಮೂಲಕ ಅರಮನೆಯ ದಕ್ಷಿಣ ದ್ವಾರದ ಮುಂದೆ ಸಾಗಿ ನಂಜನಗೂಡು ರಸ್ತೆ ತಲುಪಲಿವೆ. ಮಳವಳ್ಳಿ ಕನಕಪುರ ಮಾರ್ಗದ ಬಸ್ಸುಗಳು ಸಯ್ಯಾಜಿರಾವ್ ರಸ್ತೆಯ ಮೂಲಕ ರಿಂಗ್ ರೋಡ್ ಮುಖಾಂತರ ಬನ್ನೂರು ರಸ್ತೆ ತಲುಪಬಹುದು.

ಈ ಮೇಲಿನ ಮಾರ್ಗಗಳ ಕೆಲವು ಕಡೆ ರಸ್ತೆ ಅಗಲೀಕರಣಗೊಳಿಸಿದರೆ ಉತ್ತಮ ಫಲಿತಾಂಶ ಕಾಣಬಹುದು. ಇದರಿಂದ ಕೆ.ಆರ್.ಸರ್ಕಲ್, ಆರ್ಗೇಟ್, ಅರಮನೆ ಮುಂಭಾಗ, ನಗರಪಾಲಿಕೆಯ ಮುಂಭಾಗ ಹಾಗೂ ಇರ್ವಿನ್ ರಸ್ತೆ ಗಣನೀಯವಾಗಿ ಸಂಚಾರ ಕಡಿಮೆಯಾಗಲಿದೆ. ಆದ್ದರಿಂದ ಸಂಪುಟ ಅನುಮೋದಿಸಿದ್ದರೂ ಕೂಡ ಪುನರ್ ಪರಿಶೀಲಿಸಿ ಮುಖ್ಯಮಂತ್ರಿಗಳು ಮೈಸೂರಿನವರೇ ಆಗಿರುವುದರಿಂದ ನಿರ್ಧಾರ ಕೈಗೊಂಡು ಮೈಸೂರಿನ ನಾಗರೀಕರಿಗೆ ಹಾಗೂ ಪ್ರವಾಸಿಗರಿಗೆ ಅನುಕೂಲ ಮಾಡಿಕೊಡುತ್ತಾರೆಂಬ ಅಪಾರ ನಂಬಿಕೆ ಇದೆ.

–ಗಿರೀಶ್ ಆರಾಧ್ಯ ಹೆಚ್.ಎನ್., ಬಿ. ಬ್ಲಾಕ್, ಜೆ.ಪಿ. ನಗರ, ಮೈಸೂರು.

■ ರಾಷ್ಟ್ರನಾಯಕರ ಬಗ್ಗೆ ವಿಭಿನ್ನ ದೃಷ್ಟಿಕೋನ!

ಮಾನ್ಯರೆ,

ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾದ ನಂತರ 2020 ರಲ್ಲಿ ನಿಧನರಾದ ಮಾಜಿ ರಾಷ್ಟ್ರಪತಿ ಪ್ರಣಬ್ ಮುಖರ್ಜಿಯವರಿಗೆ ರಾಷ್ಟ್ರಿಯ ಸ್ಮೃತಿಯಲ್ಲಿ (ರಾಜ್ ಘಾಟ್) ಸ್ಮಾರಕ ನಿರ್ಮಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ ಎಂದು ಪ್ರಣಬ್ ಪುತ್ರಿ ಶರ್ಮಿಷ್ಠೆ ತಿಳಿಸಿದ್ದಾರೆ ಎಂದು ಪತ್ರಿಕೆಗಳಲ್ಲಿ ವರದಿ (08.012024) ಯಾಗಿದೆ. ಮನಮೋಹನ್ ಸಿಂಗ್ ಅವರ ಅಂತ್ಯಕ್ರಿಯೆಯನ್ನು ರಾಜಘಾಟ್‌ನಲ್ಲಿ ನಡೆಸದೆ ಭೋದ್ ಘಾಟ್‌ನಲ್ಲಿ ನಡೆಸಿದ ಬಗ್ಗೆ ವಿವಾದ ಆರಂಭವಾದ ನಂತರ ಕೇಂದ್ರದ ಆಶ್ಚರ್ಯಕರ ನಿರ್ಧಾರ ಇದು. 2020ರಲ್ಲಿ ನಿಧನರಾದ ಮಾಜಿ ರಾಷ್ಟ್ರಪತಿಗಳಿಗೆ ಸ್ಮಾರಕ ನಿರ್ಮಾಣ ಮಾಡಬೇಕು ಎಂಬ ಬಯಕೆಯೇ ಕೇಂದ್ರ ಸರ್ಕಾರಕ್ಕೆ ಇರಲಿಲ್ಲ. ಆದರೆ ಮನಮೋಹನ್ ಸಿಂಗ್‌ರ ನಿಧನದ ಅಂತ್ಯಕ್ರಿಯೆಯ ಸ್ಥಳ, ಸ್ಮಾರಕ ನಿರ್ಮಾಣದ ವಿವಾದಗಳ ನಂತರ ಸ್ಮಾರಕ ನಿರ್ಮಾಣದ ಘೋಷಣೆಯಾಗುತ್ತಿದೆ. ಪ್ರಣಬ್ ನಿಧನರಾದಾಗ ಕಾಂಗ್ರೆಸ್ ಪಕ್ಷ ಕಾರ್ಯಕಾರಿ ಸಭೆಯನ್ನೇ ಕರೆಯಲಿಲ್ಲ ಎಂದು ಅವರ ಪುತ್ರಿ ಆರೋಪಿಸಿದ್ದರು. ರಾಜಕೀಯ ಪಕ್ಷಗಳು ನಾಯಕರು ರಾಷ್ಟ್ರೀಯ ನಾಯಕರನ್ನು ಹೇಗೆ ಸಂದರ್ಭಾನುಸಾರ ವಿಭಿನ್ನ ದೃಷ್ಟಿಕೋನದಿಂದ ನೋಡುತ್ತಾರೆ ಎನ್ನುವುದು ಈ ಎರಡು ನಾಯಕರ ಕಣ್ಮರೆಯಲ್ಲಿ ಗೋಚರವಾಗಿವೆ.

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

■ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಸರ್ಕಾರಿ ನೌಕರರಿಗೂ ವಿಸ್ತರಿಸಲಿ


ಮಾನ್ಯರೆ,

ಕೆ.ಎಸ್.ಆರ್.ಟಿ.ಸಿ ನೌಕರರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ನೀಡುವ ಆರೋಗ್ಯ ಯೋಜನೆಗೆ ಸಿಎಂ ಸಿದ್ದರಾಮಯ್ಯನವರು ಇತ್ತೀಚೆಗೆ ಚಾಲನೆ ನೀಡಿರುವುದು ಒಳ್ಳೆಯ ಬೆಳವಣಿಗೆ. ಈ ಮೂಲಕ ಸಾರಿಗೆ ನೌಕರರ ಹಲವು ವರ್ಷಗಳ ಬೇಡಿಕೆ ಈಡೇರಿದಂತಾಗಿದೆ. ಕೆ.ಎಸ್.ಆರ್.ಟಿ.ಸಿ ಆರೋಗ್ಯ ಯೋಜನೆಯಡಿ ಸಾರಿಗೆ ಸಂಸ್ಥೆಯ ಎಲ್ಲಾ ನೌಕರರು, ಅವರ ತಂದೆ ತಾಯಿ ಮತ್ತು ಪತ್ನಿ ಮಕ್ಕಳಿಗೆ ಖರ್ಚಿನ ಮಿತಿಯಿಲ್ಲದೆ ವೈದ್ಯಕೀಯ ಚಿಕಿತ್ಸೆ ಸೌಲಭ್ಯ ಸಿಗಲಿರುವುದು ನೌಕರರ ಪಾಲಿಗೆ ಅತ್ಯಂತ ನೆಮ್ಮದಿಯ ಹಾಗೂ ಖುಷಿ ಕೊಡುವ ಸಂಗತಿಯಾಗಿದೆ. ಈ ಯೋಜನೆ ಅನುಷ್ಠಾನಕ್ಕಾಗಿ ರಾಜ್ಯಾದ್ಯಂತ ಇರುವ ಸರ್ಕಾರಿ ಆಸ್ಪತ್ರೆಗಳು ಸೇರಿದಂತೆ ಒಟ್ಟು 250 ಖಾಸಗಿ ಆಸ್ಪತ್ರೆಗಳೊಂದಿಗೆ ಸರ್ಕಾರ ಒಡಬಂಡಿಕೆ ಮಾಡಿಕೊಂಡಿರುವುದು ಮೆಚ್ಚುಗೆಯ ಸಂಗತಿ.

ಈ ಸೌಲಭ್ಯವನ್ನು ನಮಗೂ ವಿಸ್ತರಿಸುವಂತೆ ನಮ್ಮ ರಾಜ್ಯ ಸರ್ಕಾರಿ ನೌಕರರು ಬಹು ದಿನಗಳಿಂದ ರಾಜ್ಯ ಸರ್ಕಾರವನ್ನು ಒತ್ತಾಯಿಸುತ್ತಾ ಬಂದಿದ್ದಾರೆ. ರಾಜ್ಯಾದ್ಯಂತ ಸುಮಾರು ಆರು ಲಕ್ಷದಷ್ಟು ಇರುವ ನಮ್ಮ ಸರ್ಕಾರಿ ನೌಕರರು ಮತ್ತು ಕುಟುಂಬದವರನ್ನು ಯಾವುದೇ ಕಾರಣಕ್ಕೂ ಸರ್ಕಾರ ನಿರ್ಲಕ್ಷ್ಯದಿಂದ ಕಾಣಬಾರದು. ಚಿಕಿತ್ಸೆ ನೀಡುವಲ್ಲಿ ಉದಾಸೀನ ತೋರಬಾರದು. ನೌಕರರು ಹಾಗೂ ಅವರ ಕುಟುಂಬ ಆರೋಗ್ಯವಾಗಿ ಇದ್ದಷ್ಟು ಸರ್ಕಾರಕ್ಕೆ ಆಡಳಿತ ಯಂತ್ರದ ಸುಗಮ ನಿರ್ವಹಣೆಯ ದೃಷ್ಟಿಯಿಂದ ಸಾಕಷ್ಟು ಲಾಭವಿದೆ. ಹೀಗಾಗಿ ಸರ್ಕಾರ ನಗದುರಹಿತ ವೈದ್ಯಕೀಯ ಚಿಕಿತ್ಸೆಯನ್ನು ಶೀಘ್ರವಾಗಿ ರಾಜ್ಯ ಸರ್ಕಾರಿ ನೌಕರರು ಹಾಗೂ ಕುಟುಂಬಗಳಿಗೆ ವಿಸ್ತರಿಸಿ ನೌಕರರ ಹಿತ ಕಾಪಾಡುವ ಪ್ರಯತ್ನವನ್ನು ಶೀಘ್ರವಾಗಿ ಮಾಡಲಿ.

–ಹರಳಹಳ್ಳಿ ಪುಟ್ಟರಾಜು, ಪಾಂಡವಪುರ.

ಖೋ ಖೋ ವಿಶ್ವಕಪ್‌ಗೆ ಮೈಸೂರು ಗ್ರಾಮೀಣ ಪ್ರತಿಭೆ ಚೈತ್ರ ಆಯ್ಕೆ



ವೆಂಕಟ್‌ನಾಗ್ ಸೋಬರ್ಸ್

ಮೈಸೂರು ಜಿಲ್ಲೆಯ ಗ್ರಾಮೀಣ ಪ್ರದೇಶದ ರೈತ ಕುಟುಂಬದ ಪ್ರತಿಭೆ ವಿಶ್ವ ಮಟ್ಟದ ಸಾಧನೆ ಮಾಡಿದೆ. ಗ್ರಾಮೀಣ ಪ್ರದೇಶದಲ್ಲೇ ಪ್ರಾಥಮಿಕ ಶಿಕ್ಷಣ ಪೂರೈಸಿದ್ದ ಈ ಸಾಹಸಿ, ಇದೀಗ ಜ.13ರಿಂದ 19ರವರೆಗೆ ನವದೆಹಲಿಯಲ್ಲಿ ನಡೆಯಲಿರುವ ವಿಶ್ವಕಪ್ ಮಹಿಳಾ ಖೋಖೋ ಪಂದ್ಯಾವಳಿಯಲ್ಲಿ ಭಾರತ ತಂಡವನ್ನು ಪ್ರತಿನಿಧಿಸುತ್ತಿದ್ದಾರೆ.



ಮೈಸೂರು ಜಿಲ್ಲೆ ತಿ.ನರಸೀಪುರ ತಾಲೂಕು ಕುರುಬೂರು ಗ್ರಾಮದ ರೈತ ದಂಪತಿ ಬಸವಣ್ಣ ಮತ್ತು ನಾಗರತ್ನ ಅವರ ಹೆಮ್ಮೆಯ ಪುತ್ರಿ ಬಿ.ಚೈತ್ರ, ಈ ಸಾಧನೆ ಮಾಡಿರುವ ಮೈಸೂರಿನ ಹೆಮ್ಮೆಯ ಕುವರಿ. ವಿಶ್ವ ಮಹಿಳಾ ಖೋ ಖೋ ಪಂದ್ಯಾವಳಿಯಲ್ಲಿ ಭಾರತ ತಂಡವನ್ನು ಪ್ರತಿನಿಧಿಸಲು ದಕ್ಷಿಣ ಭಾರತದಿಂದ ಆಯ್ಕೆಯಾಗಿರುವ ಏಕೈಕ ಕ್ರೀಡಾಪಟು. ಮಾತ್ರವಲ್ಲದೆ, ಮೈಸೂರಿನಿಂದ ಆಯ್ಕೆಯಾಗಿರುವ ಮೊದಲಿಗಳು ಸಹ.

ಕಳೆದ ಒಂದು ತಿಂಗಳಿಂದ ದೆಹಲಿಯಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಖೋ ಖೋ ಮಹಿಳಾ ಶಿಬಿರದಲ್ಲಿ ಪಾಲ್ಗೊಂಡಿರುವ ಚೈತ್ರ, ಬುಧವಾರ ತನ್ನ ಹುಟ್ಟುಹಬ್ಬ ಆಚರಿಸಿಕೊಂಡಿದ್ದು, ಅದೇ ದಿನ ಆಕೆ ವಿಶ್ವಕಪ್ ಮಹಿಳಾ ಖೋ–ಖೋ ಪಂದ್ಯಾವಳಿಯಲ್ಲಿ ಭಾರತವನ್ನು ಪ್ರತಿನಿಧಿಸಲು ಆಯ್ಕೆಯಾಗಿರುವುದು ಆಕೆಗೆ ಹುಟ್ಟುಹಬ್ಬದ ಉಡುಗೊರೆಯಾಗಿದೆ.

> **"ತಮ್ಮ ಮಗಳಿಗೆ ಪ್ರೋತ್ಸಾಹ ನೀಡಿ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಲು ತರಬೇತಿ ನೀಡಿದ ತರಬೇತುದಾರ ಕೆ. ಮಂಜುನಾಥ್ ಅವರಿಗೆ ಧನ್ಯವಾದಗಳು. ಚೈತ್ರ ಮಗುವಾಗಿದ್ದಾಗ ನಾವು ಆರ್ಥಿಕವಾಗಿ ಸದೃಢವಾಗಿರಲಿಲ್ಲ. ಅವಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕು ಎಂದಿದ್ದೆವು. ಆದರೆ ಚಿಕ್ಕ ವಯಸ್ಸಿನಲ್ಲೇ ಆಕೆಯ ಬುದ್ಧಿವಂತಿಕೆಯನ್ನು ಗುರುತಿಸಿದ ಗ್ರಾಮದ ಕೆಲವರ ಒತ್ತಾಯದಿಂದಾಗಿ ನಮ್ಮದೇ ಗ್ರಾಮದ ವಿದ್ಯಾದರ್ಶಿನಿ ಖಾಸಗಿ ಶಾಲೆಗೆ ಸೇರಿಸಿದೆವು. ಅದುವೇ ತಮ್ಮ ಮಗಳು ಈ ಅದ್ಭುತ ಸಾಧನೆ ಮಾಡಲು ಕಾರಣವಾಯಿತು. ಆಕೆಯ ಸಾಧನೆಯಿಂದಾಗಿ ತುಂಬಾ ಸಂತೋಷವಾಗಿದೆ"** - ತಾಯಿ ನಾಗರತ್ನ

ಬಡ ರೈತ ಕುಟುಂಬದಿಂದ ಬಂದ ಬಿ. ಚೈತ್ರಗೆ ಶುಲ್ಕ ಪಾವತಿಸಿ ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ಶಿಕ್ಷಣ ಕೊಡಿಸಲು ಪೋಷಕರಿಗೆ ಆರ್ಥಿಕ ಶಕ್ತಿ ಇಲ್ಲ. ಆದರೆ ಆಕೆಯ ಬುದ್ಧಿವಂತಿಕೆಯನ್ನು ಗಮನಿಸಿದ್ದ ಕುಟುಂಬದ ಸ್ನೇಹಿತರೊಬ್ಬರ ಒತ್ತಾಯದ ಮೇರೆಗೆ ಪೋಷಕರು ಆಕೆಯನ್ನು ಕುರುಬೂರು ಗ್ರಾಮದ ವಿದ್ಯಾದರ್ಶಿನಿ ಶಾಲೆಗೆ ಸೇರಿಸಿದ್ದರು. ಆಕೆಯ ಅದೃಷ್ಟವೆಂಬಂತೆ ಈ ಶಾಲೆಯ ಗಣಿತ ಶಿಕ್ಷಕ ಕೆ.ಮಂಜುನಾಥ್ ಖೋಖೋ ಕ್ರೀಡೆಯಲ್ಲಿ ಆಸಕ್ತಿವುಳ್ಳವರಾಗಿದ್ದು, ಅಲ್ಲಿನ ವಿದ್ಯಾರ್ಥಿಗಳಿಗೆ ಖೋಖೋ ತರಬೇತಿ ನೀಡುತ್ತಿದ್ದರು. ಕ್ರೀಡೆಯಲ್ಲಿ ಹೆಚ್ಚಿನ ಆಸಕ್ತಿ ಹೊಂದಿದ್ದ ಚೈತ್ರಳ ಬಗ್ಗೆ ಮುತುವರ್ಜಿ ವಹಿಸಿದ್ದ ಅವರು, ಈಗಲೂ ಕೂಡ ಆಕೆಗೆ ತರಬೇತುದಾರರಾಗಿ ಮಾರ್ಗದರ್ಶನ ಮಾಡುತ್ತಿದ್ದಾರೆ.

ಕುರುಬೂರಿನ ವಿದ್ಯಾದರ್ಶಿನಿ ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣದ ನಂತರ ತಿ.ನರಸೀಪುರದ ವಿದ್ಯೋದಯ ಪಿಯು ಕಾಲೇಜಿನಲ್ಲಿ ಪದವಿ ಪೂರ್ವ ಶಿಕ್ಷಣ ಮುಗಿಸಿದ ಚೈತ್ರ, ಅಲ್ಲಿನ ಪಿಎಂಆರ್ ಕಾಲೇಜಿನಲ್ಲಿ ಬಿ.ಎ.ಪದವಿ ಪೂರ್ಣಗೊಳಿಸಿದ್ದು, ಪ್ರಸ್ತುತ ಮಂಡ್ಯ ಜಿಲ್ಲೆ ಪಾಂಡವಪುರದಲ್ಲಿರುವ ಶ್ರೀ ಶಂಭುಲಿಂಗೇಶ್ವರ ಕಾಲೇಜಿನಲ್ಲಿ ಎರಡನೇ ವರ್ಷದ ಬಿಪಿಡಿ (ದೈಹಿಕ ಶಿಕ್ಷಣದಲ್ಲಿ ಪದವಿ) ವ್ಯಾಸಂಗ ಮಾಡುತ್ತಿದ್ದಾರೆ.

ಚೈತ್ರ, ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಖೋಖೋ ಚಾಂಪಿಯನ್‌ಶಿಪ್–2022ರಲ್ಲಿ ಚಿನ್ನದ ಪದಕ ಗೆದ್ದ ಮೈಸೂರು ವಿಶ್ವವಿದ್ಯಾಲಯದ ಮಹಿಳಾ ಖೋ–ಖೋ ತಂಡದ ಸದಸ್ಯರಾಗಿದ್ದರು.

ಇವರು ಖೋಖೋ ಫೆಡರೇಷನ್ ಆಫ್ ಇಂಡಿಯಾ (ಕೆಕೆಎಫ್‌ಐ) ಸ್ಥಾಪಿಸಿದ 'ಅತ್ಯುತ್ತಮ ಸಬ್ ಜೂನಿಯರ್ ಆಟಗಾರ್ತಿ' ಪುರಸ್ಕಾರಕ್ಕೆ 2014ರಲ್ಲಿ ಪಾತ್ರರಾಗಿದ್ದರು. ಸೀನಿಯರ್ ರಾಷ್ಟ್ರೀಯ ಪಂದ್ಯಾವಳಿ, ಖೇಲೋ ಇಂಡಿಯಾ ಚಾಂಪಿಯನ್‌ಶಿಪ್ ಮತ್ತು ಮೈಸೂರು ವಿಶ್ವವಿದ್ಯಾಲಯದಿಂದ (2 ಬಾರಿ) ರಾಜ್ಯವನ್ನು ಪ್ರತಿನಿಧಿಸಿದ್ದಾರೆ. ಅಖಿಲ ಭಾರತ ಅಂತರ ವಿಶ್ವವಿದ್ಯಾನಿಲಯ ಮಹಿಳಾ ಖೋಖೋ ಪಂದ್ಯಾವಳಿಯ ಅರ್ಹತೆ ಪಡೆದ ಮಂಡ್ಯ ವಿಶ್ವವಿದ್ಯಾಲಯದ ಮಹಿಳಾ ಖೋಖೋ ತಂಡದಲ್ಲೂ ಇವರು ಪಾಲ್ಗೊಂಡಿದ್ದು ವಿಶೇಷ.

> **ಇದು ನನ್ನ ಜೀವನದ ಅತೀ ದೊಡ್ಡ ಸಾಧನೆಯಾಗಿದೆ. ವಿಶ್ವಕಪ್ ಖೋಖೋ ಪಂದ್ಯಾವಳಿಯಲ್ಲಿ ಚಿನ್ನದ ಪದಕ ಗೆಲ್ಲುವುದು ನನ್ನ ಕನಸಾಗಿದೆ! ತರಬೇತುದಾರರಾದ ಕೆ.ಮಂಜುನಾಥ್ ಅವರಿಂದಾಗಿ ನಾನು ಈ ಮಟ್ಟಕ್ಕೆ ತಲುಪಲು ಸಾಧ್ಯವಾಯಿತು. ಬಡತನದ ನಡುವೆಯೂ ನನ್ನನ್ನು ಪ್ರೋತ್ಸಾಹಿಸಿ, ನನಗೆ ಆತ್ಮವಿಶ್ವಾಸ ತುಂಬಿದ ನನ್ನ ತಂದೆ–ತಾಯಿ ಮತ್ತು ಖೋಖೋ ಆಟಗಾರರೇ ಆದ ಸಹೋದರ ಬಿ.ಚೇತನ್ ಅವರಿಗೆ ಚಿರಋಣಿಯಾಗಿದ್ದೇನೆ. ಕಳೆದ ಒಂದು ತಿಂಗಳಿಂದ ನವದೆಹಲಿಯಲ್ಲಿ ಬೀಡು ಬಿಟ್ಟಿದ್ದೇನೆ. ನಿನ್ನೆ ವಿಶ್ವಕಪ್‌ನಲ್ಲಿ ಭಾಗವಹಿಸುವ ಭಾರತೀಯ ತಂಡವನ್ನು ಘೋಷಿಸಲಾಯಿತು. ಅದರಲ್ಲಿ ನನ್ನ ಹೆಸರು ಇರುವುದು ತುಂಬಾ ಸಂತೋಷ ತಂದಿದೆ.** -ಚೈತ್ರ

ಗಣಿತ ಶಿಕ್ಷಕರಾದರೂ ಖೋ ಖೋ ಸಾಧನೆಗೆ ಸ್ಫೂರ್ತಿಯಾದವರು...!

ತಿ.ನರಸೀಪುರ ತಾಲೂಕು ಕುರುಬೂರು ಗ್ರಾಮದಲ್ಲಿರುವ ವಿದ್ಯಾದರ್ಶಿನಿ ಶಾಲೆಯ ಗಣಿತ ಶಿಕ್ಷಕ ಕೆ.ಮಂಜುನಾಥ್, ಕೆಲವು ಅತ್ಯುತ್ತಮ ಖೋ–ಖೋ ಆಟಗಾರರನ್ನು ಸಜ್ಜುಗೊಳಿಸಿದ ಹಿರಿಮೆಗೆ ಪಾತ್ರರಾಗಿದ್ದಾರೆ. ಇದೀಗ ವಿಶ್ವ ಕಪ್ ಮಹಿಳಾ ಖೋ ಖೋ ಪಂದ್ಯಾವಳಿಯಲ್ಲಿ ಭಾರತವನ್ನು ಪ್ರತಿನಿಧಿಸುವ ತಂಡಕ್ಕೆ ಆಯ್ಕೆಯಾಗಿರುವ ಚೈತ್ರಳಿಗೆ ತರಬೇತಿ ನೀಡಿದ್ದು ಇವರೇ. ಈಕೆಯ ಜೊತೆಗೆ ಇವರಿಂದ ತರಬೇತಿ ಪಡೆದ ಮೋನಿಕಾ ಮತ್ತು ನಿಸರ್ಗ ಕೂಡ ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ಮಹಿಳಾ ಶಿಬಿರದಲ್ಲಿ ಭಾಗಿಯಾಗಿದ್ದರು. ಆದರೆ ಅವರಲ್ಲಿ ಚೈತ್ರ ಮಾತ್ರ ಭಾರತೀಯ ತಂಡಕ್ಕೆ ಆಯ್ಕೆಯಾಗಿದ್ದಾರೆ.



'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಮಂಜುನಾಥ್, ಸುಮಾರು 15 ವರ್ಷಗಳ ಕಠಿಣ ಪರಿಶ್ರಮ ಅಪೇಕ್ಷಿತ ಫಲಿತಾಂಶವನ್ನು ನೀಡಿದೆ. ತರಬೇತುದಾರರಾದ ನಾವು ನಮ್ಮ ವಿದ್ಯಾರ್ಥಿಗಳು ಅಂತರರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬೇಕೆಂದು ಬಯಸುತ್ತೇವೆ. ಚೈತ್ರ ನಮ್ಮ ದೇಶವನ್ನು ಪ್ರತಿನಿಧಿಸಲು ವಿಶ್ವ ಕಪ್ ಪಂದ್ಯಾವಳಿಗೆ ಆಯ್ಕೆಯಾಗಿರುವುದು ಅತ್ಯಂತ ಖುಷಿ ತಂದಿದೆ. ಈ ಸಂದರ್ಭದಲ್ಲಿ ಆಕೆಗೆ ಉತ್ತಮ ರೀತಿಯ ತರಬೇತಿ ನೀಡಲಾಗುವುದು. ಚೈತ್ರ ಕೂಡ ಉತ್ಸಾಹಭರಿತಳಾಗಿದ್ದು, ವಿಶ್ವ ಕಪ್ ಪಂದ್ಯಾವಳಿಯಲ್ಲೂ ಸಾಧನೆ ಮಾಡುತ್ತಾಳೆ ಎಂಬ ವಿಶ್ವಾಸ ನನಗಿದೆ ಎಂದರು.

ಪತ್ನಿ ಹಂತಕನಿಗೆ ಜೀವಾವಧಿ ಶಿಕ್ಷೆ

ಮೈಸೂರು, ಜ.10(ಎಸ್‌ಪಿಎನ್)– ಕ್ಷುಲ್ಲಕ ವಿಚಾರಕ್ಕೆ ತನ್ನ ಪತ್ನಿಯನ್ನು ಭೀಕರವಾಗಿ ಕೊಲೆ ಮಾಡಿದ್ದವನಿಗೆ ಮೈಸೂರಿನ 3ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಕಠಿಣ ಜೀವಾವಧಿ ಶಿಕ್ಷೆ ಹಾಗೂ ಲಕ್ಷ ರೂ. ದಂಡ ವಿಧಿಸಿ ತೀರ್ಪು ನೀಡಿದೆ. ಈ ದಂಡದ ಮೊತ್ತವನ್ನು ಮೃತಳ ಮಗಳಿಗೆ ಪಾವತಿಸುವಂತೆ ಆದೇಶಿಸಿದೆ.

ಮೈಸೂರು ಹೂಟಗಳ್ಳಿಯ ಕರಿಗೌಡ ಬಡಾವಣೆ ನಿವಾಸಿ ಸುಂದರ್‌ರಾಜ್ ಶಿಕ್ಷೆಗೆ ಗುರಿಯಾದವನಾಗಿದ್ದು, ಈತ ಮೂಲತಃ ಹೆಚ್.ಡಿ.ಕೋಟೆ ತಾಲೂಕಿನ ತುಂಬಸೋಗೆಯ ತೊರವಳ್ಳಿ ಗ್ರಾಮದ ನಿವಾಸಿ. ಈತ ಚಾಮನಹಳ್ಳಿ ಗ್ರಾಮದ ನಾರಾಯಣ ಶೆಟ್ಟಿ ಅವರ ಪುತ್ರಿ ಶಾಂತ ಅಲಿಯಾಸ್ ಶಾಂತಲಾ ಎಂಬಾಕೆಯನ್ನು ವಿವಾಹವಾಗಿದ್ದು, ಅವರಿಬ್ಬರಿಗೆ ಓರ್ವ ಮಗಳಿದ್ದಾಳೆ.

ಈ ಹಿಂದೆ ಇವರಿಬ್ಬರು ಕೆಲಸ ನಿಮಿತ್ತ ಮೈಸೂರಿನ ಬೆಳವಾಡಿಯಲ್ಲಿ ವಾಸವಿದ್ದು, ಆ ಸಮಯದಲ್ಲಿ ಸುಂದರ್‌ರಾಜ್ ಬೇರೊಬ್ಬ ಮಹಿಳೆಯೊಂದಿಗೆ ಸ್ನೇಹ ಬೆಳೆಸಿದ್ದ. ಈ ಸ್ನೇಹವನ್ನೇ ಪತ್ನಿ ಶಾಂತಲಾ, ಅಕ್ರಮ ಸಂಬಂಧ ಎಂದು ಭಾವಿಸಿ, ನಿತ್ಯ ದಂಪತಿ ನಡುವೆ ಜಗಳವಾಗಿತ್ತು. ನಂತರ ಸುಂದರ್‌ರಾಜ್ ಬೆಳವಾಡಿಯಲ್ಲಿನ ಮನೆ ಖಾಲಿ ಮಾಡಿ, ಹೂಟಗಳ್ಳಿಯಲ್ಲಿ ಬಾಡಿಗೆ ಮನೆ ಪಡೆದು ವಾಸವಿದ್ದರು.

ಈ ನಡುವೆ ಸುಂದರ್‌ರಾಜ್, ತನ್ನ ಪತ್ನಿ ಶಾಂತಲಾಳಿಗೆ ತವರು ಮನೆಯಿಂದ 2 ಲಕ್ಷ ತರುವಂತೆ ಒತ್ತಾಯಿಸಿ, ಸುಂದರ್ ರಾಜ್ ನಿತ್ಯ ಜಗಳ ತೆಗೆದಿದ್ದ. 2017ರ ಸೆ.19 ರಂದು ಬೆಳಗಿನ ಜಾವ ಸುಂದರ್ ರಾಜ್ ತನ್ನ ಮಗಳನ್ನು ಪೋಷಕರ ಮನೆಗೆ ಬಿಟ್ಟು ಬಂದು, ಅಂದು ಮಧ್ಯಾಹ್ನ 2.30ರಿಂದ 2.45ಗಂಟೆ ನಡುವಿನ ಸಮಯದಲ್ಲಿ ತನ್ನ ಹೆಂಡತಿ ಶಾಂತಲಾಳೊಂದಿಗೆ ಪುನಃ 2 ಲಕ್ಷ ವಿಚಾರವಾಗಿ ಜಗಳ ತೆಗೆದಿದ್ದಾನೆ.

ದಂಪತಿ ನಡುವೆ ಜಗಳ ವಿಪರೀತಕ್ಕೆ ತಿರುಗಿದ ವೇಳೆ ಶಾಂತಲಾಳನ್ನು ಚಾಕುವಿನಿಂದ ಇರಿದು ಕೊಲೆ ಮಾಡಿದ್ದ. ನಂತರ ಸರಗೂರು ಪೊಲೀಸ್ ಠಾಣೆಯಲ್ಲಿ ಶಾಂತಲಾ ಸಹೋದರ ನೀಡಿದ ದೂರಿನ ಮೇರೆಗೆ ಪ್ರಕರಣ ದಾಖಲಾಗಿ, ನಂತರ ವಿಜಯನಗರ ಠಾಣೆಗೆ ವರ್ಗಾವಣೆಯಾಗಿತ್ತು.

ಈ ಬಗ್ಗೆ ವಿಜಯನಗರ ಠಾಣೆಯ ಅಂದಿನ ಇನ್ಸ್‌ಪೆಕ್ಟರ್ ಪಿ.ಎನ್.ಅನಿಲ್ ಕುಮಾರ್ ತನಿಖೆ ನಡೆಸಿ ನ್ಯಾಯಾಲಯಕ್ಕೆ ದೋಷಾ ರೋಪಣಾ ವರದಿ ಸಲ್ಲಿಸಿದ್ದರು. ನ್ಯಾಯಾಧೀಶರಾದ ಕೆ.ಭಾಗ್ಯ ಅವರು, ಸುಂದರರಾಜ್‌ಗೆ ಶಿಕ್ಷೆ ವಿಧಿಸಿ ತೀರ್ಪು ಪ್ರಕಟಿಸಿದರು. ಸರ್ಕಾರದ ಪರವಾಗಿ ಅಭಿಯೋಜಕರಾದ ಟಿ.ಎಚ್.ಲೋಲಾಕ್ಷಿ ವಾದಿಸಿದ್ದರು.

ಶ್ರೀಗಂಧದ ಮರ ಕದ್ದ ಕಳ್ಳರ ಬಂಧನ

ಮೈಸೂರು, ಜ.10(ಎಸ್‌ಬಿಡಿ)– ಮೈಸೂರಿನ ಕುವೆಂಪುನಗರದಲ್ಲಿ ಶ್ರೀಗಂಧದ ಮರ ಕಳ್ಳತನ ಮಾಡಿದ್ದ ಖದೀಮರು ಪೊಲೀಸರಿಗೆ ಸಿಕ್ಕಿಬಿದ್ದಿದ್ದಾರೆ.


ತಮಿಳುನಾಡು ಕೃಷ್ಣಗಿರಿ ತಾಲೂಕಿನ ಕಿರಣ್(32) ಹಾಗೂ ಮಂಡ್ಯ ಜಿಲ್ಲೆ ಮಳವಳ್ಳಿ ತಾಲೂಕಿನ ಸೂರಿ(27) ಬಂಧಿತರು. 15 ದಿನಗಳ ಹಿಂದೆ ಕುವೆಂಪುನಗರ ಪಂಚಮಂತ್ರ ರಸ್ತೆಯ ಮನೆಯೊಂದರ ಪಕ್ಕದಲ್ಲಿದ್ದ ಶ್ರೀಗಂಧದ ಮರ ಕಳ್ಳತನ ಮಾಡಿದ್ದಾಗಿ ವಿಚಾರಣೆ ವೇಳೆ ತಿಳಿಸಿದ್ದಾರೆ. ಗುರುವಾರ ಮಧ್ಯಾಹ್ನ ದಟ್ಟಗಳ್ಳಿ ರಿಂಗ್‌ರಸ್ತೆಯಲ್ಲಿ ಪಲ್ಸರ್ ಬೈಕ್ ನಿಲ್ಲಿಸಿಕೊಂಡು ನಿಂತಿದ್ದಾಗ ಗಸ್ತಿನಲ್ಲಿದ್ದ ಕುವೆಂಪುನಗರ ಠಾಣೆ ಕ್ರೈಂ ವಿಭಾಗದ ಸಿಬ್ಬಂದಿ ವಿಚಾರಿಸಿದ್ದಾರೆ. ಬೈಕ್‌ನ ದಾಖಲಾತಿ ಕೇಳಿದಾಗ ಸಮರ್ಪಕ ಉತ್ತರ ನೀಡಿಲ್ಲ. ಆಗ ಅನುಮಾನಗೊಂಡು ಅವರ ಬಳಿಯಿದ್ದ ಚೀಲವನ್ನು ಪರಿಶೀಲಿಸಿದಾಗ ಶ್ರೀಗಂಧ ಮರದ ತುಂಡುಗಳು ಹಾಗೂ ಚಿಕ್ಕ ಗರಗಸ ಪತ್ತೆಯಾಗಿದೆ. ಬಳಿಕ ಅವರನ್ನು ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆ ನಡೆಸಿದಾಗ ಶ್ರೀಗಂಧದ ತುಂಡುಗಳನ್ನು ಮಂಡಿಮೊಹಲ್ಲಾದಲ್ಲಿ ಮಾರಾಟ ಮಾಡಲು ಹೋಗುತ್ತಿದ್ದೆವು ಎಂದು ತಿಳಿಸಿದ್ದಾರೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಳ್ಳಲಾಗಿದೆ.

ಮೈಸೂರಿಗೆ ದರ್ಶನ್, ಹೊರ ರಾಜ್ಯಕ್ಕೆ ಪವಿತ್ರಾ ತೆರಳಲು ಕೋರ್ಟ್‌ನಿಂದ ಅನುಮತಿ

ಬೆಂಗಳೂರು, ಜ.10– ಮೈಸೂರಿಗೆ ದರ್ಶನ್ ತೆರಳಲು ಮತ್ತು ಪವಿತ್ರಾ ಗೌಡಗೆ ಹೊರ ರಾಜ್ಯಕ್ಕೆ ಹೋಗಲು ಕೋರ್ಟ್ ಅನುಮತಿ ನೀಡಿದೆ.

57ನೇ ಸಿಸಿಹೆಚ್ ನ್ಯಾಯಾಧೀಶರ ಮುಂದೆ ದರ್ಶನ್ ಪರ ವಕೀಲರು ಮೈಸೂರಿಗೆ ತೆರಳಲು ಅನುಮತಿ ನೀಡಬೇಕೆಂದು ಕೇಳಿದ್ದರು. ಪವಿತ್ರಾ ಗೌಡ ಪರ ವಕೀಲರು ಹೊರ ರಾಜ್ಯಕ್ಕೆ ತೆರಳಲು ಅನುಮತಿ ನೀಡಬೇಕೆಂದು ಮನವಿ ಮಾಡಿದರು.





ಈ ಎರಡು ಅರ್ಜಿಗಳನ್ನು ಕೋರ್ಟ್ ಮಾನ್ಯ ಮಾಡಿದೆ. ದರ್ಶನ್‌ಗೆ ಜ.12ರಿಂದ 17ರವರೆಗೆ ಮೈಸೂರಿನಲ್ಲಿ ತಂಗಲು ಅನುಮತಿ ನೀಡಿದೆ. ಹೀಗಾಗಿ ಈ ಬಾರಿ ಸಂಕ್ರಾಂತಿಯನ್ನು ಮೈಸೂರಿನಲ್ಲಿ ದರ್ಶನ್ ಆಚರಿಸಲಿದ್ದಾರೆ.

ಕೋರ್ಟ್ ಮುಂಬೈ ಮತ್ತು ದೆಹಲಿಗೆ ತೆರಳಲು ಪವಿತ್ರಾ ಗೌಡಗೆ ಅನುಮತಿ ನೀಡಿದೆ. ದೇವಸ್ಥಾನ ಮತ್ತು ವ್ಯವಹಾರ ಸಂಬಂಧ ಒಂದು ತಿಂಗಳ ಕಾಲ ಹೊರ ರಾಜ್ಯಕ್ಕೆ ತೆರಳಲು ಅನುಮತಿ ಕೇಳಿದ್ದರು. ಆರ್ ಆರ್ ನಗರದಲ್ಲಿ ಇರುವ ರೆಡ್ ಕಾರ್ಪೆಟ್ ಶೋ ರೂಂಗೆ ಸಂಬಂಧಿಸಿದಂತೆ ವಸ್ತುಗಳನ್ನು ತರಲು ಅವಕಾಶ ನೀಡುವಂತೆ ಪವಿತ್ರಾ ಗೌಡ ಅರ್ಜಿಯಲ್ಲಿ ಮನವಿ ಮಾಡಿದ್ದರು.

ದರ್ಶನ್, ಪವಿತ್ರಾ ಗೌಡ ಸೇರಿದಂತೆ 7 ಮಂದಿಗೆ ಹೈಕೋರ್ಟ್ ಡಿ.13ರಂದು ಜಾಮೀನು ಮಂಜೂರು ಮಾಡಿತ್ತು. ಆದೇಶದಲ್ಲಿ ಏಳು ಆರೋಪಿಗಳಿಗೆ, ಕೋರ್ಟ್ ಅನುಮತಿ ಇಲ್ಲದೇ ಬೆಂಗಳೂರು ಬಿಟ್ಟು ಹೋಗುವಂತಿಲ್ಲ. ಪ್ರತಿ ತಿಂಗಳು ಎಲ್ಲಾ ಆರೋಪಿಗಳು ಕೋರ್ಟ್‌ಗೆ ಹಾಜರಾಗಬೇಕು ಎಂದು ಷರತ್ತು ವಿಧಿಸಿತ್ತು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ

ಶನಿವಾರ 11 ಜನವರಿ 2025

ಅಂಬೇಡ್ಕರ್ ವಿಚಾರಧಾರೆಗಳ ಬ್ರಾಹ್ಮಣೀಕರಣ ಮಾಡುವುದೇ ಆರ್‌ಎಸ್‌ಎಸ್ ಜಾಯಮಾನ

ಅಂಬೇಡ್ಕರ್ ಮರಿ ಮೊಮ್ಮಗ ರಾಜರತ್ನ ಅಂಬೇಡ್ಕರ್ ಆರೋಪ



ಡಾ.ಬಿ.ಆರ್.ಅಂಬೇಡ್ಕರ್ ಮರಿಮೊಮ್ಮಗ ರಾಜರತ್ನ ಅಂಬೇಡ್ಕರ್ ಅವರನ್ನು ಅಭಿನಂದಿಸಲಾಯಿತು.

"ಮಹಾ ಪುರುಷ (ಡಾ.ಬಿ.ಆರ್. ಅಂಬೇಡ್ಕರ್)ರಿಗೆ ಯಾರು ವಾರಸುದಾರರಿರುವುದಿಲ್ಲ. ನಾನು ಅವರ ವಂಶಸ್ಥನಾಗಿದ್ದರೂ ಅವರ ವಾರಸುದಾರ ಆಗುವುದಿಲ್ಲ. ಬದಲಾಗಿ, ಅವರ ವಿಚಾರ ಧಾರೆಗಳನ್ನು ಅನುಸರಿಸುವ ಅನುಯಾಯಿ ಅಷ್ಟೇ. ಕೆಎಸ್‌ಎಸ್‌ಡಿ ರಾಜ್ಯಾಧ್ಯಕ್ಷ ಬಿ.ಚನ್ನಕೃಷ್ಣಪ್ಪನವರು ತಮ್ಮ ಭಾಷಣದಲ್ಲಿ ನಾವು ಅಂಬೇಡ್ಕರ್ ವಾರಸುದಾರರು ಎಂದು ಹಲವು ಬಾರಿ ಉಲ್ಲೇಖಿಸಿದ್ದಕ್ಕೆ ಈ ಸ್ಪಷ್ಟೀಕರಣ ನೀಡುತ್ತಿದ್ದೇನೆ.

–ರಾಜರತ್ನ ಅಂಬೇಡ್ಕರ್, ಅಂಬೇಡ್ಕರ್ ಅವರ ಮರಿಮೊಮ್ಮಗ

ಮೈಸೂರು, ಜ.10(ಎಸ್‌ಪಿಎನ್)– ರಾಷ್ಟ್ರೀಯ ಸ್ವಯಂ ಸೇವಕ ಸಂಘ (ಆರ್‌ಎಸ್‌ಎಸ್), ಡಾ.ಬಿ.ಆರ್. ಅಂಬೇಡ್ಕರ್ ಅವರ ವಿಚಾರಗಳ ಬ್ರಾಹ್ಮಣೀಕರಣ ಮಾಡಿ, ನಂತರ ತಮ್ಮದೆಂದು ಹೇಳಿಕೊಳ್ಳುವ ಜಾಯಮಾನ ಹೊಂದಿದೆ ಎಂದು ಡಾ.ಬಿ.ಆರ್.ಅಂಬೇಡ್ಕರ್ ಮರಿಮೊಮ್ಮಗ ರಾಜರತ್ನ ಅಂಬೇಡ್ಕರ್ ಆರೋಪಿಸಿದರು. ಮೈಸೂರು ಕೆಎಸ್‌ಓಯು ಆವರಣದ ಘಟಿಕೋತ್ಸವ ಭವನದಲ್ಲಿ ಕರ್ನಾಟಕ ಸಮತಾ ಸೈನಿಕ ದಳ ಜಿಲ್ಲಾ ಘಟಕದ ವತಿಯಿಂದ ಏರ್ಪಡಿಸಿದ್ದ ಕೆಎಸ್‌ಎಸ್‌ಡಿ ಶತಮಾನೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದರು.

ಆರ್‌ಎಸ್‌ಎಸ್ ಸ್ಥಾಪನೆಯಾಗುವ ಮೊದಲೇ ಸಮತ ಸೈನಿಕ ದಳವನ್ನು ಡಾ.ಬಿ.ಆರ್.ಅಂಬೇಡ್ಕರ್ ಅವರು 1924ರ ಸೆ.24 ರಂದು ಸ್ಥಾಪನೆ ಮಾಡಿದರು. ಆರ್‌ಎಸ್‌ಎಸ್ ಕಾರ್ಯವೈಖರಿಯಲ್ಲೇ ಸಮತ ಸೈನಿಕ ದಳ ಕಾರ್ಯ ನಿರ್ವಹಿಸುತ್ತಿದೆ. ಸಮತ ಸೈನಿಕ ದಳ ಹೆಚ್ಚು ಪ್ರಚಲಿತಕ್ಕೆ ಬರಲಿಲ್ಲ. ಆರ್‌ಎಸ್‌ಎಸ್ ಇಂದು ಬೃಹತ್ ಸಂಘಟನೆಯಾಗಿ ಬೆಳೆದು ಅಧಿಕಾರ ಹಿಡಿದಿದೆ ಎಂದರು.

ಸಂವಿಧಾನದ ಮೂಲಕ ಭಾರತದ ಸಮಗ್ರತೆ, ಐಕ್ಯತೆ, ಸಮಾನತೆ, ಭಾವೈಕ್ಯತೆ ಹಾಗೂ ಜಾತಿ ವಿನಾಶಕ್ಕೆ ಶ್ರಮಿಸಿದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ವಂಶಸ್ಥನಾಗಿದ್ದರೂ ನನಗೂ ಉಪಜಾತಿ ಜಾಡ್ಯ ಬಿಟ್ಟಿಲ್ಲ. ಬೇರೆ ಬೇರೆ ಸಂದರ್ಭದಲ್ಲಿ ನಿಮ್ಮ ಉಪಜಾತಿ ಯಾವುದು ಎಂದು ಕೇಳುವ ಸಂದರ್ಭ ವಿವರಿಸಿದರಲ್ಲದೆ, ಈ ದೇಶಕ್ಕೆ ಸ್ವಾತಂತ್ರ್ಯ ಬಂದಾಗ ಜಾತಿ ವಿನಾಶವಾಗಲಿ ಎಂದು ಅಂಬೇಡ್ಕರ್ ಬಯಸಿದ್ದರು. ಆದರೆ, ಜಾತಿ ವಿನಾಶ ಆಗಲೇ ಇಲ್ಲ ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನದ ಮೂಲಕ ದಮನಿತರಿಗೆ ದನಿ ನೀಡಿದರು. ಆದರೆ, ಅದರ ಅನುಷ್ಠಾನದ ಜಾಗದಲ್ಲಿ ನಾವಿಲ್ಲ. ಸಂವಿಧಾನ ಅಳವಡಿಸಿ, ಇಷ್ಟು ವರ್ಷಗಳಾದರೂ ದಮನಿತರು ಈ ದೇಶದ ಚುಕ್ಕಾಣಿ ಹಿಡಿಯಲು ಸಾಧ್ಯವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರಲ್ಲದೆ, ಬುದ್ಧನ ಆದರ್ಶ, ತತ್ವವನ್ನು ಅಳವಡಿಸಿಕೊಳ್ಳದಿದ್ದರೆ, ದಲಿತರ ಉದ್ಧಾರ ಸಾಧ್ಯವಿಲ್ಲ. ಆದರೆ, ದಲಿತರಿಗೆ ಬೌದ್ಧಧರ್ಮ ಸ್ವೀಕರಿಸುವಂತೆ ಅಂಬೇಡ್ಕರ್ ಕರೆ ನೀಡಿದ್ದರು. ಆದರೂ ನಮ್ಮ ಜನ ಪಾಲಿಸುತ್ತಿಲ್ಲ. ವಿವಿಧ ಸಂಘಟನೆಗಳು ಒಂದು ವರ್ಷಕ್ಕೆ ಅಂಬೇಡ್ಕರ್ ದಿನಾಚರಣೆಗೆ ಅಂದಾಜು 21 ಸಾವಿರ ಕೋಟಿ ವೆಚ್ಚವಾಗುತ್ತಿದೆ ಎಂಬ ಸಮೀಕ್ಷೆ ಇದೆ. ಆದರೂ ಅಧಿಕಾರ ಹಂಚಿಕೆಯಲ್ಲಿ ದಲಿತರಿಗೆ ನ್ಯಾಯ ದೊರಕಿಲ್ಲ ಎಂದು ಬೇಸರ ಹೊರಹಾಕಿದರು.

ಮಾಜಿ ಮೇಯರ್ ಪುರುಷೋತ್ತಮ್ ಮಾತನಾಡಿ, ಸ್ವತಂತ್ರ ಬಂದು 77 ವರ್ಷಗಳ ಕಳೆದರೂ ದಲಿತರು ಬಡತನದಿಂದ ಮುಕ್ತವಾಗಿಲ್ಲ. ಅಲ್ಲದೆ, ಡಾ.ಬಿ.ಆರ್.ಅಂಬೇಡ್ಕರ್ ಅವರ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತಾ ಶಾ ಹೇಳಿಕೆಯನ್ನು ದಲಿತ ಸಮಾಜ ಗಂಭೀರವಾಗಿ ಪರಿಗಣಿಸಿದೆ. ಇಷ್ಟು ಹೋರಾಟ ಮಾಡಿದರೂ ಕೇಂದ್ರ ಗೃಹ ಸಚಿವರು ಅಂಬೇಡ್ಕರ್ ಕುರಿತು ತಾವು ಆಡಿದ ಮಾತಿಗೆ ಕ್ಷಮೆ ಕೇಳಿಲ್ಲ. ಅವರು ಕ್ಷಮೆ ಕೇಳುವವರೆಗೂ ಹೋರಾಟ ನಿಲ್ಲುವುದಿಲ್ಲ. ಮುಂದೆ ದೆಹಲಿ ಚಲೋ ಮಾಡಲು ತಯಾರಿ ನಡೆಯುತ್ತಿದೆ ಎಂದರಲ್ಲದೆ, ಇನ್ಮುಂದೆ ಅಂಬೇಡ್ಕರ್ ಕುರಿತು ಯಾರಾದರೂ ಅವಹೇಳನಾ ಕಾರಿ ಹೇಳಿಕೆ ನೀಡಿದರೆ, ನಾವು 'ದೇಶದ ವಿಭಜನೆ' ಅಡಿಪಾಯ ಹಾಕಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕೆಎಸ್‌ಎಸ್‌ಡಿ ರಾಜ್ಯಾಧ್ಯಕ್ಷ ಬಿ.ಚನ್ನಕೃಷ್ಣಪ್ಪ ಮಾತನಾಡಿ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು, ಸಂವಿಧಾನವನ್ನು ಅನುಸೂಚಿತ ಜಾತಿಯವರಿಗೆ ಮಾತ್ರ ರಚಿಸಿಲ್ಲ. ಸಮಗ್ರ ದೇಶವನ್ನು ಗಮನದಲ್ಲಿಟ್ಟುಕೊಂಡು ಸಂವಿಧಾನ ರಚಿಸಿದ್ದಾರೆ. ಆದರೆ, ಸಂವಿಧಾನದ ಮೂಲಕ ಬದುಕು ಕಟ್ಟಿಕೊಂಡಿರುವ ಇತರೆ ಸಮುದಾಯದವರು, ಅಂಬೇಡ್ಕರ್ ವಿರುದ್ಧ ಹೇಳಿಕೆ ನೀಡಿದಾಗ ಒಬ್ಬರು ಧ್ವನಿಯೆತ್ತುವುದಿಲ್ಲ ಎಂದು ಬೇಸರ ಹೊರಹಾಕಿದರು.

ವೇದಿಕೆಯಲ್ಲಿ ಬೌದ್ಧಗುರು ಶ್ರೀ ಕಲ್ಯಾಣಸಿರಿ ಭಂತೇಜಿ, ರಂಗಾಯಣ ಮಾಜಿ ನಿರ್ದೇಶಕ ಜನಾರ್ಧನ್(ಜನ್ನಿ), ಕೆಎಸ್‌ಎಸ್‌ಡಿ ಮಹಿಳಾ ವಿಭಾಗದ ಅಧ್ಯಕ್ಷೆ ಕಮಲಮ್ಮ, ಬಹುಜನ ದಲಿತ ಸಂಘರ್ಷ ಸಮಿತಿ ಅಧ್ಯಕ್ಷ ಆರ್.ಎಂಎನ್ ರಮೇಶ್, ಮುಖಂಡರಾದ ಲಕ್ಷ್ಮಣ್ ಬಕ್ಕಾಯಿ, ಆಡುಗೋಡಿ ಕುಮಾರ್, ನಾರಾಯಣಪ್ಪ, ವರದರಾಜು, ಚಂದ್ರಪ್ಪ, ಮುರುಗೇಶ್, ಸಂಜೀವ್ ಟಿ.ಮಾಲೆ, ಕೆ.ಪೃಥ್ವಿರಾಜ್, ಜೆ.ಶಂಕರ್, ರವೀಂದ್ರ ಕುಮಾರ್, ಮೈಲಾಂಡಹಳ್ಳಿ ನಾರಾಯಣ ಸ್ವಾಮಿ, ಗಣೇಶ್ ಸಿಂಗನ್ನವರ್, ಬಸವರಾಜ್ ತಳವಾರ್, ರಾಮಚಂದ್ರಪ್ಪ ಮೇಲಿನಮನಿ, ಗೋವಿಂದರಾಜು, ಪರುಶುರಾಮ್ ಅರೋಲಿ ಸೇರಿದಂತೆ ಇತರರಿದ್ದರು.

ಮೈಸೂರಲ್ಲಿ ಡಾ.ಅಂಬೇಡ್ಕರ್ ಚಿತಾಭಸ್ಮಕ್ಕೆ ಗೌರವ ಸಲ್ಲಿಕೆ

ಮೆರವಣಿಗೆ ಮೂಲಕ ಸಾಗಿದ ಸಮತಾ ಸೈನಿಕರು, ಸಾರ್ವಜನಿಕರು

ಮೈಸೂರು,ಜ.10(ಎಂಟಿವೈ)– ಸಮತಾ ಸೈನಿಕ ದಳದ ಶತಮಾನೋತ್ಸವದ ಹಿನ್ನೆಲೆಯಲ್ಲಿ ಮೈಸೂರಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಚಿತಾ ಭಸ್ಮವನ್ನು ಮೆರವಣಿಗೆಯಲ್ಲಿ ಕೊಂಡೊಯ್ಯಲಾಯಿತು.

ಮೈಸೂರಿನ ಪುರಭವನದ ಆವರಣದಿಂದ ಸಾರೋಟ್‌ನಲ್ಲಿ ಅಂಬೇಡ್ಕರ್ ಅವರ ಚಿತಾಭಸ್ಮವನ್ನು ಅವರ ಮರಿಮೊಮ್ಮಗ ರಾಜರತ್ನ ಅಂಬೇಡ್ಕರ್ ಅವರು ಮೆರವಣಿಗೆಯಲ್ಲಿ ಕೊಂಡೊಯ್ದರು. ಪುರಭವನದ ಆವರಣದಿಂದ ಆರಂಭವಾದ ಮೆರವಣಿಗೆ ಹಾರ್ಡಿಂಜ್ ವೃತ್ತ, ಬಸವಣ್ಣ ಪ್ರತಿಮೆ ವೃತ್ತ, ಚಾಮರಾಜ ಜೋಡಿ ರಸ್ತೆ, ರಾಮಸ್ವಾಮಿ ವೃತ್ತ, ಸರಸ್ವತಿಪುರಂನ ಅಗ್ನಿಶಾಮಕ ದಳ, ಮೈಸೂರು ವಿಶ್ವವಿದ್ಯಾನಿಲಯದ ಆವರಣದ ಮೂಲಕ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣ ತಲುಪಿತು.




ಡಾ.ಬಿ.ಆರ್.ಅಂಬೇಡ್ಕರ್ ಅವರ ಚಿತಾ ಭಸ್ಮವನ್ನು ಮೆರವಣಿಗೆಯಲ್ಲಿ ಕೊಂಡೊಯ್ಯಲಾಯಿತು.

ಮೆರವಣಿಗೆಯಲ್ಲಿ ನಗಾರಿ, ಚಂಡೆ ಮದ್ದಳೆ ಸೇರಿದಂತೆ ವಿವಿಧ ಜಾನಪದ ಕಲಾತಂಡಗಳು ಪಾಲ್ಗೊಂಡವು. ಮೆರವಣಿಗೆಯುದ್ದಕ್ಕೂ ಸಮತಾ ಸೈನಿಕ ದಳದ ಕಾರ್ಯಕರ್ತರು, ಅಂಬೇಡ್ಕರ್ ಅಭಿಮಾನಿಗಳು ಸಾಗಿದರು. ಅಲ್ಲದೆ, ಮೆರವಣಿಯಲ್ಲಿ ಪಾಲ್ಗೊಂಡಿದ್ದವರೆಲ್ಲೂ ನೀಲಿ ಧ್ವಜ ಹಿಡಿದಿದ್ದರು. ನೀಲಿ ಸೀರೆ ಧರಿಸಿದ್ದ ಮಹಿಳೆಯರು, ನೀಲಿ ಶಾಲುಗಳನ್ನು ಹಾಕಿಕೊಂಡು ಹೆಜ್ಜೆ ಹಾಕಿದ ಪುರುಷರು ಮೆರವಣಿಗೆಗೆ ಮೆರಗು ತಂದರು. ಒಂದು ಸಾರೋಟದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಮರಿಮೊಮ್ಮಗ ರಾಜರತ್ನ ಅಂಬೇಡ್ಕರ್ ಇನ್ನೊಂದು ಸಾರೋಟದಲ್ಲಿ ಭಂತೇಜಿ ಅವರೊಂದಿಗೆ ಚಿತಾಭಸ್ಮ ಮೆರವಣಿಗೆಯಲ್ಲಿ ಸಾಗಿತು. ಮೊದಲ ಬಾರಿಗೆ ಮೈಸೂರಿಗೆ ಬಂದ ಅಂಬೇಡ್ಕರ್‌ರ ಚಿತಾಭಸ್ಮಕ್ಕೆ ನೂರಾರು ಮಂದಿ ನಮಿಸಿದರು.

ಮೆರವಣಿಗೆಯಲ್ಲಿ ಮಾಜಿ ಮೇಯರ್ ಪುರುಷೋತ್ತಮ್, ಸೈನಿಕರ ದಳದ ಜಿಲ್ಲಾಧ್ಯಕ್ಷ ಗೋವಿಂದರಾಜು, ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಸಾಲಿಗ್ರಾಮ ಎಸ್.ಆರ್.ಭಾಗ್ಯ, ಜಿಲ್ಲಾ ಕಾರ್ಯದರ್ಶಿ ಮಾರ್ಬಳ್ಳಿ ಸಿ.ಮರಿಸ್ವಾಮಿ, ಕಾರ್ಯಾಧ್ಯಕ್ಷ ಶಿವಪುರ ಆರ್.ಮಂಜುನಾಥ್, ಜಿಲ್ಲಾ ಸಹ ಕಾರ್ಯದರ್ಶಿ ಮುರುಡಗಳ್ಳಿ ಎಂ.ಮಹೇಶ್, ಖಜಾಂಚಿ ಈ.ಈರಭದ್ರ ಹಾಗೂ ಇನ್ನಿತರರು ಉಪಸ್ಥಿತರಿದ್ದರು.


ಕುಂದು ಕೊರತೆ ಸಂಬಂಧ ಸಂಸದ ಯದುವೀರ್ ಅವರಿಗೆ ಮನವಿ



ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಚಾಮುಂಡೇಶ್ವರಿ ಕ್ಷೇತ್ರದ ಕೂರ್ಗಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಜನರ ಕುಂದು ಕೊರತೆ ವಿಚಾರಿಸಿದರು. ಚಾಮುಂಡೇಶ್ವರಿ ಕ್ಷೇತ್ರದ ಉಪಾಧ್ಯಕ್ಷ ರೇವಣ್ಣ ಪ್ರೌಢಶಾಲೆಯ ಕಾಂಪೌಂಡ್ ನಿರ್ಮಾಣ, ಗ್ರಾಮಕ್ಕೆ ಕ್ರೀಡಾಂಗಣ ಪಾರ್ಕ್, ಒಳಚರಂಡಿ ಅಭಿವೃದ್ಧಿ ಹಾಗೂ ಪ್ರಾಥಮಿಕ ಚಿಕಿತ್ಸಾ ಕೇಂದ್ರವನ್ನು ಕಲ್ಪಿಸಿಕೊಡಬೇಕೆಂದು ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಕವೀಶ್‌ಗೌಡ, ನಗರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಿ.ಎಂ.ರಘು, ಮಂಡಲ ಅಧ್ಯಕ್ಷ ಪೈ.ಟಿ.ರವಿ ಲಕ್ಷ್ಮೀಪುರ, ಹಿರಿಯರಾದ ಎಸ್.ಅರ್. ಗೋಪಾಲರಾವ್, ಗ್ರಾಮದ ಮುಖಂಡರಾದ ನಂಜುಂಡೇಗೌಡ, ವಾಸು, ದೇವೇಗೌಡ, ದೊಡ್ಡಟ್ಟಿ ನಾಗರಾಜ್, ರವಿ, ದೊಡ್ಡಟ್ಟಿ ಕೃಷ್ಣಪ್ಪ, ರಾಮಣ್ಣ, ಜಿಮ್ ಪ್ರಕಾಶ್, ಮಂಜುಳಾ, ಲೋಕೇಶ್, ಬೂತ್ ಅಧ್ಯಕ್ಷರಾದ ಅಜಯ್, ಬೈರೇಶ್, ಸೌಮ್ಯ ರವಿ, ಕೃಷ್ಣ, ವಸಂತ್ ಕುಮಾರ್, ಕಾರ್ಯಕರ್ತರು ಉಪಸ್ಥಿತರಿದ್ದರು.

ಬೃಹತ್ ಮೈಸೂರು ಮಹಾನಗರ ಪಾಲಿಕೆಗೆ ಮುಖ್ಯಮಂತ್ರಿಗಳಲ್ಲಿ ಶಾಸಕ ಜಿಟಿಡಿ ಮನವಿ

ದಿನೇ ದಿನೆ ಬೆಳವಣಿಗೆಯಾಗುತ್ತಿರುವ ಮೈಸೂರು ನಗರದ ಸರ್ವಾಂಗೀಣ ಪ್ರಗತಿಗೆ 'ಬೃಹತ್' ಪಾಲಿಕೆ ಅನಿವಾರ್ಯ ಮನವರಿಕೆ



ಜಿ.ಟಿ.ದೇವೇಗೌಡ

ಬೆಂಗಳೂರು, ಜ.10– ಮೈಸೂರು ನಗರ ವರ್ಷದಿಂದ ವರ್ಷಕ್ಕೆ ವಿಸ್ತಾರವಾಗುತ್ತಿರುವ ಹಿನ್ನೆಲೆಯಲ್ಲಿ ಮಹಾನಗರ ಪಾಲಿಕೆಯನ್ನು ಬೃಹತ್ ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ ವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಲ್ಲಿ ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡ ಮನವಿ ಮಾಡಿದರು.

ಬೆಂಗಳೂರಿನಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಮೈಸೂರು ಜಿಲ್ಲೆಯ ಸಮಗ್ರ ಅಭಿವೃದ್ಧಿ ಸಂಬಂಧ ಸಭೆಯಲ್ಲಿ ಮಾತನಾಡಿದ ಜಿಟಿಡಿ, ಮೈಸೂರು ಮಹಾನಗರ ಪಾಲಿಕೆಯನ್ನು ಬೃಹತ್ ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವ ಅನಿವಾರ್ಯತೆ ಬಗ್ಗೆ ವಿವರಣೆ ನೀಡಿ, ಮನದಟ್ಟು ಮಾಡಿದರು.

ಕಳೆದ 30 ವರ್ಷಗಳಿಂದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಾಣಗೊಂಡಿರುವ ಹಾಗೂ ಪ್ರಾಧಿಕಾರದ ಅನುಮೋದನೆಯೊಂದಿಗೆ ನಿರ್ಮಾಣವಾಗಿರುವ ಖಾಸಗಿ ಬಡಾವಣೆಗಳನ್ನು ಒಮ್ಮೆಲೆ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರ ಮಾಡಲಾಗುತ್ತಿದೆ. ಆದರೆ ಮೂಲ ಸೌಕರ್ಯಗಳಿಲ್ಲದೆ ಆ ಬಡಾವಣೆಗಳ ನಿವಾಸಿಗಳು ಪರದಾಡುತ್ತಿದ್ದಾರೆ. ಬಡಾವಣೆಗಳನ್ನು ಅಭಿವೃದ್ಧಿಪಡಿಸಲು ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರ ಅನುದಾನ ನೀಡಬೇಕು ಎಂದು ಮನವಿ ಮಾಡಿದರು.

ಮೈಸೂರು ನಗರದ ಒಳಚರಂಡಿ ನೀರು, ಮಳೆ ನೀರು ಚರಂಡಿ ಮೂಲಕ ಕೆರೆ, ನದಿಗಳನ್ನು ಸೇರುತ್ತಿದೆ. ಆದ್ದರಿಂದ ಮೈಸೂರು ನಗರಕ್ಕೆ ಹೊಸದಾಗಿ ಒಳಚರಂಡಿ ವ್ಯವಸ್ಥೆ ಹಾಗೂ ಎಸ್‌ಬಿಆರ್ ತಂತ್ರಜ್ಞಾನವುಳ್ಳ ಮಲಿನ ನೀರು ಸಂಸ್ಕರಣಾ ಘಟಕವನ್ನು ಸ್ಥಾಪಿಸಲು 600 ಕೋಟಿ ರೂ. ಅನುದಾನದ ಅವಶ್ಯಕತೆ ಇದೆ. ವಿಜಯನಗರ 4ನೇ ಹಂತದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನ ವಿದ್ಯಾರ್ಥಿನಿಯರಿಗೆ ಹಾಸ್ಟೆಲ್ ನಿರ್ಮಾಣಕ್ಕೆ 50 ಕೋಟಿ ಅನುದಾನ, ಡಿ.ದೇವರಾಜು ಅರಸು ನಾಲೆಯ ಕೊನೆ ಭಾಗದ ರೈತರಿಗೆ ನೀರು ತಲುಪಿಸುವ ಕಾರ್ಯಕ್ಕೆ 141 ಕೋಟಿ ರೂ. ಅನುದಾನ ಕಲ್ಪಿಸುವಂತೆ ಕೋರಿದರು.

ಮೈಸೂರು ತಾಲೂಕಿನಲ್ಲಿ ಸ್ಮಶಾನಗಳು, ಕೆರೆಗಳು, ನಾಲೆಗಳ ಒತ್ತುವರಿ ತೆರವುಗೊಳಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಬೇಕು. ಮೈಸೂರು ನಗರದ ಪೊಲೀಸ್ ಸರಹದ್ದನ್ನು ತಾಲೂಕಿಗೂ ವಿಸ್ತರಿಸಬೇಕು. ಮೈಸೂರಿನ ಪ್ರವಾಸೋದ್ಯಮದ ದೃಷ್ಟಿಯಿಂದ ಮೈಸೂರು ವಿಮಾನ ನಿಲ್ದಾಣಕ್ಕೆ ಅವಶ್ಯವಾಗಿರುವ ಮೂಲ ಸೌಕರ್ಯ ಒದಗಿಸಬೇಕು. ಹುಯಿಲಾಳು ಗ್ರಾಮದ ಬಳಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣ, ಶ್ರೀರಾಂಪುರ–ಜಯಪುರ–ಹೆಚ್.ಡಿ.ಕೋಟೆ ರಸ್ತೆ ಅಭಿವೃದ್ಧಿಗೆ ಸಹಕರಿಸಬೇಕು. ಶ್ರೀರಾಂಪುರದಿಂದ ಉದ್ಬೂರು ಗೇಟ್‌ವರೆಗೆ ಜೋಡಿ ರಸ್ತೆ ಮಂಜೂರಾಗಿದ್ದು, ಉಳಿದ ರಸ್ತೆಗೂ ಯೋಜನೆ ವಿಸ್ತರಿಸಬೇಕು ಎಂದು ಒತ್ತಾಯಿಸಿದರು. ಇದೇ ವೇಳೆ ಹೆಚ್.ಡಿ.ಕೋಟೆ ಶಾಸಕ ಅನಿಲ್‌ಕುಮಾರ್ ಹೆಚ್.ಡಿ.ಕೋಟೆವರೆಗೆ ಜೋಡಿ ರಸ್ತೆ ನಿರ್ಮಿಸುವಂತೆ ಧ್ವನಿಗೂಡಿಸಿದರು.

ಎಲ್ಲಾ ಬೇಡಿಕೆಗಳಿಗೆ ಸಕರಾತ್ಮಕವಾಗಿ ಸ್ಪಂದಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೂಡಲೇ ಆರ್ಥಿಕ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಯೊಂದಿಗೆ ಸಭೆ ಮಾಡಿ ಸೂಕ್ತ ಕ್ರಮ ಕೈಗೊಂಡು, ಬಜೆಟ್‌ನಲ್ಲಿ ಹಣ ನೀಡುತ್ತೇವೆ. ಮೈಸೂರು ನಗರದ ಮುಖ್ಯ ರಸ್ತೆಗಳ ವೈಟ್ ಟ್ಯಾಪಿಂಗ್‌ಗಾಗಿ 350 ಕೋಟಿ ರೂ., ದೇವರಾಜ ಮಾರುಕಟ್ಟೆ, ಲ್ಯಾನ್ಸ್‌ಡೌನ್ ಬಿಲ್ಡಿಂಗ್ ನಿರ್ಮಾಣಕ್ಕೆ ಬಜೆಟ್‌ನಲ್ಲಿ ಹಣ ನೀಡುವುದಾಗಿ ಭರವಸೆ ನೀಡಿದ್ದು, ಅವರಿಗೆ ಜನತೆ ಪರವಾಗಿ ಅಭಿನಂದನೆ ಸಲ್ಲಿಸಲಾಯಿತು ಎಂದು ಜಿಟಿಡಿ ತಿಳಿಸಿದ್ದಾರೆ.

ಅಯೋಧ್ಯೆಯಲ್ಲಿ ಬಾಲರಾಮ ಮೂರ್ತಿ ಪ್ರತಿಷ್ಠಾಪನೆಗೊಂಡು ಒಂದು ವರ್ಷ

ಬಾಲರಾಮನ ಮೂರ್ತಿ ಕೆತ್ತಿದ ಚಿನ್ನದ ಉಳಿ, ಸುತ್ತಿಗೆ, ಮೂರ್ತಿಗಳ ಪ್ರದರ್ಶನ



ಬಾಲರಾಮ ಮೂರ್ತಿ ಕೆತ್ತನೆ ಕಾರ್ಯದಲ್ಲಿ ಪಾಲ್ಗೊಂಡಿದ್ದ ಸಿದ್ದರಾಜು, ಜಗದೀಶ್, ನಾಗರಾಜು, ಚೆಲುವರಾಜು, ಅಜಯ್, ಸೋಮಣ್ಣ, ಯೋಗೇಶ್ ಅವರನ್ನು ಪರಿಚಯಿಸಿ ಕೊಡಲಾಯಿತು. ಇದೇ ಸಂದರ್ಭದಲ್ಲಿ ಅರುಣ್ ಯೋಗಿರಾಜ್ ಪತ್ನಿ ವಿಜೇತಾ, ತಾಯಿ ಸರಸ್ವತಿ ಉಪಸ್ಥಿತರಿದ್ದರು.






ಅಯೋಧ್ಯೆಯ ಬಾಲರಾಮ ಮೂರ್ತಿ ಕೆತ್ತನೆಗೆ ಬಳಸಿದ್ದ ಚಿನ್ನದ ಉಳಿ, ಸುತ್ತಿಗೆ

ಮೈಸೂರು, ಜ.10(ಜಿಎ)– ಅಯೋಧ್ಯೆಯ ಬಾಲರಾಮ ಮೂರ್ತಿ ಪ್ರತಿಷ್ಠಾಪನೆಗೊಂಡು ಒಂದು ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಶಿಲ್ಪಿ ಅರುಣ್ ಯೋಗಿರಾಜ್ ಮೂರ್ತಿ ಕೆತ್ತನೆಗೆ ಬಳಸಿದ್ದ ಚಿನ್ನದ ಉಳಿ, ಸುತ್ತಿಗೆ ಮತ್ತು ವಿವಿಧ ಮೂರ್ತಿಗಳನ್ನು ಮೈಸೂರಿನ ಸಾಹುಕಾರ್ ಚೆನ್ನಯ್ಯ ರಸ್ತೆಯಲ್ಲಿರುವ ಬ್ರಹ್ಮರ್ಷಿ ಕಶ್ಯಪ ಶಿಲ್ಪಕಲಾ ಶಾಲಾ ಆವರಣದಲ್ಲಿ ಪ್ರದರ್ಶಿಸಲಾಯಿತು.

ಈ ವೇಳೆ ಶಿಲ್ಪಿ ಅರುಣ್ ಯೋಗಿರಾಜ್ ಮಾತನಾಡಿ, ರಾಶಿ ನಕ್ಷತ್ರದ ಪ್ರಕಾರ ಇಂದು ಅಯೋಧ್ಯೆಯಲ್ಲಿ ಬಾಲರಾಮ ಮೂರ್ತಿ ಪ್ರತಿಷ್ಠಾಪನೆಗೊಂಡು ಒಂದು ವರ್ಷ ಪೂರ್ಣಗೊಂಡಿದ್ದು, ಮತ್ತೊಂದೆಡೆ ವೈಕುಂಠ ಏಕಾದಶಿ ಹಿನ್ನೆಲೆಯಲ್ಲಿ ಬಾಲರಾಮನ ಮೂರ್ತಿ ಕೆತ್ತನೆಗೆ ಬಳಸಿದ್ದ ಚಿನ್ನದ ಉಳಿ, ಸುತ್ತಿಗೆ ಜೊತೆಗೆ ಇತ್ತೀಚೆಗೆ ಕೆತ್ತನೆ ಮಾಡಿದ್ದ ವಿಗ್ರಹಗಳನ್ನು ಪ್ರದರ್ಶನಕ್ಕೆ ಇರಿಲಾಗಿದೆ ಎಂದರು. ಒಮ್ಮೆ ದೇವಾಲಯದ ಗರ್ಭಗುಡಿಯಲ್ಲಿ ದೇವರ ಮೂರ್ತಿ ಪ್ರತಿಷ್ಠಾಪನೆ ಮಾಡಿದ ನಂತರ ಜನರಿಗೆ ವಿಗ್ರಹವನ್ನು ಸೂಕ್ಷ್ಮವಾಗಿ ವೀಕ್ಷಿಸಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ಇಂದು ಬಾಲರಾಮ ಮೂರ್ತಿಗೆ ಬಳಸಿದ ಪೀಠ, ಛತ್ರಪತಿ ಶಿವಾಜಿ ಮೂರ್ತಿ, ತಾಂಡವ ಮೂರ್ತಿ ವಿಗ್ರಹ, ಬಾಲರಾಮ ಮೂರ್ತಿ ಕೆತ್ತನೆಗೆ ಬಳಸಿದ ಉಳಿ, ಸುತ್ತಿಗೆ, ಚಿನ್ನದ ದೇವರ ನಾಣ್ಯಗಳನ್ನು ಪ್ರದರ್ಶನಕ್ಕೆ ಇಡಲಾಗಿದ್ದು, ಸಾರ್ವಜನಿಕರು ಜ.12ರವರೆಗೆ ವೀಕ್ಷಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದರು.

ಪ್ರಮುಖವಾಗಿ ಅಯೋಧ್ಯೆ ರಾಮ ಮಂದಿರ ಟ್ರಸ್ಟ್‌ನವರು ಬಾಲರಾಮನ ಮೂರ್ತಿಗೆ ಚಿನ್ನದ ಪೀಠ ನಿರ್ಮಿಸಿದ್ದ ಹಿನ್ನೆಲೆಯಲ್ಲಿ ಬಾಲರಾಮನ ಮೂರ್ತಿಗೆ ನಿರ್ಮಿಸಿದ್ದ ಪೀಠವನ್ನು ನಾವು ಮೈಸೂರಿಗೆ ತಂದಿದ್ದು, ಜನರು ನೋಡಬಹುದು ಎಂದರು. ಬಾಲರಾಮ ಮೂರ್ತಿ ಕೆತ್ತನೆಗೆ ಅವಕಾಶ ಸಿಕ್ಕಿದ್ದು ಪುಣ್ಯ. ಮೂರ್ತಿ ಪ್ರತಿಷ್ಠಾಪನೆಗೊಂಡು ವರ್ಷವಾಗಿದ್ದು, ಸಾಕಷ್ಟು ಮೂರ್ತಿ ಕೆತ್ತನೆಗೆ ಅವಕಾಶ ಬರುತ್ತಿವೆ.ನಾನು ನನ್ನ ಕೈನಲ್ಲಿ ಆದಷ್ಟು ಒಪ್ಪಿಕೊಂಡು ಮಾಡಿಕೊಡುತ್ತಿದ್ದೇನೆ ಜನರು ನನ್ನ ಪ್ರೀತಿಯಿಂದ ಮಾತನಾಡಿಸುತ್ತಿದ್ದಾರೆ ದೇವರು ಎಲ್ಲವನ್ನೂ ಕೊಟ್ಟಿದ್ದಾರೆ. ಬಾಲರಾಮ ಕೆತ್ತಿದ ನನ್ನ ಇಡೀ ತಂಡಕ್ಕೆ ನಾನು ಆಭಾರಿಯಾಗಿದ್ದೇನೆ ಎಂದು ತಿಳಿಸಿದರು. ಈ ವೇಳೆ ಬಾಲರಾಮ ಮೂರ್ತಿ ಕೆತ್ತನೆ ಕಾರ್ಯದಲ್ಲಿ ಪಾಲ್ಗೊಂಡಿದ್ದ ಸಿದ್ದರಾಜು, ಜಗದೀಶ್, ನಾಗರಾಜು, ಚೆಲುವರಾಜು, ಅಜಯ್, ಸೋಮಣ್ಣ, ಯೋಗೇಶ್ ಅವರನ್ನು ಪರಿಚಯಿಸಿದರು. ಅರುಣ್ ಯೋಗಿರಾಜ್ ಪತ್ನಿ ವಿಜೇತಾ, ತಾಯಿ ಸರಸ್ವತಿ ಉಪಸ್ಥಿತರಿದ್ದರು.



ಬಾಲರಾಮನ ಮೂರ್ತಿಗೆ ನಿರ್ಮಿಸಿದ್ದ ಪೀಠವನ್ನು ಸಾರ್ವಜನಿಕರು ವೀಕ್ಷಿಸುತ್ತಿರುವುದು.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಎಲ್ಲಾ ಸಿಬ್ಬಂದಿಗೆ ತರಬೇತಿ ಕಾರ್ಯಾಗಾರ

ಬುಡಕಟ್ಟು ಸಂಶೋಧನಾ ಸಂಸ್ಥೆ ನಿರ್ದೇಶಕ ಡಾ.ಕೆ.ಆರ್.ರಾಜ್‌ಕುಮಾರ್



ಮೈಸೂರಿನ ಬೋಗಾದಿಯಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಧಿಕಾರಿಗಳಿಗಾಗಿ ನಡೆದ ತರಬೇತಿ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ.ಕೆ.ಆರ್.ರಾಜ್‌ಕುಮಾರ್ ಕಿರುಹೊತ್ತಿಗೆ ಬಿಡುಗಡೆ ಮಾಡಿದರು.

ಮೈಸೂರು,ಜ.10(ಎಂಟಿವೈ)– ಪರಿಣಾಮಕಾರಿಯಾಗಿ ಕೆಲಸ ಮಾಡಲು ಸಿಬ್ಬಂದಿಯನ್ನು ಸಜ್ಜುಗೊಳಿಸಲು ಶೀಘ್ರದಲ್ಲಿಯೇ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಎಲ್ಲಾ ಅಧಿಕಾರಿಗಳು, ಎಲ್ಲಾ ವರ್ಗದ ಸಿಬ್ಬಂದಿಗಳಿಗೂ ತರಬೇತಿ ಕಾರ್ಯಾಗಾರ ನಡೆಸಲು ಉದ್ದೇಶಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯ ನಿರ್ದೇಶಕ ಡಾ.ಕೆ.ಆರ್.ರಾಜ್ ಕುಮಾರ್ ತಿಳಿಸಿದರು.

ಮೈಸೂರಿನ ಬೋಗಾದಿಯಲ್ಲಿರುವ ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿಗಳಿಗಾಗಿ ನಡೆದ ತರಬೇತಿ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, 5 ದಿನಗಳ ಕಾಲ 7 ಜನ ಪರಿಣಿತ ಸಂಪನ್ಮೂಲ ವ್ಯಕ್ತಿಗಳು ತರಬೇತಿ ನೀಡಿದ್ದಾರೆ. ತರಬೇತಿ ಎಂದರೆ ಏನಾದರೂ ಕಲಿತು ಹೋಗಬೇಕು. ನಿಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕು. ಈ ತರಬೇತಿಯಿಂದ ನಿಮಗೆ ಉಪಯೋಗವಾಗಿದೆ ಎಂದು ಭಾವಿಸಿದ್ದೇನೆ. ತರಬೇತಿ ಜೊತೆಗೆ ಹಾಡಿಗಳಿಗೆ ಭೇಟಿ ನೀಡಿದ್ದೀರಿ. ಉತ್ತರ ಕರ್ನಾಟಕ ಭಾಗಕ್ಕೂ ಇಲ್ಲಿಗೂ ಇರುವ ವ್ಯತ್ಯಾಸ ನಿಮಗೆ ಗೊತ್ತಾಗಿದೆ. ಇದೊಂದು ಹೊಸ ಅನುಭವವಾಗಿದೆ. ಮೈಸೂರು, ಕೊಡಗು, ಚಾಮರಾಜನಗರ ಭಾಗಗಳಲ್ಲಿ ಬುಡಕಟ್ಟು ಜನರು ಹೆಚ್ಚಾಗಿ ವಾಸಿಸುತ್ತಿದ್ದಾರೆ. ಈ ಜನರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಜವಾಬ್ದಾರಿ ನಿಮ್ಮೆಲ್ಲರ ಮೇಲಿದೆ. ಈ ನಿಟ್ಟಿನಲ್ಲಿ ನೀವೆಲ್ಲರೂ ಕಾರ್ಯೋನ್ಮುಖರಾಗಬೇಕು. ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯಲ್ಲಿ ತರಬೇತಿ ಕಾರ್ಯಾಗಾರ ನಿರಂತರವಾಗಿ ಆಯೋಜಿಸಲಾಗಿದೆ. ಅಲ್ಲದೆ, ಆಶ್ರಮ ಶಾಲಾ ಮಕ್ಕಳಿಗೆ ಹಾಗೂ ಹಾಡಿ ಜನರಿಗೆ ಆರೋಗ್ಯ ತಪಾಸಣಾ ಶಿಬಿರಗಳನ್ನು ನಡೆಸಲಾಗುತ್ತಿದೆ ಎಂದರು. ಮೈಸೂರು ಜಿಲ್ಲಾ ವಾಲ್ಮೀಕಿ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ಶಿವಕುಮಾರ್ ಮಾತನಾಡಿ, ನೀವು ಉತ್ತಮ ಅಧಿಕಾರಿಯಾಗಬೇಕಾದರೆ ಗುಣಮಟ್ಟದ ತರಬೇತಿ ಪಡೆಯಬೇಕು. ಕಾಯಿದೆಗಳನ್ನು ತಿಳಿದುಕೊಳ್ಳಬೇಕು. ಪರಿಶಿಷ್ಟ ಪಂಗಡದ ಜನರ ಬಗ್ಗೆ ಸಂಪೂರ್ಣ ಜ್ಞಾನ ಇರಬೇಕು. ಇಲಾಖೆಗೆ ನಿಮ್ಮದೇ ಆದ ಕೊಡುಗೆ ನೀಡಬೇಕು ಎಂದರು.

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಎಂ.ಕೆ.ಮಲ್ಲೇಶ್ ಮಾತನಾಡಿ, ಈ ತರಬೇತಿಯಿಂದ ಅಧಿಕಾರಿಗಳ ಜವಾಬ್ದಾರಿ ಹೆಚ್ಚಾಗಿದ್ದು, ತರಬೇತಿ ಎಲ್ಲಾ ಹಂತದ ಅಧಿಕಾರಿಗಳಿಗೂ ನಿರಂತರವಾಗಿ ನಡೆಯುತ್ತದೆ. ಯಾವುದೇ ಕೆಲಸ ಮಾಡಲು ತರಬೇತಿ ಮುಖ್ಯವಾಗಿರುವುದರಿಂದ ಈ ತರಬೇತಿ ಉಪಯುಕ್ತವಾಗಿದೆ ಎಂದರು.

ತರಬೇತಿ ಪಡೆದ ರಾಯಚೂರು ತಾಲೂಕು ಕಲ್ಯಾಣಾಧಿಕಾರಿ ರುಕ್ಮಿಣಿ ಪಾಟೀಲ್ ಮಾತನಾಡಿ, ಈ ತರಬೇತಿಯನ್ನು ಜಿಲ್ಲಾ ಮಟ್ಟದ ಅಧಿಕಾರಿಗಳು, ಮ್ಯಾನೇಜರ್‌ಗಳು, ನಿಲಯಪಾಲಕರಿಗೂ ನೀಡಿದರೆ ಎಲ್ಲರೂ ಸಮನ್ವಯತೆಯಿಂದ ಕೆಲಸ ಮಾಡಲು ಅನುಕೂಲವಾಗುತ್ತದೆ. ಈ ತರಬೇತಿಯಿಂದ ಅನುಕೂಲವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಇಲಾಖೆಯ ಉಪನಿರ್ದೇಶಕಿ ಬಿ.ಎಸ್.ಪ್ರಭಾ ಅರಸ್, ರಾಜ್ಯ ವಾಲ್ಮೀಕಿ ನಿಗಮದ ಜನರಲ್ ಮ್ಯಾನೇಜರ್ ರಾಜಶೇಖರ್, ಸಂಶೋಧನಾಧಿಕಾರಿ ಶ್ರೀನಿವಾಸ್‌ಕೆ., ಡಾ. ಮೋಹನ್, ಡಾ. ಕುಮಾರ್, ಅರುಣ್ ಪ್ರಭು, ಜಿ.ಆರ್. ಮಹೇಶ್, ಭವ್ಯ ಬಿ.ಆರ್.,ಗುಣಧರ್, ಹೇಮಚಂದ್ರ, ವೆಂಕಟೇಶ್ ಪ್ರಸಾದ್, ಕ್ಯಾಪ್ಟನ್ ರವಿ ಶಿರಹಟ್ಟಿ, ನಾಗೇಂದ್ರ ಉಪಸ್ಥಿತರಿದ್ದರು.

ಮುಖ್ಯಮಂತ್ರಿ ಸಿದ್ದರಾಮಯ್ಯರಿಂದ ಭಾನವಿ ಪ್ಯಾಲೇಸ್ ಲೋಕಾರ್ಪಣೆ

10 ಸಾವಿರ ಜನ ಏಕಕಾಲದಲ್ಲಿ ಸಭೆ-ಸಮಾರಂಭ ಮಾಡಬಹುದಾದ ಸುವಿಶಾಲ ಸೌಧವಿದು



ಮೈಸೂರಿನ ಲಲಿತಾದ್ರಿನಗರದ ರಿಂಗ್ ರಸ್ತೆ ಸಮೀಪದಲ್ಲಿರುವ ನೂತನ 'ಭಾನವಿ ಪ್ಯಾಲೇಸ್'(ಕಲ್ಯಾಣ ಮಂಟಪ)ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಲೋಕಾರ್ಪಣೆಗೊಳಿಸಿದರು. ಪಶುಸಂಗೋಪನೆ ಹಾಗೂ ರೇಷ್ಮೆ ಸಚಿವ ಕೆ.ವೆಂಕಟೇಶ್, ಶಾಸಕ ಜಿ.ಟಿ.ದೇವೇಗೌಡ, ಭಾನವಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಸಿ.ನರಸೇಗೌಡ, ಮುಖಂಡ ನಿತಿನ್ ವೆಂಕಟೇಶ್, ಭಾನವಿ ಆಸ್ಪತ್ರೆ ವೈದ್ಯಕೀಯ ನಿರ್ದೇಶಕ ಡಾ.ಎನ್.ವಿಜಯ್ ಚೆಲುವರಾಜ್ ಹಾಗೂ ಅವರ ಕುಟುಂಬ ಸದಸ್ಯರಿದ್ದಾರೆ.

ವೃತ್ತಿಪರತೆ, ಬದುಕುವ ಛಲ ಎಲ್ಲರಲ್ಲೂ ಇರಬೇಕು...

ವೃತ್ತಿಪರತೆ, ಬದುಕುವ ಛಲ ಇದ್ದರೆ ಸಮಾಜದಲ್ಲಿ ಎತ್ತರದ ಸ್ಥಾನಕ್ಕೆ ಬೆಳೆಯಬಹುದು ಎಂಬುದಕ್ಕೆ ಭಾನವಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಸಿ.ನರಸೇಗೌಡರು ಮಾದರಿಯಾಗಿದ್ದು, ಎಲ್ಲರಲ್ಲೂ ವೃತ್ತಿಪರತೆ ಹಾಗೂ ಬದುಕುವ ಛಲವಿರಬೇಕು. ಪ್ರತಿಯೊಬ್ಬರು ಹುಟ್ಟಿದ ಮೇಲೆ ಬದುಕುವುದಕ್ಕೆ ಪ್ರಯತ್ನ ಮಾಡಲೇಬೇಕು. ಆ ಪ್ರಯತ್ನದಲ್ಲಿ ಯಾರಿಗೂ ತೊಂದರೆ ನೀಡಬಾರದು. ಬೇರೆಯವರಿಗೂ ಅನುಕೂಲವಾಗುವಂತೆ ಸಮಾಜಮುಖಿಯಾಗಿ ಬದುಕಬೇಕು. ಯಾವುದೇ ಕೆಟ್ಟ ಚಟಕ್ಕೆ ಬಲಿಯಾಗದೆ ಸಾರ್ಥಕ ಜೀವನ ನಡೆಸಬೇಕು.

- ಸಿದ್ದರಾಮಯ್ಯ, ಮುಖ್ಯಮಂತ್ರಿ

ಮೈಸೂರು, ಜ.10(ಎಂಕೆ)– ಮೈಸೂರಿನ ಲಲಿತಾದ್ರಿನಗರದ ರಿಂಗ್ ರಸ್ತೆ ಸಮೀಪದಲ್ಲಿ ಭಾನವಿ ಚಾರಿಟಬಲ್ ಟ್ರಸ್ಟ್ ವತಿಯಿಂದ ನಿರ್ಮಿಸಿರುವ ನೂತನ 'ಭಾನವಿ ಪ್ಯಾಲೇಸ್'(ಕಲ್ಯಾಣ ಮಂಟಪ) ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಲೋಕಾರ್ಪಣೆಗೊಳಿಸಿದರು.

ನಗರದ ಪೂರ್ವಭಾಗದ ರಿಂಗ್ ರಸ್ತೆಗೆ ಹೊಂದಿಕೊಂಡಿರುವ ವಿಶಾಲ ಪ್ರದೇಶದಲ್ಲಿ ಹಲವಾರು ವಿಶೇಷ ಸೌಕರ್ಯಗಳೊಂದಿಗೆ ಮದುವೆ, ಆರತಕ್ಷತೆ, ಬೀಗರ ಔತಣ, ಹುಟ್ಟುಹಬ್ಬ, ವೃತ್ತಿಪರ ಸಮ್ಮೇಳನ ಸೇರಿದಂತೆ 100 ಜನರಿಂದ 10 ಸಾವಿರ ಜನರು ಸೇರಿ ನಾನಾ ಸಭೆ–ಸಮಾರಂಭಗಳನ್ನು ನಡೆಸಲು ಸೂಕ್ತವಾಗಿರುವ ಭಾನವಿ ಪ್ಯಾಲೇಸ್ ಅನ್ನು ಟೇಪ್ ಕತ್ತರಿಸುವ ಮೂಲಕ ಉದ್ಘಾಟಿಸಿದರು.

ಬಳಿಕ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ದೀಪ ಬೆಳಗಿಸಿ ಮಾತನಾಡಿದ ಸಿಎಂ, ಭಾನವಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷ ನರಸೇಗೌಡ ಮತ್ತು ನನ್ನ ಸ್ನೇಹ ಸುಮಾರು 40 ವರ್ಷಗಳದ್ದು. ಗುತ್ತಿಗೆದಾರನಾಗಿದ್ದ ಅವರು, 2006ರಲ್ಲಿ ಕಾಂಗ್ರೆಸ್ ಸೇರಿ ಉಪಚುನಾವಣೆಗೆ ನಿಂತಾಗ ನನ್ನ ಚುನಾವಣೆಯ ಜವಾಬ್ದಾರಿಯನ್ನು ನಿರ್ವಹಿಸಿದ್ದರಲ್ಲದೆ ಇದುವರೆಗಿನ ನನ್ನ ಎಲ್ಲಾ ಚುನಾವಣೆಗೂ ಸಂಪೂರ್ಣ ಸಹಕಾರ, ಬೆಂಬಲ ನೀಡಿದ್ದಾರೆ ಎಂದು ಸ್ಮರಿಸಿದರು.

2008ರಲ್ಲಿ ಚಾಮುಂಡೇಶ್ವರಿ ಕ್ಷೇತ್ರದಿಂದ ಟಿಕೆಟ್ ನೀಡುವುದಾಗಿ ಹೇಳಿದ್ದರೂ ಚುನಾವಣೆಗೆ ಸ್ಪರ್ಧಿಸದೆ, ಒಂದೇ ವೃತ್ತಿಪರತೆ ಹೊಂದಿದ್ದ ಅವರು, ಯಾರಿಗೂ ಮೋಸ ಮಾಡದೆ ಬೆಳೆದಿದ್ದಾರೆ. ಹೊಸ ಹುಂಡಿ, ಬೋಗಾದಿಯಲ್ಲಿ ಕಲ್ಯಾಣ ಮಂಟಪಗಳನ್ನು ನಿರ್ಮಿಸಿ, ಪ್ರಸ್ತುತ ಲಲಿತಾದ್ರಿನಗರದಲ್ಲಿ ಭಾನವಿ ಪ್ಯಾಲೇಸ್ ಸುವಿಶಾಲ ಕಲ್ಯಾಣ ಮಂಟಪ ನಿರ್ಮಿಸುವ ಮೂಲಕ ಎಲ್ಲಾ ವರ್ಗದ ಜನರಿಗೂ ಸಭೆ–ಸಮಾರಂಭಗಳನ್ನು ನಡೆಸಲು ಅನುಕೂಲವಾಗುವಂತೆ ಸಮಾಜಮುಖಿ ಜೀವನ ನಡೆಸುತ್ತಿದ್ದಾರೆ. ಹಾಗೆಯೇ ಭಾನವಿ ಆಸ್ಪತ್ರೆ ಮೂಲಕ ವೈದ್ಯಕೀಯ ಕ್ಷೇತ್ರದಲ್ಲೂ ಸೇವೆ ನೀಡುತ್ತಿದ್ದಾರೆ ಎಂದು ಶ್ಲಾಘಿಸಿದರು.

ಸಿದ್ದರಾಮಯ್ಯ ನಾಯಕತ್ವಕ್ಕೆ ಬೆಂಬಲ: ಶಾಸಕ ಜಿ.ಟಿ.ದೇವೇಗೌಡ ಮಾತನಾಡಿ, ಸಿ.ನರಸೇಗೌಡ್ರು ಮೊದಲಿನಿಂದಲೂ ಸಿದ್ದರಾಮಯ್ಯ ಅವರ ನಾಯಕತ್ವಕ್ಕೆ ಬೆಂಬಲ ನೀಡುತ್ತಾ ಬಂದಿದ್ದಾರೆ. ಮೈಸೂರು ಒಡೆಯರ ನಂತರ ಮೈಸೂರು ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಮುಂದಿನ ವರ್ಷಗಳಲ್ಲಿಯೂ ಉತ್ತಮ ಆಡಳಿತ ನೀಡುತ್ತಾರೆಂಬ ವಿಶ್ವಾಸವಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಪಶುಸಂಗೋಪನೆ ಹಾಗೂ ರೇಷ್ಮೆ ಸಚಿವ ಕೆ.ವೆಂಕಟೇಶ್, ಶಾಸಕರಾದ ಸಿ.ಪುಟ್ಟರಂಗಶೆಟ್ಟಿ, ಭಾನವಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಸಿ.ನರಸೇಗೌಡ, ಮಾಜಿ ಶಾಸಕರಾದ ಎಂ.ಕೆ.ಸೋಮಶೇಖರ್, ಹೆಚ್.ಪಿ.ಮಂಜುನಾಥ್, ಮುಖಂಡ ನಿತಿನ್ ವೆಂಕಟೇಶ್, ಭಾನವಿ ಆಸ್ಪತ್ರೆ ವೈದ್ಯಕೀಯ ನಿರ್ದೇಶಕ ಡಾ.ಎನ್.ವಿಜಯ್ ಚೆಲುವರಾಜ್ ಮತ್ತಿತರರು ಈ ವೇಳೆ ಉಪಸ್ಥಿತರಿದ್ದರು.



ಶುಕ್ರವಾರ ಉದ್ಘಾಟನೆಗೊಂಡ ಭಾನವಿ ಪ್ಯಾಲೇಸ್ ಭವ್ಯ ಭವನ

ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಹುಣ್ಣಿಮೆ ಪ್ರಯುಕ್ತ ಹೋಮ

ಮೈಸೂರು, ಜ.10(ಐಎಲ್‌ಯು)– ಮೈಸೂರಿನ ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಹುಣ್ಣಿಮೆ ಪ್ರಯುಕ್ತ ಜನವರಿ 13 ರಂದು ಹೋಮ ಸೇರಿದಂತೆ ಹಲವು ಧಾರ್ಮಿಕ ಕಾರ್ಯಗಳು ನಡೆಯಲಿದೆ.

ಬೆಳಿಗ್ಗೆ 9.30 ಗಂಟೆಗೆ ಕರ್ಕಾಟಕ, ತುಲಾ, ಮಕರ, ಕುಂಭ, ಮೀನ ರಾಶಿಯವರಿಗೆ ಶನಿ ಮಹಾಶಾಂತಿ ಮತ್ತು ಬಾಧ ನಿವಾರಕ ಸುದರ್ಶನ ಹೋಮ ಮಾಡಲಾಗುವುದು.

ಜೊತೆಗೆ ಮಹಾ ಮೃತ್ಯುಂಜಯ ಹೋಮ, ಕುಜದೋಷ ನಿವೃತ್ತಿ ಶಾಂತಿ, ರಾಹು, ಕೇತು ಶಾಂತಿ ಏರ್ಪಡಿಸಲಾಗಿದೆ. ಅಂದು ಮಧ್ಯಾಹ್ನ 12.30 ಗಂಟೆಗೆ ಪೂರ್ಣಾಹುತಿ ಮತ್ತು ಮಹಾ ಮಂಗಳಾರತಿ ನಡೆಯಲಿದೆ.

ಜ. 19ಕ್ಕೆ ಮೈಸೂರು ಸಾಹಿತ್ಯ ಹಬ್ಬ

ಮೈಸೂರು, ಜ. 10– ಮೈಸೂರು ಲಿಟರರಿ ಅಸೋಸಿಯೇಷನ್ ವತಿಯಿಂದ ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಜ. 19 ರಂದು ಬೆಳಿಗ್ಗೆ 10 ಗಂಟೆಗೆ ಮೈಸೂರು ಸಾಹಿತ್ಯ ಹಬ್ಬ ಏರ್ಪಡಿಸಲಾಗಿದೆ. ಕಾರ್ಯಕ್ರಮವನ್ನು ಅಂಕಣಕಾರ ಮತ್ತು ಬರಹಗಾರ ಡಾ. ಪಿ. ಸಾಯಿನಾಥ್ ಉದ್ಘಾಟಿಸುವರು. ರಾಜೀವ್ ಗಾಂಧಿ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ. ಕೆ.ಸಿ. ಬೆಳ್ಳಿಯಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ.

ಅಂಕೋಲಾಜಿಸ್ಟ್ ಮತ್ತು ಉದ್ಯಮಿ ಡಾ. ಬಿ.ಎಸ್. ಅಜಯ್‌ಕುಮಾರ್ ಅವರ 'ಡಾಕ್ಟರ್ಸ್ ಜರ್ನಿ : ಡಿಕೋಡ್ಸ್ ಅಕ್ರಾಸ್ ಕಲ್ಚರ್ಸ್ ಅಂಡ್ ಕಲ್ಚರ್ಸ್'; ಹಿರಿಯ ವಿಜ್ಞಾನಿ ಪ್ರೊ. ಎಸ್.ಎಂ. ಶಿವಪ್ರಸಾದ್ 'ರೀಇಮ್ಯಾಜಿನಿಂಗ್ ಇಂಡಿಯನ್ ಎಜುಕೇಶನ್ ಫಾರ್ ಎ ಟೆಕ್ನಾಲಜಿಕಲಿ ಚೇಂಜಿಂಗ್ ವರ್ಲ್ಡ್'; ಸಾಹಿತಿ ಮತ್ತು ಸಾಂಸ್ಕೃತಿಕ ವಿಮರ್ಶಕ ಪ್ರೊ. ರಾಜೇಂದ್ರ ಚೆನ್ನಿ, ಅವರು 'ಕನ್‌ಫಾರ್ಮಿಟಿ ಅಂಡ್ ಟ್ರಾನ್ಸ್‌ಗ್ರೆಸ್' : ವುಮನ್ಸ್ ಪೊಯೆಟ್ರಿ ಇನ್ ಕನ್ನಡ'; ಮತ್ತು ವೃತ್ತಿಪರ ಕಥೆಗಾರರಾದ ಶ್ರೀಮತಿ ಲಾವಣ್ಯ ಪ್ರಸಾದ್ ಅವರು 'ವಾಟ್ಸ್ ಯುವರ್ ಸ್ಟೋರಿ' ಕುರಿತು ವಿಚಾರ ಮಂಡಿಸಲಿದ್ದಾರೆ.

ಒಂದನೇ ಪುಟದಿಂದ

ಅಭಿವೃದ್ಧಿಗೆ ತ್ವರಿತ ಕ್ರಮ

ಕುಕ್ಕರಹಳ್ಳಿ ಕೆರೆ ಪುನಶ್ಚೇತನಕ್ಕೆ ಅಭಿವೃದ್ಧಿ ಪ್ಯಾಕೇಜ್ ಬಳಸಿಕೊಳ್ಳಬೇಕು ಎಂದು ಸೂಚಿಸಿದರು.

ಒಳ ಚರಂಡಿ, ಕೊಳಚೆ ನೀರು ಸಂಸ್ಕರಣ: ಮೈಸೂರು ನಗರ ಹಾಗೂ ಹೊಸದಾಗಿ ನಿರ್ಮಿಸಲಾದ ಬಡಾವಣೆಗಳಲ್ಲಿ ಒಳ ಚರಂಡಿ ನಿರ್ಮಾಣ, ಕೊಳಚೆ ನೀರು ಸಂಸ್ಕರಣೆ ಯೋಜನೆಗಾಗಿ 670 ಕೋಟಿ ರೂ. ಡಿಪಿಆರ್ ಸಿದ್ಧಪಡಿಸಲಾಗಿದ್ದು, ಸಂಪುಟದ ಮುಂದೆ ಮಂಡಿಸಲು ಆದೇಶಿಸಿದರು. ಅಂಬೇಡ್ಕರ್ ಭವನ ಕಾಮಗಾರಿಯನ್ನು 23.83 ಕೋಟಿ ರೂ. ವೆಚ್ಚದಲ್ಲಿ ಪೂರ್ಣಗೊಳಿಸುವ ಯೋಜನೆ ಬಗ್ಗೆ ಮುಂದಿನ ಸಚಿವ ಸಂಪುಟದಲ್ಲಿ ತೀರ್ಮಾನಿಸಲಾಗುವುದು.

ಸಾಲಿಗ್ರಾಮ, ಪಿರಿಯಾಪಟ್ಟಣದಲ್ಲಿ ತಾಯಿ–ಮಕ್ಕಳ ಆಸ್ಪತ್ರೆ: ಸಾಲಿಗ್ರಾಮ ತಾಲೂಕಿನಲ್ಲಿ 50 ಕೋಟಿ ರೂ. ವೆಚ್ಚದಲ್ಲಿ ತಾಲೂಕು ಆಸ್ಪತ್ರೆ ಹಾಗೂ ತಾಯಿ ಮಕ್ಕಳ ಆಸ್ಪತ್ರೆ ನಿರ್ಮಾಣ, ಪಿರಿಯಾಪಟ್ಟಣದಲ್ಲಿ ತಾಯಿ, ಮಕ್ಕಳ ಆಸ್ಪತ್ರೆ ನಿರ್ಮಾಣ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಆದೇಶಿಸಿದರು.

ಮೈಸೂರಿನ 46 ಕಿ.ಮೀ. ರಸ್ತೆ ಮೇಲ್ದರ್ಜೆಗೆ: ಮೈಸೂರು ನಗರದ 46 ಕಿ.ಮೀ. ವ್ಯಾಪ್ತಿಯ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಅನುಮತಿ ನೀಡಲಾಗಿದೆ. ಐಟಿ ಪಾರ್ಕ್ ಸ್ಥಾಪನೆಗೆ ಕೋಚನಹಳ್ಳಿಯಲ್ಲಿ ಜಮೀನು ನೀಡುವ ಕುರಿತು ಕೆಐಎಡಿಬಿಗೆ 404 ಎಕರೆ ಸ್ವಾಧೀನಕ್ಕೆ ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ.

ಹಳೇ ಡಿಸಿ ಕಚೇರಿ ಮ್ಯೂಸಿಯಂ: ಫಿಲ್ಮ್ ಸಿಟಿ ನಿರ್ಮಾಣ ಕಾರ್ಯ ಆದಷ್ಟು ಬೇಗನೆ ಆರಂಭಿಸಲು ಕ್ರಮ ಕೈಗೊಳ್ಳಬೇಕು, ಹಳೆಯ ಜಿಲ್ಲಾಧಿಕಾರಿ ಕಚೇರಿಯನ್ನು ಮ್ಯೂಸಿಯಂ ಆಗಿ ಪರಿವರ್ತಿಸಲು 13 ಕೋಟಿ ರೂ. ಯೋಜನೆಗೆ ಅನುಮತಿ ನೀಡಲಾಗುವುದು.

ಹೆಸರಿಡಿ ಅಂತಾ ಯಾರಿಗೂ ಹೇಳಿಲ್ಲ

ನಾನು ಚರ್ಚೆಯನ್ನೂ ಮಾಡಿಲ್ಲ ಎಂದರು.

ಶಾಂತಿಯುತ ಪ್ರತಿಭಟನೆ ಹಕ್ಕಿದೆ: ನಕ್ಸಲಿಸಂ ಅನ್ನು ಸಂಪೂರ್ಣವಾಗಿ ತೊಡೆದುಹಾಕುವುದು ಕಾಂಗ್ರೆಸ್ ಸರ್ಕಾರದ ಉದ್ದೇಶ. ಯಾವುದೇ ಹೋರಾಟಗಳಾಗಲಿ ಶಾಂತಿಯುತವಾಗಿರಬೇಕೇ ಹೊರತು ಹಿಂಸಾತ್ಮಕ ದಾರಿ ಹಿಡಿಯಬಾರದೆಂಬುದು ಸರ್ಕಾರದ ನಿಲುವು. ಶರಣಾಗತರಾದ ನಕ್ಸಲರ ಶಸ್ತ್ರಾಸ್ತ್ರಗಳನ್ನು ಮಹಜರು ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಅನ್ಯಾಯ, ದೌರ್ಜನ್ಯ, ಶೋಷಣೆ ವಿರುದ್ಧ ಪ್ರತಿಭಟಿಸಲು ಸಂವಿಧಾನ ಎಲ್ಲರಿಗೂ ಹಕ್ಕು ನೀಡಿದೆ. ಆದರೆ ಯಾರೂ ಕಾನೂನಿಗೆ ವಿರುದ್ಧವಾಗಿ ಹಿಂಸಾತ್ಮಕ ಹೋರಾಟ ಮಾಡಬಾರದು. ಹೋರಾಟಗಳು ಸಂವಿಧಾನಾತ್ಮಕ ರೀತಿಯಲ್ಲಿ ನಡೆಯಬೇಕೆಂದು ಡಾ.ಅಂಬೇಡ್ಕರ್ ಅವರು ಹೇಳಿದ್ದಾರೆ. ಶೃಂಗೇರಿಯಲ್ಲಿ ಮತ್ತೊಬ್ಬ ನಕ್ಸಲ್ ಇರುವ ಬಗ್ಗೆ ಸ್ಪಷ್ಟ ಮಾಹಿತಿ ಇಲ್ಲ. ಇದ್ದರೆ ಕಾನೂನಿಗೆ ಶರಣಾಗಿ ಮುಖ್ಯವಾಹಿನಿಗೆ ಬರುವಂತೆ ಮನವಿ ಮಾಡುತ್ತೇನೆ ಎಂದರು.

10 ಸಾವಿರ ವೇತನ: ಪ್ರತಿಭಟಿಸುತ್ತಿದ್ದ ಆಶಾ ಕಾರ್ಯಕರ್ತೆಯರೊಂದಿಗೆ ಸಭೆ ನಡೆಸಲಾಗಿದೆ. ಈ ಮುಂಚೆ ಮಾಸಿಕ 8000 ರೂ. ನೀಡಲಾಗುತ್ತಿದ್ದು, ಈಗ ಪ್ರೋತ್ಸಾಹಕಗಳನ್ನೂ ಒಳಗೊಂಡಂತೆ 10,000 ರೂ. ವೇತನವನ್ನು ನೀಡಲು ನಿರ್ಧಾರ ಕೈಗೊಂಡಿದ್ದು, ಅವರು ಮುಷ್ಕರವನ್ನು ಕೈಬಿಡಲು ಸಮ್ಮತಿಸಿದ್ದಾರೆ. ಈ ಮೊತ್ತವನ್ನು ನೀಡಲು, ಸರ್ಕಾರದ ಆರ್ಥಿಕ ಪರಿಸ್ಥಿತಿ ಸದೃಢವಾಗಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರ ರೈತ ವಿರೋಧಿ: ಕೇಂದ್ರದಲ್ಲಿರುವುದು ರೈತರ ಪರ ಸರ್ಕಾರವಲ್ಲ. ರೈತರು ಎಂಎಸ್‌ಪಿಗೆ ಕಾನೂನು ಖಾತ್ರಿಗಾಗಿ ಚಳವಳಿ, ಉಪವಾಸ ಸತ್ಯಾಗ್ರಹ ಮಾಡುತ್ತಿದ್ದಾರೆ. ಆದರೆ ಸರ್ಕಾರ ರೈತರ ಒತ್ತಾಯಗಳಿಗೆ ಮಣಿಯುತ್ತಿಲ್ಲ. ಅದು ಮಾನವೀಯತೆ ಇಲ್ಲದ ಸರ್ಕಾರ. ಆದ್ದರಿಂದಲೇ ಇಷ್ಟೊಂದು ಜನ ಸತ್ತರೂ ಸ್ವಲ್ಪವೂ ಬಗ್ಗಿಲ್ಲ ಎಂದರು.

ತೋರ್ಪಡಿಕೆ ಅಗತ್ಯವಿಲ್ಲ: ಬಿಜೆಪಿಯಲ್ಲಿ ಅಂಬೇಡ್ಕರ್ ಅವರ ಬಗ್ಗೆ ಯಾವ ರೀತಿಯ ಅಭಿಪ್ರಾಯವಿದೆ, ಅವರನ್ನು ಯಾವ ರೀತಿ ಗೌರವಿಸುತ್ತಾರೆ ಎನ್ನುವುದು ಕೇಂದ್ರ ಗೃಹ ಸಚಿವ ಅಮಿತ್ ಷಾ ಹೇಳಿಕೆಯಿಂದ ವ್ಯಕ್ತವಾಗುತ್ತದೆ. ಬಿಜೆಪಿಯವರು ಸಂವಿಧಾನವನ್ನೇ ಬದಲಾವಣೆ ಮಾಡಲು ಹೊರಟಿದ್ದರು. ಆಗ ಅನೇಕ ಮಂತ್ರಿಗಳು ನಾವು ಅಧಿಕಾರಕ್ಕೆ ಬಂದಿರುವುದೇ ಸಂವಿಧಾನ ಬದಲಿಸಲು ಎಂದಿದ್ದರು. ಸಂವಿಧಾನ ರಚನೆಯಾಗಿ ಜಾರಿಯಾದ ಮೇಲೆ ಆರ್‌ಎಸ್‌ಎಸ್‌ನ ಗೋವಾಲ್ಕರ್ ಹಾಗೂ ಹಿಂದೂಮಹಾಸಭಾದ ಸಾವರ್ಕರ್ ವಿರೋಧ ಮಾಡಿದ್ದರು. ಈ ರೀತಿಯ ಭಾವನೆ ಹೊಂದಿರುವ ಬಿಜೆಪಿಯವರು ಮತ್ತೊಂದು ಕಡೆ ಅಂಬೇಡ್ಕರ್ ಪರವಾಗಿ ಅಭಿಯಾನ ಮಾಡುವುದು ಹಾಸ್ಯಾಸ್ಪದವಾಗಿದೆ. ನಾವು ಅವರ ರೀತಿಯಲ್ಲಿ ತೋರ್ಪಡಿಸಿಕೊಳ್ಳುವ ಅಗತ್ಯವಿಲ್ಲ. ನಾವು ಸಂವಿಧಾನಕ್ಕೆ ಬದ್ಧವಾಗಿದ್ದೇವೆ. ನಾವು ಸಂವಿಧಾನವನ್ನು ರಕ್ಷಿಸುತ್ತೇವೆ ಎಂದು ಹೇಳಿದರು. ಎರಡೂವರೆ ವರ್ಷ ಸಿಎಂ ಆಗಲು ಯಾಕಿಷ್ಟು ಒದ್ದಾಟ ಮುಂದಿನ ಬಾರಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲೇ ಚುನಾವಣೆ ಮಾಡಿ, ಅಧಿಕಾರಕ್ಕೆ ಬಂದು ಐದು ವರ್ಷ ಸಿಎಂ ಆಗಲಿ ಬಿಡಿ ಎಂಬ ಸಹಕಾರ ಸಚಿವ ಕೆ.ಎನ್.ರಾಜಣ್ಣ ಹೇಳಿಕೆಗೆ ಪ್ರತಿಕ್ರಿಯಿಸಲು ನಿರಾಕರಿಸಿದ ಸಿಎಂ, ಇದನ್ನು ರಾಜಣ್ಣನ ಬಳಿಯೇ ಕೇಳಿ ಎಂದು ಹೊರಟರು.

ವಿಜಯೇಂದ್ರ ಪರ ಜೈ... ಜೈ...

ಯತ್ನಾಳ್ ವಿರುದ್ಧ ಕಿಡಿಕಾರಿದ್ದಾರೆ. ಮಾಜಿ ಸಚಿವ ರೇಣುಕಾಚಾರ್ಯ ಮಾತನಾಡಿ, ಶಕ್ತಿ ಪ್ರದರ್ಶನಕ್ಕಾಗಿ ಯಡಿಯೂರಪ್ಪೋತ್ಸವ ಮಾಡೇ ಮಾಡುತ್ತೇವೆ. ನೀವು ಒಪ್ಪದೇ ಇದ್ದರೂ ನಾವು ಸಮಾವೇಶ ಮಾಡುವುದು ನಿಶ್ಚಿತ ಎಂದರು. ಅದೇ ವೇಳೆ ಬಹುತೇಕ ನಾಯಕರು ಬಿಜೆಪಿಯಲ್ಲಿ ಪರ್ಯಾಯ ನಾಯಕತ್ವವಿಲ್ಲ. ವಿಜಯೇಂದ್ರ ಅವರ ನೇತೃತ್ವದಲ್ಲೇ ಚುನಾವಣೆಗೆ ಹೋಗಬೇಕು ಎಂದು ಒತ್ತಾಯಿಸಿದರು.

ರೇಣುಕಾಚಾರ್ಯ, ಕಟ್ಟಾ ಸುಬ್ರಮಣ್ಯ ನಾಯ್ಡು, ಅಪ್ಪು ಪಟ್ಟಣಶೆಟ್ಟಿ ಸೇರಿದಂತೆ ಹಲವು ನಾಯಕರು ಯತ್ನಾಳ್ ವಿರುದ್ಧ ಕಿಡಿಕಾರಿದರಲ್ಲದೇ, ಯತ್ನಾಳ್ ಬಣದ ವಿರುದ್ಧ ಏಕೆ ಇನ್ನೂ ಕ್ರಮ ಕೈಗೊಂಡಿಲ್ಲ ಎಂದು ಪ್ರಶ್ನಿಸಿದರು. ಅಲ್ಲದೇ, ಈಗಾಗಲೇ ಕಾಲ ಮಿಂಚಿದೆ. ಯತ್ನಾಳ್ ವಿರುದ್ಧ ತಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು ಎನ್ನಲಾಗಿದೆ.

ಜಿಲ್ಲಾ ಪಂಚಾಯ್ತಿ, ತಾಲೂಕು ಪಂಚಾಯ್ತಿ ಚುನಾವಣೆ ಹಿನ್ನೆಲೆಯಲ್ಲಿ ಪಕ್ಷ ಸಂಘಟನೆಗಾಗಿ ಸಭೆ ಕರೆಯಲಾಗಿದೆ ಎಂದು ವಿಜಯೇಂದ್ರ ಹೇಳಿದರಾದರೂ, ಈ ಸಭೆಯಲ್ಲಿ ವಿಜಯೇಂದ್ರ ಅವರು ರಾಜ್ಯಾಧ್ಯಕ್ಷರಾಗಿ ಮುಂದುವರೆಯಬೇಕು ಹಾಗೂ ಮುಂದಿನ ವಿಧಾನಸಭೆ ಚುನಾವಣೆಯೂ ಅವರ ನೇತೃತ್ವದಲ್ಲೇ ನಡೆಯಬೇಕು. ಯತ್ನಾಳ್ ಬಣದ ವಿರುದ್ಧ ಕ್ರಮ ಕೈಗೊಳ್ಳಬೇಕು ಮತ್ತು ಯಡಿಯೂರಪ್ಪ ಹೆಸರಿನಲ್ಲಿ ಶಕ್ತಿ ಪ್ರದರ್ಶನ ಮಾಡಬೇಕು ಎಂಬ ವಿಚಾರವಾಗಿ ಚರ್ಚೆಗಳು ನಡೆಯಿತು ಎಂದು ಹೇಳಲಾಗಿದೆ. ಈ ಸಭೆಗೆ ಶ್ರೀರಾಮುಲು, ಕುಮಾರ್ ಬಂಗಾರಪ್ಪ, ಸೋಮಶೇಖರ ರೆಡ್ಡಿ, ಮಾಧುಸ್ವಾಮಿ ಸೇರಿದಂತೆ ಹಲವರು ಗೈರಾಗಿದ್ದರು. ಸಭೆಯಲ್ಲಿ ಉಪಸ್ಥಿತರಿದ್ದ ಯಡಿಯೂರಪ್ಪ ಅವರು, ನಾಯಕರು ಚರ್ಚಿಸಿದ ವಿಷಯಗಳನ್ನು ಆಲಿಸಿದ್ದನ್ನು ಬಿಟ್ಟರೆ ಹೆಚ್ಚೇನು ಮಾತನಾಡಲಿಲ್ಲ.

ಭೀಮ ಸಂಗಮ ಅಭಿಯಾನದ ಮೂಲಕ ಪಕ್ಷ ಸಂಘಟನೆ

ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಸಂವಿಧಾನದ ವಿಚಾರದಲ್ಲಿ ಪಕ್ಷಕ್ಕೆ ಆಗಿರುವ ಡ್ಯಾಮೇಜ್ ಕಂಟ್ರೋಲ್ ಮಾಡುವ ಬಗ್ಗೆ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಸಭೆಯಲ್ಲಿ ಪ್ರಸ್ತಾಪಿಸಿದರು.

ಪಕ್ಷದಲ್ಲಿ ಯಾರ್‍ಯಾರಿಗೆ ಭಿನ್ನಾಭಿಪ್ರಾಯ ಇದೆಯೋ ಅವರು ಹೈಕಮಾಂಡ್ ಜೊತೆ ಮಾತನಾಡಿಕೊಳ್ಳಲಿ. ಆದರೆ, ನಾವು ಅತ್ಯಗತ್ಯವಾಗಿ ಪಕ್ಷ ಸಂಘಟನೆ ಮಾಡಬೇಕಿದೆ. ಕಾಂಗ್ರೆಸ್ ವಿರುದ್ಧ ಹೋರಾಟದಲ್ಲಿ ಒಗ್ಗಟ್ಟು ಕಾಯ್ದುಕೊಳ್ಳಬೇಕು. 'ಭೀಮ ಸಂಗಮ' ಅಭಿಯಾನವನ್ನು ಯಶಸ್ವಿಯಾಗಿ ನಡೆಸಬೇಕು ಎಂದು ಹೇಳಿದರು. ಜ. 25ರೊಳಗೆ ರಾಜ್ಯ ವ್ಯಾಪ್ತಿ ಭೀಮ ಸಂಗಮ ಅಭಿಯಾನ ನಡೆಸಲು ತೀರ್ಮಾನಿಸಲಾಗಿದ್ದು, ಅದರ ಜವಾಬ್ದಾರಿಯನ್ನು ಶಾಸಕರು ಹಾಗೂ ಸಂಸದರಿಗೆ ನೀಡಲಾಗಿದೆ. ಈ ಅಭಿಯಾನದಲ್ಲಿ ಎಲ್ಲರೂ ಒಗ್ಗಟ್ಟಿನಿಂದ ಭಾಗವಹಿಸಿ, ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಕೇಂದ್ರದಿಂದ ರಾಜ್ಯಗಳಿಗೆ ತೆರಿಗೆ ಹಂಚಿಕೆ

ಉತ್ತರ ಪ್ರದೇಶಕ್ಕೆ 31,000 ಕೋಟಿ, ಕರ್ನಾಟಕಕ್ಕೆ 6310 ಕೋಟಿ ಬಿಡುಗಡೆ

ಹೊಸದಿಲ್ಲಿ, ಜ.10– ತೆರಿಗೆ ವಿಕೇಂದ್ರೀಕರಣದ ಭಾಗವಾಗಿ ಕೇಂದ್ರ ಸರ್ಕಾರವು ಎಲ್ಲಾ ರಾಜ್ಯ ಸರ್ಕಾರಗಳಿಗೆ ರೂ. 1,73,030 ಕೋಟಿಯನ್ನು ಬಿಡುಗಡೆ ಮಾಡಿದೆ ರಾಜ್ಯಗಳಲ್ಲಿ, ಉತ್ತರ ಪ್ರದೇಶವು ಅತೀ ಹೆಚ್ಚು ತೆರಿಗೆ ಹಂಚಿಕೆಯನ್ನು ಪಡೆದಿದ್ದು, ನಂತರದ ಸ್ಥಾನದಲ್ಲಿ ಬಿಹಾರ ಇದೆ. ಕರ್ನಾಟಕಕ್ಕೆ 6310.40 ಕೋಟಿ ರೂ.ಗಳನ್ನು ತೆರಿಗೆ ಪಾಲಾಗಿ ವಿತರಿಸಿದೆ.

ಪಶ್ಚಿಮ ಬಂಗಾಳವು ರೂ. 13,017.06 ಕೋಟಿಗಳನ್ನು ಪಡೆದಿದ್ದು, ಮಹಾರಾಷ್ಟ್ರ ಮತ್ತು ರಾಜಸ್ಥಾನಕ್ಕೆ ಕ್ರಮವಾಗಿ ರೂ. 10,930.31 ಕೋಟಿ ಮತ್ತು ರೂ. 10,426.78 ಕೋಟಿ ಹಂಚಿಕೆಯಾಗಿದೆ. ಗೋವಾ ಮತ್ತು ಸಿಕ್ಕಿಂನಂತಹ ಸಣ್ಣ ರಾಜ್ಯಗಳು ರೂ. 667.91 ಕೋಟಿ ಮತ್ತು ರೂ. 671.35 ಕೋಟಿಗಳನ್ನು ಪಡೆದಿವೆ. ಡಿಸೆಂಬರ್ 2024ರಲ್ಲಿ 89,086 ಕೋಟಿ ರೂ.ಗಳನ್ನು ರಾಜ್ಯಗಳಿಗೆ ವಿತರಿಸಲಾಗಿತ್ತು.

ರಾಜ್ಯವಾರು ವಿವರ:

ಉತ್ತರ ಪ್ರದೇಶ: 31,039.84 ಕೋಟಿ ರೂ., ಆಂಧ್ರ ಪ್ರದೇಶ: 7002.52 ಕೋಟಿ ರೂ., ಅರುಣಾಚಲ ಪ್ರದೇಶ: 3040.14 ಕೋಟಿ ರೂ., ಅಸ್ಸಾಂ: 5412.38 ಕೋಟಿ ರೂ., ಬಿಹಾರ– 17403.36 ಕೋಟಿ ರೂ., ಛತ್ತೀಸ್‌ಗಢ– 5895.13 ಕೋಟಿ ರೂ., ಗೋವಾ – 667.91 ಕೋಟಿ ರೂ., ಗುಜರಾತ್ – 6017.99 ಕೋಟಿ ರೂ., ಹರ್ಯಾಣ– 1891.22 ಕೋಟಿ ರೂ., ಹಿಮಾಚಲ ಪ್ರದೇಶ– 1436.16 ಕೋಟಿ ರೂ., ಜಾರ್ಖಂಡ್– 5722.10 ಕೋಟಿ ರೂ., **ಕರ್ನಾಟಕ: 6310.40 ಕೋಟಿ ರೂ.** ಕೇರಳ– 3330.83 ಕೋಟಿ ರೂ., ಮಧ್ಯಪ್ರದೇಶ– 13582.86 ಕೋಟಿ ರೂ., ಮಹಾರಾಷ್ಟ್ರ– 10930.31 ಕೋಟಿ ರೂ., ಮಣಿಪುರ– 1238.90 ಕೋಟಿ ರೂ., ಮೇಘಾಲಯ– 1327.13 ಕೋಟಿ ರೂ., ಮಿಜೋರಾಂ– 865.15 ಕೋಟಿ ರೂ., ನಾಗಾಲ್ಯಾಂಡ್– 984.54 ಕೋಟಿ ರೂ., ಒಡಿಶಾ– 7834.80 ಕೋಟಿ ರೂ., ಪಂಜಾಬ್– 3126.65 ಕೋಟಿ ರೂ., ರಾಜಸ್ಥಾನ– 10426.78 ಕೋಟಿ ರೂ., ಸಿಕ್ಕಿಂ– 671.35 ಕೋಟಿ ರೂ., ತಮಿಳುನಾಡು– 7057.89 ಕೋಟಿ ರೂ., ತೆಲಂಗಾಣ– 3637.09 ಕೋಟಿ ರೂ., ತ್ರಿಪುರಾ – 1225.04 ಕೋಟಿ ರೂ., ಉತ್ತರಾಖಂಡ– 1934.47 ಕೋಟಿ ರೂ., ಪಶ್ಚಿಮ ಬಂಗಾಳ– 13017.06 ಕೋಟಿ ರೂ.

ಎಸೆನ್ಸ್ ಸೇವಿಸಿ ಮೂವರು ಕೈದಿಗಳ ಸಾವು ಪ್ರಕರಣ: ಮೈಸೂರು ಜೈಲಲ್ಲಿ ಬೇಕರಿ ಬಂದ್



ಮೈಸೂರು, ಜ.10(ಎಂಕೆ)– ಎಸೆನ್ಸ್ ಸೇವಿಸಿ ಮೂವರು ಕೈದಿಗಳು ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಮೈಸೂರು ಕೇಂದ್ರ ಕಾರಾಗೃಹದಲ್ಲಿದ್ದ ಬೇಕರಿ ಘಟಕವನ್ನು ಬಂದ್ ಮಾಡಲಾಗಿದೆ.

ಕೇಕ್ ತಯಾರಿಕೆಗೆ ಬಳಸುವ ರಸಾಯನಿಕ(ಎಸೆನ್ಸ್) ಸೇವಿಸಿ, ಕೊಳ್ಳೇಗಾಲದ ನಾಗರಾಜ್, ಹಾಸನದ ರಮೇಶ್ ಹಾಗೂ ಸಾತಗಳ್ಳಿಯ ಮಾದೇಶ್ ಮೃತಪಟ್ಟಿದ್ದರು. ಈ ಸಂಬಂಧ ಕಾರಾಗೃಹಗಳ ಡಿಐಜಿ ಕೆ.ಸಿ.ದಿವ್ಯಶ್ರೀ ಇಲಾಖೆ ತನಿಖೆ ನಡೆಸಿದರೆ, ಮುಖ್ಯ ನ್ಯಾಯಿಕ ಮ್ಯಾಜಿಸ್ಟ್ರೇಟ್ ಅವರಿಂದ ನ್ಯಾಯಾಂಗ ತನಿಖೆ ನಡೆದಿದೆ. ಅಲ್ಲದೆ ಅಸ್ವಾಭಾವಿಕ ಸಾವು ಪ್ರಕರಣವನ್ನು ಕೈಗೆತ್ತಿಕೊಂಡಿರುವ ಮಂಡಿ ಪೊಲೀಸರು ಪ್ರಕರಣದ ತನಿಖೆ ನಡೆಸುತಿದ್ದು, ಸದ್ಯಕ್ಕೆ ಜೈಲಿನಲ್ಲಿ ಕೈದಿಗಳು ನಡೆಸುತ್ತಿದ್ದ ಬೇಕರಿಯನ್ನು ಮುಚ್ಚಲಾಗಿದೆ. ವಿಚಾರಣೆ ಮುಗಿದ ಬಳಿಕ ಮತ್ತೆ ತೆರೆಯುವ ನಿರ್ಧಾರ ಕೈಗೊಳ್ಳಲಾಗುವುದು ಎಂದು ಮೈಸೂರು ಕೇಂದ್ರ ಕಾರಾಗೃಹದ ಅಧೀಕ್ಷಕ ಪಿ.ಎಸ್.ರಮೇಶ್ ತಿಳಿಸಿದ್ದಾರೆ.

ಕಾರಾಗೃಹದ ಬೇಕರಿ ಉತ್ಪನ್ನ ಘಟಕದಲ್ಲಿ ಹೊಸ ವರ್ಷಕ್ಕೆ ಕೇಕ್ ತಯಾರಿಸುವಲ್ಲಿ ನಿರತರಾಗಿದ್ದ ಕೈದಿಗಳಾದ ನಾಗರಾಜ್, ರಮೇಶ್ ಮತ್ತು ಮಾದೇಶ್, ಡಿ.24 ರಂದು ಕೇಕ್ ಟೇಸ್ಟ್ ಬರಲೆಂದು ಬಳಸುವ ದ್ರವರೂಪದ ಎಸೆನ್ಸ್ ಕುಡಿದು ತೀವ್ರ ಹೊಟ್ಟೆನೋವಿನಿಂದ ಬಳಲುತ್ತಿದ್ದರು. ನಂತರ ಮೂವರು ಕೈದಿಗಳನ್ನು ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆಗೊಳಪಡಿಸಿದರೂ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ಕಾರಾಗೃಹದ ಅಧಿಕಾರಿಗಳು ತಿಳಿಸಿದ್ದಾರೆ.

ಗುತ್ತಿಗೆದಾರ ಸಚಿನ್ ಆತ್ಮಹತ್ಯೆ ಕೇಸ್: ಪ್ರಿಯಾಂಕ್ ಖರ್ಗೆ ಆಪ್ತ ಸೇರಿ ಐವರ ಬಂಧನ

ಬೀದರ್, ಜ.10– ಯುವ ಗುತ್ತಿಗೆದಾರ ಸಚಿನ್ ಪಾಂಚಾಳ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೊನೆಗೂ ಸಿಐಡಿ ಐವರನ್ನು ಬಂಧಿಸಿದೆ. ಆತ್ಮಹತ್ಯೆಗೂ ಮುನ್ನ ಡೆತ್‌ನೋಟ್ ಬರೆದಿಟ್ಟಿದ್ದ ಬೀದರ್ ಗುತ್ತಿಗೆದಾರ ಸಚಿನ್, ಸಚಿವ ಪ್ರಿಯಾಂಕ್ ಖರ್ಗೆ ಅವರ ಆಪ್ತ ರಾಜು ಕಪನೂರು ಸೇರಿದಂತೆ ಒಟ್ಟು 8 ಜನರ ಹೆಸರನ್ನು ಉಲ್ಲೇಖಿಸಿದ್ದರು. ಈ ಸಂಬಂಧ ಇಂದು (ಜನವರಿ 10) ಸಿಐಡಿ ಅಧಿಕಾರಿಗಳು ಬೀದರ್‌ನಲ್ಲಿ ಐವರು ಆರೋಪಿಗಳನ್ನು ಬಂಧಿಸಿದ್ದಾರೆ. ರಾಜು ಕಪನೂರು, ಘೋರಕ್ ನಾಥ್, ನಂದಕುಮಾರ್ ನಾಗಬುಜಂಗಿ, ರಾಮನಗೌಡಾ ಪಾಟೀಲ್, ಸತೀಶ್ ಎನ್ನುವರನ್ನು ಬಂಧಿಸಲಾಗಿದೆ.

ಪ್ರಕರಣ ಸಂಬಂಧ ತನಿಖೆಗಾಗಿ ಬೀದರ್ ಬಂದಿರುವ ಸಿಐಡಿ ಅಧಿಕಾರಿಗಳು, ಡೆತ್‌ನೋಟ್‌ನಲ್ಲಿ ಉಲ್ಲೇಖವಾಗಿದ್ದ ಹೆಸರಿನವರಿಗೆ ವಿಚಾರಣೆಗೆ ಬರುವಂತೆ ನೋಟಿಸ್ ನೀಡಿತ್ತು. ಅದರಂತೆ ಐವರು ಇಂದು ಬೀದರ್ ರೈಲ್ವೆ ಪೊಲೀಸ್ ಠಾಣೆಗೆ ವಿಚಾರಣೆಗೆ ಹಾಜರಾಗಿದ್ದರು. ಆದರೆ ವಿಚಾರಣೆಯಲ್ಲಿ ಸೂಕ್ತವಾದ ಉತ್ತರ ಬಾರದ ಹಿನ್ನೆಲೆಯಲ್ಲಿ ಸಿಐಡಿ, ಆರೋಪಿಗಳನ್ನು ಬಂಧಿಸಿದೆ. ಈ ಐವರನ್ನು ಇಂದು ಸಂಜೆ ಕೋರ್ಟ್‌ಗೆ ಹಾಜರುಪಡಿಸಲಾಗಿತ್ತು. ಆರೋಪಿಗಳನ್ನು ಐದು ದಿನಗಳ ಕಾಲ ಸಿಐಡಿ ಕಸ್ಟಡಿಗೆ ನೀಡಲಾಗಿದೆ.

ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಗುರಿ ಸಾಧಿಸಲು ಡಿಹೆಚ್‌ಓ ಸೂಚನೆ



ಮೈಸೂರು ಜಿಪಂ ಸಭಾಂಗಣದಲ್ಲಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ವೈದ್ಯಾಧಿಕಾರಿಗಳ 3ನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಮೈಸೂರು, ಜ.10(ಎಂಕೆ)– ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಪ್ರಗತಿ ಸಾಧಿಸಲು ಕಟ್ಟುನಿಟ್ಟಾಗಿ ಕ್ರಮಕೈಗೊಳ್ಳುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಪಿ.ಸಿ.ಕುಮಾರಸ್ವಾಮಿ ಸೂಚನೆ ನೀಡಿದರು.

ಮೈಸೂರು ಜಿಪಂ ಸಭಾಂಗಣದಲ್ಲಿ ನಡೆದ 2024–25ನೇ ಸಾಲಿನ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ವೈದ್ಯಾಧಿಕಾರಿಗಳ 3ನೇ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಆಯುಷ್ಮಾನ್ ಭಾರತ್ ಪ್ರಧಾನ ಮಂತ್ರಿ ಜನ ಆರೋಗ್ಯ ಮತ್ತು ಮುಖ್ಯಮಂತ್ರಿ ಆರೋಗ್ಯ ಕರ್ನಾಟಕ ಕಾರ್ಯಕ್ರಮ, ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳಾದ ಕುಷ್ಠರೋಗ ನಿರ್ಮೂಲನೆ, ಮಾನಸಿಕ ಆರೋಗ್ಯ ಮತ್ತು ಅಂಧತ್ವ ಕಾರ್ಯಕ್ರಮ, ಕುಟುಂಬ ಕಲ್ಯಾಣ ಕಾರ್ಯಕ್ರಮಗಳಾದ ಸಂತಾನಹರಣ ಶಸ್ತ್ರಚಿಕಿತ್ಸೆ, ಪಿಪಿಐಯುಸಿಡಿ, ಪಿಎಐಯುಸಿಡಿ, ಸರ್ವೇಕ್ಷಣಾ ಕಾರ್ಯಕ್ರಮಗಳಾದ ಗೃಹ ಆರೋಗ್ಯ, ಎನ್.ಸಿ.ಡಿ, ಸಿ–ಬ್ಯಾಕ್, ಆಯುಷ್ಮಾನ್ ಆರೋಗ್ಯ ಮಂದಿರಗಳಿಗೆ ನಿವೇಶನ ಗುರುತಿಸುವಿಕೆಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸುವಂತೆ ತಿಳಿಸಿದರು.

ಈ ವೇಳೆ ತಾಯಿ ಆರೋಗ್ಯ, ಮಕ್ಕಳ ಆರೋಗ್ಯ, ಸಾರ್ವತ್ರಿಕ ಲಸಿಕಾ ಕಾರ್ಯಕ್ರಮ, ಆಶಾ ಕಾರ್ಯಕರ್ತೆಯರ ಕಾರ್ಯಚಟುವಟಿಕೆ ಬಗ್ಗೆ ಪರಿಶೀಲನೆ ನಡೆಸಲಾಯಿತು. ಆಶಾ ಕಾರ್ಯಕರ್ತೆಯರು ಮುಷ್ಕರ ಹಿನ್ನೆಲೆಯಲ್ಲಿ ಆರೋಗ್ಯ ಕೇಂದ್ರಗಳು ತೆಗೆದುಕೊಳ್ಳಬೇಕಾದ ಕ್ರಮಗಳ ತಿಳಿಸಲಾಯಿತು. ಸಭೆಯಲ್ಲಿ ಎಲ್ಲಾ ಆರೋಗ್ಯ ಕಾರ್ಯಕ್ರಮಗಳ ಅನುಷ್ಠಾನ ಅಧಿಕಾರಿಗಳು, ತಾಲ್ಲೂಕು ಆರೋಗ್ಯ ಅಧಿಕಾರಿಗಳು, ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು ಮತ್ತು ಆರೋಗ್ಯ ಸಿಬ್ಬಂದಿ ಭಾಗವಹಿಸಿದ್ದರು.


ಬಗರ್ ಹುಕುಂ ಯೋಜನೆ ಅರ್ಹ ಫಲಾನುಭವಿಗಳು ಮೃತಪಟ್ಟಿದ್ದರೂ ಕುಟುಂಬಸ್ಥರಿಗೆ ಭೂಮಿ ಮಂಜೂರು

ರಾಜ್ಯ ಸರ್ಕಾರದ ಮಹತ್ವದ ನಿರ್ಧಾರ

ಬೆಂಗಳೂರು,ಜ.10– ಬಗರ್ ಹುಕುಂ ಯೋಜನೆ ಅಡಿಯಲ್ಲಿ ಅರ್ಜಿ ಸಲ್ಲಿಸಿದ ಅರ್ಹ ಫಲಾನುಭವಿಗಳು ದುರಾದೃಷ್ಟವಶಾತ್ ಮೃತಪಟ್ಟರೆ ಅವರ ಕುಟುಂಬಸ್ಥರಿಗೆ ಕಾನೂನು ಪ್ರಕಾರ ಜಮೀನು ಮಂಜೂರು ಮಾಡಿ ಡಿಜಿಟಲ್ ಸಾಗುವಳಿ ಚೀಟಿ ನೀಡಬೇಕು ಎಂದು ಸಚಿವ ಕೃಷ್ಣ ಬೈರೇಗೌಡ ಅವರು ರಾಜ್ಯದ ಎಲ್ಲಾ ತಹಶೀಲ್ದಾರ್ ಹಾಗೂ ಎಡಿಎಲ್‌ಆರ್‌ಗಳಿಗೆ ಸೂಚಿಸಿದರು.

ವಿಕಾಸಸೌಧದಿಂದ ರಾಜ್ಯದ ಎಲ್ಲಾ ತಹಶೀಲ್ದಾರ್ ಹಾಗೂ ಎಡಿಎಲ್‌ಆರ್ (ಭೂ ದಾಖಲೆಯ ಸಹಾಯ ನಿರ್ದೇಶಕ) ಅಧಿಕಾರಿಗಳ ಜೊತೆ ಶುಕ್ರವಾರ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಅಕ್ರಮ–ಸಕ್ರಮ ಬಗರ್ ಹುಕುಂ ಯೋಜನೆ ಅಡಿಯಲ್ಲಿ ಅರ್ಜಿ ಸಲ್ಲಿಸಿದ ಫಲಾನುಭವಿಗಳು ಜಮೀನು ಪಡೆಯಲು ಅರ್ಹರು. ಅಂತಹವರಿಗೆ ಸಾಗುವಳಿ ಚೀಟಿ ನೀಡುವುದು ಸರ್ಕಾರದ ಕರ್ತವ್ಯ. ಒಂದು ವೇಳೆ ಅರ್ಜಿ ಸಲ್ಲಿಸಿದವರು ಮೃತಪಟ್ಟಿದ್ದರೆ ಅವರಿಗೆ ಸಂಬಂಧಿಸಿದ ಅರ್ಹ ಕುಟುಂಬಸ್ಥರಿಗೆ ಜಮೀನು ಮಂಜೂರುಗೊಳಿಸಬೇಕು ಎಂದು ತಿಳಿಸಿದರು.

ಅನುಕೂಲಸ್ಥರಿಗೆ ಎಲ್ಲಾ ಮಾಹಿತಿ ಇರುತ್ತದೆ. ತಮಗೆ ಬೇಕಾದ ಸರ್ಕಾರಿ ಸವಲತ್ತನ್ನು ತಾವಾಗಿಯೇ ಪಡೆದುಕೊಳ್ಳುತ್ತಾರೆ. ಆದರೆ, ಬಡವರಿಗೆ, ಸಮಾಜದ ಕಟ್ಟಕಡೆಯ ಸ್ತರದಲ್ಲಿ ಬದುಕುತ್ತಿರುವವರಿಗೆ ಮಾಹಿತಿ ಕೊರತೆ ಇರುತ್ತದೆ. ಇಂತಹವರಿಗೆ ಅಧಿಕಾರಿಗಳೇ ಮಾಹಿತಿ ನೀಡಿ ಸರ್ಕಾರಿ ಸವಲತ್ತುಗಳನ್ನು ತಲುಪಿಸಬೇಕು. ಬಗರ್ ಹುಕುಂ ಅರ್ಜಿ ಅರ್ಹವಾಗಿದ್ದಲ್ಲಿ ಅಧಿಕಾರಿಗಳೇ ಜವಾಬ್ದಾರಿ ವಹಿಸಿಕೊಂಡು ಜಮೀನು ಮಂಜೂರು ಮಾಡಬೇಕು ಎಂದು ಸಚಿವರು ಆಗ್ರಹಿಸಿದರು.



ಇದೇ ವೇಳೆ ಅಧಿಕಾರಿಗಳನ್ನು ಪ್ರಶಂಸಿಸಿದ ಸಚಿವರು, ಜ.15ರೊಳಗೆ 15,000 ಫಲಾನುಭವಿಗಳಿಗೆ ಬಗರ್ ಹುಕುಂ ಯೋಜನೆಯ ಅಡಿಯಲ್ಲಿ ಸಾಗುವಳಿ ಚೀಟಿ ನೀಡಬೇಕು ಎಂಬ ಗುರಿಯನ್ನು ಅಧಿಕಾರಿಗಳಿಗೆ ನೀಡಲಾಗಿತ್ತು. ಈ ಗುರಿಯನ್ನು ಸಾಧಿಸಲಾಗದಿದ್ದರೂ ಇದೇ ಅವಧಿಯಲ್ಲಿ ಕನಿಷ್ಟ 5,600ಕ್ಕೂ ಅಧಿಕ ಅರ್ಹ ಫಲಾನುಭವಿಗಳನ್ನು ಗುರುತಿಸಿರುವುದು ಹಾಗೂ ಎಲ್ಲಾ ಜಿಲ್ಲೆ–ತಾಲೂಕುಗಳಲ್ಲೂ ಈ ಸಂಬಂಧ ಸಕಾರಾತ್ಮಕ ಬೆಳವಣಿಗೆ ಕಂಡುಬಂದಿರುವುದು ಉತ್ತಮ ಬೆಳವಣಿಗೆ. ಶೀಘ್ರವೇ ಶಾಸಕರ ನೇತೃತ್ವದಲ್ಲಿ ಸಭೆ ನಡೆಸಿ ಅರ್ಹರಿಗೆ ಜಮೀನು ಮಂಜೂರುಗೊಳಿಸಿ ಎಂದರು.

ರೈತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡಬೇಕು ಎಂಬ ಉದ್ದೇಶದಿಂದಲೇ ಕಳೆದ ಸೆಪ್ಟೆಂಬರ್ 2 ರಿಂದ ಅಭಿಯಾನ ಮಾದರಿಯಲ್ಲಿ 1–5 ನಮೂನೆ ಪೋಡಿ ದುರಸ್ಥಿ ಕೆಲಸಕ್ಕೆ ಚಾಲನೆ ನೀಡಲಾಯಿತು. ಆದರೆ, ಹಲವಾರು ತಾಲೂಕುಗಳಲ್ಲಿ 1–5 ನಮೂನೆ ಪೋಡಿ ದುರಸ್ಥಿ ಮುಗಿದಿದ್ದರೂ ಸಂಬಂಧಪಟ್ಟ ಫೈಲುಗಳನ್ನು 6–10 ನಮೂನೆ ಸರ್ವೇ ಕೆಲಸಕ್ಕಾಗಿ ಭೂ ದಾಖಲೆಯ ಸಹಾಯ ನಿರ್ದೇಶಕರಿಗೆ ಕಳುಹಿಸಲು ತಹಶೀಲ್ದಾರರುಗಳು ಮೀನಾ ಮೇಷ ಎಣಿಸುತ್ತಿರುವುದು ಏಕೆ ಎಂದು ಸಚಿವ ಕೃಷ್ಣ ಬೈರೇಗೌಡ ಕಿಡಿಕಾರಿದರು.

ತಹಶೀಲ್ದಾರರು 1–5 ನಮೂನೆ ಪೋಡಿ ದುರಸ್ಥಿ ಕೆಲಸ ಮುಗಿಸಿ ಎಡಿಎಲ್‌ಆರ್‌ಗೆ ಕಳುಹಿಸಿದರೆ ಮಾತ್ರ ಸರ್ವೇ ಕೆಲಸ ಮುಗಿಸಿ ಜನರಿಗೆ ಸೂಕ್ತ ದಾಖಲೆ ನೀಡುವುದು ಸಾಧ್ಯ. ಜಮೀನು ಮಂಜೂರಾಗಿದ್ದರೂ ಪೋಡಿಯಾಗಿ ಆರ್.ಟಿ.ಸಿ ಆಗದೆ ಇರುವುದರಿಂದ ರೈತರ ಪರಿಸ್ಥಿತಿ ತ್ರಿಶಂಕುವಿನಂತೆ ಆಗಿದೆ. ತಾಲೂಕು ಕಚೇರಿ, ಸರ್ವೆ ಕಛೇರಿಗಳಿಗೆ ಅಲೆದು ಅಲೆದು ಪ್ರಯೋಜನವಾಗದೆ ತೀವ್ರ ತೊಂದರೆಗೆ ತುತ್ತಾಗಿದ್ದಾರೆ.


ಈ ಬಗ್ಗೆ ಬಹಳ ವರ್ಷಗಳಿಂದ ಚರ್ಚೆಗಳು, ಪ್ರಯತ್ನಗಳು ಆಗುತ್ತಿದ್ದರೂ ಸರಿಯಾದ ಪರಿಹಾರ ದೊರೆತಿರುವುದಿಲ್ಲ. ಈಗ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಪೋಡಿ ದುರಸ್ಥಿ ಅಭಿಯಾನಕ್ಕೆ ಚಾಲನೆ ನೀಡಿದರೂ ಸಹ ಅಧಿಕಾರಿಗಳು ಹೀಗೆ ಮಂದಗತಿಯಲ್ಲಿ ಕೆಲಸ ನಿರ್ವಹಿಸುತ್ತಿರುವುದನ್ನು ಸಹಿಸಿಕೊಳ್ಳುವುದು ಸಾಧ್ಯವಿಲ್ಲ ಎಂದು ಸಚಿವರು ಎಚ್ಚರಿಸಿದರು.

ತಹಶೀಲ್ದಾರ್ ನ್ಯಾಯಾಲಯಗಳಲ್ಲಿ 90 ದಿನಗಳಿಗಿಂತ ಹೆಚ್ಚು ಕಾಲ ಯಾವುದೇ ತಕರಾರು ಅರ್ಜಿಗಳನ್ನು ಉಳಿಸಿಕೊಳ್ಳುವಂತಿಲ್ಲ. ಆದರೆ, ಕಳೆದ ವರ್ಷ 10,750ಕ್ಕೂ ಅಧಿಕ ಪ್ರಕರಣಗಳನ್ನು ಬಾಕಿ ಉಳಿಸಲಾಗಿತ್ತು. ಕಳೆದ ಒಂದು ವರ್ಷದಿಂದ ಅಭಿಯಾನ ಮಾದರಿಯಲ್ಲಿ 10,000ಕ್ಕೂ ಅಧಿಕ ಪ್ರಕರಣಗಳನ್ನು ವಿಲೇ ಮಾಡಲಾಗಿದೆ ಆದರೆ, ಉಳಿದ ಪ್ರಕರಣಗಳ ವಿಲೇಗೆ ಅಧಿಕಾರಿಗಳು ಮೀನಾಮೇಷ ಎಣಿಸುತ್ತಿರುವುದು ಏಕೆ ಕೆಲವರು ಮಾಡುತ್ತಿರುವ ಕೆಲಸದಿಂದ ಇಡೀ ಇಲಾಖೆಗೆ ಕೆಟ್ಟ ಹೆಸರು ಎಂದು ಸಚಿವರು ಅಭಿಪ್ರಾಯಪಟ್ಟರು.

ವೈಕುಂಠ ಏಕಾದಶಿ: ಮೈಸೂರು ದೇವಾಲಯಗಳಲ್ಲಿ ಭಕ್ತಸಾಗರ

ವೈಕುಂಠ ದ್ವಾರ ಪ್ರವೇಶಕ್ಕೆ ಎಲ್ಲೆಡೆ ತವಕ







ಮೈಸೂರಿನ ಒಂಟಿಕೊಪ್ಪಲು ಶ್ರೀ ಲಕ್ಷ್ಮೀ ವೆಂಕಟರಮಣ ದೇವಾಲಯದಲ್ಲಿ ಭಕ್ತಸಾಗರ

ಮೈಸೂರು, ಜ. 10(ಆರ್‌ಕೆ)– ವೈಕುಂಠ ಏಕಾದಶಿ ಅಂಗವಾಗಿ ಮೈಸೂರಿನ ಒಂಟಿಕೊಪ್ಪಲು ಶ್ರೀ ಲಕ್ಷ್ಮೀ ವೆಂಕಟರಮಣ ದೇವಾಲಯ ಸೇರಿದಂತೆ ಹಲವು ದೇವಸ್ಥಾನಗಳಲ್ಲಿ ಭಕ್ತರು ಅಪಾರ ಸಂಖ್ಯೆಯಲ್ಲಿ ದೇವರ ದರ್ಶನ ಪಡೆದರು. ಮೈಸೂರಿನ ಒಂಟಿಕೊಪ್ಪಲಿನ ಶ್ರೀ ಲಕ್ಷ್ಮೀವೆಂಕಟರಮಣ ಸ್ವಾಮಿ ದೇವಸ್ಥಾನದ ಲಾರ್ಡ್ ವೆಂಕಟೇಶ್ವರನ ಮೂರ್ತಿಗೆ ಚಿನ್ನದ ಕಿರೀಟ, ಹಸ್ತ ಹಾಗೂ ಮೂರ್ತಿಗೆ ಚಿನ್ನದ ಸರ ಧಾರಣೆ ಮಾಡಿ ಇಡೀ ದೇವಸ್ಥಾನಕ್ಕೆ ಹೂವಿನ ಅಲಂಕಾರ ಮಾಡಲಾಗಿತ್ತು. ಇಂದು ಮುಂಜಾನೆ 5 ಗಂಟೆಯಿಂದಲೇ ಪೂಜಾ ಕೈಂಕರ್ಯಗಳು ಆರಂಭವಾಗಿ ಮುಂಜಾನೆ 5.30ರಿಂದ 5.40 ಗಂಟೆಯೊಳಗೆ ವಿಶೇಷವಾಗಿ ವ್ಯವಸ್ಥೆ ಮಾಡಲಾಗಿದ್ದ ವೈಕುಂಠ ದ್ವಾರ ಪ್ರವೇಶಕ್ಕೆ ಅವಕಾಶ ಮಾಡಿಕೊಡಲಾಯಿತು.

ದೇವರ ದರ್ಶನಕ್ಕಾಗಿ ಸರತಿ ಸಾಲಿನಲ್ಲಿ ಗಂಟೆಗಟ್ಟಲೆ ಭಕ್ತರು ಕಾದಿದ್ದರು. ವಿವಿ ಪುರಂ ಠಾಣೆ ಪೊಲೀಸರು ವೈಕುಂಠ ಏಕಾದಶಿ ಪ್ರಯುಕ್ತ ಭಾರೀ ಬಂದೋಬಸ್ತ್ ಮಾಡಿ, ಭಕ್ತರಿಗೆ ಅನುವು ಮಾಡಿಕೊಟ್ಟರು.

ಜಯನಗರದ ಇಸ್ಕಾನ್ ದೇವಸ್ಥಾನ, ನಂಜನಗೂಡು ರಸ್ತೆಯ ಗಣಪತಿ ಆಶ್ರಮದ ಶ್ರೀ ವೆಂಕಟೇಶ್ವರ ದೇವಸ್ಥಾನ, ಕಲ್ಯಾಣಗಿರಿ ಡಾ. ರಾಜ್‌ಕುಮಾರ್ ರಸ್ತೆಯ ಶ್ರೀ ಕಲ್ಯಾಣ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನ, ಮೈಸೂರು ವಿಜಯನಗರದ ಯೋಗ ನರಸಿಂಹ ಸ್ವಾಮಿ ದೇವಸ್ಥಾನ ಸೇರಿದಂತೆ ಮೈಸೂರು ನಗರದಾದ್ಯಂತ ಎಲ್ಲಾ ವೆಂಕಟೇಶ್ವರ ದೇವಾಲಯಗಳಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ವಿಶೇಷ ಪೂಜಾ ವಿಧಿವಿಧಾನಗಳು ನಡೆದು ಲಕ್ಷಾಂತರ ಭಕ್ತರು ದೇವರ ದರ್ಶನ ಪಡೆದು ಪುನೀತರಾದರು.

ಭಕ್ತರ ಅನುಕೂಲಕ್ಕಾಗಿ ಎಲ್ಲಾ ವಿಷ್ಣು ದೇವಾಲಯಗಳಲ್ಲಿ ಸರದಿ ಸಾಲು ಮಾಡಿ ದೇವರ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ಮುಂಜಾನೆ ಉದಯ ಪೂಜೆ, ಅರ್ಚನೆ, ಅಭಿಷೇಕ, ಮಹಾಮಂಗಳಾರತಿ ಮಾಡಿ ಪ್ರತಿಯೊಬ್ಬ ಭಕ್ತರಿಗೂ ತೀರ್ಥ, ಪ್ರಸಾದ ವಿನಿಯೋಗ ಮಾಡಲಾಯಿತು.

ಹೆಚ್ಚಿನ ಸಂಖ್ಯೆಯಲ್ಲಿ ಭಕ್ತಾದಿಗಳು ದೇವರ ದರ್ಶನಕ್ಕೆ ಆಗಮಿಸಿದ್ದರಿಂದ ಕೆಲ ಸಮಯ ಶ್ರೀ ವೆಂಕಟರಮಣ ದರ್ಶನ ಪಡೆಯಲು ನೂಕು–ನುಗ್ಗಲು ಉಂಟಾಗಿತ್ತು. ಮೈಸೂರಿನ ವಿಜಯನಗರ 1ನೇ ಹಂತದ ಶ್ರೀ ಯೋಗಾ ನರಸಿಂಹಸ್ವಾಮಿ ದೇವಸ್ಥಾನದಲ್ಲಿ ವೈಕುಂಠ ಏಕಾದಶಿ ಅಂಗವಾಗಿ ವಿಶೇಷ ಪೂಜೆ, ಪ್ರಸಾದ ವಿನಿಯೋಗ ಮಾಡಲಾಯಿತಲ್ಲದೆ, ಉದಯಗಿರಿಯ ಶ್ರೀ ರಾಮಮಂದಿರ, ಜಯಲಕ್ಷ್ಮೀಪುರಂನ ಕಾಳಿದಾಸ ರಸ್ತೆ ಶ್ರೀ ಲಕ್ಷ್ಮೀ ನರಸಿಂಹಸ್ವಾಮಿ ದೇವಾಲಯಗಳಲ್ಲೂ ಇಂದು ವೈಕುಂಠ ಏಕಾದಶಿ ಅಂಗವಾಗಿ ವಿಶೇಷ ಪೂಜೆ ನೆರವೇರಿತು.



ಮೈಸೂರಿನ ವಿಜಯನಗರದ ಯೋಗ ನರಸಿಂಹಸ್ವಾಮಿ ದೇವಸ್ಥಾನ



ಶ್ರೀ ಕಲ್ಯಾಣ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನ



ಶ್ರೀ ಗಣಪತಿ ಆಶ್ರಮದ ಶ್ರೀ ವೆಂಕಟೇಶ್ವರ ದೇವಸ್ಥಾನ



ಶ್ರೀ ಗಣಪತಿ ಆಶ್ರಮದ ಶ್ರೀ ವೆಂಕಟೇಶ್ವರ ದೇವಸ್ಥಾನಕ್ಕೆ ಭಕ್ತರ ಸಮೂಹ

ಕುಡಿತ ಬಿಡಿಸುವ ಶಿಬಿರ

ಕುಡಿತದ ಚಟ ಬಿಟ್ಟರೆ ಅದೇ ದೊಡ್ಡ ಸಾಧನೆ!

ಮೈಸೂರು,ಜ.10(ಎಂಟಿವೈ)– ಮದ್ಯ ವ್ಯಸನಿಗಳು ಕುಡಿತದ ಚಟದಿಂದ ಹೊರ ಬರುವುದೇ ಜೀವನದ ಅತೀ ದೊಡ್ಡ ಸಾಧನೆ ಎಂದು ಬಸವ ಮಾರ್ಗ ಸಂಸ್ಥೆಯ ಸಂಸ್ಥಾಪಕ ಬಸವಣ್ಣ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಹೆಬ್ಬಾಳು ಕೈಗಾರಿಕಾ ಪ್ರದೇಶದಲ್ಲಿರುವ ಬಸವ ಮಾರ್ಗ ವ್ಯಸನಮುಕ್ತ ಕೇಂದ್ರದ 5ನೇ ವರ್ಷದ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಆಯೋಜಿಸಿದ್ದ 10 ದಿನಗಳ ಉಚಿತ ಕುಡಿತ ಬಿಡಿಸುವ ಶಿಬಿರದಲ್ಲಿ ಮಾತನಾಡಿದ ಅವರು, ಸಾಮಾನ್ಯ ಜನರ ಬುದ್ಧಿಶಕ್ತಿಗಿಂತ ಕುಡಿತಕ್ಕೆ ದಾಸರಾಗಿರುವವರು ಹೆಚ್ಚಿನ ಬುದ್ಧಿಶಕ್ತಿ ಹೊಂದಿರುವವರೂ, ಶಕ್ತಿಶಾಲಿಗಳು ಆಗಿರುತ್ತಾರೆ. ಈ ಹಿನ್ನೆಲೆಯಲ್ಲಿ ವ್ಯಸನದಿಂದ ಮುಕ್ತರಾದರೆ ಯಾವ ಕ್ಷೇತ್ರದಲ್ಲಿ ನೀವು ತೊಡಗಿಸಿಕೊಳ್ಳುತ್ತೀರೋ ಆ ಕ್ಷೇತ್ರದಲ್ಲಿ ಯಶಸ್ಸು ಸಾಧಿಸಬಹುದು. ಯಾವುದೇ ಕೆಲಸವಾದರೂ ಸರಿ ಅದನ್ನು ಅಚ್ಚುಕಟ್ಟಾಗಿ ಮಾಡಬಹುದು. ಆದರೆ ಕುಡಿತದ ಹವ್ಯಾಸ ಜೀವನವನ್ನು ನರಕದ ಕೂಪಕ್ಕೆ ತಳ್ಳುತ್ತಿದೆ ಎಂದು ವಿಷಾದಿಸಿದರು.



ಬಸವಮಾರ್ಗ ವ್ಯಸನಮುಕ್ತ ಕೇಂದ್ರದಲ್ಲಿ ಕುಡಿತ ಬಿಡಿಸುವ ಶಿಬಿರವನ್ನು ಪತ್ರಕರ್ತ ಎಂ.ಆರ್.ಸತ್ಯನಾರಾಯಣ ಉದ್ಘಾಟಿಸಿದರು.

ಕುಡಿತದ ಚಟಕ್ಕೆ ದಾಸರಾದರೆ ಮನುಷ್ಯ ತನಗೆ ಅರಿವಿಲ್ಲದಂತೆ ತನ್ನ ಜೀವನವನ್ನೇ ಕಳೆದುಕೊಳ್ಳುತ್ತಾನೆ. ಸಮಾಜ, ಕುಟುಂಬದಲ್ಲಿ ಅವನಿಗೆ ಗೌರವ ಸಿಗುವುದಿಲ್ಲ. ಉದ್ಯೋಗದಲ್ಲಿ ಪ್ರಗತಿ ಸಾಧಿಸಲು ಸಾಧ್ಯವಾಗುವುದಿಲ್ಲ. ಸಂಸಾರದಲ್ಲಿ ನೆಮ್ಮದಿ ಇರುವುದಿಲ್ಲ. ಈ ಹಿನ್ನೆಲೆಯಲ್ಲಿ ಬಸವ ಮಾರ್ಗ 6 ವರ್ಷದಲ್ಲಿ ಇದುವರೆಗೆ 46 ಉಚಿತ ಶಿಬಿರಗಳನ್ನು ನಡೆಸಿದೆ. 8 ಸಾವಿರಕ್ಕೂ ಹೆಚ್ಚು ಜನರು ಬಸವ ಮಾರ್ಗದ ಲಾಭ ಪಡೆದು ವ್ಯಸನದಿಂದ ಹೊರ ಬಂದಿದ್ದಾರೆ. ಇದೀಗ 3 ಶಾಖೆಗಳನ್ನು ಪ್ರಾರಂಭಿಸಲು ನಿರ್ಧರಿಸಲಾಗಿದೆ ಎಂದರು. ಇದೆ ವೇಳೆ ಪತ್ರಕರ್ತ ಎಂ.ಆರ್.ಸತ್ಯನಾರಾಯಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕುಡಿತದ ದಾಸ್ಯಕ್ಕೆ ಬಲಿಯಾದ ಮೇಲೆ ಮನುಷ್ಯ ಎಲ್ಲವನ್ನೂ ಕಳೆದುಕೊಳ್ಳುತ್ತಾನೆ. ಮನಸ್ಥಿತಿ ಹಾಳಾಗುತ್ತದೆ. ಹೆಂಡತಿ, ಮಕ್ಕಳು ಬೀದಿ ಪಾಲಾಗುತ್ತಾರೆ. ಸಂಬಂಧಿಕರು ಕಟುವಾಗಿ ಟೀಕೆ ಮಾಡುತ್ತಾರೆ. ಈ ಪ್ರಜ್ಞೆ ಪ್ರತಿಯೊಬ್ಬ ವ್ಯಸನಿಯ ಮನಸ್ಸಿನಲ್ಲಿ ಇರಬೇಕು. ಸುಖವಾದ ಬದುಕನ್ನು ನಿರ್ಮಾಣ ಮಾಡಿಕೊಳ್ಳಲು ನಿಮಗೆ ಇದೊಂದು ಸುವರ್ಣವಾದ ಅವಕಾಶ. ಈ ಅವಕಾಶವನ್ನು ಎಲ್ಲ ವ್ಯಸನಮುಕ್ತ ಕೇಂದ್ರಗಳು ನೀಡುವುದಿಲ್ಲ. ಈ ಕಾರ್ಯಕ್ರಮವನ್ನು ಸದ್ಬಳಕೆ ಮಾಡಿಕೊಂಡು ಹೊಸ ಜೀವನ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮೈಸೂರು ಮತ್ತು ಹಾಸನ ಸ್ನೇಹ ಬಳಗದಿಂದ ಸನ್ಮಾನ



ಮೈಸೂರು ಮತ್ತು ಹಾಸನ ಸ್ನೇಹ ಬಳಗದಿಂದ ಬೆಂಗಳೂರು ಪ್ರೆಸ್ ಕ್ಲಬ್ ವಾರ್ಷಿಕ ಪ್ರಶಸ್ತಿ ಪಡೆದ ದಯಾಶಂಕರ ಮೈಲಿ ಅವರನ್ನು ಸನ್ಮಾನಿಸಲಾಯಿತು. ಈ ವೇಳೆ ಬಳಗದ ಸದಸ್ಯರಾದ ರವೀಂದ್ರ ಹೊನ್ನಪ್ಪ, ಸ್ವೀಟ್ ಮಹೇಶ್, ಡಿವೈ ಎಸ್ಪಿ ರವಿಪ್ರಸಾದ್, ಎಚ್.ಎನ್.ವಾಸುದೇವ್, ಶರತ್, ಭರತ್, ಪ್ರದೀಪ್, ಸಬ್ ಇನ್‌ಸ್ಪೆಕ್ಟರ್ ಎಂ.ಎನ್. ಕುಮಾರ್, ಗೋವಿಂದಣ್ಣ ಬೋಗಾದಿ, ಕ್ಯೂಟ್ ಕೃಷ್ಣೇಗೌಡ, ರಾಜೀವ್, ಪುಟ್ಟಸ್ವಾಮಿಗೌಡ, ಬಾಬು ಜಗದೀಶ್, ಡಿ.ಜಿ. ಚಂದ್ರೇಗೌಡ, ಗಂಗಾಧರ್, ನಾಗರಾಜ್, ಗಣೇಶ್, ಹಾಸನದ ರಘು, ಗಣೇಶ್, ಇಸ್ಮಾಯಿಲ್, ಕಿರಣ, ನಾಗೇಶ್, ಸಕಲೇಶಪುರ ಜೈಭೀಮ್ ಮಂಜು ಮತ್ತಿತರರಿದ್ದರು.

ಕೆಎಸ್‌ಆರ್‌ಟಿಸಿ ಸಬರ್ಬನ್ ಬಸ್ ನಿಲ್ದಾಣ ಸ್ಥಳಾಂತರಕ್ಕೆ ತೀವ್ರ ವಿರೋಧ

ಮುಖ್ಯಮಂತ್ರಿಗಳಿಗೆ ಮನವಿ ಪತ್ರ ಸಲ್ಲಿಸಲು ಹೋಟೆಲ್, ಟ್ಯಾಕ್ಸಿ, ಫೋಟೋ ಸ್ಟುಡಿಯೋ, ಟ್ರಾವೆಲ್ ಏಜೆನ್ಸಿ ಉದ್ಯಮದವರ ನಿರ್ಧಾರ

ಮೈಸೂರು, ಜ.10(ಆರ್‌ಕೆ)–ಮೈಸೂರಿನ ಹೃದಯ ಭಾಗದಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣವನ್ನು ಬನ್ನಿಮಂಟಪಕ್ಕೆ ಸ್ಥಳಾಂತರಿಸಲು ಮುಂದಾಗಿರುವ ಸಾರಿಗೆ ಸಂಸ್ಥೆ ಕ್ರಮಕ್ಕೆ ಹೋಟೆಲ್, ಟ್ಯಾಕ್ಸಿ ಮಾಲೀಕರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡರ ಅಧ್ಯಕ್ಷತೆಯಲ್ಲಿ ಬಿ.ಎನ್.ರಸ್ತೆಯ ಪೈವಿಸ್ತಾ ಹೋಟೆಲ್ ಸಭಾಂಗಣದಲ್ಲಿ ಇಂದು ನಡೆದ ಸಭೆಯಲ್ಲಿ ಪಾಲ್ಗೊಂಡಿದ್ದ ಹೋಟೆಲ್, ಟೆಂಪೋ–ಟ್ಯಾಕ್ಸಿ, ಫೋಟೋ ಸ್ಟುಡಿಯೋ, ಅಂಗಡಿ–ಮುಂಗಟ್ಟು ಮಾಲೀಕರು ಹಾಗೂ ಟ್ರಾವೆಲ್ ಏಜೆನ್ಸಿ ಪ್ರಮುಖರು, ಲಷ್ಕರ್ ಮೊಹಲ್ಲಾದಲ್ಲಿ ಕಳೆದ 45 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಕೆಎಸ್‌ಆರ್‌ಟಿಸಿ ಗ್ರಾಮಾಂತರ ಬಸ್ ನಿಲ್ದಾಣದಿಂದ ಹಲವು ಉದ್ದಿಮೆಗಳು ನಡೆಯುತ್ತಿದ್ದು, ನೂರಾರು ಕುಟುಂಬಗಳಿಗೆ ಆಧಾರವಾಗಿರುವುದಲ್ಲದೆ, ಪ್ರಯಾಣಿಕರು, ಸಾರ್ವಜನಿಕರುಗಳಿಗೆ ಅನುಕೂಲವಾಗುತ್ತಿದೆ ಎಂದರು.

ಬಸ್ ಸ್ಟ್ಯಾಂಡ್ ಸುತ್ತಮುತ್ತ ಟ್ಯಾಕ್ಸಿ–ಟೆಂಪೋ ಸ್ಟ್ಯಾಂಡ್, ಪೀಪಲ್ಸ್ ಪಾರ್ಕ್, ತಹಸೀಲ್ದಾರ್ ಕಚೇರಿ, ಉಪ ನೋಂದಣಾಧಿಕಾರಿ ಕಚೇರಿ, ಸರ್ಕಾರಿ ಅತಿಥಿ ಗೃಹ, ಸೆಂಟ್ ಫಿಲೋಮಿನಾ ಚರ್ಚ್, ಸಿನಿಮಾ ಮಂದಿರ, ಹೋಟೆಲ್, ಅಂಗಡಿ –ಮುಂಗಟ್ಟು ಕೆಆರ್., ಚೆಲುವಾಂಬ ಆಸ್ಪತ್ರೆ, ಮಕ್ಕಾಜಿ ಚೌಕ, ಗಾಂಧಿ ಸ್ಕ್ವೇರ್, ದೇವರಾಜ ಮಾರುಕಟ್ಟೆ, ಶಿವರಾಂಪೇಟೆ, ಸಂತೆಪೇಟೆ, ಬಟ್ಟೆ ಅಂಗಡಿ, ಗೃಹೋಪಯೋಗಿ ವಸ್ತುಗಳ ಮಳಿಗೆಗಳು, ಕಟ್ಟಡ ಸಾಮಗ್ರಿ ಹಾಗೂ ಚಿನ್ನಾಭರಣ ಅಂಗಡಿ ಸೇರಿದಂತೆ ಹಲವು ವಾಣಿಜ್ಯ ಚಟುವಟಿಕೆಗಳಿರುವುದರಿಂದ ಹೊರ ಜಿಲ್ಲೆ ತಾಲೂಕುಗಳಿಂದ ಸಾರಿಗೆ ಬಸ್ಸಿನಲ್ಲಿ ಬರುವ ಗ್ರಾಮಾಂತರ ಪ್ರದೇಶದ ಜನರಿಗೆ ಸಬರ್ಬನ್ ಬಸ್ ನಿಲ್ದಾಣ ಅನುಕೂಲವಾಗುತ್ತಿದೆ ಎಂದು ಹಲವು ತಿಳಿಸಿದರು.

9 ದಿನಗಳ ಕಾಲ ನಡೆಯಲಿರುವ ದಸರಾ ಮಹೋತ್ಸವದಲ್ಲಿ ಬನ್ನಿ ಮಂಟಪದ ಪಂಜಿನ ಕವಾಯಿತು ಮೈದಾನದವರೆಗೂ ವಿದ್ಯುದ್ದೀಪಾಲಂಕಾರ ಮಾಡುವುದರಿಂದ ಲಕ್ಷಾಂತರ ಮಂದಿ ಅಲ್ಲಿ ಓಡಾಡುತ್ತಾರೆ. ಅಲ್ಲಿ ಬಸ್ ನಿಲ್ದಾಣವಿದ್ದರೆ ವಾಹನ ಸಂಚಾರಕ್ಕೆ ತೊಂದರೆ ಉಂಟಾಗುತ್ತದೆ ಎಂದು ಕೆಲವರು ಅಭಿಪ್ರಾಯಪಟ್ಟರೆ, ಸ್ಥಳಾಂತರದಿಂದ ಬಸ್ ನಿಲ್ದಾಣವನ್ನೇ ಅವಲಂಬಿಸಿರುವ ಸಾವಿರಾರು ವ್ಯಾಪಾರಸ್ಥರು, ಉದ್ಯಮಗಳು, ಫುಟ್‌ಪಾತ್ ವ್ಯಾಪಾರಿಗಳ ಹೊಟ್ಟೆ ಮೇಲೆ ಹೊಡೆದಂತಾಗುತ್ತದೆ ಎಂದು ಕೆಲವರು ತಿಳಿಸಿದರು. ಎಲ್ಲರ ಅಭಿಪ್ರಾಯ, ಸಲಹೆಗಳನ್ನು ಪಡೆದ ಬಳಿಕ ವಸ್ತು ಸ್ಥಿತಿಗಳನ್ನೊಳಗೊಂಡಂತೆ ಮನವಿ ಪತ್ರ ಸಿದ್ಧಪಡಿಸಿ ಶೀಘ್ರ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಕೆಎಸ್‌ಆರ್‌ಟಿಸಿ ಸಬರ್ಬನ್ ಬಸ್ ನಿಲ್ದಾಣವನ್ನು ಸ್ಥಳಾಂತರಿಸದಂತೆ ಒತ್ತಾಯಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ಸುತ್ತೂರು ಶ್ರೀಗಳಿಂದ ಫೋಟೋ ಜರ್ನಲಿಸ್ಟ್ ಅಸೋಸಿಯೇಷನ್ ದಿನದರ್ಶಿಕೆ ಬಿಡುಗಡೆ

ಮೈಸೂರು, ಜ.10– ನಗರದ ಫೋಟೋ ಜರ್ನಲಿಸ್ಟ್ ಅಸೋಸಿಯೇಷನ್ ವತಿಯಿಂದ 2025 ದಿನದರ್ಶಿಕೆ ಅನ್ನು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಬಿಡುಗಡೆ ಮಾಡಿದರು.

ಜೆಎಸ್‌ಎಸ್ ಮಹಾ ವಿದ್ಯಾಪೀಠದ ಸಭಾಂಗಣದಲ್ಲಿ ನಡೆದ ಸರಳ ಸಮಾರಂಭದಲ್ಲಿ ಮಾತನಾಡಿದ ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿಗಳು, ನಗರದಲ್ಲಿ ಜರುಗುವ ಎಲ್ಲಾ ಕಾರ್ಯಕ್ರಮಗಳ ಸುದ್ದಿ ಛಾಯಾ ಚಿತ್ರೀಕರಿಸಿ ಜನತೆಗೆ ತಲುಪಿಸುವಲ್ಲಿ ಪತ್ರಿಕಾ ಛಾಯಾಗ್ರಾಹಕರ ಪಾತ್ರ ಮಹತ್ವವಾಗಿದ್ದು, ಅಂತಹವರು ಈ ರೀತಿ ಸಂಘಟನೆಗೊಂಡು ಕ್ಯಾಲೆಂಡರ್ ಬಿಡುಗಡೆ ಮಾಡಿಸುತ್ತಿರುವುದು ಸಂತಸದಾಯಕ ವಿಚಾರವಾಗಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಕಾರ್ಯಕ್ರಮ ಮಾಡುವ ಯಶಸ್ಸು ಸಿಗಲಿ ಎಂದು ಶುಭ ಹಾರೈಸಿದರು. ಈ ವೇಳೆ ಮೈಸೂರು ಕೈಗಾರಿಕೆಗಳ ಸಂಘದ ಅಧ್ಯಕ್ಷ ಕೆ.ಬಿ. ಲಿಂಗರಾಜು, ಜೆಎಸ್‌ಎಸ್ ಮಹಾವಿದ್ಯಾಪೀಠದ ಗೌರವ ಕಾರ್ಯದರ್ಶಿ ಎಸ್.ಪಿ. ಮಂಜುನಾಥ್, ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ.ಬೆಟಸೂರು ಮಠ, ಅಸೋಷಿಯೇಷನ್ ಅಧ್ಯಕ್ಷ ಪ್ರಗತಿ ಗೋಪಾಲಕೃಷ್ಣ, ಉಪಾಧ್ಯಕ್ಷ ಎಸ್.ಆರ್. ಮಧುಸೂದನ್, ಪ್ರಧಾನ ಕಾರ್ಯದರ್ಶಿ ಎಂ.ಎನ್. ಲಕ್ಷ್ಮಿನಾರಾಯಣ ಯಾದವ್, ಖಜಾಂಚಿ ನಂದನ್, ಕಾರ್ಯಕಾರಿ ಸಮಿತಿ ಸದಸ್ಯರಾದ ಎಂ.ಎಸ್.ಬಸವಣ್ಣ, ಕೆ.ಎಚ್. ಚಂದ್ರು, ಎಂ.ಎ.ಶ್ರೀರಾಮ, ಎಸ್.ಉದಯ ಶಂಕರ್, ಹಂಪಾ ನಾಗರಾಜ್, ನಾಗೇಶ್ ಪಾಣತ್ತಲೆ, ಗವಿಮಠ ರವಿ, ಅನೂಪ್ ರಾಘ್, ನಿಶಾಂತ್ ಪಾಲ್, ಕೃಷ್ಣೋಜಿ ರಾವ್ ಇನ್ನಿತರರು ಉಪಸ್ಥಿತರಿದ್ದರು.



ಫೋಟೊ ಜರ್ನಲಿಸ್ಟ್ ಅಸೋಸಿಯೇಷನ್ ವತಿಯಿಂದ 2025ನೇ ಸಾಲಿನ ದಿನದರ್ಶಿಕೆ ಅನ್ನು ಸುತ್ತೂರು ಮಠದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಬಿಡುಗಡೆ ಮಾಡಿದರು.

ದೇಶ - ವಿದೇಶ

ಆಯುಷ್ಮಾನ್ ಭಾರತ್ ಯೋಜನೆಯಡಿ ಚಿಕಿತ್ಸೆ ನಿರಾಕರಿಸಿದ್ದಕ್ಕೆ ವೃದ್ಧ ಆತ್ಮಹತ್ಯೆ

ನವದೆಹಲಿ: ಬೆಂಗಳೂರಿನ ಕಿದ್ವಾಯಿ ಆಸ್ಪತ್ರೆಯಲ್ಲಿ ಆಯುಷ್ಮಾನ್ ಭಾರತ್ (ಎಬಿ–ಪಿಎಂಜೆಎವೈ) ಯೋಜನೆಯಡಿ ಚಿಕಿತ್ಸೆ ನೀಡಲು ನಿರಾಕರಿಸಿದ್ದರಿಂದ ಮನನೊಂದು 72 ವರ್ಷದ ವ್ಯಕ್ತಿಯೊಬ್ಬರು ಆತ್ಮಹತ್ಯೆ ಮಾಡಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ರಾಜ್ಯ ಸರ್ಕಾರದಿಂದ ವರದಿ ಕೇಳಿದೆ.

ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರ ರಾಜ್ಯ ಆರೋಗ್ಯ ಪ್ರಾಧಿಕಾರದಿಂದ ವರದಿ ಕೇಳಿದೆ. ರಾಷ್ಟ್ರೀಯ ಆರೋಗ್ಯ ಪ್ರಾಧಿಕಾರವು ಆಯುಷ್ಮಾನ್ ಭಾರತ್ ಯೋಜನೆಯ ಅನುಷ್ಠಾನದ ಹೊಣೆಯನ್ನು ಹೊತ್ತುಕೊಂಡಿದೆ. ಈ ವ್ಯಕ್ತಿಗೆ ಗ್ಯಾಸ್ಟ್ರಿಕ್ ಕ್ಯಾನ್ಸರ್ ಇರುವುದು ಪತ್ತೆಯಾಯಿತು.

ಆಯುಷ್ಮಾನ್ ಭಾರತ್ ಯೋಜನೆಯಡಿಯಲ್ಲಿ ಚಿಕಿತ್ಸೆ ನಿರಾಕರಿಸಿದ್ದರಿಂದ ಅವರು ಖಿನ್ನತೆಗೆ ಒಳಗಾಗಿದ್ದರು. ತನಗೆ ಕ್ಯಾನ್ಸರ್ ಇರುವುದು ಪತ್ತೆಯಾದ 15 ದಿನಗಳ ನಂತರ ಡಿ.25ರಂದು ಆತ್ಮಹತ್ಯೆ ಮಾಡಿಕೊಂಡಿದ್ದರು ಎಂದು ವರದಿ ಬಹಿರಂಗಪಡಿಸಿದೆ. ಆದರೆ 70 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ವಿಸ್ತರಿಸಿರುವ ಯೋಜನೆ ಇನ್ನೂ ಜಾರಿಯಾಗಿಲ್ಲ ಎಂದು ರಾಜ್ಯ ಸರ್ಕಾರ ಹೇಳಿಕೊಂಡಿದೆ.

ಆದಾಯದ ಮಿತಿಗಳಿಲ್ಲದೆ 70 ವರ್ಷ ಮತ್ತು ಅದಕ್ಕಿಂತ ಹೆಚ್ಚು ವಯಸ್ಸಿನ ಎಲ್ಲಾ ಹಿರಿಯ ನಾಗರಿಕರಿಗೂ ಎಬಿ–ಪಿಎಂಜೆಎವೈ ಅಡಿ ಆರೋಗ್ಯ ವಿಮಾ ಸೌಲಭ್ಯ ಕಲ್ಪಿಸುವುದಾಗಿ ಕೇಂದ್ರ ಸರ್ಕಾರ ಘೋಷಿಸಿತ್ತು.

ಕೆನಡಾ ಸರ್ಕಾರಕ್ಕೆ ದೊಡ್ಡ ಹಿನ್ನಡೆ: ನಿಜ್ಜರ್ ಹತ್ಯೆ ಪ್ರಕರಣದ ನಾಲ್ವರು ಆರೋಪಿಗಳಿಗೆ ಜಾಮೀನು

ಕೆನಡಾ: ಖಲಿಸ್ತಾನ್ ಪರ ಭಯೋತ್ಪಾದಕ ಹರ್ದೀಪ್ ಸಿಂಗ್ ನಿಜ್ಜರ್ ಹತ್ಯೆ ಪ್ರಕರಣದಲ್ಲಿ ಕೆನಡಾ ಸರ್ಕಾರಕ್ಕೆ ದೊಡ್ಡ ಹಿನ್ನಡೆಯಾಗಿದೆ. ಈ ಪ್ರಕರಣದಲ್ಲಿ ನಾಲ್ವರು ಆರೋಪಿಗಳಿಗೆ ನ್ಯಾಯಾಲಯ ಜಾಮೀನು ನೀಡಿದೆ. ಮುಂದಿನ ವಿಚಾರಣೆ ಫೆ.11ರಂದು ನಡೆಯಲಿದೆ. ವಿಚಾರಣೆಗೆ ತಡೆಯಾಜ್ಞೆ ನೀಡಿ ನಾಲ್ವರು ಆರೋಪಿಗಳಿಗೂ ಜಾಮೀನು ನೀಡಲಾಗಿದೆ.

ಈ ನಾಲ್ವರು ಭಾರತೀಯರನ್ನು ಕರಣ್ ಬ್ರಾರ್, ಅಮನ್‌ದೀಪ್ ಸಿಂಗ್, ಕಮಲ್‌ಪ್ರೀತ್ ಸಿಂಗ್ ಮತ್ತು ಕರಣ್‌ಪ್ರೀತ್ ಸಿಂಗ್ ಎಂದು ಗುರುತಿಸಲಾಗಿದ್ದು, ಅವರ ವಿರುದ್ಧ 2024ರ ನವೆಂಬರ್‌ನಲ್ಲಿ ಆರೋಪಪಟ್ಟಿ ಸಲ್ಲಿಸಲಾಗಿತ್ತು. ಹತ್ಯೆ ಆರೋಪ ಹೊತ್ತಿದ್ದವರು ಕೆನಡಾದ ಸುಪ್ರೀಂಕೋರ್ಟ್‌ನಲ್ಲಿ ಜಾಮೀನಿಗಾಗಿ ಮೇಲ್ಮನವಿ ಸಲ್ಲಿಸಿದ್ದರು.

ಹರ್ದೀಪ್ ಸಿಂಗ್ ನಿಜ್ಜರ್‌ನನ್ನು 2023ರ ಜೂನ್‌ನಲ್ಲಿ ಕೆನಡಾದ ಸರ್ರೆಯಲ್ಲಿ ಕೊಲೆ ಮಾಡಲಾಗಿತ್ತು. ಕೊಲೆಗೆ ಸಂಬಂಧಿಸಿದಂತೆ ನಾಲ್ವರನ್ನು ಬಂಧಿಸಲಾಗಿತ್ತು. ಆಗಿನ ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಅವರು ಭಾರತ ಸರ್ಕಾರದ ಏಜೆಂಟರ ಮೇಲೆ ಆರೋಪ ಹೊರಿಸಿದ್ದರು. ಭಾರತ ಸರ್ಕಾರ ಈ ಆರೋಪವನ್ನು ಆಧಾರರಹಿತ ಎಂದು ಕರೆದಿತ್ತು ಟ್ರುಡೊ ಅವರ ಈ ಹೇಳಿಕೆಯ ನಂತರ ಕೆನಡಾ ಮತ್ತು ಭಾರತದ ನಡುವಿನ ಸಂಬಂಧಗಳು ಸಾಕಷ್ಟು ಹದಗೆಟ್ಟಿತ್ತು.

ಕೆನಡಾ ಪ್ರಧಾನಿ ಪಟ್ಟಕ್ಕೆ ಕನ್ನಡಿಗ ಚಂದ್ರ ಆರ್ಯರ ಕಣ್ಣು

ಒಟ್ಟಾವಾ: ಕೆನಡಾ ಪ್ರಸ್ತುತ ರಾಜಕೀಯ ಬಿಕ್ಕಟ್ಟಿನ ಮೂಲಕ ಸಾಗುತ್ತಿದೆ ಕೆನಡಾದ ಪ್ರಧಾನಿ ಜಸ್ಟಿನ್ ಟ್ರುಡೊ ಅವರು ಆಡಳಿತಾರೂಢ ಲಿಬರಲ್ ಪಕ್ಷದ ನಾಯಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ಈಗ ಅವರು ಮುಂದಿನ ಹೊಸ ನಾಯಕನನ್ನು ಆಯ್ಕೆ ಮಾಡುವವರೆಗೆ ದೇಶದ ಪ್ರಧಾನಿ ಹುದ್ದೆಯಲ್ಲಿ ಉಳಿಯುತ್ತಾರೆ. ಇದೀಗ ಪ್ರಧಾನಿ ಹುದ್ದೆಯ ರೇಸ್‌ಗೆ ಕರ್ನಾಟಕ ಮೂಲದ ಸಂಸದ ಚಂದ್ರ ಆರ್ಯ ಅವರ ಹೆಸರು ಸೇರ್ಪಡೆಯಾಗಿದೆ.

ಕೆನಡಾದಲ್ಲಿರುವ ಭಾರತೀಯ ಮೂಲದ ಸಂಸದ ಚಂದ್ರ ಆರ್ಯ ಅವರು ಪ್ರಧಾನಿ ಹುದ್ದೆಗೆ ತಮ್ಮ ಉಮೇದುವಾರಿಕೆಯನ್ನು ಗುರುವಾರ ಪ್ರಕಟಿಸಿದರು. ಕೆನಡಾದ ಮುಂದಿನ ಪ್ರಧಾನಿಯಾಗುವ ಮೂಲಕ ದೇಶದ ಪುನರ್ನಿರ್ಮಾಣ ಮತ್ತು ಸಮೃದ್ಧಿಯ ಕಡೆಗೆ ಕೆಲಸ ಮಾಡಲು ಬಯಸುತ್ತೇನೆ ಎಂದು ಸಾಮಾಜಿಕ ಮಾಧ್ಯಮ ವೇದಿಕೆ ಎಕ್ಸ್‌ನಲ್ಲಿ ಚಂದ್ರ ಆರ್ಯ ಅವರು ಪೋಸ್ಟ್ ಮಾಡಿದ್ದಾರೆ.

ಚಂದ್ರ ಆರ್ಯ ತುಮಕೂರು ಜಿಲ್ಲೆಯ ದ್ವಾರಲು ಗ್ರಾಮದಲ್ಲಿ ಜನಿಸಿದ್ದರು. ಧಾರವಾಡದ ಕರ್ನಾಟಕ ವಿವಿಯಲ್ಲಿ ಎಂಬಿಎ ಪದವಿ ಪಡೆದರು. 2006ರಲ್ಲಿ ಕೆನಡಾಕ್ಕೆ ತೆರಳಿದ ನಂತರ ಅವರು ಮೊದಲು ಇಂಡೋ–ಕೆನಡಾ ಒಟ್ಟಾವಾ ಬಿಸಿನೆಸ್ ಚೇಂಬರ್‌ನ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದರು. 2015ರ ಕೆನಡಾದ ಫೆಡರಲ್ ಚುನಾವಣೆಯಲ್ಲಿ ನೇಪಿಯನ್ ರೈಡಿಂಗ್‌ಗೆ ಸಂಸದರಾದರು, ಅಲ್ಲದೆ 2019 ಮತ್ತು 2021ರಲ್ಲಿ ಮರು ಆಯ್ಕೆಯಾದರು.

ಕುಂಭಮೇಳಕ್ಕೆ ಬರುವವರಿಗೆ ಕೇವಲ 9 ರೂಪಾಯಿಗೆ ಭರ್ಜರಿ ಊಟ!

ಪ್ರಯಾಗ್‌ರಾಜ್: ಮಹಾಕುಂಭಕ್ಕೆ ಬರುವವರಿಗಾಗಿ ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಕೇವಲ 9 ರೂಪಾಯಿಗೆ ಆರೋಗ್ಯಕರ ಊಟವನ್ನು ನೀಡುವ ಸಮುದಾಯ ಅಡುಗೆ ಯೋಜನೆಯಾದ 'ಮಾ ಕಿ ರಸೋಯಿ' (ಅಮ್ಮನ ಅಡುಗೆ ಮನೆ) ಅನ್ನು ಉದ್ಘಾಟಿಸಿದರು. 'ನಂದಿ ಸೇವಾ ಸಂಸ್ಥಾನ'ವು ಪ್ರಯಾಗರಾಜ್‌ನ ಸ್ವರೂಪ್ ರಾಣಿ ನೆಹರು ಆಸ್ಪತ್ರೆಯಲ್ಲಿ ಅಡುಗೆಮನೆಯ ಗುರಿಯನ್ನು ಹೊಂದಿದೆ. ಸಮಾಜದಲ್ಲಿ ಆರ್ಥಿಕವಾಗಿ ದುರ್ಬಲ ವರ್ಗಗಳನ್ನು ಬೆಂಬಲಿಸಲು ರಾಜ್ಯ ಸರ್ಕಾರ ಶುಕ್ರವಾರ ಈ ಯೋಜನೆ ಘೋಷಿಸಿತು. ಈ ಕಾರ್ಯಕ್ರಮದ ಅಡಿಯಲ್ಲಿ ಜನರು ಕೇವಲ 9 ರೂಗಳಲ್ಲಿ ಪೂರ್ಣ ಊಟವನ್ನು ಸವಿಯಬಹುದು ಎಂದು ಸರ್ಕಾರ ಹೇಳಿದೆ ಊಟವು ದಾಲ್, ನಾಲ್ಕು ರೊಟ್ಟಿಗಳು, ತರಕಾರಿ ಪಲ್ಯಗಳು, ಅನ್ನ, ಸಲಾಡ್ ಮತ್ತು ಸಿಹಿತಿಂಡಿಗಳನ್ನು ಒಳಗೊಂಡಿರುತ್ತದೆ. ಉದ್ಘಾಟನೆಯ ನಂತರ, ಕೈಗಾರಿಕಾ ಅಭಿವೃದ್ಧಿ ಸಚಿವ ನಂದಗೋಪಾಲ್ ಗುಪ್ತಾ ಅವರು ಸಿಎಂಗೆ ಅಲ್ಲಿ ಆಹಾರದ ಗುಣಮಟ್ಟ, ನೈರ್ಮಲ್ಯ ಮಾನದಂಡಗಳು ಮತ್ತು ಇತರ ವ್ಯವಸ್ಥೆಗಳ ಬಗ್ಗೆ ಮಾಹಿತಿ ನೀಡಿದರು.

ಮಾ ಕಿ ರಸೋಯಿ, ಸಂಪೂರ್ಣ ಎಸಿ, ಆರೋಗ್ಯಕರ ಮತ್ತು ಆಧುನಿಕ ರೆಸ್ಟೋರೆಂಟ್, ಎಸ್‌ಆರ್‌ಎನ್ ಕ್ಯಾಂಪಸ್‌ನಲ್ಲಿ ಸುಮಾರು 2000 ಚದರ ಅಡಿ ಪ್ರದೇಶದಲ್ಲಿ ನಂದಿ ಸೇವಾ ಸಂಸ್ಥಾನದಿಂದ ಸಿದ್ಧಪಡಿಸಲಾಗಿದೆ. ಒಂದು ಸಮಯದಲ್ಲಿ ಸುಮಾರು 150 ಜನರು ಒಟ್ಟಿಗೆ ಕುಳಿತು ತಿನ್ನಲು ಸಾಧ್ಯವಾಗುತ್ತದೆ ಎಂದು ಅದು ಹೇಳಿದೆ.

ದಂಪತಿ, ಮೂವರು ಮಕ್ಕಳು ಸೇರಿ ಒಂದೇ ಕುಟುಂಬದ ಐವರು ಶವವಾಗಿ ಪತ್ತೆ

ಮೀರತ್: ಉತ್ತರ ಪ್ರದೇಶದ ಮೀರತ್ ಜಿಲ್ಲೆಯಲ್ಲಿ ನಡೆದ ಆಘಾತಕಾರಿ ಘಟನೆಯಲ್ಲಿ ಲಿಸಾರಿ ಗೇಟ್ ಪ್ರದೇಶದ ಸೊಹೈಲ್ ಗಾರ್ಡನ್‌ನಲ್ಲಿರುವ ಮನೆಯಲ್ಲಿ ಒಂದೇ ಕುಟುಂಬದ ಐವರ ಶವ ಪತ್ತೆಯಾಗಿವೆ.

ಒಬ್ಬ ಪುರುಷ, ಒಬ್ಬ ಮಹಿಳೆ ಮತ್ತು ಅವರ ಮೂವರು ಹೆಣ್ಣುಮಕ್ಕಳನ್ನು ಒಳಗೊಂಡ ಕುಟುಂಬವನ್ನು ಕ್ರೂರವಾಗಿ ಹತ್ಯೆ ಮಾಡಲಾಗಿದೆ ಎಂದು ಹೇಳಲಾಗಿದೆ, ಆದಾಗ್ಯೂ, ಅವರ ಸಾವಿಗೆ ನಿಖರವಾದ ಕಾರಣ ಇನ್ನೂ ತಿಳಿದುಬಂದಿಲ್ಲ.

ಮೃತರನ್ನು ಮೊಯಿನ್, ಅವರ ಪತ್ನಿ ಅಸ್ಮಾ, ಮೂವರು ಹೆಣ್ಣು ಮಕ್ಕಳಾದ ಅಫ್ಸಾ (8), ಅಜೀಜಾ (4) ಮತ್ತು ಅಡಿಬಾ (1) ಎಂದು ಗುರುತಿಸಲಾಗಿದೆ. ಶವಗಳನ್ನು ವಶಕ್ಕೆ ಪಡೆದು ಮರಣೋತ್ತರ ಪರೀಕ್ಷೆಗೆ ಮೃತದೇಹಗಳನ್ನು ಕಳುಹಿಸಲಾಗಿದೆ ಎಂದು ಅವರು ಹೇಳಿದರು. ಮನೆಗೆ ಹೊರಗಿನಿಂದ ಬೀಗ ಹಾಕಲಾಗಿದ್ದು ಛಾವಣಿ ಮೂಲಕ ಒಳಗೆ ಹೋಗಿ ನೋಡಿದಾಗ ಮೃತದೇಹಗಳು ಪತ್ತೆಯಾದವು. ಮೂರು ಮಕ್ಕಳ ಶವಗಳನ್ನು ಮಂಚದ ಬಾಕ್ಸ್‌ನಲ್ಲಿ ಇಡಲಾಗಿತ್ತು. ಮೊಹಿನ್ ಕಾಲುಗಳನ್ನು ಬೆಡ್‌ಶೀಟ್‌ನಿಂದ ಕಟ್ಟಲಾಗಿತ್ತು ಎಂದು ಹಿರಿಯ ಪೊಲೀಸ್ ಅಧೀಕ್ಷಕ ವಿಪಿನ್ ತಾಡ ತಿಳಿಸಿದ್ದಾರೆ.

ಅರಣ್ಯ ಇಲಾಖೆ ನೋಟಿಸ್‌ಗೆ ಪುರಸಭೆ ಸದಸ್ಯರ ಆಕ್ರೋಶ



ವಿರಾಜಪೇಟೆ ಪುರಸಭೆ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಅರಣ್ಯ ಇಲಾಖೆ ನೋಟಿಸ್ ವಿರುದ್ಧ ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು.

ವಿರಾಜಪೇಟೆ, ಜ.10–ಪುರಸಭೆ ವ್ಯಾಪ್ತಿಯ ನೆಹರು ನಗರ ಸೇರಿದಂತೆ ಇತರೆ ಸುಮಾರು 65 ಎಕರೆ ಪ್ರದೇಶವನ್ನು ಮೀಸಲು ಅರಣ್ಯ ಎಂದು 45 ಕುಟುಂಬಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ. ಅಲ್ಲಿ ಜನರು ಸುಮಾರು 50 ವರ್ಷಗಳಿಂದಲ್ಲೂ ವಾಸವಿದ್ದು, ಅವರಿಗೆ ಮೂಲಸೌಕರ್ಯ ಒದಗಿಸಲಾಗಿದೆ. ಆದರೂ, ಅರಣ್ಯ ಇಲಾಖೆಯಿಂದ ಏಕಾಏಕಿ ನೋಟಿಸ್ ನೀಡಲಾಗಿದೆ ಎಂದು ಸಭೆಯಲ್ಲಿ ಪುರಸಭೆ ಸದಸ್ಯರು ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಪುರಸಭೆ ಸಭಾಂಗಣದಲ್ಲಿ ಅಧ್ಯಕ್ಷೆ ಎಂ.ಕೆ.ದೇಚಮ್ಮ ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಸದಸ್ಯ ಮಹಮ್ಮದ್ ರಫಿ, ಅರಣ್ಯ ಇಲಾಖೆಯ ನೋಟಿಸ್‌ಗೆ ಆಕ್ರೋಶ ವ್ಯಕ್ತಪಡಿಸಿದರು. ಇದಕ್ಕೆ ಧ್ವನಿಗೂಡಿಸಿದ ಸದಸ್ಯರಾದ ಅನಿತಾ ಮತ್ತು ಅಗಸ್ಟಿನ್ ಬೆನ್ನಿ ಅವರು ಅಲ್ಲಿ ಬಹುತೇಕ ಕಾರ್ಮಿಕರಿದ್ದು, ನೋಟಿಸ್ ನೀಡಿರುವುದರಿಂದ ಆ ಕುಟುಂಬಗಳಿಗೆ ತೊಂದರೆಯಾಗಲಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ನಂತರ ಅಧ್ಯಕ್ಷೆ ದೇಚಮ್ಮ ಸಭೆಯಲ್ಲಿದ್ದ ಅರಣ್ಯಾಧಿಕಾರಿ ದೇವಯ್ಯ ಅವರಿಗೆ ಪುರಸಭೆ ಗಮನಕ್ಕೆ ತರದೆ ನೋಟಿಸ್ ನೀಡಿರುವುದು ಸರಿಯಾದ ನಡೆಯಲ್ಲ. ನಮಗೆ ಮಾಹಿತಿ ನೀಡಿದ್ದರೆ ಪರಿಶೀಲಿಸಿ, ಶಾಸಕರೊಂದಿಗೆ ಚರ್ಚೆ ನಡೆಸಿ ಜನರ ಹಿತ ಕಾಯುವ ಕೆಲಸ ಮಾಡಬಹುದಿತ್ತು ಎಂದರು.

ಬಳಿಕ ಮಾತನಾಡಿದ ಅರಣ್ಯಾಧಿಕಾರಿ ದೇವಯ್ಯ, ನೋಟಿಸ್ ನಾವು ನೀಡಿಲ್ಲ. ಮೈಸೂರಿನ ಅರಣ್ಯ ವಿಭಾಗದ ವಿಶೇಷ ವಯಲದಿಂದ ನೋಟಿಸ್ ಜಾರಿಯಾಗಿದೆ. ಇದು 1991ರಲ್ಲಿ ಮೀಸಲು ಅರಣ್ಯ ಎಂದು 65 ಎಕರೆ ಜಾಗವನ್ನು ಗುರುತಿಸಲಾಗಿದೆ ಎಂದು ಮಾಹಿತಿ ನೀಡಿದರು. ಇದೇ ವೇಳೆ ಸದಸ್ಯರು ಅರಣ್ಯ ಇಲಾಖೆ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

ಸಭೆಯಲ್ಲಿ ಪುರಸಭೆ ಉಪಾಧ್ಯಕ್ಷೆ ಫಸಿಹಾ ತಬಸಮ್, ಸದಸ್ಯರಾದ ಸಿ.ಕೆ.ಪ್ರಥ್ವಿನಾಥ್, ರಂಜಿ ಪೂಣಚ್ಚ ಡಿ.ಪಿ.ರಾಜೇಶ್, ಪೂರ್ಣಿಮಾ, ಮುಖ್ಯಾಧಿಕಾರಿ ಚಂದ್ರ ಕುಮಾರ್, ನೀರು ಸರಬರಾಜು ಇಲಾಖೆ ಇಂಜಿನಿಯರ್ ಸುರೇಶ್, ಸಹಾಯಕ ಇಂಜಿನಿಯರ್ ಅಭಿಷೇಕ್, ಇಂಜಿನಿಯರ್ ರಾಮಚಂದ್ರ, ನಿರ್ಮಿತಿ ಕೇಂದ್ರದ ಅಧಿಕಾರಿ ಶಶಾಂಕ್, ಅಧಿಕಾರಿ ಸಿಂಧು, ಗುತ್ತಿಗೆದಾರ ಕೃಷ್ಣಪ್ಪ ಉಪಸ್ಥಿತರಿದ್ದರು.

ಕನ್ನಿಕಾಪರಮೇಶ್ವರಿ ದೇವಾಲಯದಲ್ಲಿ ವೈಕುಂಠ ಏಕಾದಶಿ



ಕುಶಾಲನಗರದ ಕನ್ನಿಕಾ ಪರಮೇಶ್ವರಿ ದೇವಾಲಯ ಮುಂಭಾಗ ವೈಕುಂಠ ದ್ವಾರ ನಿರ್ಮಿಸಿರುವುದು

ಕುಶಾಲನಗರ: ಪಟ್ಟಣದ ರಥಬೀದಿಯ ಕನ್ನಿಕಾ ಪರಮೇಶ್ವರಿ ದೇವಾಲಯದಲ್ಲಿ ಶುಕ್ರವಾರ ವೈಕುಂಠ ಏಕಾದಶಿ ನಡೆಯಿತು.

ದೇವಾಲಯ ಮುಂಭಾಗ ವೈಕುಂಠ ದ್ವಾರ ನಿರ್ಮಿಸಲಾಗಿತ್ತು. ದೇವಾಲಯವನ್ನು ತಳಿರು ತೋರಣ ಹಾಗೂ ಬಗೆ ಬಗೆಯ ಪುಷ್ಪಗಳಿಂದ ಅಲಂಕರಿಸಲಾಗಿತ್ತು. ದೇವಾಲಯ ಉತ್ತರ ದ್ವಾರದಲ್ಲಿ ಮಹಾವಿಷ್ಣುವಿನ ದ್ವಾರ ನಿರ್ಮಿಸಲಾಗಿತ್ತು. ಬೆಳಗ್ಗೆಯಿಂದಲೇ ದೇವಾಲಯಕ್ಕೆ ಭಕ್ತರು ಆಗಮಿಸಿ ಮಹಾವಿಷ್ಣುವಿನ ದರ್ಶನ ಪಡೆದು ವೈಕುಂಠ ದ್ವಾರದಲ್ಲಿ ಪ್ರವೇಶಿಸಿ ಪುನೀತರಾದರು. ಇದೇ ವೇಳೆ ದೇವಾಲಯ ಅರ್ಚಕರಾದ ಗಿರೀಶ್ ಭಟ್, ಯೋಗೇಶ ಭಟ್, ಆರ್ಯ ವೈಶ್ಯ ಮಂಡಳಿ ಅಧ್ಯಕ್ಷ ಬಿ.ಎಲ್. ಉದಯಕುಮಾರ್, ಕಾರ್ಯದರ್ಶಿ ಬಿ.ಎಲ್.ಅಶೋಕ್ ಕುಮಾರ್, ಪ್ರಮುಖರಾದ ಎಸ್.ಎನ್.ನಾಗೇಂದ್ರ, ಎಂ.ಪಿ.ಸತ್ಯ ನಾರಾಯಣ, ಬಿ.ಆರ್.ನಟರಾಜು, ಎಸ್.ಕೆ.ಸತೀಶ್, ಕೆ.ಜೆ.ರಮೇಶ್, ಲಕ್ಷ್ಮಿ ಶ್ರೀನಿವಾಸ್, ವಾಸವಿ ಯುವಜನ ಸಂಘದ ಅಧ್ಯಕ್ಷ ಪ್ರವೀಣ್ ಇದ್ದರು.

ವಿ.ಪೇಟೆ–ಮಾಕುಟ್ಟ ರಸ್ತೆ ಕಾಮಗಾರಿಗೆ ಚಾಲನೆ

● ಔತಣಕೂಟ ಸಭೆ ತಾತ್ಕಾಲಿಕ ಮುಂದೂಡಿಕೆ ● ಸಚಿವ ಸತೀಶ್ ಜಾರಕಿಹೊಳಿ ಹೇಳಿಕೆ



ವಿರಾಜಪೇಟೆ–ಮಾಕುಟ್ಟ ಸಂಪರ್ಕ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಸಚಿವ ಸತೀಶ್ ಜಾರಕಿಹೊಳಿ ಭೂಮಿಪೂಜೆ ನೆರವೇರಿಸಿದರು.

ಮಡಿಕೇರಿ, ಜ.10–ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಗಳು ಜ.13ರಂದು ಬೆಂಗಳೂರಿಗೆ ಬರುವುದಾಗಿ ಮಾಹಿತಿ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಗೃಹ ಸಚಿವ ಜಿ.ಪರಮೇಶ್ವರ್ ಅವರು ಏರ್ಪಡಿಸಿದ್ದ ಔತಣಕೂಟ ಸಭೆಯನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದರು.

ವಿರಾಜಪೇಟೆ–ಮಾಕುಟ್ಟ ಸಂಪರ್ಕ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಔತಣಕೂಟಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿರೋಧ ವ್ಯಕ್ತಪಡಿಸಿಲ್ಲ. ಇದಕ್ಕೆ ರಾಜಕೀಯ ಬೆರೆಸುವ ಅಗತ್ಯವಿಲ್ಲ. ಔತಣಕೂಟ ಸಭೆ ಅಜೆಂಡಾದ ಬಗ್ಗೆ ಮಾಹಿತಿ ಇಲ್ಲ ಎಂದು ಹೇಳಿದರು.

ಡಿಸಿಎಂ ಡಿ.ಕೆ.ಶಿವಕುಮಾರ್ ಶತ್ರುಯಾಗ ನಡೆಸಿದ ಕುರಿತು ಪ್ರತಿಕ್ರಿಯಿಸಿದ ಸಚಿವ ಜಾರಕಿಹೊಳಿ, ಅವರವರ ಭಕ್ತಿ, ಭಾವನೆ ಅವರಿಗೆ ಬಿಟ್ಟ ವಿಚಾರವಾಗಿದೆ. ಅಧಿಕಾರ ಇದ್ದ ಪಕ್ಷದಲ್ಲಿ ಭಿನ್ನಾಭಿಪ್ರಾಯ, ಒಳಜಗಳ ಸಹಜ. ಎಲ್ಲಾ ಪಕ್ಷಗಳಲ್ಲೂ ಅದು ಇರುತ್ತದೆ ಎಂದರು.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ 60 ಪರ್ಸೆಂಟ್ ಕಮಿಷನ್ ಆರೋಪಕ್ಕೆ ಪ್ರತಿಕ್ರಿಯಿಸಿದ ಸಚಿವರು, ಈಗಾಗಲೇ ಮುಖ್ಯಮಂತ್ರಿಗಳು 60 ಪರ್ಸೆಂಟ್ ಕಮಿಷನ್ ಆರೋಪಕ್ಕೆ ದಾಖಲೆ ನೀಡುವಂತೆ ಹೇಳಿದ್ದಾರೆ. ಅವರು ದಾಖಲೆ ನೀಡಿದರೆ ಸರ್ಕಾರ ತನಿಖೆ ನಡೆಸುತ್ತದೆ ಎಂದು ಹೇಳಿದರು.

ಕೊಡಗು ಜಿಲ್ಲೆಯ ರಸ್ತೆಗಳನ್ನು ಹಂತ ಹಂತವಾಗಿ ಅಭಿವೃದ್ಧಿಗೊಳಿಸಲಾಗುವುದು. ವಿರಾಜಪೇಟೆ–ಮಾಕುಟ್ಟ ಸಂಪರ್ಕ ರಸ್ತೆ ಕಾಮಗಾರಿ ಸಂಬಂಧಿಸಿದಂತೆ ಅನುದಾನ ಮಂಜೂರು ಮಾಡಲಾಗಿದ್ದು, ಕಾಮಗಾರಿ ಆರಂಭಿಸಲಾಗಿದೆ. ಕಳೆದ ವರ್ಷದ ಅವಧಿಯಲ್ಲಿ ವಿರಾಜಪೇಟೆ ಕ್ಷೇತ್ರ ವ್ಯಾಪ್ತಿಗೆ ಒಟ್ಟು 60 ಕೋಟಿ ರೂ. ಅನುದಾನ ನೀಡಲಾಗಿದೆ. ಮೊದಲ ಆದ್ಯತೆಯಾಗಿ ಕೇರಳ–ಬೆಂಗಳೂರನ್ನು ಸಂಪರ್ಕಿಸುವ ಮಾಕುಟ್ಟ ರಸ್ತೆ ಅಭಿವೃದ್ಧಿ ಮತ್ತು 5 ಮೀ.ನಿಂದ 7 ಮೀ.ವರೆಗೆ ರಸ್ತೆ ಅಗಲೀಕರಣ ಕಾಮಗಾರಿ ನಡೆಸಲಾಗುತ್ತಿದೆ ಎಂದರು.

ಈ ವೇಳೆ ಶಾಸಕ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಧರ್ಮಜಾ ಉತ್ತಪ್ಪ, ಪಕ್ಷ ಪ್ರಮುಖರು ಹಾಜರಿದ್ದರು.

ಅಧಿಕಾರಿಗಳಿಂದ ಹೆದ್ದಾರಿ ಅಭಿವೃದ್ಧಿ ಮಾಹಿತಿ

ಇದೇ ವೇಳೆ ವಿರಾಜಪೇಟೆ–ಮಾಕುಟ್ಟ ರಸ್ತೆ ಕಾಮಗಾರಿ ಕುರಿತು ಸ್ಥಳದಲ್ಲಿದ್ದ ಲೋಕೋಪಯೋಗಿ ಇಲಾಖೆ ಹಾಗೂ ಹೆದ್ದಾರಿ ಪ್ರಾಧಿಕಾರ ಅಧಿಕಾರಿಗಳಿಂದ ಸಚಿವ ಸತೀಶ್ ಜಾರಕಿಹೊಳಿ ಮಾಹಿತಿ ಪಡೆದರು. ವಿರಾಜಪೇಟೆ–ಮಾಕುಟ್ಟ ರಸ್ತೆ ಒಟ್ಟು 19 ಕಿಮೀ ಉದ್ದವಿದ್ದು, ಈ ಪೈಕಿ 4.2 ಕಿಮೀ ರಾಜ್ಯ ಹೆದ್ದಾರಿ ಹಾಗೂ 4 ಕಿಮೀ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಪಡಿಸಲಾಗುವುದು ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಸ್ವಾತಂತ್ರ್ಯ ಸಿಕ್ಕಿ ಹಲವು ವರ್ಷ ಕಳೆದರೂ ರೈತರ ಸಮಸ್ಯೆ ಮಾತ್ರ ಬಗೆಹರಿದಿಲ್ಲ

ಮದ್ದೂರು, ಜ.10– ಸ್ವಾತಂತ್ರ್ಯ ಬಂದು ಹಲವು ವರ್ಷಗಳೇ ಕಳೆದಿದ್ದರೂ ರೈತರು ದಿನನಿತ್ಯ ಹಲವು ಸವಾಲುಗಳನ್ನು ಎದುರಿಸುವಂತಹ ಸ್ಥಿತಿ ಕಾಣಸಿಗುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ತಿಳಿಸಿದರು.

ತಾಲೂಕಿನ ಚಾಕನಕೆರೆ ಗ್ರಾಮದಲ್ಲಿ ಕೆರೆಗೆ ಬಾಗಿನ ಸಮರ್ಪಣೆ ನಂತರ ಮಲ್ಲನಕುಪ್ಪೆ ಗ್ರಾಮದಲ್ಲಿ ಪ್ರಗತಿಪರ ರೈತರಿಗೆ ಅಭಿನಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, 2030ಕ್ಕೆ ಅಭಿವೃದ್ಧಿಯಲ್ಲಿ ವಿಶ್ವದಲ್ಲೇ ದೇಶವು ಮೂರನೇ ಸ್ಥಾನಕ್ಕೆ ತಲುಪಲಿದೆ. ಆದರೂ ರೈತರು ಹಲವು ಸಂಕಷ್ಟಗಳನ್ನು ಎದುರಿಸುತ್ತಿರುವುದು ವಿಷಾದನೀಯವೆಂದರು.

ವೈಕುಂಠ ಏಕಾದಶಿಯ ಪವಿತ್ರ ದಿನವಾಗಿದ್ದು ವೆಂಕಟೇಶ್ವರ ಸ್ವಾಮಿಯ ಆಶೀರ್ವಾದ ಪಡೆದು ಈ ಕಾರ್ಯಕ್ರಮಕ್ಕೆ ಬಂದಿರುವೆ. ಸಮಸ್ತರಿಗೂ ದೇವರ ಅನುಗ್ರಹ ಸಿಗಲೆಂದು ಪ್ರಾರ್ಥಿಸುವುದಾಗಿ ಹೇಳಿದರಲ್ಲದೆ ಸಂಕ್ರಾಂತಿ ಹಬ್ಬವನ್ನು ರೈತರು ಉತ್ಸುಕತೆಯಿಂದ ಆಚರಿಸುತ್ತಾ ಬಂದಿದ್ದು ಅವರಿಗೂ ಸಂಕ್ರಾಂತಿ ಹಬ್ಬದ ಶುಭಾಶಯಗಳನ್ನು ಕೋರುವುದಾಗಿ ಹೇಳಿದರು.

ಮದ್ದೂರು ಕ್ಷೇತ್ರದ ಅಭಿವೃದ್ಧಿಗೆ ಎಸ್.ಎಂ. ಕೃಷ್ಣ ಅವರು ಮುಖ್ಯಮಂತ್ರಿಗಳಾಗಿದ್ದ ವೇಳೆ ಹಾಗೂ ನಂತರದ ದಿನಗಳಲ್ಲೂ ಚಾಲನೆ ಸಿಕ್ಕಿದ್ದು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಹಗಲಿರುಳು ಶ್ರಮಿಸುವ ಮೂಲಕ ಈ ಭಾಗದ ಜನರಿಗೆ ಹಲವು ಯೋಜನೆಗಳನ್ನು ಕಲ್ಪಿಸಿದ್ದಾರೆಂದರು.

ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಬೇಸರ

"ಕಾಂಗ್ರೆಸ್ ನವರು ಡಿನ್ನರ್ ಮೀಟಿಂಗ್ ಸೇರ್ತಾರೋ, ಇನ್ಯಾವುದಕ್ಕೋ ಸೇರ್ತಾರೋ ನನಗೆ ಗೋತ್ತಿಲ್ಲದ ವಿಚಾರ. ಗೃಹ ಸಚಿವ ಪರಮೇಶ್ವರ್ ಮನೆಯ ಔತಣಕೂಟಕ್ಕೆ ಸೇರುವ ವಿಚಾರಕ್ಕೆ ಕಾರಣ ನೀಡಿದ್ದಾರೆ. ಎಸ್‌ಸಿ, ಎಸ್‌ಟಿ ವಿದ್ಯಾರ್ಥಿಗಳ ಸ್ಕಾಲರ್‌ಶಿಪ್ ಬಗ್ಗೆ ಮಾತಾಡುತ್ತೇವೆ ಎಂದಿದ್ದಾರೆ. ಆಗಿದ್ರೆ ಕ್ಯಾಬಿನೆಟ್ ಇರೋದು ಏಕೆ?. ಇವರು ಔತಣಕೂಟ ಮಾಡಿಕೊಂಡು ಅದು ಚರ್ಚೆ ಮಾಡ್ತಾರ?. ವಾಲ್ಮೀಕಿ ನಿಗಮದಲ್ಲಿ ಹೊಡೆದಿರೋ ದುಡ್ಡು ಬಂದಿಲ್ಲ ಎಂದು ಚರ್ಚೆ ಮಾಡುತ್ತಾರಾ? ಭೋವಿ ನಿಗಮದ ದುಡ್ಡಿನ ಷೇರ್ ಬಂದಿಲ್ಲ ಎಂದು ಚರ್ಚೆ ಮಾಡ್ತೀರ?. ಕ್ಯಾಬಿನೆಟ್ ನಲ್ಲಿ ಚರ್ಚೆ ಮಾಡಬೇಕಾದ ವಿಚಾರವನ್ನು ಔತಣಕೂಟದಲ್ಲಿ ಏನು ಚರ್ಚೆ ಮಾಡ್ತೀರಾ.

-ಕುಮಾರಸ್ವಾಮಿ



ಚಾಕನಕೆರೆ ಗ್ರಾಮದಲ್ಲಿ ಕೆರೆಗೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಬಾಗಿನ ಅರ್ಪಿಸಿದರು.

ಮಂಡ್ಯ ಜಿಲ್ಲೆ ದೇವೇಗೌಡರಿಗೆ ಹೃದಯ ಭಾಗವಾಗಿದ್ದು ಕೆಲವರು ಜೆ.ಡಿ.ಎಸ್ ಮುಗಿಸುವ ಬಗ್ಗೆ ಮಾತನಾಡಿದ್ದರು. ಆದರೂ ಮಂಡ್ಯ ಜನ ಮರುಜನ್ಮ ನೀಡಿದ್ದು, ಕನಸಿನಲ್ಲಿಯೂ ಕೇಂದ್ರ ಸಚಿವನಾಗುವ ಬಗ್ಗೆ ಚಿಂತಿಸಿರಲಿಲ್ಲ. ಅದಾಗೆ ಬಂದ ಸಚಿವ ಸ್ಥಾನಕ್ಕೆ ಕೃಷಿ ಖಾತೆ ಆಸೆ ಹೊಂದಿದ್ದ ನನಗೆ ಕೈಗಾರಿಕೆ ಖಾತೆ ಸಿಕ್ಕಿದ್ದು ಈ ಭಾಗದಲ್ಲಿ ಕಾರ್ಖಾನೆಗಳನ್ನು ತರುವ ಯತ್ನ ನಡೆಸಿದ್ದು ನಿರುದ್ಯೋಗ ಸಮಸ್ಯೆ ಹೋಗಲಾಡಿಸಲು ಕ್ರಮ ವಹಿಸುವುದಾಗಿ ಹೇಳಿದರು.

ಮೈಸೂರು–ಬೆಂಗಳೂರು ಹಾಗೂ ಹಾಸನ, ನಾಗಮಂಗಲಗಳಲ್ಲಿ ಕೈಗಾರಿಕಾ ಕಾರ್ಖಾನೆ ತೆರೆಯಲು ಪ್ರಯತ್ನ ನಡೆಸಿದ್ದು ಮುಂದಿನ ದಿನಗಳಲ್ಲಿ ಉದ್ಯೋಗಗಳನ್ನು ಸೃಷ್ಟಿಸಿ ಈ ಭಾಗದ ಯುವಕರಿಗೆ ಉದ್ಯೋಗ ಕಲ್ಪಿಸಲು ಯೋಜನೆ ರೂಪಿಸಿರುವೆ. ತಮಗೆ ಸ್ವಲ್ಪ ಸಮಯಾವಕಾಶ ನೀಡುವಂತೆ ಕೋರಿದರು.

ಮುಚ್ಚಿರುವ ಭದ್ರಾವತಿ ಉಕ್ಕು ಕಾರ್ಖಾನೆ ಪ್ರಾರಂಭಿಸಲು 15 ಸಾವಿರ ಕೋಟಿ ಹಣ ಬೇಕಿದ್ದು ಇದನ್ನು ಪುನರಾರಂಭಿಸಿ ಕಾರ್ಖಾನೆ ಉಳಿಸಲು ಜನರ ಬದುಕಿಗೆ ನೆಲೆ ಕೊಡುವ ಸಂಬಂಧ ಪ್ರಧಾನಮಂತ್ರಿ ಅವರನ್ನು ಮನವೊಲಿಸುವುದಾಗಿ ಹೇಳಿದರು. ಮದ್ದೂರು ತಾಲೂಕಿಗೆ ಮೂರು ಕಾರ್ಖಾನೆಗಳನ್ನು ತರಬೇಕಿದ್ದು ಐದಾರು ಸಾವಿರ ಕೋಟಿ ಬಂಡವಾಳ ಹಾಕುವವರನ್ನು ಕರೆತರುವುದಾಗಿ ಭರವಸೆ ನೀಡಿದರು.

ರೈತರ ಶ್ರಮದ ಬಗ್ಗೆ ತಮಗೂ ಅರಿವಿದ್ದು ತಾವು ಕೈಜೋಡಿಸಿ ಮನವಿ ಮಾಡುತ್ತೇನೆ ನಿಮ್ಮ ಋಣ ತೀರಿಸುವ ಕೆಲಸ ಮಾಡುತ್ತೇನೆ ಮತ್ತು ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಯೋಜನೆ ರೂಪಿಸುವುದಾಗಿ ಹೇಳಿದರು.

ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಇಂತಹ ಸರಕಾರವನ್ನು ಎಷ್ಟು ದಿನ ರಾಜ್ಯದ ಜನರು ಸಹಿಸಿಕೊಳ್ಳಲಿದ್ದಾರೆ. ಸರಕಾರದ ಪಾಪದ ಕೊಡ ತುಂಬಿದ್ದು ಅಧಿಕಾರಿಗಳ ವರ್ಗಾವಣೆ, ಭ್ರಷ್ಟಾಚಾರ ಮತ್ತು ಜೆ.ಡಿ.ಎಸ್ ಕಾರ್ಯಕರ್ತರ ಮೇಲೆ ಸುಳ್ಳು ಪ್ರಕರಣ ದಾಖಲಿಸುವುದು. ಇದು ಬಹಳ ದಿನ ನಡೆಯುವುದಿಲ್ಲ. ಪ್ರೀತಿ ವಿಶ್ವಾಸದಿಂದ ಜನರನ್ನು ಗೆಲ್ಲಬೇಕೆಂದರು.

ಮಾಜಿ ಸಚಿವ ಡಿ.ಸಿ.ತಮ್ಮಣ್ಣ ಮಾತನಾಡಿ, ತಾವು ಶಾಸಕರಾಗಿದ್ದ ವೇಳೆ ತಾಲೂಕಿನ ಸಮಗ್ರ ಅಭಿವೃದ್ಧಿಗೆ ಯೋಜನೆ ರೂಪಿಸಿ ಕ್ಷೇತ್ರದ ಅಭಿವೃದ್ಧಿಗೆ ಸಾವಿರಾರು ಕೋಟಿ ರೂ.ಗಳ ಅನುದಾನವನ್ನು ತಂದು ಶಿಕ್ಷಣ, ಆರೋಗ್ಯ, ನೀರಾವರಿ ಇನ್ನಿತರ ಕ್ಷೇತ್ರಗಳಿಗೆ ಹೆಚ್ಚಿನ ಒತ್ತು ನೀಡಿರುವುದಾಗಿ ಹೇಳಿದರು.

ಅಭಿನಂದನೆ: ಚಾಕನಕೆರೆ ಸೇರಿದಂತೆ ಆ ವ್ಯಾಪ್ತಿಯ ವಿವಿಧ ಗ್ರಾಮಗಳ ಕೃಷಿ ಕಾರ್ಮಿಕರು, ಪ್ರಗತಿಪರ ರೈತರು ಹಾಗೂ ಕೃಷಿಕರು ಮತ್ತು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳನ್ನು ವೇದಿಕೆಯಲ್ಲಿ ಅಭಿನಂದಿಸಿ ಗೌರವಿಸಲಾಯಿತು.

ಮಾಜಿ ಶಾಸಕರಾದ ಡಾ. ಅಂದಾನಿ, ಕೆ.ಸುರೇಶ್‌ಗೌಡ, ಕೆ.ಟಿ.ಶ್ರೀಕಂಠೇಗೌಡ, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಜಿಪಂ ಮಾಜಿ ಅಧ್ಯಕ್ಷ ಎಸ್.ಗುರುಚರಣ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಪಿ.ಸಂದರ್ಶ, ಮುಖಂಡರಾದ ರಾಮಚಂದ್ರು, ಎಸ್.ಪಿ.ಸ್ವಾಮಿ, ಮಾದನಾಯಕನಹಳ್ಳಿ ರಾಜಣ್ಣ, ಕೆ.ಟಿ.ರಾಜಣ್ಣ, ಕೆ.ಟಿ.ಶೇಖರ್, ಶಂಕರೇಗೌಡ, ಜಯರಾಮು, ಚಿಕ್ಕತಿಮ್ಮೇಗೌಡ, ರೂಪ, ರವಿ, ಕುಂದನಕುಪ್ಪೆ ಕುಮಾರ್, ಇತರರಿದ್ದರು.

ರಾಷ್ಟ್ರೀಯ ಹೆದ್ದಾರಿ ಭೂಮಿಪೂಜೆ ವಿಚಾರದಲ್ಲಿ ರಾಜಕೀಯ ಮಾಡಲ್ಲ

ಮದ್ದೂರು, ಜ.10– ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಚಾಮರಾಜನಗರ ಜೇವರ್ಗಿ ರಾಷ್ಟ್ರೀಯ ಹೆದ್ದಾರಿಗೆ ಗುದ್ದಲಿ ಪೂಜೆ ಮಾಡಿದ್ದಾರೆ. ಮಾಡಲಿ. ಕೇಂದ್ರ ಸರ್ಕಾರದ ಕಾರ್ಯಕ್ರಮಕ್ಕೆ ಮತ್ತೆ ಅವರು ಗುದ್ದಲಿ ಪೂಜೆ ಮಾಡಿದ್ದಾರೆ. ಇದರಲ್ಲಿ ನಾನು ರಾಜಕೀಯ ಮಾಡಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ತಾಲೂಕಿನ ಚಾಕನಕೆರೆಗೆ ಶುಕ್ರವಾರ ಬಾಗಿನ ಅರ್ಪಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಸಿಎಂ ಆಗಿದ್ದಾಗ ಕೊಟ್ಟ ಕಾರ್ಯಕ್ರಮಗಳು ಹಲವು ಇವೆ. ಕಲ್ಲನ್ನು ಶಂಕುಸ್ಥಾಪನೆ ಮಾಡೋದಾಗಿದ್ರೆ ರಾಜ್ಯಾದ್ಯಂತ ನಾನು ಶಂಕುಸ್ಥಾಪನೆ ಮಾಡಿದ ಕಲ್ಲುಗಳು ಇರ್ತಾ ಇದ್ವು. ನಾನು ಪ್ರಚಾರ ಪಡೆಯಬೇಕೆಂದು ಕೆಲಸ ಮಾಡಿಲ್ಲ ಎಂದರು. ನಮ್ಮ ಕರ್ತವ್ಯ ಜನರ ಬದುಕು ಸರಿಪಡಿಸುವುದು, ಪ್ರಚಾರ ಅಲ್ಲ. ರೈತರ ಸಾಲಮನ್ನಾ ಯೋಜನೆಯಲ್ಲಿ 190 ಕೋಟಿ ರೂ. ಬಾಕಿ ಇದೆ. ಮಂಡ್ಯ ಜಿಲ್ಲೆಯ ರೈತರಿಗೆ ಹಣ ಬಂದಿಲ್ಲ. ಸರ್ಕಾರದಿಂದ ಹಣ ಕೊಟ್ಟಿಲ್ಲ ಮೊದಲು ಚಲುವರಾಯಸ್ವಾಮಿ ಅವರು ಆ ಹಣ ಕೊಡಿಸಲಿ ಎಂದರು.

ಸಾಲದ ಜಾಲಕ್ಕೆ ಸಿಲುಕಿ ಊರು ತೊರೆಯುತ್ತಿರುವ ಕುಟುಂಬಗಳು

● ತಡವಾಗಿ ಬೆಳಕಿಗೆ ಬಂದ ಪ್ರಕರಣ ● ಖಾಸಗಿ ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ಆರೋಪ





ಮೈಕ್ರೋ ಫೈನಾನ್ಸ್‌ಗಳಿಂದ ಸಾಲ ಪಡೆದ ಚಾಮರಾಜನಗರ ಗ್ರಾಮೀಣ ಪ್ರದೇಶಗಳ ಕೆಲ ಕುಟುಂಬಗಳು ಮನೆಗೆ ಬೀಗ ಹಾಕಿ ಊರು ತೊರೆದಿರುವುದು.

ಚಾಮರಾಜನಗರ, ಜ.10–ಜಿಲ್ಲೆಯ ಚಾಮರಾಜನಗರ, ಯಳಂದೂರು, ಗುಂಡ್ಲುಪೇಟೆ ಹಾಗೂ ಕೊಳ್ಳೇಗಾಲ ಭಾಗದ ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚು ಕುಟುಂಬಗಳು ಮೈಕ್ರೋ ಫೈನಾನ್ಸ್‌ಗಳ ಸಾಲದ ಜಾಲಕ್ಕೆ ಸಿಲುಕಿ ಊರು ತೊರೆದಿರುವ ಪ್ರಕರಣಗಳು ತಡವಾಗಿ ಬೆಳಕಿಗೆ ಬರುತ್ತಿವೆ.

ಚಾಮರಾಜನಗರ ತಾಲೂಕಿನ ಸಂತೇಮರಹಳ್ಳಿ ಹೋಬಳಿಯ ಹಲವು ಗ್ರಾಮಗಳಲ್ಲಿ ಸುಮಾರು 50ಕ್ಕೂ ಹೆಚ್ಚು, ಕೂಡ್ಲೂರು ಗ್ರಾಮವೊಂದರಲ್ಲೇ 30ಕ್ಕೂ ಹೆಚ್ಚು ಕುಟುಂಬಗಳು ಊರು ತೊರೆದಿವೆ. ಅಲ್ಲದೇ, ಸುತ್ತಮುತ್ತಲ ಗ್ರಾಮಗಳಲ್ಲೂ ಇಂತಹ ಪ್ರಕರಣಗಳು ಬೆಳಕಿಗೆ ಬರುತ್ತಲೇ ಇದ್ದು, ಈ ಹೋಬಳಿ ವ್ಯಾಪ್ತಿಯಲ್ಲೇ 50 ರಿಂದ 60 ಕುಟುಂಬಗಳು ಸಾಲ, ಅದರ ಬಡ್ಡಿ ಹೊರೆಯಿಂದ ತಲೆ ತಪ್ಪಿಸಿಕೊಂಡು ದೂರದ ಊರುಗಳಿಗೆ ವಲಸೆ ಹೋಗಿದ್ದಾರೆ ಎಂದು ತಿಳಿದು ಬಂದಿದೆ.

ಸಾಲ ಮರು ಪಾವತಿಸುವಂತೆ ಮೈಕ್ರೋ ಫೈನಾನ್ಸ್ ಕಂಪನಿಗಳು ನೀಡುತ್ತಿರುವ ಕಿರುಕುಳದಿಂದ ಬೇಸತ್ತು ಜಿಲ್ಲೆಯಲ್ಲಿ ಸುಮಾರು 100ಕ್ಕೂ ಹೆಚ್ಚು ಕುಟುಂಬಗಳು ಊರು ಬಿಡುತ್ತಿವೆ. ಈ ಬಗ್ಗೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಕ್ರಮ ಕೈಗೊಳ್ಳುವ ಮೂಲಕ ಬಡಜನರ ನೆರವಿಗೆ ಧಾವಿಸಬೇಕು ಎಂದು ವಿವಿಧ ಸಂಘಟನೆಗಳ ಮುಖಂಡರು ಹಾಗೂ ಪದಾಧಿಕಾರಿಗಳು ಒತ್ತಾಯಿಸಿದ್ದಾರೆ.

ಗ್ರಾಮೀಣ ಭಾಗದಲ್ಲಿ ಹೆಚ್ಚು ಜನರು ಕೂಲಿ ಮಾಡಿ ಜೀವನ ನಡೆಸುತ್ತಾರೆ. ಜೀವನೋಪಾಯ, ವ್ಯವಸಾಯ ಹಾಗೂ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಖಾಸಗಿ ಮೈಕ್ರೋ ಫೈನಾನ್ಸ್‌ಗಳಲ್ಲಿ ನಿವೇಶನ ಹಾಗೂ ಜಮೀನು, ಮನೆ ಸೇರಿದಂತೆ ನಾನಾ ಆಸ್ತಿ, ಪಾಸ್ತಿ ಒತ್ತೆ ಇಟ್ಟು ಹೆಚ್ಚು ಬಡ್ಡಿ ದರವಿದ್ದರೂ ಸಾಲ ಪಡೆದುಕೊಳ್ಳುತ್ತಾರೆ. ಸಾಲ ತೀರಿಸುವ ಅವಧಿ 2 ಅಥವಾ 3 ವರ್ಷಗಳಿರುತ್ತದೆ. ಆದರೆ, ಈ ಅವಧಿಯಲ್ಲಿ ಬೆಳೆ ನಷ್ಟ ಅಥವಾ ಇತರೆ ಕಾರಣದಿಂದ ಸಾಲದ ಕಂತು ಪಾವತಿಸಲು ತಡವಾದರೆ ಬಡ್ಡಿ ಏರುತ್ತಲೇ ಇರುತ್ತದೆ.

ಪ್ರತಿವಾರ ಸಾಲದ ಮೊತ್ತದ ಜೊತೆಗೆ ಬಡ್ಡಿ ಹಣ ಪಾವತಿಸಬೇಕು. ಆದರೆ, ಆ ಹಣ ಪಾವತಿಸಲು ಆಗದಿದ್ದಾಗ ಅಸಹಾಯಕತೆಗೆ ಒಳಗಾಗಿ ಹಲವು ಕುಟುಂಬಗಳು ಊರು ತೊರೆದಿವೆ ಎಂದು ಕೂಡ್ಲೂರು ಗ್ರಾಮದ ಮುಖಂಡರೊಬ್ಬರು ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಅಭಯ: ಯಾರೂ ಊರು ಖಾಲಿ ಮಾಡಬೇಡಿ, ನಾವು ನಿಮ್ಮ ಜೊತೆ ಇದ್ದೇವೆ. ನಿಮಗೆ ಕಿರುಕುಳ ನೀಡಿದಲ್ಲಿ ಜಿಲ್ಲಾಧಿಕಾರಿ, ಉಪವಿಭಾಗಾಧಿಕಾರಿ, ತಹಸೀಲ್ದಾರ್, ಗ್ರಾಪಂ ಕಚೇರಿ ಅಥವಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಗೆ ಮಾಹಿತಿ ನೀಡಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪನಾಗ್ ಅಭಯ ನೀಡಿದ್ದಾರೆ.

ನಿಮಗೆ ಯಾವುದೇ ತೊಂದರೆ ಆಗದಂತೆ ಸಮಸ್ಯೆ ಬಗೆಹರಿಸಲಾಗುವುದು. ಜಿಲ್ಲೆಯ ಅಧಿಕೃತ ಹಾಗೂ ಅನಧಿಕೃತ ಫೈನಾನ್ಸ್ ಕಂಪನಿಗಳ ಮಾಹಿತಿ ಕಲೆ ಹಾಕುವಂತೆ ಈಗಾಗಲೇ ನಾಲ್ಕು ಅಧಿಕಾರಿಗಳ ತಂಡ ರಚಿಸಲಾಗಿದೆ. ಅಲ್ಲದೇ, ಗ್ರಾಮ ತೊರೆದಿರುವ ಕುಟುಂಬಗಳೆಷ್ಟು ಎಂಬುದರ ವರದಿ ನೀಡುವಂತೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

ಈ ಸಂಬಂಧ ಗ್ರಾಮಾಂತರ ಪ್ರದೇಶಗಳಲ್ಲಿ ವಿಶೇಷ ಗ್ರಾಮಸಭೆ ನಡೆಸಲಾಗುವುದು. ಮೈಕ್ರೋ ಫೈನಾನ್ಸ್ ಕಂಪನಿಗಳ ಕಾರ್ಯನಿರ್ವಹಣೆ ಬಗ್ಗೆ ಪರಿಶೀಲಿಸಲಾಗುವುದು. ಜನರು ಸಹ ಅಧಿಕೃತ ಬ್ಯಾಂಕ್ ಹಾಗೂ ಸಹಕಾರ ಸಂಘಗಳ ಮೂಲಕ ವ್ಯವಹರಿಸಬೇಕು. ಅನಧಿಕೃತ ಹಣಕಾಸು ಸಂಸ್ಥೆಗಳು, ಲೇವಾದೇವಿದಾರರ ಬಗ್ಗೆ ಎಚ್ಚರ ವಹಿಸಬೇಕು. ಯಾವುದೇ ಕಂಪನಿಯವರು ಜನರ ಮೇಲೆ ಒತ್ತಡ ಹೇರಬಾರದು ಎಂದು ಸೂಚಿಸಿದ್ದಾರೆ.

ಸಾಲದ ಕಿರುಕುಳ ನೀಡುವವರ ವಿರುದ್ಧ ದೂರು ಸಲ್ಲಿಸಿ



ಶಿಲ್ಪನಾಗ್

ಚಾಮರಾಜನಗರ ಜಿಲ್ಲೆಯ ಖಾಸಗಿ ಫೈನಾನ್ಸ್‌ಗಳು, ಸಂಘ–ಸಂಸ್ಥೆಗಳು ಹಾಗೂ ಇತರೆ ಬ್ಯಾಂಕ್‌ಗಳಿಂದ ಸಾಲ ವಸೂಲಿಗಾಗಿ ರಿಕವರಿ ಏಜೆಂಟ್‌ಗಳು ದೌರ್ಜನ್ಯ, ಕಿರುಕುಳ, ಮಾನಸಿಕ ಹಿಂಸೆ ನೀಡುತ್ತಿದ್ದಲ್ಲಿ ಜಿಲ್ಲಾಧಿಕಾರಿ ಕಚೇರಿಯ ದೂರವಾಣಿ ಹಾಗೂ ಪೊಲೀಸ್ ಕಂಟ್ರೋಲ್ ರೂಂಗೆ ಕರೆ ಮಾಡಿ ದೂರು ಸಲ್ಲಿಸುವಂತೆ ಜಿಲ್ಲಾಧಿಕಾರಿ ಶಿಲ್ಪನಾಗ್ ತಿಳಿಸಿದ್ದಾರೆ.

ಸಾಲದ ವಸೂಲಿಗಾಗಿ ರಿಕವರಿ ಏಜೆಂಟ್‌ಗಳು ಕಿರುಕುಳ ನೀಡುತ್ತಿದ್ದಲ್ಲಿ ದೂ.ಸಂ: 08226–223160 ಹಾಗೂ ವಾಟ್ಸ್ ಆ್ಯಪ್ 9740942901, ಇ–ಮೇಲ್:ffmcchamarajanagar@gmail.com ಅಥವಾ ಪೊಲೀಸ್ ಕಂಟ್ರೋಲ್ ರೂಂ: 9480804600ಗೆ ದೂರು ನೀಡುವಂತೆ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ದೊರೆಸ್ವಾಮಿ ನಾಯಕ ನಿಧನ



ಗುಂಡ್ಲುಪೇಟೆ: ತಾಲೂಕಿನ ತೊಂಡವಾಡಿ ಗ್ರಾಮದ ನಿವಾಸಿ ದೊರೆಸ್ವಾಮಿ ನಾಯಕ (ಪವಿ 33) ಅನಾರೋಗ್ಯದಿಂದ ಶುಕ್ರವಾರ ನಿಧನರಾದರು. ಮೃತರು ಪತ್ನಿ ಕಾವ್ಯ, 3 ವರ್ಷದ ಮಗು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಸ್ವಗ್ರಾಮ ತೊಂಡವಾಡಿಯಲ್ಲಿ ಶನಿವಾರ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಇಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

ಚಾಮರಾಜನಗರ: ಸೆಸ್ಕ್‌ನ ಚಾಮರಾಜನಗರ ಉಪವಿಭಾಗ ವ್ಯಾಪ್ತಿಯಲ್ಲಿ ತುರ್ತು ಕಾಮಗಾರಿ ಹಮ್ಮಿಕೊಂಡಿರುವುದರಿಂದ ಜ.11ರಂದು ಬೆಳಗ್ಗೆ 10 ರಿಂದ ಮಧ್ಯಾಹ್ನ 3 ಗಂಟೆ ವರೆಗೆ ಪಟ್ಟಣದ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಕಾರಾಗೃಹ, ಕಾರಾಗೃಹ ಹಿಂಭಾಗ, ನ್ಯಾಯಾಲಯ ರಸ್ತೆ ಮತ್ತು ಜಿಲ್ಲಾಧಿಕಾರಿ ಮನೆ ಹಾಗೂ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮರಕ್ಕೆ ಕಾರು ಡಿಕ್ಕಿ; ಇಬ್ಬರು ಅಯ್ಯಪ್ಪ ಮಾಲಾಧಾರಿಗಳು ಸಾವು

ತಮಿಳುನಾಡಿನ ಮೆಟ್ಟುಪಾಳ್ಯಂ–ಸಿರುಮುಗ್ಗೈ ರಸ್ತೆಯಲ್ಲಿ ಘಟನೆ



ನಾಗರಾಜು



ವೆಂಕಟಾದ್ರಿ

ಕೊಳ್ಳೇಗಾಲ: ಶಬರಿಮಲೆ ಯಾತ್ರೆಗೆ ತೆರಳಿದ್ದ ಪಟ್ಟಣದ ಯಾತ್ರಿಕರ ಕಾರು ಮರಕ್ಕೆ ಡಿಕ್ಕಿ ಹೊಡೆದ ಪರಿಣಾಮ ಪಟ್ಟಣದ ಇಬ್ಬರು ಅಯ್ಯಪ್ಪ ಮಾಲಾಧಾರಿಗಳು ಮೃತಪಟ್ಟಿರುವ ದುರಂತ ತಮಿಳುನಾಡಿನ ಮೆಟ್ಟುಪಾಳ್ಯಂ–ಸಿರುಮುಗ್ಗೈ ರಸ್ತೆಯಲ್ಲಿ ಶುಕ್ರವಾರ ಮುಂಜಾನೆ ನಡೆದಿದೆ.

ಪಟ್ಟಣದ ನಾಗರಾಜು(65) ಹಾಗೂ ವೆಂಕಟಾದ್ರಿ (55) ಮೃತಪಟ್ಟ ಮಾಲಾಧಾರಿಗಳು. ಪಟ್ಟಣದ ಸ್ವಾಮಿ, ಮಹೇಶ್ ಕುಮಾರ್ ಹಾಗೂ ಮಾನಸ ಶಿಕ್ಷಣ ಸಂಸ್ಥೆ ಉಪನ್ಯಾಸಕ ದೊರೆಸ್ವಾಮಿ ಅವರು ತೀವ್ರವಾಗಿ ಗಾಯಗೊಂಡು ಮೆಟ್ಟುಪಾಳ್ಯಂ ಆಸ್ಪತ್ರೆಗೆ ದಾಖಲಾಗಿದ್ದಾರೆ.

ಈ ಐವರು ಶಬರಿಮಲೆ ಯಾತ್ರೆ ಕೈಗೊಂಡಿದ್ದರು. ಆದರೆ, ಶುಕ್ರವಾರ ಮುಂಜಾನೆ ನಿಯಂತ್ರಣ ತಪ್ಪಿ ಕಾರು ರಸ್ತೆಬದಿ ಹುಣಸೆ ಮರಕ್ಕೆ ಡಿಕ್ಕಿ ಹೊಡೆದಿದೆ. ಪರಿಣಾಮ ನಾಗರಾಜು ಹಾಗೂ ವೆಂಕಟಾದ್ರಿ ಮೃತಪಟ್ಟಿದ್ದಾರೆ. ಈ ಸಂಬಂಧ ತಮಿಳುನಾಡಿನ ಸಿರುಮುಗ್ಗೈ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿವಿಧ ದೇಗುಲಗಳಲ್ಲಿ ವೈಕುಂಠ ಏಕಾದಶಿ ಪೂಜೆ



ಪಣ್ಯದಹುಂಡಿ ಸಮೀಪದ ಪ್ರಸನ್ನ ವೆಂಕಟರಮಣ ಸ್ವಾಮಿ ದೇವಸ್ಥಾನದಲ್ಲಿ ವೈಕುಂಠ ಏಕಾದಶಿ ಪ್ರಯುಕ್ತ ಸ್ವಾಮಿಗೆ ವಿವಿಧ ಹೂವುಗಳಿಂದ ಅಲಂಕಾರ ಮಾಡಲಾಗಿತ್ತು.

ಚಾಮರಾಜನಗರ: ವೈಕುಂಠ ಏಕಾದಶಿ ಅಂಗವಾಗಿ ಜಿಲ್ಲೆಯ ವಿವಿಧ ದೇಗುಲಗಳಲ್ಲಿ ಶುಕ್ರವಾರ ಮುಂಜಾನೆಯಿಂದಲೇ ವಿಶೇಷ ಪೂಜೆ ನಡೆಸಲಾಯಿತು.

ಚಳಿಯನ್ನು ಲೆಕ್ಕಿಸದೇ ಸಾವಿರಾರು ಭಕ್ತರು ದೇಗುಲಕ್ಕೆ ಭೇಟಿ ನೀಡಿ ವಿಶೇಷ ಪೂಜೆ ಸಲ್ಲಿಸಿದರು. ಕೊಳ್ಳೇಗಾಲ ತಾಲೂಕಿನ ಶಿವನಸಮುದ್ರದ ಮಧ್ಯರಂಗನಾಥ ದೇವಾಲಯದಲ್ಲಿ ಸ್ವಾಮಿಯನ್ನು ವಿಶೇಷ ಪುಷ್ಪಗಳಿಂದ ಅಲಂಕರಿಸಲಾಗಿತ್ತು. ಮಳವಳ್ಳಿ ಶಾಸಕ ನರೇಂದ್ರಸ್ವಾಮಿ, ಹನೂರಿನ ಮಾಜಿ ಶಾಸಕ ಆರ್.ನರೇಂದ್ರ, ಎಡಿಸಿ ಗೀತಾ ಹುಡೇದಾ, ಎಸಿ ಮಹೇಶ್ ಸೇರಿದಂತೆ ರಾಜಕೀಯ ನಾಯಕರು, ಅಧಿಕಾರಿಗಳು ಮಧ್ಯರಂಗನಾಥನಿಗೆ ಕುಟುಂಬ ಸಮೇತ ಅರ್ಚನೆ ಮಾಡಿಸಿ ಪ್ರಾರ್ಥನೆ ಸಲ್ಲಿಸಿದರು.

ಚಾಮರಾಜನಗರ ಕೊಳದ ಬೀದಿಯ ದೇವಿ ಸಮೇತ ಕಾಡು ನಾರಾಯಣಸ್ವಾಮಿ ದೇಗುಲದಲ್ಲಿ ಸಪ್ತದ್ವಾರ ನಿರ್ಮಾಣ ಮಾಡಲಾಗಿತ್ತು. ದೇಗುಲದ ಅರ್ಚಕ ರಾಮಚಂದ್ರ, ವಿಪ್ರ ಮುಖಂಡರಾದ ಸತೀಶ್ ರುದ್ರಭೂಮಿ, ಶ್ರೀಧರ್, ಆಗಮಿಕರು ಮುಂಜಾನೆ 2.30ರಲ್ಲಿ ವಿಶೇಷ ಪಂಚಾಮೃತ ಅಭಿಷೇಕ, ಬೆಳಗ್ಗೆ 6ಕ್ಕೆ ದೇವಸ್ಥಾನ ಸಭಾಂಗಣದಲ್ಲಿ ಉತ್ಸವ ನೆರವೇರಿಸಿದರು.

ಯಳಂದೂರು ತಾಲೂಕಿನ ಬಿಳಿಗಿರಿರಂಗನಾಥ, ಗುಂಡ್ಲುಪೇಟೆ ಹಿಮವದ್ ಗೋಪಾಲಸ್ವಾಮಿ ಬೆಟ್ಟದಲ್ಲೂ ದೇವರಿಗೆ ವೈಕುಂಠ ಏಕಾದಶಿ ವಿಶೇಷ ಅಲಂಕಾರ ಮಾಡಲಾಗಿತ್ತು.

ಸಿಎಂ ಸಂಧಾನ ಯಶಸ್ವಿ

ಮುಷ್ಕರ ಹಿಂಪಡೆಯಲು ಆಶಾ ಕಾರ್ಯಕರ್ತೆಯರು ನಿರ್ಧಾರ

ಬೆಂಗಳೂರು: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಶಾ ಕಾರ್ಯಕರ್ತೆಯರ ಸಂಘಟನೆಯೊಂದಿಗೆ ನಡೆಸಿದ ಸಂದಾನ ಯಶಸ್ವಿಯಾಗಿದೆ.

ಮುಷ್ಕರ ಹಿಂಪಡೆದುಕೊಳ್ಳಲು ಆಶಾ ಕಾರ್ಯಕರ್ತೆಯರು ನಿರ್ಧಾರ ಕೈಗೊಂಡಿದ್ದಾರೆ. ಕಳೆದ 5 ದಿನಗಳಿಂದ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಆಶಾ ಕಾರ್ಯಕರ್ತೆಯರು ನಿರಂತರ ಹೋರಾಟ ನಡೆಸುತ್ತಿದ್ದರು. 15,000 ರೂ. ಮಾಸಿಕ ವೇತನ ಸೇರಿದಂತೆ ತಮ್ಮ ವಿವಿಧ ಬೇಡಿಕೆಗಳು ಈಡೇರಿಕೆಗೆ ಒತ್ತಾಯಿಸಿ ಹೋರಾಟ ಕೈಗೊಂಡಿದ್ದು, ಇಂದು ಸಿಎಂ ನಡೆಸಿದ ಸಂಧಾನ ಸಭೆ ಯಶಸ್ವಿಯಾಗಿದೆ.

ಆಶಾ ಕಾರ್ಯಕರ್ತೆಯರಿಗೆ ರಾಜ್ಯ ಸರ್ಕಾರದಿಂದ ಪ್ರತಿ ತಿಂಗಳು 5 ಸಾವಿರ ರೂ. ಹಾಗೂ ಕೇಂದ್ರ ಸರ್ಕಾರದ 34 ಸೇವೆಗಳಿಗೆ ನೀಡುವ ಗೌರವಧನ ಸೇರಿ ತಿಂಗಳಿಗೆ ಒಟ್ಟು 10 ಸಾವಿರ ರೂ. ನೀಡಲಾಗುವುದು ಎಂದು ಸಿದ್ದರಾಮಯ್ಯ ತಿಳಿಸಿದರು. ಮಾಹಿತಿಯನ್ನು ಪೋರ್ಟಲ್‌ನಲ್ಲಿ ನಮೂದು ಮಾಡುವುದು ಕಷ್ಟ ಸಾಧ್ಯವಾಗಿರುವ ಬಗ್ಗೆ ಮುಖ್ಯಮಂತ್ರಿಗಳ ಗಮನ ಸೆಳೆದಾಗ ಅದರ ಸಮಸ್ಯೆ ಬಗೆಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಆಶಾ ಕಾರ್ಯಕರ್ತೆಯರಿಗೆ ಆರೋಗ್ಯ ಕೆಟ್ಟರೆ ಪ್ರತಿ ತಿಂಗಳು ಸಿಗುವ ರಜೆ ಕ್ರೋಢೀಕರಿಸಿ ಗರಿಷ್ಠ 3 ತಿಂಗಳವರೆಗೆ ಗೌರವಧನ ನಿಲ್ಲಿಸದೆ ರಜೆ ಮಂಜೂರು ಮಾಡುವುದಾಗಿ ತಿಳಿಸಿದರಲ್ಲದೆ, ಬಜೆಟ್ ಪೂರ್ವಭಾವಿ ಸಭೆ ನಡೆಸುವಾಗ ಆಶಾ ಕಾರ್ಯಕರ್ತೆಯರೊಂದಿಗೂ ಸಭೆ ನಡೆಸಲಾಗುವುದು ಎಂದ ಮುಖ್ಯಮಂತ್ರಿಗಳು ಹೋರಾಟ ಮಾಡುವುದು ಸಂವಿಧಾನಬದ್ಧ ಹಕ್ಕು. ಪ್ರಜಾಸತ್ತಾತ್ಮಕ ಹೋರಾಟಗಳನ್ನು ಸರ್ಕಾರ ಹತ್ತಿಕ್ಕುವುದಿಲ್ಲ ಎಂದು ತಿಳಿಸಿದರು. ಮುಖ್ಯಮಂತ್ರಿಗಳ ಈ ಭರವಸೆ ಹಿನ್ನೆಲೆಯಲ್ಲಿ ಆಶಾ ಕಾರ್ಯಕರ್ತೆಯರು ಮುಷ್ಕರ ಹಿಂಪಡೆಯುವ ನಿರ್ಧಾರ ಕೈಗೊಂಡರು.

ಮೈಸೂರು ಮಿತ್ರ 45 — ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ತಿ.ನರಸೀಪುರ, ಹೆಚ್.ಡಿ.ಕೋಟೆ, ಸರಗೂರು ಸೇರಿದಂತೆ

ವಿವಿಧೆಡೆ ಭಕ್ತಿಭಾವದ ವೈಕುಂಠ ಏಕಾದಶಿ



ಶ್ರೀರಾಮ, ಲಕ್ಷ್ಮಣ, ಸೀತೆ ಉತ್ಸವಮೂರ್ತಿ.

ಮೈಸೂರು, ಜ.10– ಜಿಲ್ಲೆಯ ತಿ.ನರಸೀಪುರ, ಸೋಮನಾಥಪುರ, ಹೆಚ್.ಡಿ.ಕೋಟೆ, ಸರಗೂರು, ಚುಂಚನಕಟ್ಟೆ ಸೇರಿದಂತೆ ವಿವಿಧೆಡೆ ದೇವಾಲಯಗಳಲ್ಲಿ ಶುಕ್ರವಾರ ಭಕ್ತಿಭಾವದ ವೈಕುಂಠ ಏಕಾದಶಿ ಸಂಭ್ರಮದಿಂದ ನೆರವೇರಿತು.

ತಿ.ನರಸೀಪುರ: ವೈಕುಂಠ ಏಕಾದಶಿ ಅಂಗವಾಗಿ ಶುಕ್ರವಾರ ಮುಂಜಾನೆಯಿಂದಲೇ ಸ್ವರ್ಗದ ದ್ವಾರದ ಮೂಲಕ ಪಟ್ಟಣದ ಶ್ರೀಗುಂಜಾ ನರಸಿಂಹಸ್ವಾಮಿ ದೇವಾಲಯ ಪ್ರವೇಶಿಸಿದ ಭಕ್ತರು ದೇವರ ದರ್ಶನ ಪಡೆದರು. ಏಕಾದಶಿ ಅಂಗವಾಗಿ ಲಕ್ಷ್ಮಿ ಸಮೇತ ಶ್ರೀಗುಂಜಾ ನರಸಿಂಹಸ್ವಾಮಿಗೆ ವಿಶೇಷ ಅಭಿಷೇಕ ನೆರವೇರಿಸಿ, ಬಗೆ ಬಗೆಯ ಹೂಗಳಿಂದ ಅಲಂಕರಿಸಲಾಗಿತ್ತು. ಅಲ್ಲದೇ ದೇವಾಲಯವನ್ನು ವಿಶೇಷವಾಗಿ ಅಲಂಕರಿಸಲಾಗಿತ್ತು. ಭಕ್ತರಿಗಾಗಿ ಮೊಸರನ್ನ, ರೈಸ್ ಬಾತ್, ಕೇಸರಿ ಬಾತ್, ಪುಳಿಯೋಗರೆ, ಪೊಂಗಲ್, ಲಾಡು ಪ್ರಸಾದ ವಿತರಣೆ ಹಾಗೂ ಅನ್ನ ಸಂತರ್ಪಣೆ ಹಮ್ಮಿಕೊಳ್ಳಲಾಗಿತ್ತು. ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು.



ಸರಗೂರಿನ ಲಕ್ಷ್ಮಿನರಸಿಂಹಸ್ವಾಮಿ ದೇವಾಲಯದಲ್ಲಿ ವೈಕುಂಠ ಏಕಾದಶಿ ನಡೆಯಿತು.



ಬೆಣ್ಣೆ ಅಲಂಕಾರದಲ್ಲಿ ಉಗ್ರನರಸಿಂಹಸ್ವಾಮಿ.

ಈ ವೇಳೆ ಪುರಸಭಾಧ್ಯಕ್ಷೆ ವಸಂತ ಶ್ರೀಕಂಠ, ಸದಸ್ಯ ಬಾದಾಮಿ ಮಂಜು, ಎಸ್.ಕೆ.ಕಿರಣ್, ಕಸಾಪ ಅಧ್ಯಕ್ಷ ಕನ್ನಡ ಪುಟ್ಟಸ್ವಾಮಿ, ಉದ್ಯಮಿ ಪೆಟ್ರೋಲ್ ಬಂಕ್ ಚಂದು, ಮಾಧ್ಯಮ ವಕ್ತಾರ ಸಂತೃಪ್ತಿ ಕುಮಾರ್, ಪಾರುಪತ್ತೇಗಾರ್ ವಿ.ಪ್ರದೀಪ್ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಿವಶಂಕರಮೂರ್ತಿ, ಪ್ರಧಾನ ಅರ್ಚಕ ಜಜ್ಜಪ್ಪ, ವೆಂಕಟೇಶ್, ಭಕ್ತರು ನರಸಿಂಹ ಸ್ವಾಮಿ ದರ್ಶನ ಪಡೆದು ಪುನೀತರಾದರು.

ಸೋಮನಾಥಪುರ: ವೈಕುಂಠ ಏಕಾದಶಿ ಹಿನ್ನಲೆಯಲ್ಲಿ ತಾಲೂಕಿನ ಸೋಮನಾಥಪುರದ ಶ್ರೀಉಗ್ರ ನರಸಿಂಹಸ್ವಾಮಿ ದೇವಾಲಯದಲ್ಲಿ ದೇವರಿಗೆ ಅರಿಶಿಣ, ಬೆಣ್ಣೆ ಅಲಂಕಾರದೊಂದಿಗೆ ವಿವಿಧ ಮಹಾ ಪಂಚಾಮೃತ ಅಭಿಷೇಕಗಳು ಜರುಗಿದವು. ಬೆಳಗ್ಗೆಯಿಂದಲೇ ಸಾವಿರಾರು ಭಕ್ತರು ದೇವಾಲಯಕ್ಕೆ ಆಗಮಿಸಿ ದೇವರ ದರ್ಶನ ಪಡೆದರು. ಭಕ್ತರಿಗೆ ಅನ್ನಸಂತರ್ಪಣೆ, ಲಾಡು ಪ್ರಸಾದ ವಿತರಿಸಲಾಯಿತು. ಈ ವೇಳೆ ಪಟ್ಟಣದ ಕನ್ನಿಕಾ ಪರಮೇಶ್ವರಿ ದೇವಾಲಯದ ಪ್ರಧಾನ ಅರ್ಚಕ ಶ್ರೀಕೀರ್ತಿ ಭಾರದ್ವಾಜ್, ದೇವಾಲಯದ ಟ್ರಸ್ಟ್ ಪದಾಧಿಕಾರಿಗಳು, ದೇವಾಲಯದ ಅರ್ಚಕರು, ಸೇವಾ ಸಮಿತಿಗಳ ಮುಖಂಡರು ಮತ್ತಿತರರಿದ್ದರು.

ಹೆಚ್.ಡಿ.ಕೋಟೆ: ವೈಕುಂಠ ಏಕಾದಶಿ ಪ್ರಯುಕ್ತ ಪಟ್ಟಣದ ಲಕ್ಷ್ಮೀ ವರದರಾಜ ಸ್ವಾಮಿ ದೇವಾಲಯದಲ್ಲಿ ವಿಶೇಷ ಪೂಜಾ ಕೈಂಕರ್ಯ ನಡೆಯಿತು. ಶುಕ್ರವಾರ ಮುಂಜಾನೆ 4 ಗಂಟೆಗೆ ದೇವರಿಗೆ ಅಭಿಷೇಕ, 5.30ಕ್ಕೆ ಪ್ರಕಾರೋತ್ಸವ ಮತ್ತು ಮಹಾಮಂಗಳಾರತಿ ನಡೆಯಿತು. ಬೆಳಗ್ಗೆ 6 ರಿಂದ ರಾತ್ರಿ 9ರವರೆಗೆ ಭಕ್ತರು ವೈಕುಂಠ ದ್ವಾರದ ಮೂಲಕ ದೇವಾಲಯ ಪ್ರವೇಶಿಸಿ ದೇವರ ದರ್ಶನ ಪಡೆದರು. ಭಕ್ತರಿಗೆ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.

ಇದೇ ಸಂದರ್ಭ ದೇವಾಲಯದ ಬಿ.ಎಸ್.ರಂಗ ಅಯ್ಯಂಗಾರ್, ವೆಂಕಟೇಶ್ ಪ್ರಸಾದ್, ತಿರುಮಲಾಚಾರ್, ದೇವರಾಜ್, ಡೈರಿ ಶ್ರೀಕಾಂತ್, ಜಯಂತ್, ವಿನುತಾ, ವೈಭವ್, ಪೂರ್ಣೇಶ್, ರಾಜಗೋಪಾಲ್, ಅರ್ಚಕರಾದ ಶ್ರೀಧರ್ ಅಯ್ಯಂಗಾರ್, ಸುಧಾಕರ್, ಶ್ರೀನಿಧಿ ಇದ್ದರು.

ಸರಗೂರು: ವೈಕುಂಠ ಏಕಾದಶಿ ಅಂಗವಾಗಿ ಪಟ್ಟಣದ ಕಪಿಲಾ ತೀರದಲ್ಲಿರುವ ಲಕ್ಷ್ಮಿನರಸಿಂಹಸ್ವಾಮಿ ದೇವಾಲಯದಲ್ಲಿ ಪೂಜಾ ಕೈಂಕರ್ಯಗಳು ವಿಜೃಂಭಣೆಯಿಂದ ನೆರವೇರಿತು.

ಭಕ್ತರು ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಶ್ರೀ ಚೌಡೇಶ್ವರಿ ಭಜನಾ ಮಂಡಳಿಯಿಂದ ಭಜನೆ ನಡೆಸಲಾಯಿತು. ನೂರಾರು ಭಕ್ತರು ಸರತಿ ಸಾಲಿನಲ್ಲಿ ನಿಂತು ವೈಕುಂಠ ದ್ವಾರದ ಮೂಲಕ ಲಕ್ಷ್ಮಿನರಸಿಂಹಸ್ವಾಮಿ ಸ್ವಾಮಿ ದರ್ಶನ ಪಡೆದು ಧನ್ಯರಾದರು. ತೊಗಟವೀರ ಕ್ಷತ್ರಿಯ ಸಮಾಜದಿಂದ ಪೂಜಾ ಕೈಂಕರ್ಯ ನಡೆಸಲಾಯಿತು.



ಹೆಚ್.ಡಿ.ಕೋಟೆ ಲಕ್ಷ್ಮೀವರದರಾಜಸ್ವಾಮಿ.

ಚುಂಚನಕಟ್ಟೆಯಲ್ಲೂ ವೈಕುಂಠ ಏಕಾದಶಿ

ಚುಂಚನಕಟ್ಟೆ, ಜ.10– ಶ್ರೀಕ್ಷೇತ್ರ ಚುಂಚನಕಟ್ಟೆ ಶ್ರೀರಾಮ ದೇವಾಲಯದಲ್ಲಿ ಶುಕ್ರವಾರ ವೈಕುಂಠ ಏಕಾದಶಿ ಅದ್ಧೂರಿಯಾಗಿ ನಡೆಯಿತು.

ವೈಕುಂಠ ಏಕಾದಶಿ ಹಿನ್ನೆಲೆಯಲ್ಲಿ ಮುಂಜಾನೆಯಿಂದಲೇ ಅರ್ಚಕರು ಸುಪ್ರಭಾತ, ಹಾಲು–ಮೊಸರು, ಅರಿಶಿನ– ಕುಂಕುಮ, ಎಳನೀರು, ಪಂಚಾಮೃತಾಭಿಷೇಕ ಸೇರಿದಂತೆ ಶ್ರೀರಾಮ, ಲಕ್ಷ್ಮಣ ಹಾಗೂ ಸೀತಮ್ಮನವರ ಮೂಲ ಮೂರ್ತಿಗಳಿಗೆ ಜಲಾಭಿಷೇಕ ಮಾಡಿದರು. ನಂತರ ಹಲವು ಬಗೆಯ ಪುಷ್ಪಗಳ ತೋಮಾಲಾ ಅಲಂಕರಿಸಿ, ವಿವಿಧ ಧಾರ್ಮಿಕ ಕಾರ್ಯಗಳನ್ನು ನಡೆಸಲಾಯಿತು.

ಇನ್ನು ಶೃಂಗಾರಗೊಂಡಿದ್ದ ಶ್ರೀರಾಮ, ಲಕ್ಷಣ ಹಾಗೂ ಸೀತಮ್ಮನ ಉತ್ಸವ ಮೂರ್ತಿಗಳನ್ನು ಮುಂಜಾನೆ ಪಲ್ಲಕ್ಕಿ ಮೂಲಕ ಭಕ್ತ ಸಮೂಹ ಗೋವಿಂದಾ..! ಗೋಪಾಲ..! ಎಂಬ ಮಂತ್ರ ಪಠಣದೊಂದಿಗೆ ದೇಗುಲದ ಸುತ್ತ ಪ್ರದಕ್ಷಿಣೆ ಮಾಡಿಸಿ 5.15ಕ್ಕೆ ದೇವರನ್ನು ಉತ್ತರ ದಿಕ್ಕಿನ ವೈಕುಂಠ ದ್ವಾರದಲ್ಲಿ ಕರೆದಂದು ಪ್ರತಿಷ್ಠಾಪಿಸಿ ಪೂಜಾಗಳನ್ನು ನೆರವೇರಿಸಲಾಯಿತು.

ವೈಕುಂಠ ಸ್ವರ್ಗದ್ವಾರಕ್ಕೆ ಪ್ರವೇಶ: ಬಳಿಕ ಭಕ್ತರ ಸಮ್ಮುಖದಲ್ಲಿ ನೈವೇದ್ಯ, ಮಂಗಳಾರತಿ ನೆರವೇರಿಸಿದ ಅರ್ಚಕರು ಬೆಳಗ್ಗೆ 6.30ಕ್ಕೆ ಭಕ್ತರಿಗೆ ಸ್ವರ್ಗದ್ವಾರ ಪ್ರವೇಶಕ್ಕೆ ಚಾಲನೆ ನೀಡಿದರು. ಗ್ರಾಮಸ್ಥರು ಸೇರಿದಂತೆ ಜಿಲ್ಲೆಯ ನಾನಾ ಭಾಗಗಳಿಂದ ಆಗಮಿಸಿದ್ದ ಸಾವಿರಾರು ಭಕ್ತರು ಸಂಜೆವರೆಗೂ ತಂಡೋಪತಂಡವಾಗಿ ದೇಗುಲಕ್ಕೆ ಆಗಮಿಸಿ ಸರತಿ ಸಾಲಿನಲ್ಲಿ ನಿಂತು ದೇವರ ದರ್ಶನ ಪಡೆದರು. ಚುಂಚನಕಟ್ಟೆಯ ಚುಂಗಿಮ ಜನರಲ್ ಸ್ಟೋರ್ ಮಾಲೀಕರಾದ ಕಮಲಮ್ಮ ಗಿರಿಗೌಡ ಭಕ್ತರಿಗೆ ಬಿಸಿ ಬೆಳೆ ಬಾತ್, ಕೇಸರಿ ಬಾತ್, ವಡೆ ವ್ಯವಸ್ಥೆ ಮಾಡಿದ್ದರು.

ಈ ವೇಳೆ ಕೆಪಿಸಿಸಿ ಕಾರ್ಯಕಾರಿಣಿ ಸದಸ್ಯ ದೊಡ್ಡಸ್ವಾಮೇಗೌಡ, ಗ್ರಾಪಂ ಮಾಜಿ ಅಧ್ಯಕ್ಷ ಪ್ರೇಮಕುಮಾರ್, ರೇಣುಕಾಮದು, ಬಾಬು, ವಾಸು, ಕೃಷ್ಣ, ಪಾರುಪತ್ತೇದಾರ್ ಯತಿರಾಜ್, ಕುಮಾರ್, ಬಿದರಕಟ್ಟೆ ಹಳ್ಳ, ಸೌಮ್ಯ ಸತೀಶ್, ಅರ್ಚಕರಾದ ನಾರಾಯಣ ಅಯ್ಯಂಗಾರ್, ವಾಸುದೇವ, ಶೇಷಾದ್ರಿ, ಮಾರುತಿ ಪ್ರಸಾದ್, ಆಗಮಿಕರು ವೇಣುಗೋಪಾಲ್, ಸಿಬ್ಬಂದಿ ಶಿವಣ್ಣ, ತಿಮ್ಮಣ್ಣ ಚಂದ್ರಣ್ಣ, ಅನಂತ್, ತಬಲ ಮಂಜು ಇದ್ದರು.



ಉತ್ಸವ ಮೂರ್ತಿಗಳನ್ನು ಪಲ್ಲಕ್ಕಿ ಮೂಲಕ ಪ್ರದಕ್ಷಿಣೆ ಮಾಡಲಾಯಿತು.

ಮೂಗೂರಲ್ಲಿ ಸಡಗರದ ವಧೆ ಉತ್ಸವ

ಮೂಗೂರು, ಜ.10– ಶ್ರೀತ್ರಿಪುರ ಸುಂದರಿ ಅಮ್ಮನವರ ಜಾತ್ರಾ ಮಹೋತ್ಸವದ ಅಂಗವಾಗಿ ವಧೆ ಉತ್ಸವ ಸಡಗರದಿಂದ ನೆರವೇರಿತು.

ಜ.3ರಂದು ಹಸ್ತ್ತಾನ ಅಂಕುರಾರ್ಪಣೆ ಮೂಲಕ ಜಾತ್ರೆಗೆ ಸಾಂಕೇತಿಕವಾಗಿ ಚಾಲನೆ ದೊರೆತಿದ್ದು, ಅಮ್ಮನವರ 7 ದಿನಗಳ ಮೌನ ವ್ರತದೊಂದಿಗೆ ರಾಕ್ಷಸರನ್ನು ಸಂಹಾರ ಮಾಡುವ ತಪ್ಪಸಿನ ಆಚರಣೆಯೇ ವಧೆ ಉತ್ಸವದ ಅಂಗವಾಗಿ ಗ್ರಾಮದ ಪ್ರಮುಖ ರಸ್ತೆಗಳನ್ನು ತಳಿರು ತೋರಣ, ಬಣ್ಣ ಬಣ್ಣದ ರಂಗೋಲೆಗಳಿಂದ ಸಿಂಗರಿಸಲಾಗಿತ್ತು. ಗ್ರಾಮದ ಅಂಬೇಡ್ಕರ್ ಬಡಾವಣೆಯೊಂದರ ಹೆಬ್ರೆ ಮನೆಯಿಂದ ಹೊರಟ ಹೆಬ್ರೆ ಉತ್ಸವ ದುಬ್ಬಮ್ಮನವರ ದೇಗುಲದಲ್ಲಿ ಕಂಕಣಧಾರಿ ಅರ್ಚಕರು ಸೇರಿದಂತೆ ಪೂಜೆ ಸಲ್ಲಿಸಿ ಮೆರವಣಿಗೆ ಮೂಲಕ ಗ್ರಾಮದ ಶ್ರೀತ್ರಿಪುರ ಸುಂದರಿ ಅಮ್ಮನವರ ದೇಗುಲಕ್ಕೆ ಆಗಮಿಸುವ ಮಾರ್ಗದುದ್ದಕ್ಕೂ ಮಹಿಳೆಯರು ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಹೆಬ್ರೆಗಳಿಗೆ ಹೂ, ಅಕ್ಕಿ ಎಣ್ಣೆ ಎರೆದು ಭಕ್ತಿ ಭಾವ ಮೆರೆದರು. ರೈತರು ಅಮ್ಮನವರ ದೇವಾಲಯದ ಮುಂದೆ ಹಾಕಿದ್ದ ಭತ್ತದ ಹುಲ್ಲಿನ ರಾಶಿಗೆ ಅಗ್ನಿ ಸ್ಪರ್ಶ ಮಾಡಿದರು. ಹೆಬ್ರೆಗಳ ಸಮೇತ ದೇಗುಲ ಪ್ರವೇಶಿಸಿದ ಬಳಿಕ ಕಂಕಣಧಾರಿ ಅರ್ಚಕರು ಅಮ್ಮನವರಿಗೆ ಮಂಗಳಾರತಿ ಮಾಡಿದರು. ದೊಡ್ಡಕೆರೆ ಬಳಿ ಇರುವ ಕಣಿಯರ ಮಂಟಪದಲ್ಲಿ ರಾತ್ರಿ ಕಣಿಯರ ಸಮುದಾಯದಿಂದ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಉತ್ಸವ ನಡೆಸಲಾಯಿತು. ಗ್ರಾಮದ ಎಲ್ಲಾ ಸಮುದಾಯದ ಮುಖಂಡರು, ಅರ್ಚಕ ಸಮೂಹ ಹಾಗೂ ಗ್ರಾಮಸ್ಥರು ಸಾಕ್ಷಿಯಾಗಿದರು.



ಮೂಗೂರಲ್ಲಿ ವಧೆ ಉತ್ಸವ ನಡೆಯಿತು.

ಸಂಪ್ರದಾಯದಂತೆ ಅಂಧಕಾಸುರ ಸಂಹಾರ ಉತ್ಸವ ನಡೆಯಲಿ

ಶ್ರೀಕಂಠೇಶ್ವರಸ್ವಾಮಿ ಭಕ್ತರ ಆಗ್ರಹ

ನಂಜನಗೂಡು, ಜ.10– ಈ ಹಿಂದೆ ನಡೆದು ಬಂದ ರೂಢಿ ಸಂಪ್ರದಾಯದಂತೆ ಶ್ರೀಕಂಠೇಶ್ವರ ಸ್ವಾಮಿಯವರ ಅಂಧಕಾಸುರ ಸಂಹಾರ ಉತ್ಸವ ಜರುಗಬೇಕು ಎಂದು ಶ್ರೀಕಂಠೇಶ್ವರ ಭಕ್ತ ಮಂಡಳಿ ಸದಸ್ಯರು ದೇವಾಲಯದ ಸಿಇಓಗೆ ಮನವಿ ಸಲ್ಲಿಸಿದರು.

ಯುವ ಬ್ರಿಗೇಡ್ ದಕ್ಷಿಣ ವಲಯ ಸಂಚಾಲಕ ಚಂದ್ರಶೇಖರ್ ಮಾತನಾಡಿ, ಕಳೆದ ವರ್ಷ ಅಂಧಕಾಸುರ ಸಂಹಾರ ಉತ್ಸವ ವೇಳೆ ಅಂಧಕಾಸುರನ ಚಿತ್ರಪಟ ಮಹಿಷನ ಚಿತ್ರ ಹೋಲುತ್ತದೆ ಎಂದು ಆಕ್ಷೇಪ ವ್ಯಕ್ತಪಡಿಸಿದ ಕಾರಣ ಗೊಂದಲ ಉಂಟಾಗಿ ಅಹಾತುರ್ಯ ಘಟನೆಗಳು ಸಂಭವಿಸಿದ್ದವು. ಈ ಗೊಂದಲ ನಿವಾರಣೆಗಾಗಿ ತಾಲೂಕು ಆಡಳಿತ ಜ.9 ರಂದು ತಾಲೂಕು ಕಚೇರಿಯಲ್ಲಿ ಪೂರ್ವಭಾವಿ ಸಭೆಯನ್ನು ಕರೆದಿತ್ತು. ಸಭೆಯಲ್ಲಿ ಮಹಿಷಾಸುರನನ್ನು ಹೋಗುವ ಚಿತ್ರಪಟ ತೆಗೆದು ಶಿವ ಪುರಾಣದಲ್ಲಿನ ಅಂಧಕಾಸುರನ ವರ್ಣನೆಯಂತೆ ಚಿತ್ರ ಬಿಡಿಸಲಾಗಿದೆ. ಆ ಚಿತ್ರಪಟವನ್ನು ಅಳವಡಿಸಿ ಕಾರ್ಯಕ್ರಮ ನಡೆಸಲಾಗುವುದು ಎಂದು ತಾಲೂಕು ಆಡಳಿತ ಹೇಳಿದ್ದರಿಂದ ನಂಜುಂಡೇಶ್ವರನ ಭಕ್ತರಾದ ನಾವು ಸಮ್ಮತಿ ಸೂಚಿಸಿದ್ದೆವು ಎಂದರು.

ಅಂಧಕಾಸುರ ಸಂಹಾರದ ವಿರೋಧಿಗಳು ಅಂಧಕಾಸುರನ ನೂತನ ಚಿತ್ರವನ್ನು ಚಿಕ್ಕದಾಗಿ ಬರೆಯಬೇಕು. ಅದನ್ನು ಯಾರು ತುಳಿಯಬಾರದು ಎಂದು ಆಗ್ರಹಿಸಿದ್ದು, ಅದಕ್ಕೆ ತಾಲೂಕು ಆಡಳಿತ ಒಪ್ಪಿಗೆ ನೀಡಿರುವುದು ಖಂಡನೀಯ. ಇದರಿಂದಾಗಿ ನಮ್ಮ ರೂಢಿ ಸಂಪ್ರದಾಯ, ಧಾರ್ಮಿಕ ಭಾವನೆಗಳಿಗೆ ಧಕ್ಕೆ ಉಂಟಾಗಿದ್ದು, ಈ ಹಿಂದಿನ ಸಂಪ್ರದಾಯದಂತೆ ಹಾಗೂ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಅಧಿನಿಯಮ 1997 ಸೆಕ್ಷನ್ 58ರ ಪ್ರಕಾರ ರೂಢಿ ಸಂಪ್ರದಾಯ ಪದ್ಧತಿ ಈ ಹಿಂದೆ ಹೇಗೆ ನಡೆದುಕೊಂಡು ಬಂದಿತ್ತೋ ಹಾಗೆ ಆಚರಿಸಲು ಹಕ್ಕಿದೆ. ಅಲ್ಲದೇ ಸದರಿ ಆಚರಣೆ ಕುರಿತು ರಾಜ್ಯ ಆಗಮ ಶಾಸ್ತ್ರದ ಪಂಡಿತರು ಜ.6 ರಂದು ಶ್ರೀಕಂಠೇಶ್ವರನ ದೇವಾಲಯಕ್ಕೆ ಭೇಟಿ ನೀಡಿ ಪರಿಶೀಲಿಸಿ ನೀಡಿರುವ ಅಭಿಪ್ರಾಯದ ವರದಿಯಂತೆ ಮಹಿಷಾಸುರನ ಚಿತ್ರಕ್ಕೆ ಬದಲಾಗಿ ನೂತನವಾಗಿ ರಚಿಸಿರುವ ಅಂಧಕಾಸುರನ ಚಿತ್ರಪಟ ಮಾತ್ರ ಬದಲಿಸಿ ಉಳಿದ ಆಚರಣೆಯನ್ನು ಈ ಹಿಂದೆ ನಡೆಯುತ್ತಿದ್ದ ರೂಢಿ ಸಂಪ್ರದಾಯದಂತೆ ನಡೆಸಬೇಕೆಂದು ಆಗ್ರಹಿಸುತ್ತೇವೆ ಇಲ್ಲವಾದಲ್ಲಿ ಉಗ್ರ ಪ್ರತಿಭಟನೆ ರೂಪಿಸಲಾಗುವುದು ಎಂದು ಎಚ್ಚರಿಸಿದರು.

ಈ ವೇಳೆ ಶ್ರೀರಾಂಪುರ ಯಜಮಾನರಾದ ಶಿವಣ್ಣ, ಮಹದೇವು, ಮುಖಂಡರಾದ ರಾಚಪ್ಪ, ಶಿವನಾಗಪ್ಪ, ಉಮೇಶ್, ಲಾರ, ಅನಂತ್, ಎನ್.ಸಿ ಬಸವಣ್ಣ ಅಂಬಿ, ಮಹದೇವ್, ನಾಗೇಶ್, ಜಯಕುಮಾರ್, ಗಿರೀಶ್, ಕೃಷ್ಣಜೋಯಿಸ್, ಸುನೀಲ್, ಶಿವನಾಗಪ್ಪ, ಪ್ರಕಾಶ್, ಕಿರಣ್, ಉಮೇಶ್, ನಗರಸಭಾ ಸದಸ್ಯರಾದ ಕಪಿಲೇಶ್, ಮಹಾದೇವಪ್ರಸಾದ್, ಸಿದ್ದರಾಜು, ಖಾಲಿದ್ ಅಹಮ್ಮದ್ ಸೇರಿದಂತೆ ನೂರಾರು ಭಕ್ತರಿದ್ದರು.



ಶ್ರೀಕಂಠೇಶ್ವರ ಭಕ್ತ ಮಂಡಳಿ ಸದಸ್ಯರು ದೇವಾಲಯದ ಸಿಇಓಗೆ ಮನವಿ ಸಲ್ಲಿಸಿದರು.

ಸದ್ಗುರು ಮಹಾದೇವ ತಾತ ಆರಾಧನಾ ಮಹೋತ್ಸವ



ನಂಜನಗೂಡು ತಾಲೂಕಿನ ಸಂಗಮ ಕ್ಷೇತ್ರದಲ್ಲಿ ಶುಕ್ರವಾರ ಸದ್ಗುರು ಮಹಾದೇವ ತಾತ ಅವರ 38ನೇ ಆರಾಧನಾ ಮಹೋತ್ಸವ ವಿಜೃಂಭಣೆಯಿಂದ ನೆರವೇರಿತು. ಸುತ್ತಮುತ್ತಲ ಗ್ರಾಮಗಳ ಭಕ್ತರು ಆಗಮಿಸಿ ಗುರುಗಳ ಆಶೀರ್ವಾದ ಪಡೆದರು. ಭಕ್ತರ ಅನುಕೂಲಕ್ಕಾಗಿ ಹುಲ್ಲಹಳ್ಳಿಯಿಂದ ಸಂಗಮ ಕ್ಷೇತ್ರಕ್ಕೆ ಸಾರಿಗೆ ಬಸ್ ವ್ಯವಸ್ಥೆ ಮಾಡಲಾಗಿತ್ತು. ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು.

ಮುಖ್ಯ ಶಿಕ್ಷಕರ ವರ್ಗಾವಣೆ, ಸಹ ಶಿಕ್ಷಕರ ಮರು ನಿಯೋಜನೆಗೆ ಒತ್ತಾಯಿಸಿ

ಶಿರಮಳ್ಳಿಯಲ್ಲಿ ವಿದ್ಯಾರ್ಥಿಗಳು, ಪೋಷಕರ ಪ್ರತಿಭಟನೆ

ಹೆಚ್.ಡಿ.ಕೋಟೆ, ಜ.10– ಮುಖ್ಯ ಶಿಕ್ಷಕರ ವರ್ಗಾವಣೆ ಮಾಡಿ, ಸಹ ಶಿಕ್ಷಕರನ್ನು ಶಾಲೆಗೆ ಮರು ನಿಯೋಜಿಸುವಂತೆ ಒತ್ತಾಯಿಸಿ ತಾಲೂಕಿನ ಶಿರಮಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ ಎದುರು ಮಕ್ಕಳು ಪೋಷಕರೊಂದಿಗೆ ಪ್ರತಿಭಟನೆ ನಡೆಸಿದರು.

ಈ ವೇಳೆ ಮಾತನಾಡಿದ ಮಕ್ಕಳು, ಶಾಲೆಯಲ್ಲಿ ಕನ್ನಡ, ನಲಿ–ಕಲಿ ಶಿಕ್ಷಕಿಯರಾಗಿದ್ದ ಗೌರಮ್ಮ ಮತ್ತು ಶಿಲ್ಪಾ ಅವರು ನಮಗೆ ಉತ್ತಮವಾಗಿ ಪಾಠ ಮಾಡುತ್ತಿದ್ದರು. ಆದರೆ ಶಾಲೆಯ ಮುಖ್ಯ ಶಿಕ್ಷಕ ಹೆಚ್.ಎಂ. ಪುಟ್ಟರಾಜು ಅವರು ಸಮಯಕ್ಕೆ ಸರಿಯಾಗಿ ಶಾಲೆಗೆ ಆಗಮಿಸುತ್ತಿರಲಿಲ್ಲ. ಮಕ್ಕಳಿಗೆ ಸರಿಯಾಗಿ ಪಾಠ ಮಾಡುತ್ತಿರಲಿಲ್ಲ. ಶಿಕ್ಷಕರನ್ನು ನಿಂದಿಸುವುದು. ನಮಗೆ ಗುಣಮಟ್ಟದ ಬಿಸಿಯೂಟ ನೀಡುತ್ತಿರಲಿಲ್ಲ. ಇದರ ಬಗ್ಗೆ ಮಾತನಾಡಿದ ಶಿಕ್ಷಕರನ್ನು ಮುಖ್ಯ ಶಿಕ್ಷಕರು ಈ ಶಾಲೆಯಿಂದ ಮೇಲಧಿಕಾರಿಗಳ ಸಹಾಯದಿಂದ ಬೇರೆ ಶಾಲೆಗಳಿಗೆ ನಿಯೋಜಿಸಿದ್ದಾರೆ. ಇದರಿಂದ ಶಾಲೆಯಲ್ಲಿ ಸರಿಯಾಗಿ ಪಾಠ ಪ್ರವಚನ ನಡೆಯುತ್ತಿಲ್ಲ. ಹೀಗಾಗಿ ಉತ್ತಮ ಶಿಕ್ಷಕರಾದ ಗೌರಮ್ಮ, ಶಿಲ್ಪಾ ಅವರನ್ನು ಇಲ್ಲಿಗೆ ಮರು ನಿಯೋಜಿಸಿ, ಮುಖ್ಯ ಶಿಕ್ಷಕರನ್ನು ಬೇರೆಡೆಗೆ ವರ್ಗಾವಣೆ ಮಾಡಬೇಕು ಎಂದು ಒತ್ತಾಯಿಸಿದರು.

ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಶಿಕ್ಷಣ ಸಂಯೋಜಕರಾದ ಚಿಕ್ಕನಾಯ್ಕ, ನಂಜರಾಜು ಅವರು ವಿದ್ಯಾರ್ಥಿಗಳ ಮನವೊಲಿಸಿ ನಿಮ್ಮ ಸಮಸ್ಯೆಗಳು ಏನೇ ಇದ್ದರೂ ನಾವು ಬಗೆಹರಿಸುತ್ತೇವೆ. ಪ್ರತಿಭಟನೆ ಕೈ ಬಿಟ್ಟು ಶಾಲೆಗೆ ಹೋಗುವಂತೆ ತಿಳಿಸಿದರು. ಈ ವೇಳೆ ಮಕ್ಕಳು ನಮ್ಮ ಶಿಕ್ಷಕಿಯರು ಬರಬೇಕು. ಮುಖ್ಯ ಶಿಕ್ಷಕರು ಶಾಲೆಯಿಂದ ಬೇರೆಡೆಗೆ ವರ್ಗಾವಣೆಯಾಗಲೇಬೇಕು ಎಂದು ಒತ್ತಾಯಿಸಿ ಮನವಿ ಸಲ್ಲಿಸಿ ಪ್ರತಿಭಟನೆ ಕೈಬಿಟ್ಟರು. ಈ ವೇಳೆ ಎಸ್‌ಡಿಎಂಸಿ ಉಪಾಧ್ಯಕ್ಷೆ ಸೌಮ್ಯ, ಸದಸ್ಯರಾದ ಈರೇಗೌಡ, ಬೀರೇಗೌಡ, ಸೋಮಣ್ಣ, ಮುಖಂಡರು ಹಾಜರಿದ್ದರು.



ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

"ಮುಖ್ಯ ಶಿಕ್ಷಕರು ಶಾಲೆಯಲ್ಲಿ ಪಾಠ ಮಾಡುತ್ತಿಲ್ಲ. ಸರಿಯಾಗಿ ಬಿಸಿ ಊಟ ಕೊಡುತ್ತಿಲ್ಲ. ಸಹ ಶಿಕ್ಷಕರ ಜೊತೆ ಹೊಂದಾಣಿಕೆ ಇಲ್ಲ. ಇಂತಹ ಮುಖ್ಯ ಶಿಕ್ಷಕರು ನಮಗೆ ಬೇಕಿಲ್ಲ. ಬೇರೆಡೆಗೆ ನಿಯೋಜನೆಯಾಗಿರುವ ಇಬ್ಬರು ಶಿಕ್ಷಕಿಯರನ್ನು ನಮ್ಮ ಶಾಲೆಗೆ ಮತ್ತೆ ಕರೆಸಿ. ನಮಗೆ ಪರೀಕ್ಷೆ ಹತ್ತಿರವಾಗುತ್ತಿದೆ. ಪಾಠ ನಡೆಯುವ ವ್ಯವಸ್ಥೆ ಮಾಡುವಂತೆ ವಿದ್ಯಾರ್ಥಿಗಳು ತಿಳಿಸಿ ದ್ದಾರೆ. ಈ ಎಲ್ಲಾ ಮಾಹಿತಿಯನ್ನು ಬಿಇಓ ಅವರಿಗೆ ನೀಡುತ್ತೇವೆ.
- ನಂಜರಾಜು, ಚಿಕ್ಕ ನಾಯಕ, ಶಿಕ್ಷಣ ಸಂಯೋಜಕರು.

ರಾಜಕೀಯ ಮುಖಂಡರು, ಅಧಿಕಾರಿಗಳ ಶಿಫಾರಸು ಕೈಬಿಟ್ಟು ದೊಡ್ಡ ಮಟ್ಟದಲ್ಲಿ

ಬಂಡಾಯ ಎದ್ದರೇ ರೈತರ ಸಮಸ್ಯೆಗೆ ಪರಿಹಾರ ಸಾಧ್ಯ

ರಾಜ್ಯ ರೈತ ಸಂಘ ಏಕೀಕರಣ ಸಮಿತಿ ಪ್ರಮುಖ ಪಚ್ಚೆ ನಂಜುಂಡಸ್ವಾಮಿ

ತಿ.ನರಸೀಪುರ, ಜ.10– ರೈತ ಸಂಘಟನೆಗೆ ತನ್ನದೇ ಆದ ಶಕ್ತಿ ಇದ್ದು, ರೈತರಿಗೆ ಸಮಸ್ಯೆಯಾದಾಗ ರಾಜಕೀಯ ಮುಖಂಡರು, ಅಧಿಕಾರಿಗಳ ಶಿಫಾರಸು ಕೈಬಿಟ್ಟು ಜನ ಬಲವನ್ನು ದೊಡ್ಡ ಮಟ್ಟದಲ್ಲಿ ಕಟ್ಟಿ ಬಂಡಾಯ ಎದ್ದಾಗ ಸಮಸ್ಯೆಗಳ ಪರಿಹಾರ ಸಾಧ್ಯವಾಗುತ್ತದೆ ಎಂದು ರಾಜ್ಯ ರೈತ ಸಂಘದ ಏಕೀಕರಣ ಸಮಿತಿ ಪ್ರಮುಖ ಪಚ್ಚೆ ನಂಜುಂಡಸ್ವಾಮಿ ತಿಳಿಸಿದರು.

ಪಟ್ಟಣದ ಕರ್ನಾಟಕ ರಾಜ್ಯ ರೈತ ಸಂಘ, ಹಸಿರು ಸೇನೆ (ಏಕೀಕರಣದ ಹಾದಿಯಲ್ಲಿ) ಕಚೇರಿಯಲ್ಲಿ ಶುಕ್ರವಾರ ನಡೆದ ರೈತ ಮುಖಂಡರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಭೆಯಲ್ಲಿ ರೈತರು ಹಲವು ಸಮಸ್ಯೆಗಳ ಬಗ್ಗೆ ಹೇಳಿದ್ದೀರಿ. ಎಲ್ಲಾ ಸಮಸ್ಯೆಗಳಿಗೆ ಪರಿಹಾರವಿದ್ದು ನಾವು ಸಂಘಟನೆಯಲ್ಲಿ ಬಂದಾಗ ಮೊದಲು ಸಚಿವರು, ಜಿಲ್ಲಾಧಿಕಾರಿಗಳು, ಅಧಿಕಾರಿಗಳಿಗೆ ಸಮಸ್ಯೆ ಬಗ್ಗೆ ಹೇಳುವುದನ್ನು ಬಿಟ್ಟು ಜನಬಲ ದೊಡ್ಡ ಮಟ್ಟದಲ್ಲಿ ಕಟ್ಟಿ ಬಂಡಾಯ ಏಳುವ ಕೆಲಸ ಮಾಡಿದಾಗ ನೂರಕ್ಕೆ ನೂರರಷ್ಟು ಸಮಸ್ಯೆಗೆ ಪರಿಹಾರ ದೊರಕಲಿದೆ ಎಂದರು.

ರೆವಿನ್ಯೂ ಸಮಸ್ಯೆಗಳ ಬಗ್ಗೆ ಹೆಚ್ಚಿನ ದೂರುಗಳಿವೆ. ಬನ್ನೂರು ಹೆಗ್ಗೆರೆ ಕೆರೆಯ 400 ಎಕರೆ ತೆರವಾಗಬೇಕು. ತಾಲೂಕಿನ ಎಲ್ಲಾ ಕೆರೆಗಳ ಒತ್ತುವರಿ ತೆರವಾಗುವ ಜೊತೆಗೆ ಹೂಳೆತ್ತುವ ಕೆಲಸ ಆಗಬೇಕು. ಭತ್ತ ಕೊಯ್ಯುವ ಮಿಷನ್‌ಗೆ ಜಿಲ್ಲಾಧಿಕಾರಿಗಳು ನಿಗದಿ ಪಡಿಸಿರುವ 2500 ರೂ.ಗಳಿಂದ ಹೆಚ್ಚುವರಿಯಾಗಿ 500 ರೂ.ಗಳನ್ನು ಪಡೆಯುತ್ತಿರುವ ಬಗ್ಗೆ ದೂರುಗಳಿವೆ. ಅಲ್ಲದೇ ಮಲಿಯೂರು ಡಿಸ್ಟಲರೀಸ್‌ನವರು ವೇಸ್ಟೇಜ್ ಅನ್ನು ನಾಲೆಗೆ ಬಿಡುವ ಜೊತೆಗೆ ಬೋರ್‌ವೆಲ್ ನೀರು ಬಳಸಿಕೊಂಡು ಅಂತರ್ಜಲ ಕುಸಿಯುವಂತೆ ಮಾಡುತ್ತಿದ್ದಾರೆ ಎಂಬ ಆರೋಪ ಕೇಳಿ ಬಂದಿದ್ದು, ಎಲ್ಲಾ ಸಮಸ್ಯೆಗೂ ಪರಿಹಾರ ಕಂಡುಕೊಳ್ಳಬೇಕಾದರೆ ಎಲ್ಲರೂ ಸಂಘಟಿತ ಹೋರಾಟ ಮಾಡಬೇಕಾಗುತ್ತದೆ. ಎಲ್ಲೆಲ್ಲಿ ಸಮಸ್ಯೆಗಳಿವೆಯೋ ಅಲ್ಲಿ ದೊಡ್ಡ ಮಟ್ಟದ ಹೋರಾಟ ಮಾಡೋಣ. ಜಿಲ್ಲಾಧಿಕಾರಿ ಕಚೇರಿ, ತಾಲೂಕು ಕಚೇರಿ ಹಾಗೂ ಫ್ಯಾಕ್ಟರಿ ಎದುರು ನಿರಂತರ ಧರಣಿ ಮಾಡಿ ಪರಿಹಾರ ಕಂಡುಕೊಳ್ಳೋಣ. ನಾವೆಲ್ಲರೂ ಒಗ್ಗಟ್ಟಿನ ಹೋರಾಟದಲ್ಲಿ ತೊಡಗಿಕೊಂಡರೆ ಈ ಭಾಗದಲ್ಲಿ ರೈತರ ಕಲ್ಯಾಣವಾಗಲಿದೆ ಎಂದರು.

80ರ ದಶಕದ ಚಳವಳಿಯಲ್ಲಿ ಪ್ರೊ.ನಂಜುಂಡಸ್ವಾಮಿ, ಶಿವಮೊಗ್ಗದಲ್ಲಿ ಎಂ.ಡಿ. ಸುಂದರೇಶ್, ಕೃಷಿ ಸಚಿವರಾಗಿದ್ದ ಹೆಚ್.ಎಸ್.ರುದ್ರಪ್ಪ, ಉತ್ತರ ಕರ್ನಾಟಕದ ಬಾಬಾ ಗೌಡ ಪಾಟೀಲ್, ಮಂಡ್ಯ ಭಾಗದಲ್ಲಿ ಕೆ.ಎಸ್.ಪುಟ್ಟಣ್ಣಯ್ಯರಂತಹ ಮಹನೀಯರ ನಾಯಕತ್ವದಲ್ಲಿ ಕರ್ನಾಟಕದಲ್ಲಿ ರೈತ ಚಳವಳಿ ರೈತರಿಗೆ ದೊಡ್ಡ ಕೊಡುಗೆ ನೀಡಿದೆ. ರೈತರ ಮನೆಗಳ ಜಪ್ತಿ ಕಾಲದಲ್ಲಿ ಸಹಕಾರಿ ಬ್ಯಾಂಕ್‌ಗಳ ಬೀಗ ಒಡೆದು ರೈತರ ಪಾತ್ರೆ ಪಡಗಗಳ ಮರು ಜಪ್ತಿ ಕಾರ್ಯ ಆಗಿತ್ತು. ರೈತರ ಹೊಲ ಗದ್ದೆಗಳಿಗೆ ಇಂದು ಉಚಿತ ವಿದ್ಯುತ್ ದೊರೆಯುತ್ತಿದೆ ಎಂದರೆ ಅದರಲ್ಲಿ ರೈತ ಸಂಘದ ಕರ ನಿರಾಕರಣೆ ಚಳವಳಿ ಪ್ರಭಾವ ಇದೆ. ಇಂದಿಗೂ ಕೊಳ್ಳೇಗಾಲ, ಬಾದಾಮಿ, ಚಿತ್ರದುರ್ಗ, ತುಮಕೂರು ಭಾಗದಲ್ಲಿ 20 ವರ್ಷಗಳಿಂದ ಕರೆಂಟ್ ಬಿಲ್ ಕಟ್ಟದ ನೂರಾರು ಗ್ರಾಮಗಳಿವೆ ಎಂದರು.

ರೈತ ಚಳವಳಿ 2004ರಲ್ಲಿ ಪ್ರೊ.ನಂಜುಂಡಸ್ವಾಮಿ ಅವರು ನಿಧನರಾದ ನಂತರ ಒಡಕಿನ ದಾರಿಯಲ್ಲಿ ನಡದರೆ, ಇತ್ತೀಚೆಗೆ ಪುಟ್ಟಣ್ಣಯ್ಯ ಕಾಲವಾದ ನಂತರದಲ್ಲಿ ದೊಡ್ಡ ಮಟ್ಟದ ಕವಲು ದಾರಿಯಲ್ಲಿ ಸಾಗುತ್ತಿರುವುದು ನೋವಿನ ಸಂಗತಿ. ಆದರೆ ರೈತ ಚಳುವಳಿ ಕುಗ್ಗಿರಲಿಲ್ಲ. ಚದುರಿ ಹೋಗಿತ್ತು ಎಂದ ಅವರು ಮುಂದಿನ ದಿನಗಳಲ್ಲಿ ಏಕೀಕರಣದ ಹಾದಿಯಲ್ಲಿ ರೈತ ಸಂಘ ಸಾಗಬೇಕಿದೆ ಎಂದರು.

ಸಭೆಯಲ್ಲಿ ಜಿಲ್ಲಾಧ್ಯಕ್ಷ ವಿದ್ಯಾಸಾಗರ್, ಜಿಲ್ಲಾ ಗೌರವಾಧ್ಯಕ್ಷ ಕೆ.ಜಿ.ಶಿವಪ್ರಸಾದ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಇಮ್ಮಾವು ರಘು, ಜಿಲ್ಲಾ ಸಂಚಾಲಕ ಕಳ್ಳೀಪುರ ಮಹದೇವಸ್ವಾಮಿ, ತಾಲೂಕು ಅಧ್ಯಕ್ಷ ಆಲಗೂಡು ಮಹದೇವು, ಕಾರ್ಯಾಧ್ಯಕ್ಷ ಬನ್ನೂರು ರಾಮಕೃಷ್ಣ, ಉಪಾಧ್ಯಕ್ಷ ಮೂಗೂರು ಮಹದೇವಸ್ವಾಮಿ,ಅತ್ತಹಳ್ಳಿ ರಂಗಸ್ವಾಮಿ, ತಲಕಾಡು ಚೆಲುವರಾಜು, ಹನುಮನಾಳು ಜಗದೀಶ್, ಹಲವಾರ ಗುರುಸ್ವಾಮಿ, ಕೆಬ್ಬೇಹುಂಡಿ ಮಹೇಶ್, ರಾಜಣ್ಣ,ಪ್ರಕಾಶ್ ಸೇರಿದಂತೆ ರೈತ ಮುಖಂಡರು ಹಾಜರಿದ್ದರು.



ರೈತ ಮುಖಂಡರ ಸಭೆಯಲ್ಲಿ ಪಚ್ಚೆ ನಂಜುಂಡಸ್ವಾಮಿ ಮಾತನಾಡಿದರು.

ಜ.23ಕ್ಕೆ ಮುಖಾಮುಖಿ ಚರ್ಚೆ

ರೈತರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಜ.23ರಂದು ನಂಜನಗೂಡಿನ ತಾಂಡವಪುರದಲ್ಲಿ ಬೃಹತ್ ಸಭೆ ಆಯೋಜಿಸಲಾಗಿದೆ. ಕಾರ್ಯಕ್ರಮದಲ್ಲಿ 5 ಸಾವಿರ ರೈತರು ಭಾಗಿಯಾಗಲಿದ್ದು, ಶಾಸಕರಾದ ಅನಿಲ್, ಗಣೇಶ್ ಪ್ರಸಾದ್, ದರ್ಶನ್, ಡಾ.ಯತೀಂದ್ರ, ದರ್ಶನ್ ಪುಟ್ಟಣ್ಣಯ್ಯ ಹಾಗೂ ಸಂಸದ ಸುನೀಲ್ ಬೋಸ್ ಆಗಮಿಸುತ್ತಿದ್ದು ಇವರ ಎದುರು ನಮ್ಮ ಸಮಸ್ಯೆಗಳನ್ನು ಸ್ನೇಹ ಪೂರ್ವಕವಾಗಿ ಮಂಡಿಸೋಣ. ನಮ್ಮ ಸಮಸ್ಯೆಗಳಿಗೆ ಸ್ಪಂದಿಸದಿದ್ದರೇ ಅವರ ವಿರುದ್ಧ ಸೆಟೆದು ನಿಲ್ಲುವ ಕೆಲಸ ಮಾಡೋಣ. - ಪಚ್ಚೆ ನಂಜುಂಡಸ್ವಾಮಿ.

ಹುಣಸೂರು: ಹುಲಿ ದಾಳಿ ತಡೆಯುವಲ್ಲಿ ವಿಫಲ; ಪ್ರತಿಭಟನೆ



ಅರಣ್ಯ ಇಲಾಖೆ ವಿರುದ್ಧ ಪ್ರತಿಭಟನೆ ನಡೆಸಲಾಯಿತು.

ಹುಣಸೂರು, ಜ.10– ಹುಲಿ ದಾಳಿ ತಡೆಯುವಲ್ಲಿ ವಿಫಲವಾಗಿರುವ ಅರಣ್ಯ ಇಲಾಖೆ ವಿರುದ್ಧ ತಾಲೂಕಿನ ಹೊಸೂರು ಗೇಟ್ ಬಳಿ ರಾಜ್ಯ ರೈತ ಸಂಘದಿಂದ ರಸ್ತೆ ತಡೆದು ಪ್ರತಿಭಟನೆ ನಡೆಸಲಾಯಿತು.

ರೈತ ಸಂಘದ ಜಿಲ್ಲಾಧ್ಯಕ್ಷ ಕುಮಾರ್ ಮಾತನಾಡಿ, ಹುಲಿ ದಾಳಿ ನಡೆಸಿ ನಾಲ್ಕೈದು ಹಸುಗಳನ್ನು ತಿಂದು ಹಾಕಿದ್ದು, ಈ ಭಾಗದ ಜನರು ಭಯಗೊಂಡಿದ್ದಾರೆ. ಅಲ್ಲದೇ ಜಮೀನುಗಳಿಗೆ ಓಡಾಡಲು ಸಾಧ್ಯವಾಗದಂತಹ ಪರಿಸ್ಥಿತಿ ಎದುರಾಗಿದೆ. ಹುಲಿ ದಾಳಿಯಿಂದ ಲಕ್ಷಾಂತರ ರೂ. ಬೆಲೆ ಬಾಳುವ ಹಸುಗಳನ್ನು ಕಳೆದುಕೊಂಡವರಿಗೆ ಅರಣ್ಯ ಇಲಾಖೆ ಅಧಿಕಾರಿಗಳು 20 ರಿಂದ 25 ಸಾವಿರ ರೂ. ಪರಿಹಾರ ನೀಡುತ್ತಿದ್ದಾರೆ ಎಂದು ಆರೋಪಿಸಿದ ಅವರು ಈ ಕೂಡಲೇ ಹುಲಿ ಸೆರೆಗೆ ಅರಣ್ಯಾಧಿಕಾರಿಗಳು ಮುಂದಾಗಬೇಕು ಎಂದು ಒತ್ತಾಯಿಸಿದರು.

ಡಿಸಿಎಫ್, ಎಸಿಎಫ್ ಅವರು ವಾರದೊಳಗೆ ಹುಲಿ ಸೆರೆ ಹಿಡಿಯದಿದ್ದರೇ ಅರಣ್ಯ ಇಲಾಖೆ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯಾಧಿಕಾರಿಗಳಾದ ಭಾಸ್ಕರ್, ಆರ್.ನಂದಕುಮಾರ್ ಹುಲಿ ಸೆರೆ ಹಿಡಿಯುವುದಾಗಿ ಭರವಸೆ ನೀಡಿದ್ದರಿಂದ ಪ್ರತಿಭಟನಾಕಾರರು ಪ್ರತಿಭಟನೆ ಕೈ ಬಿಟ್ಟರು.

ಪ್ರತಿಭಟನೆಯಲ್ಲಿ ಮುಖಂಡರಾದ ಕೃಷ್ಣಕುಮಾರ್, ಅರಣ್ಯ ಸಮಿತಿ ಅಧ್ಯಕ್ಷ ಗೋವಿಂದ, ಗ್ರಾಪಂ ಸದಸ್ಯ ಪ್ರಶಾಂತ್ ರಾಜು, ಯಜಮಾನರಾದ ರಾಜು, ಜಯರಾಮೇಗೌಡ, ಮಂಜೇಗೌಡ, ಅಣ್ಣೇಗೌಡ, ಮುತ್ತುವಳಯ್ಯ, ಸಣ್ಣಸ್ವಾಮಿ, ಉಪಾಧ್ಯಕ್ಷ ವಿ.ಟಿ.ಮಣಿ ಇನ್ನಿತರರಿದ್ದರು.

ಪದವೀಧರರು ಸ್ವಹಿತದ ಜೊತೆಗೆ ಸರ್ವರ ಭವಿಷ್ಯದತ್ತಲೂ ಗಮನಹರಿಸಬೇಕು

- ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಡಾ. ಚಂದ್ರಚೂಡ್ ಸಲಹೆ
- ಜೆಎಸ್‌ಎಸ್ ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಅಕಾಡೆಮಿ ಘಟಿಕೋತ್ಸವ



ಮೈಸೂರಿನ ಶ್ರೀ ಶಿವರಾತ್ರೀಶ್ವರ ನಗರದ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯಲ್ಲಿ ಶುಕ್ರವಾರ ನಡೆದ 15ನೇ ಘಟಿಕೋತ್ಸವ ಸಮಾರಂಭದಲ್ಲಿ ಸುಪ್ರೀಂಕೋರ್ಟ್ ನ ನಿವೃತ್ತ ನ್ಯಾಯಮೂರ್ತಿ ಡಾ.ಧನಂಜಯ ವೈ. ಚಂದ್ರಚೂಡ್ ಘಟಿಕೋತ್ಸವ ಭಾಷಣ ಮಾಡಿದರು.

ಮೈಸೂರು, ಜ.10(ಬಿಎಲ್‌ಯು)– ಪದವೀಧರರು ಸ್ವಹಿತದ ಜೊತೆಗೆ ಸರ್ವರ ಭವಿಷ್ಯಕ್ಕಾಗಿ ಸೇವೆ ಸಲ್ಲಿಸಬೇಕು ಎಂದು ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಡಾ.ಧನಂಜಯ ವೈ. ಚಂದ್ರಚೂಡ್ ಸಲಹೆ ನೀಡಿದ್ದಾರೆ.

ಮೈಸೂರಿನ ಶ್ರೀ ಶಿವರಾತ್ರೀಶ್ವರ ನಗರದ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯಲ್ಲಿ ಇಂದು ನಡೆದ 15ನೇ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಜ್ಞಾನವನ್ನು ಮುಂದಿನ ತಲೆ ಮಾರಿಗೆ ಧಾರೆ ಎರೆಯುವ ವೃತ್ತಿಪರತೆಯನ್ನು ಅನಾದಿ ಕಾಲದಿಂದ ನಡೆಸಿಕೊಂಡು ಬರಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜ್ಞಾನವಂತರು ತಾವು ಕಲಿತ ವಿದ್ಯೆ ಹಾಗೂ ಮೌಲ್ಯವನ್ನು ಮುಂದಿನ ಪೀಳಿಗೆಯ ಭವಿಷ್ಯಕ್ಕೆ ಧಾರೆ ಎರೆಯಬೇಕು ಎಂದು ಹೇಳಿದರು.

ಭಾರತದ ಸಂವಿಧಾನ ನ್ಯಾಯ ಹಾಗೂ ಸಮಾನತೆಯನ್ನು ಪ್ರತಿಯೊಬ್ಬ ನಾಗರಿಕನಿಗೂ ನೀಡಿದೆ. ಈ ನಿಟ್ಟಿನಲ್ಲಿ ಸಮಾಜ ಸಾಗಬೇಕು. ಇದರಲ್ಲಿ ಉನ್ನತ ಶಿಕ್ಷಣ ಪಡೆದವರು ಶಿಕ್ಷಣದ ಮೌಲ್ಯವನ್ನು ಎತ್ತಿ ಹಿಡಿಯಬೇಕು ಎಂದು ಡಾ.ಚಂದ್ರಚೂಡ್ ಕಿವಿಮಾತು ಹೇಳಿದರು.

ಶಿಕ್ಷಣ ಮಹಾ ಅಸ್ತ್ರ: ಸಮಾಜ ಸುಧಾರಣೆಗೆ ಶಿಕ್ಷಣ ದೊಡ್ಡ ಅಸ್ತ್ರವಾಗಿದೆ. ಶಿಕ್ಷಣದ ಮೂಲಕ ಸಮಾಜದಲ್ಲಿರುವ ಅಂಕು ಡೊಂಕುಗಳನ್ನು ತಿದ್ದಿ ಉತ್ತಮ ಭವಿಷ್ಯದ ಸಮಾಜ ಕಟ್ಟಬಹುದು ಎಂದು ಅಭಿಪ್ರಾಯಪಟ್ಟರು.

ಕರುಣೆ, ಮಾನವೀಯತೆ ಹಾಗೂ ಉದಾರತೆ ಎಂಬ ಮೂರು ಅಂಶಗಳನ್ನು ಮೈಗೂಡಿಸಿಕೊಂಡರೆ ನಾವು ಬದುಕುವ ಜಗತ್ತು ಸುಂದರವಾಗಿ ಕಾಣುತ್ತದೆ ಎಂದು ಅಭಿಪ್ರಾಯಪಟ್ಟರು.

ಭಾರತದಲ್ಲಿ ಕೊರೊನಾ ಲಸಿಕೆಯನ್ನು ಪ್ರತಿಯೊಬ್ಬರಿಗೂ ನೀಡಬೇಕಾದ ಪ್ರಸಂಗವನ್ನು ಡಾ.ಚಂದ್ರಚೂಡ್ ವಿವರಿಸಿದರು. ಅಭಿವೃದ್ಧಿ ಹೊಂದಿದ ಹಾಗೂ ಅಭಿವೃದ್ಧಿ ಹೊಂದುತ್ತಿರುವ ರಾಷ್ಟ್ರಗಳು ಕೊರೊನಾ ಲಸಿಕೆಯನ್ನು ಪೂರ್ಣ ಪ್ರಮಾಣದಲ್ಲಿ ನೀಡಲಿಲ್ಲ. ಆದರೆ ಭಾರತದಲ್ಲಿ ಮಧ್ಯ ಪ್ರವೇಶಿಸಿದ ಸುಪ್ರೀಂಕೋರ್ಟ್ ದೇಶದ ಪ್ರತಿಯೊಬ್ಬರಿಗೂ ಕೊರೊನಾ ಲಸಿಕೆ ಉಚಿತವಾಗಿ ಸಿಗುವಂತೆ ಮಾಡಿತು ಎಂದು ತಿಳಿಸಿದರು.

ಆರೋಗ್ಯ ಕ್ಷೇತ್ರದಲ್ಲಿ ಮಾನವೀಯ ಮೌಲ್ಯ: ಆರೋಗ್ಯ ಕ್ಷೇತ್ರದಲ್ಲಿ ಸೇವೆ ಮಾಡುವವರು ಮಾನವೀಯ ಮೌಲ್ಯವನ್ನು ಅಳವಡಿಸಿಕೊಳ್ಳಬೇಕು. ಈ ಮೂಲಕ ನ್ಯಾಯಪರತೆ, ಸಮಾನತೆ ಹಾಗೂ ಮಾನವೀಯ ತತ್ವ ಪಾಲಿಸಬೇಕು. ಆರೋಗ್ಯ ಕ್ಷೇತ್ರದಲ್ಲಿ ಕೆಲಸ ಮಾಡುವವರಿಗೆ ಸಾಮಾಜಿಕ, ಆರ್ಥಿಕ ಸ್ಥಾನಮಾನ ಸೇರಿದಂತೆ ವ್ಯಕ್ತಿಯ ಹಿನ್ನೆಲೆ ಮುಖ್ಯವಾಗಬಾರದು. ವೈದ್ಯರು, ಶುಶ್ರೂಷಕರು, ದಂತ ವೈದ್ಯರು ಹಾಗೂ ಆಡಳಿತಾಧಿಕಾರಿಗಳು ಪ್ರತಿಯೊಬ್ಬರನ್ನು ಸಮಾನವಾಗಿ ಕಾಣಬೇಕು. ಸೇವೆ ತಮ್ಮ ಮುಖ್ಯ ಧ್ಯೇಯ ಎಂಬುದನ್ನು ಪ್ರತಿಪಾದಿಸಬೇಕು ಎಂದು ಡಾ.ಚಂದ್ರಚೂಡ್ ಸಲಹೆ ನೀಡಿದರು.

ಶಿಕ್ಷಣದ ಹಕ್ಕು ಸಮಾನವಾಗಿ ಸಿಗಬೇಕು. ಈ ಹಿನ್ನೆಲೆ ಸುಪ್ರೀಂಕೋರ್ಟ್ ಸಂವಿಧಾನದತ್ತವಾಗಿ ಬಂದಿರುವ ಸಮಾನತೆಯನ್ನು ಎತ್ತಿ ಹಿಡಿದಿದೆ. ಅಂಕವೈಕಲ್ಯತೆ ಕಾರಣದಿಂದ ವೈದ್ಯಕೀಯ ಪರೀಕ್ಷೆ ಬರೆಯಲಾಗದವರಿಗೆ ಮರು ಪರೀಕ್ಷೆಗೆ ಅವಕಾಶ ನೀಡಿದ ಸುಪ್ರೀಂಕೋರ್ಟ್ ನ್ಯಾಯಪರತೆಯನ್ನು ಡಾ.ಚಂದ್ರಚೂಡ್ ತಿಳಿಸಿದರು.

ಉಕ್ರೇನ್ ಹಾಗೂ ಗಾಜಾದಲ್ಲಿ ಯುದ್ಧದ ಕಾರಣದಿಂದ ಜಾಗತಿಕವಾಗಿ ಕೆಲವು ಸವಾಲು ಎದುರಾಗಿದೆ. ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವವರು ಯುದ್ಧದಲ್ಲಿ ಜೀವ ಭಯ ಲೆಕ್ಕಿಸದೆ ಆರೈಕೆ ಮಾಡಬೇಕು. ಇವರಿಗೆ ಫ್ಲಾರೆನ್ಸ್ ನೈಟಿಂಗೇಲ್ ಆದರ್ಶರಾಗಬೇಕು ಎಂದು ಅಭಿಪ್ರಾಯಪಟ್ಟರು.

ಭಾರತ ಕೆಲವು ಸವಾಲುಗಳನ್ನು ದಿಟ್ಟತನದಿಂದ ಎದುರಿಸಬೇಕಿದೆ. ಪರಿಸರ ಸ್ನೇಹಿ ಚಟುವಟಿಕೆಗಳು ಹಾಗೂ ತ್ಯಾಜ್ಯ ಸಂಸ್ಕರಣೆಯನ್ನು ಪರಿಣಾಮಕಾರಿಯಾಗಿ ಮಾಡಬೇಕಿದೆ. ಇಂತಹ ಪ್ರಯತ್ನಗಳಿಂದ ದೇಶದಲ್ಲಿ ಬದಲಾವಣೆಯ ಪರ್ವವನ್ನು ಕಾಣಬೇಕಿದೆ ಎಂದು ಡಾ.ಚಂದ್ರಚೂಡ್ ಹೇಳಿದರು.

ಪದವಿ ಪಡೆದಿರುವ ನಿಮ್ಮ ಕಣ್ಣುಗಳಲ್ಲಿ ಉತ್ತಮ ಭವಿಷ್ಯ ರೂಪಿಸಿಕೊಳ್ಳುವ ತವಕ ಕಾಣುತ್ತಿದೆ. ಈ ಹಿನ್ನೆಲೆ ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ನನಗೆ ಅತೀವ ಸಂತೋಷವಾಗುತ್ತದೆ ಎಂದರು.

ದೇಶ ಕಟ್ಟುವ ಕಾರ್ಯದಲ್ಲಿ ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಕೂಡ ಪ್ರಮುಖ ಕಾರ್ಯ ನಿರ್ವಹಿಸುತ್ತಿದೆ. ಶಿಕ್ಷಣದ ಮೂಲಕ ಸಮಾಜದಲ್ಲಿ ಬದಲಾವಣೆ ತರುವ ಬದ್ಧತೆ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯಲ್ಲಿದೆ ಎಂದು ಡಾ.ಚಂದ್ರಚೂಡ್ ಪ್ರಶಂಸೆ ವ್ಯಕ್ತಪಡಿಸಿದರು.

ಈ ವೇಳೆ ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿಯ 2,795 ಪದವೀಧರರು ಪದವಿ ಮತ್ತು ಡಿಪ್ಲೋಮಾ ಪ್ರಮಾಣ ಪತ್ರ ಸ್ವೀಕರಿಸಿದರು. 104 ವಿದ್ಯಾರ್ಥಿಗಳು ಡಾಕ್ಟರ್ ಆಫ್ ಫಿಲಾಸಫಿ ಪದವಿ ಪಡೆದರೆ, 56 ಪ್ರತಿಭಾನ್ವಿತ ವಿದ್ಯಾರ್ಥಿಗಳು 75 ಪದಕ ಹಾಗೂ ಪ್ರಶಸ್ತಿ ಸ್ವೀಕರಿಸಿದರು.

ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಾನಿಧ್ಯ ವಹಿಸಿದ್ದ ಸಮಾರಂಭದ ವೇದಿಕೆಯಲ್ಲಿ ಜೆಎಸ್‌ಎಸ್ ವಿದ್ಯಾಪೀಠದ ಕಾರ್ಯ ನಿರ್ವಾಹಕ ಕಾರ್ಯದರ್ಶಿ ಡಾ.ಸಿ.ಜಿ.ಬೆಟಸೂರಮಠ, ಸಮಕುಲಾಧಿಪತಿ ಡಾ.ಬಿ.ಸುರೇಶ್, ಕುಲಪತಿ ಡಾ.ಹೆಚ್.ಬಸವನಗೌಡಪ್ಪ, ಕುಲಸಚಿವ ಡಾ.ಬಿ.ಮಂಜುನಾಥ್ ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	**(ದೂ: 2521923)**
ಗೇಮ್ ಚೇಂಜರ್ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	**(ದೂ: 2422871)**
ಗೇಮ್ ಚೇಂಜರ್ (ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	**(ದೂ: 2497199)**
ಫತೇ(ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	**(ಮೊ:9900820093)**
ಭೂ ಮಂತರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಯುಐ (ಕ)	4 ಪ್ರದರ್ಶನಗಳು
ರಾಜಕಮಲ್	
ಗೇಮ್ ಚೇಂಜರ್(ತೆ)	4 ಪ್ರದರ್ಶನಗಳು
ಸಂಗಂ	
ಮ್ಯಾಕ್ಸ್(ಕ)	4 ಪ್ರದರ್ಶನಗಳು
ಲಿಡೋ	
ಭೂ ಮಂತರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಗೇಮ್ ಚೇಂಜರ್ (ಹಿ)	4 ಪ್ರದರ್ಶನಗಳು
ಪ್ರಭಾ	
ಟೆಡ್ಡಿ ಬಿಯರ್(ಕ) + ಪುಷ್ಪ-2 (ಕ)	2+2 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಆಫ್ಟರ್ ದಿ ಬ್ರೇಕಪ್ (ಕ): ಬೆ.9.40ಕ್ಕೆ, ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಮ.12.10ಕ್ಕೆ, ಸಂ.5.20ಕ್ಕೆ, ರಾ.7.45ಕ್ಕೆ, ಯುಐ (2024) (ಕ): ಮ.2.35ಕ್ಕೆ, ರಾ.10.10ಕ್ಕೆ.
ಸ್ಕ್ರೀನ್ 2	ಸೋನಿಕ್ ದಿ ಹೆಡ್ಜಾಗ್ 3(ಇಂ): ಬೆ.11.25ಕ್ಕೆ, ಸಂ.4.30ಕ್ಕೆ, ದೇಶಕ್ಕಾರನ್ (ಮ): ಮ.1.55ಕ್ಕೆ, ಮಾರ್ಕೋ (ಹಿಂ): ರಾ.7ಕ್ಕೆ, ಮಾರ್ಕೋ (ಮ): ರಾ.10.10ಕ್ಕೆ.
ಸ್ಕ್ರೀನ್ 3	ಹರಿದಾಸರ ದಿನಚರಿ (ಕ): ಬೆ.10.30ಕ್ಕೆ, ಕ್ರಾವೆನ್ ದಿ ಹಂಟರ್ (ಇಂ): ಮ.1.40ಕ್ಕೆ, ಸಂ.4.30ಕ್ಕೆ, ಎ ಲೆಜೆಂಡ್ (ಇಂ): ರಾ.7.20ಕ್ಕೆ, ಐಡೆಂಟಿಟಿ (ಮ): ರಾ.10.05ಕ್ಕೆ.
ಸ್ಕ್ರೀನ್ 4	ಮ್ಯಾಕ್ಸ್ (ಕ): ಬೆ.10.20ಕ್ಕೆ, ಮ.1.15ಕ್ಕೆ, ಸಂ.4.10ಕ್ಕೆ, ರಾ.7.05ಕ್ಕೆ, ರಾ.10ಕ್ಕೆ.

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821-2973519

ಸ್ಕ್ರೀನ್ 1	ಪುಷ್ಪಾ 2 (ಕ): ಮ.1ಕ್ಕೆ, ಸ್ವೇಚ್ಛಾ (ಕ): ಸಂ.4.40ಕ್ಕೆ, ಯುಐ (ಕ): ಸಂ.6.55ಕ್ಕೆ, ದೇಶಕ್ಕಾರನ್ (ಮ): ರಾ.9.25ಕ್ಕೆ.
ಸ್ಕ್ರೀನ್ 2	ಮ್ಯಾಕ್ಸ್ (ಕ): ಮ.1.10ಕ್ಕೆ, ಮ.3.50ಕ್ಕೆ, ರಾ.9.15ಕ್ಕೆ.
ಸ್ಕ್ರೀನ್ 3	ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಬೆ.11.25ಕ್ಕೆ, ಯುಐ (ಕ): ಮ.1.45ಕ್ಕೆ, ಮ್ಯಾಕ್ಸ್ (ಕ): ಸಂ.6.25ಕ್ಕೆ.
ಸ್ಕ್ರೀನ್ 4	ಮ್ಯಾಕ್ಸ್ (ಕ): ಬೆ.11ಕ್ಕೆ, ಮುಫಾಸ ದಿ ಲಯನ್ ಕಿಂಗ್ (3ಡಿ)(ಇಂ): ಮ.1.45ಕ್ಕೆ, ಸಂ.6.55ಕ್ಕೆ, ಕ್ರಾವೆನ್ ದಿ ಹಂಟರ್ (ಇಂ): ಸಂ.4.25ಕ್ಕೆ, ರಾ.9.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್,
2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ವೇಶ್ಯಾವಾಟಿಕೆ ಹೆಸರಲ್ಲಿ ಮಹಿಳೆಗೆ ಬ್ಲಾಕ್‌ಮೇಲ್ ಆರೋಪ

ಆರು ಮಂದಿ ವಿರುದ್ಧ ಪ್ರಕರಣ ದಾಖಲು: ಮೂವರ ಬಂಧನ

ಮೈಸೂರು, ಜ. 10(ಆರ್‌ಕೆ)– ವೇಶ್ಯಾವಾಟಿಕೆ ನಡೆಸುತ್ತಿರುವುದಾಗಿ ಮಹಿಳೆಯೊಬ್ಬರನ್ನು ಬ್ಲಾಕ್‌ಮೇಲ್ ಮಾಡಿ ಹಣ ಪೀಕಲೆತ್ನಿಸಿದರೆಂಬ ಆರೋಪದ ಮೇಲೆ ಮೈಸೂರಿನ ಹೆಬ್ಬಾಳು ಠಾಣೆ ಪೊಲೀಸರು 6 ಮಂದಿ ವಿರುದ್ಧ ಪ್ರಕರಣ ದಾಖಲಿಸಿದ್ದು, ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ಮೈಸೂರಿನ ಹಂಚ್ಯಾ ರವಿ, ಮಂಜುನಾಥ ಹಾಗೂ ಕೆ.ಹೆಚ್. ಹನುಮಂತರಾಜು ಬಂಧಿತರಾಗಿದ್ದು, ತಲೆಮರೆಸಿಕೊಂಡಿರುವ ಯೋಗೇಶ್, ದೊರೆಸ್ವಾಮಿ ಹಾಗೂ ಸೂರ್ಯವರ್ಧನರಿಗಾಗಿ ಪೊಲೀಸರು ಶೋಧ ನಡೆಸುತ್ತಿದ್ದಾರೆ.

ಮೈಸೂರಿನ ಹೆಬ್ಬಾಳು 1ನೇ ಹಂತ, ಮಾದೇಗೌಡ ಸರ್ಕಲ್ ಬಳಿ ನಿವಾಸಿ ಚಂದ್ರಶೇಖರ ಅವರ ಪತ್ನಿ ಆರತಿ ಎಂಬುವರು ಜನವರಿ 9ರಂದು ನೀಡಿದ ಲಿಖಿತ ದೂರಿನನ್ವಯ ಗುರುವಾರ ರಾತ್ರಿ ಭಾರತೀಯ ನ್ಯಾಯ ಸಂಹಿತೆ (ಬಿಎನ್‌ಎಸ್) 2023ರ ಕಲಂ 329(4), 319(2), 309(4), 308(2) ಹಾಗೂ 3 (5) ರೀತ್ಯಾ ಯೋಗೇಶ್, ಕೆ.ಹೆಚ್. ಹನುಮಂತರಾಜು, ದೊರೆಸ್ವಾಮಿ, ಸೂರ್ಯವರ್ಧನ, ಮಂಜುನಾಥ ಹಾಗೂ ಹಂಚ್ಯಾ ರವಿ ವಿರುದ್ಧ ಪ್ರಕರಣ ದಾಖಲಿಸಿಕೊಂಡಿರುವ ಹೆಬ್ಬಾಳು ಠಾಣೆ ಸಬ್‌ಇನ್‌ಸ್ಪೆಕ್ಟರ್ ಪ್ರವೀಣ್ ಕುಮಾರ್, ಮೂವರನ್ನು ಬಂಧಿಸಿ ತಲೆಮರೆಸಿಕೊಂಡಿರುವ ಇತರ ಮೂವರ ಪತ್ತೆಗೆ ವ್ಯಾಪಕ ಶೋಧ ನಡೆಸುತ್ತಿದ್ದಾರೆ.

2024ರ ಡಿಸೆಂಬರ್ 28ರಂದು ಸಂಜೆ 4.30 ಗಂಟೆ ವೇಳೆಗೆ ಯೋಗೇಶ್, ಕೆ.ಹೆಚ್. ಹನುಮಂತರಾಜು, ದೊರೆಸ್ವಾಮಿ, ಸೂರ್ಯವರ್ಧನ್, ಮಂಜುನಾಥ ಹಾಗೂ ಹಂಚ್ಯಾ ರವಿ ನನ್ನ ಮನೆಗೆ ಬಂದು ನಾವು ಮೀಡಿಯಾದವರು, ನೀವು ಮನೆಯಲ್ಲಿ ವೇಶ್ಯಾವಾಟಿಕೆ ದಂಧೆ ನಡೆಸುತ್ತೀರಿ. ನಿಮ್ಮ ವಿರುದ್ಧ ಕೇಸು ಕೊಡುತ್ತೇವೆ ಎಂದು ಬೆದರಿಸಿ ಈ ವಿಷಯ ಗೊತ್ತಾಗಬಾರದೆಂದರೆ ನಮಗೆ 1 ಲಕ್ಷ ಹಣ ಕೊಡಬೇಕೆಂದು ಕೇಳಿದರು. ನಾನು ಆರೋಪವನ್ನು ತಳ್ಳಿಹಾಕಿದೆ. ಆದರೂ, ಕೇಳದ ಅವರು ನನ್ನ ಕಿವಿ ಓಲೆ ಬಿಚ್ಚಿಸಿಕೊಂಡು ಆದಷ್ಟು ಬೇಗ ಹಣ ಅರೇಂಜ್ ಮಾಡಬೇಕೆಂದು ಧಮ್ಕಿ ಹಾಕಿ ಹೋಗಿದ್ದರು ಎಂದು ಆರತಿ ದೂರಿನಲ್ಲಿ ಆರೋಪಿಸಿದ್ದರು.

ಮತ್ತೆ ನನ್ನ ಮನೆಗೆ ಅತಿಕ್ರಮ ಪ್ರವೇಶ ಮಾಡಿದ 6 ಮಂದಿ ನನ್ನ ಮೇಲೆ ವೇಶ್ಯಾವಾಟಿಕೆ ದಂಧೆ ಸುಳ್ಳು ಆರೋಪ ಹೊರಿಸಿ ನಮ್ಮ ಜೊತೆ ಪೊಲೀಸರೂ ಬಂದಿದ್ದಾರೆ ಎಂದು ಸುಳ್ಳು ಹೇಳಿ ನನ್ನಿಂದ ಪಡೆದು ಕೊಂಡಿದ್ದ ಚಿನ್ನದ ಓಲೆಗಳನ್ನು ಮರಳಿಸಿ, ಹಣ ಕೊಡುವಂತೆ ಒತ್ತಾಯಿಸಿದರು ಎಂದು ಅವರು ದೂರಿನಲ್ಲಿ ತಿಳಿಸಿದ್ದರು.

ಕ್ಯಾಲೆಂಡರ್ ಬಿಡುಗಡೆ...



ಕರ್ನಾಟಕ ರಾಜ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಜಿಲ್ಲಾ ಸಂಘದ 2025 ನೇ ಸಾಲಿನ ಕ್ಯಾಲೆಂಡರ್ ಅನ್ನು ಜಿಪಂ ಸಿಇಒ ಕೆ.ಎಂ.ಗಾಯಿತ್ರಿ ಬಿಡುಗಡೆಗೊಳಿಸಿದರು. ಜಿಪಂ ಲೆಕ್ಕಾಧಿಕಾರಿ ಸಿದ್ದಗಂಗಮ್ಮ, ಸಹಾಯಕ ಯೋಜನಾಧಿಕಾರಿ ಸುಬ್ರಹ್ಮಣ್ಯ ಶರ್ಮ, ಸಂಘದ ಗೌರವಾಧ್ಯಕ್ಷ ಬಿ.ಎಸ್.ರೂಪೇಶ್, ಜಿಲ್ಲಾಧ್ಯಕ್ಷ ಕೆ.ರುಕ್ಮಾಂಗದ, ಖಜಾಂಚಿ ಸಿ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಎಂ.ಎಚ್.ಮೋಹನ್ ಕುಮಾರ್, ಉಪಾಧ್ಯಕ್ಷರಾದ ಮೊಹಮ್ಮದ್ ಇಸ್ಹಾಕ್, ಎಸ್.ವಿ.ಸೌಮ್ಯ ಸಂಘಟನಾ ಕಾರ್ಯದರ್ಶಿ ವಿ.ಎನ್.ಪೂರ್ಣಿಮಾ, ರಾಘವೇಂದ್ರ ಪ್ರಸನ್ನ, ಸಾಂಸ್ಕೃತಿಕ ಟಿ.ಸೌಮ್ಯಲತಾ, ಮಾಯಪ್ಪ, ಗಿರೀಶ್, ಬಸವರಾಜು ಮತ್ತಿತರರಿದ್ದರು.

ಬೆಂಗಳೂರಲ್ಲಿ ಕೆರೆ ಒತ್ತುವರಿ; ಮೂವರಿಗೆ 1 ವರ್ಷ ಜೈಲು

ಬೆಂಗಳೂರು, ಜ.10– ಸಿಲಿಕಾನ್ ಸಿಟಿ ಬೆಂಗಳೂರಿನ ಸರ್ಕಾರಿ ಕೆರೆಯ ಜಾಗವನ್ನು ಒತ್ತುವರಿ ಮಾಡಿಕೊಂಡು ಅದರಲ್ಲಿ ಮನೆಗಳನ್ನು ಹಾಗೂ ಮನೆಗೆ ಹೆಚ್ಚುವರಿ ಶೌಚಾಲಯವನ್ನು ನಿರ್ಮಾಣ ಮಾಡಿಕೊಂಡಿದ್ದ ಮೂವರಿಗೆ 1 ವರ್ಷ ಕಾರಾಗೃಹ ಶಿಕ್ಷೆ ವಿಧಿಸಿ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯದಿಂದ ಆದೇಶ ಹೊರಡಿಸಲಾಗಿದೆ.


ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲೂಕು, ಅತ್ತಿಬೆಲೆ ಹೋಬಳಿ, ಹೆಬ್ಬಗೋಡಿ ಗ್ರಾಮದ ಸರ್ವೇ ನಂ.159ರ 32 ಎಕರೆ 13 ಗುಂಟೆ ಸರ್ಕಾರಿ ಕೆರೆಯ ಜಮೀನನ್ನು ಕೃಷ್ಣಪ್ಪ, ನಂಜಪ್ಪ, ರಾಮಯ್ಯ, ಎಂ.ವೆಂಕಟೇಶ್, ಹೆಚ್.ಎಂ.ಸುಬ್ಬಣ್ಣ, ಲಕ್ಷ್ಮೀದೇವಿ, ಪಿಳ್ಳಪ್ಪರವರುಗಳು ಅನಧಿಕೃತವಾಗಿ ಒತ್ತುವರಿ ಮಾಡಿಕೊಂಡು ಶೌಚಾಲಯ ಮತ್ತು ವಾಸದ ಮನೆಗಳನ್ನು ನಿರ್ಮಾಣ ಮಾಡಿಕೊಂಡಿದ್ದರು. ಇವರ ವಿರುದ್ಧ ಬೆಂಗಳೂರು ಮಹಾನಗರ ಕಾರ್ಯಪಡೆ (ಬಿಎಂಟಿಎಫ್) ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿ, ತನಿಖೆ ಕೈಗೊಳ್ಳಲಾಗಿತ್ತು


ಬಿಎಂಟಿಎಫ್ ಪೊಲೀಸರು ಈ ಪ್ರಕರಣದ ತನಿಖೆಯನ್ನು ಕೈಗೊಂಡು ಸಾಕ್ಷ್ಯಾಧಾರಗಳನ್ನು ಮತ್ತು ದಾಖಲಾತಿಗಳನ್ನು ಸಂಗ್ರಹಿಸಿ ಆರೋಪಿಗಳ ವಿರುದ್ಧ ಬೆಂಗಳೂರಿನ ಕರ್ನಾಟಕ ಭೂ ಕಬಳಿಕೆ ನಿಷೇಧ ವಿಶೇಷ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿ ಸಲ್ಲಿಸಿದ್ದರು. ಈ ಚಾರ್ಜ್‌ಶೀಟ್ ಆಧಾರದಲ್ಲಿ ನ್ಯಾಯಾಲಯ ವಿಚಾರಣೆ ಮಾಡಿದಾಗ ಆರೋಪಿಗಳು ಸರ್ಕಾರಿ ಕೆರೆಯ ಸ್ವತ್ತನ್ನು ಅಕ್ರಮವಾಗಿ ಒತ್ತುವರಿ ಮಾಡಿ ಶೌಚಾಲಯ ಮತ್ತು ಮನೆಗಳನ್ನು ನಿರ್ಮಾಣ ಮಾಡಿರುವುದು ಧೃಡಪಟ್ಟಿದೆ. ಹೀಗಾಗಿ, ಎಂ.ವೆಂಕಟೇಶ್, ಹೆಚ್.ಎಂ. ಸುಬ್ಬಣ್ಣ ಮತ್ತು ಲಕ್ಷ್ಮೀದೇವಿ ಅವರಿಗೆ 1 ವರ್ಷ ಜೈಲು ಶಿಕ್ಷೆ ಮತ್ತು 5,000 ರೂ. ದಂಡ ವಿಧಿಸಿ ಆದೇಶ ಹೊರಡಿಸಿದೆ.

ಸದರಿ ಪ್ರಕರಣದಲ್ಲಿ ತನಿಖಾಧಿಕಾರಿಯಾಗಿದ್ದ ಬಿಎಂಟಿಎಫ್ ಪೊಲೀಸ್ ಇನ್‌ಸ್ಪೆಕ್ಟರ್ ಟಿ.ಡಿ.ರಾಜು ಅವರು ತನಿಖೆ ಕೈಗೊಂಡು ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುವ ಉತ್ತಮ ತನಿಖೆಗಾಗಿ ಮತ್ತು ತನಿಖೆಗೆ ಸಹಕರಿಸಿದ ಸಿಬ್ಬಂದಿಯವರಿಗೆ ಹಾಗೂ ನ್ಯಾಯಾಲಯದಲ್ಲಿ ಸದರಿ ಪ್ರಕರಣದ ವಿಚಾರಣಾ ಕಾಲದಲ್ಲಿ ಸಹಕರಿಸಿದ ಕೋರ್ಟ್ ಮಾನಿಟರಿಂಗ್ ಘಟಕದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಬಿಎಂಟಿಎಫ್ ಎಡಿಜಿಪಿ ಸೀಮಂತ್ ಕುಮಾರ್ ಸಿಂಗ್ ಹಾಗೂ ಬಿಎಂಟಿಎಫ್ ಎಸ್‌ಪಿ ಡಾ.ಸುಮನ್ ಡಿ.ಪನ್ನೇಕರ್ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

ಮೈಸೂರು ಬಂಬೂಬಜಾರ್‌ನ ಮೇದರ್ ಬ್ಲಾಕ್ ಬಳಿಯ

ರೈಲ್ವೆ ಅಂಡರ್‌ಪಾಸ್ ಹಳ್ಳಕೊಳ್ಳದಲ್ಲಿ ಆಯತಪ್ಪಿದರೆ ಘೋರ ಅಪಾಯ!





ಮೈಸೂರಿನ ಬಂಬೂಬಜಾರ್‌ನ ಮೇದರ್ ಬ್ಲಾಕ್ ಸಮೀಪ ಜಾವಾ ಮುಖ್ಯರಸ್ತೆಯಲ್ಲಿರುವ ರೈಲ್ವೆ ಕೆಳಸೇತುವೆ ರಸ್ತೆಯ ದುಸ್ಥಿತಿ.

ಮೈಸೂರು,ಜ.10(ಪಿಎಂ)– ರೈಲ್ವೆ ಅಂಡರ್‌ಪಾಸ್‌ನಲ್ಲಿ ರಸ್ತೆಯ ಡಾಂಬರ್ ಕಿತ್ತು ಬಂದು ಹಳ್ಳ-ಕೊಳ್ಳಗಳು ನಿರ್ಮಾಣಗೊಂಡಿದ್ದು, ವಾಹನ ಸವಾರರು ಜೀವ ಕೈಯಲ್ಲಿಡಿದು ಸಾಗುವ ಸನ್ನಿವೇಶ ಸೃಷ್ಟಿಯಾಗಿದೆ. ಸವಾರರಿಗೆ ಇಲ್ಲಿ ಆಯತಪ್ಪುವ ಅಪಾಯ ಎದುರಾಗಿದೆ ಹೌದು, ಮೈಸೂರಿನ ಬಂಬೂ ಬಜಾರ್‌ನ ಮೇದರ್ ಬ್ಲಾಕ್ ಸಮೀಪ ಜಾವಾ ಮುಖ್ಯರಸ್ತೆಯಲ್ಲಿರುವ ರೈಲ್ವೆ ಕೆಳಸೇತುವೆ (ಅಂಡರ್ ಪಾಸ್) ರಸ್ತೆಯ ದುಸ್ಥಿತಿ ಇದು.

ಬನ್ನಿಮಂಟಪದ ಮೌಲಾನಾ ಅಬ್ದುಲ್ ಕಲಾಂ ಆಜಾದ್ ವೃತ್ತ, ಹಾಗೆಯೇ ಸಾಮಾನ್ಯವಾಗಿ ಕರೆಯಲ್ಪಡುವ ಹೈವೆ ಸರ್ಕಲ್ ಇಲ್ಲವೇ ಎಲಿಫೆಂಟ್ ಸರ್ಕಲ್‌ನಿಂದ ಜಾವಾ ಮುಖ್ಯರಸ್ತೆಯಲ್ಲಿ ಸಾಗಿದರೆ ಸದರಿ ರೈಲ್ವೆ ಅಂಡರ್‌ಪಾಸ್ ದಾಟುತ್ತಿದ್ದಂತೆ ಯಾದವಗಿರಿಗೆ ತಲುಪಬಹುದು. ಹೀಗಾಗಿ ಪ್ರತಿದಿನ ಬೆಳಗ್ಗೆಯಿಂದ ಸಂಜೆಯವರೆಗೂ ಸದರಿ ಅಂಡರ್‌ಪಾಸ್‌ನಲ್ಲಿ ವಾಹನ ಸಂಚಾರ ಇದ್ದೇ ಇರುತ್ತದೆ. ಬನ್ನಿಮಂಟಪದಿಂದ ಯಾದವಗಿರಿಯತ್ತ ಸಾಗುವ ಭಾಗ ಬಹುತೇಕ ಸುಸ್ಥಿತಿಯಲ್ಲಿದೆ.

ಆದರೆ ಯಾದವಗಿರಿಯಿಂದ ಬನ್ನಿಮಂಟಪದತ್ತ ಬರಲು ಇರುವ ಅಂಡರ್ ಪಾಸ್‌ನ ಭಾಗದಲ್ಲಿ ಗುಂಡಿಗಳಿಗೆ ಲೆಕ್ಕವಿಲ್ಲ. ಇಲ್ಲಿ ಬಹುತೇಕ ಇಡೀ ಅಂಡರ್ ಪಾಸ್‌ನ ರಸ್ತೆಯುದ್ದಕ್ಕೂ ಡಾಂಬರ್ ಕಿತ್ತು ಬಂದಿದ್ದು, ವಾಹನ ಸವಾರರು ಇಲ್ಲಿ ಎಚ್ಚರಿಕೆಯಿಂದ ಸಾಗಬೇಕಿರುವ ಸನ್ನಿವೇಶ ನಿರ್ಮಾಣವಾಗಿದೆ. ಒಂದು ವೇಳೆ ಆಯತಪ್ಪಿದರೆ ಅನಾಹುತ ತಪ್ಪಿದ್ದಲ್ಲ ಎನ್ನುವಂತಾಗಿದೆ. ಹಾಗಾಗಿ ಇಲ್ಲಿ ವಾಹನ ಸವಾರರು ಜೀವ ಕೈಯ್ಯಲ್ಲಿಡಿದು ಸಾಗುತ್ತಿದ್ದಾರೆ. ಈ ಅಂಡರ್‌ಪಾಸ್‌ನಲ್ಲಿ ಹಗಲಿನಲ್ಲೂ ಸಾಕಷ್ಟು ಕತ್ತಲು ಇರುವ ಕಾರಣ ಹೆಡ್‌ಲೈಟ್ ಆನ್ ಮಾಡಿ ಸಾಗದಿದ್ದರೆ ಹಳ್ಳಕೊಳ್ಳದಲ್ಲಿ ಸಿಲುಕಿ ವಾಹನ ಸವಾರರು ಹೈರಾಣಾಗುವುದು ಗ್ಯಾರಂಟಿಯಾಗಿದೆ.

ಇಂತಹ ದುಸ್ಥಿತಿ ಇಲ್ಲಿ ಸೃಷ್ಟಿಯಾಗಿ ದಿನಗಳು ಉರುಳುತ್ತಿದ್ದರೂ ರೈಲ್ವೆ ಇಲಾಖೆ ಇಲ್ಲವೇ ಮೈಸೂರು ಮಹಾನಗರಪಾಲಿಕೆ ಗುಂಡಿಗಳಿಗೆ ಒಂದಿಷ್ಟು ಮಣ್ಣು ಹಾಕುವ ಕೆಲಸಕ್ಕೂ ಕೈ ಹಾಕಿಲ್ಲ. ಹೀಗಾಗಿ ಇಲ್ಲಿ ಸಾಗುವ ವಾಹನ ಸವಾರರು ನಿತ್ಯ ತೊಂದರೆ ಅನುಭವಿಸುತ್ತಿದ್ದಾರೆ. ಬಂದ ವೇಗದಲ್ಲೇ ವಾಹನಗಳನ್ನು ಇಲ್ಲಿ ಚಾಲನೆ ಮಾಡಿದರೆ ನಿಯಂತ್ರಣ ಕಳೆದುಕೊಂಡು ಅನಾಹುತಕ್ಕೆ ತುತ್ತಾಗುವುದು ತಪ್ಪಿದ್ದಲ್ಲ.

ಫುಟ್‌ಪಾತ್ ಸಹ ದುಸ್ಥಿತಿ: ಈ ಅಂಡರ್ ಪಾಸ್‌ನಲ್ಲಿ ಪಾದಚಾರಿಗಳು ಸಾಗಲು ಪ್ರತ್ಯೇಕ ಫುಟ್‌ಪಾತ್ ವ್ಯವಸ್ಥೆ ಸಹ ಇದೆ. ಆದರೆ ಒಂದು ಬದಿಯಲ್ಲಿ ಫುಟ್‌ಪಾತ್ ಕಾಂಕ್ರೀಟ್ ಕಳಚಿ ಬಿದ್ದಿದೆ. ಮಳೆ ನೀರು ಚರಂಡಿ ನಿರ್ಮಿಸಿ ಅದರ ಮೇಲೆ ಸ್ಲಾಬ್ ಹಾಕಲಾಗಿದ್ದು, ಇದು ಕುಸಿದು ಚರಂಡಿಯೊಳಕ್ಕೆ ಬಿದ್ದಿರುವ ಹಿನ್ನೆಲೆಯಲ್ಲಿ ಭಾರಿ ಮಳೆ ಬಂದಾಗ ನೀರು ಸರಾಗವಾಗಿ ಸಾಗದೇ ಕೆರೆಯ ವಾತಾವರಣ ನಿರ್ಮಾಣವಾಗುತ್ತಿದೆ.

ಜೊತೆಗೆ ಕಾಂಕ್ರೀಟ್‌ನಲ್ಲಿರುವ ಕಬ್ಬಿಣದ ಸಲಾಕೆಗಳು ಅಪಾಯಕಾರಿ ರೀತಿಯಲ್ಲಿ ಚಾಚಿಕೊಂಡಿವೆ. ಹೀಗಾಗಿ ಇಲ್ಲಿ ಪಾದಚಾರಿಗಳು ಎಚ್ಚರಿಕೆಯಿಂದ ಹೆಜ್ಜೆ ಹಾಕದಿದ್ದರೆ ಅಪಾಯ. ಜೊತೆಗೆ ಇಲ್ಲಿನ ಇಡೀ ವಾತಾವರಣದಲ್ಲಿ ಸ್ವಚ್ಛತೆ ಮರೀಚಿಕೆಯಾಗಿದೆ. ಧೂಳು ಮತ್ತು ತರಗೆಲೆ, ಕಸ-ಕಡ್ಡಿ ವಾಹನಗಳ ಸಾಗುವ ರಭಸಕ್ಕೂ ಮೇಲೆದ್ದು ಕಿರಿಕಿರಿ ಉಂಟಾಗುತ್ತಿದೆ.

ಅಂಡರ್‌ಪಾಸ್ ನಿರ್ವಹಣೆ ಮರೆತ ರೈಲ್ವೆ: ಅಂಡರ್‌ಪಾಸ್ ಕಟ್ಟಡದ ಮೇಲೆ ಮತ್ತು ಬದಿಗಳಲ್ಲಿ ಗಿಡಗಂಟಿ ಆಳುದ್ದ ಬೆಳೆದು ನಿಂತಿವೆ. ಇದರಿಂದ ಅಂಡರ್ ಪಾಸ್ ಕಟ್ಟಡಕ್ಕೂ ಹಾನಿಯುಂಟಾಗುತ್ತಿದೆ. ದೀರ್ಘ ಕಾಲದವರೆಗೆ ಈ ಅಂಡರ್ ಪಾಸ್ ಬಾಳಿಕೆ ಬರಲೆಂಬ ದೃಷ್ಟಿ ಸದ್ಯ ರೈಲ್ವೆ ಇಲಾಖೆಯವರಿಗೆ ಇದ್ದಂತೆ ಕಾಣುತ್ತಿಲ್ಲ. ಏಕೆಂದರೆ ಗಿಡಗಂಟಿ ಅಂಡರ್‌ಪಾಸ್ ಆವರಿಸಿದ್ದರೂ ಕಾಲ ಕಾಲಕ್ಕೆ ಅವುಗಳನ್ನು ತೆರವುಗೊಳಿಸುವ ಕಾಯಕಕ್ಕೆ ರೈಲ್ವೆ ಇಲಾಖೆ ಕೈ ಹಾಕುತ್ತಿಲ್ಲ. ಅಲ್ಲದೆ, ಅಂಡರ್‌ಪಾಸ್ ಆಸುಪಾಸಲ್ಲಿರುವ ಮಳೆ ನೀರು ಚರಂಡಿಯಲ್ಲಿ ಪ್ಲಾಸ್ಟಿಕ್ ಸೇರಿದಂತೆ ತರಾವರಿ ತ್ಯಾಜ್ಯಗಳು ಬಿದ್ದಿದ್ದರೂ ತೆರವಿಗೆ ಮಾತ್ರ ಪಾಲಿಕೆ ಮುಂದಾಗಿಲ್ಲ. ಪರಿಣಾಮ ಮಳೆ ಬಂದಾಗ ನೀರು ಸಲೀಸಾಗಿ ಸಾಗದೇ ನಿಲ್ಲುವಂತೆ ಆಗಿದೆ.

ಸದಾ ವಾಹನ ದಟ್ಟಣೆ



ಬನ್ನಿಮಂಟಪದ ಕಡೆಯಿಂದ ಮಂಜುನಾಥಪುರ, ಮೇಟಗಳ್ಳಿ, ಯಾದವಗಿರಿ, ಆಕಾಶವಾಣಿ ಮೊದಲಾದ ಕಡೆಗಳಿಗೆ ಸಾಗಲು ಸಾರ್ವಜನಿಕರು ಈ ಅಂಡರ್‌ಪಾಸ್ ಮಾರ್ಗವನ್ನು ಆಶ್ರಯಿಸಿದ್ದಾರೆ. ಅಂತೆಯೇ ಈ ಎಲ್ಲಾ ಪ್ರದೇಶಗಳಿಂದಲೂ ಬನ್ನಿ ಮಂಟಪದ ವಿವಿಧ ಭಾಗಗಳಿಗೆ ಸಾಗಲು ಸಹ ಅಂಡರ್‌ಪಾಸ್ ಮಾರ್ಗ ಅನಿವಾರ್ಯವಾಗಿದೆ. ಹೀಗಾಗಿ ನಿತ್ಯ ವಾಹನ ದಟ್ಟಣೆ ಇಲ್ಲಿ ಸಾಮಾನ್ಯ. ರಾತ್ರಿ ವೇಳೆ ಈ ಅಂಡರ್‌ಪಾಸ್‌ನಲ್ಲಿ ಒಮ್ಮೊಮ್ಮೆ ವಿದ್ಯುತ್ ದೀಪಗಳು ಬೆಳಗುತ್ತಿಲ್ಲವೆಂಬ ಆರೋಪ ಇಲ್ಲಿ ಸಂಚರಿಸುವ ವಾಹನ ಸವಾರರಿಂದ ಕೇಳಿಬಂದಿದೆ. ಈಗಲಾದರೂ ಮೈಸೂರು ಮಹಾನಗರ ಪಾಲಿಕೆ, ರೈಲ್ವೆ ಇಲಾಖೆ ಇಲ್ಲಿನ ದುಸ್ಥಿತಿ ನಿವಾರಿಸಲು ಮುಂದಾಗುವರೇ ಕಾದು ನೋಡಬೇಕಿದೆ.



ಪ್ರಯೋಜನಕ್ಕೆ ಬಾರದ ಫಲಕ...

ವಿವಿ ಪುರಂ ಪೊಲೀಸ್ ಠಾಣೆ ಫಲಕ ಸಹ ಇಲ್ಲಿದ್ದು, ಪ್ರಯೋಜನಕ್ಕೆ ಬಾರದಾಗಿದೆ. ಏಕೆಂದರೆ ಈ ಫಲಕವನ್ನು ಗಿಡ ಮರ ಬಳ್ಳಿ ಆವರಿಸಿಕೊಂಡಿದ್ದು, ಫಲಕದಲ್ಲಿರುವ ಪೊಲೀಸ್ ಸಹಾಯವಾಣಿ ಯಾವುದೇ ದೂರವಾಣಿ ಸಂಖ್ಯೆಗಳು ಕಾಣಿಸದಾಗಿವೆ. 'ವಿವಿ ಪುರಂ ಪೊಲೀಸ್ ಠಾಣೆ ಸರಹದ್ದು ಪ್ರಾರಂಭ' ವಾಕ್ಯದೊಂದಿಗೆ ಪೊಲೀಸ್ ಕಂಟ್ರೋಲ್ ರೂಂ ಸಂಖ್ಯೆ, ವಿವಿ ಪುರಂ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆಯನ್ನು ಈ ಫಲಕದಲ್ಲಿ ನಮೂದಿಸಲಾಗಿದೆ. ಆದರೆ ಗಿಡ-ಮರಗಳ ಮರೆಯಲ್ಲಿ ಸಿಲುಕಿ ಸಾರ್ವಜನಿಕರ ಕಣ್ಣಿಗೆ ಕಾಣಿಸದಾಗಿದೆ.

SITE FOR SALE

50'x70' - North Face,
40 feet Road,
Roopa Nagar, 4000 per sq feet

45'x60' - Commercial Site on 60ft Road for Sale in KBL Gardenia Layout, attached to Vijayanagara 4th Stage. 4750 per sqft

8884 616461 / 87922 35466

ಉತ್ತರ ಕ್ರಿಯಾದಿ ಆಹ್ವಾನ ಪತ್ರಿಕೆ



ಇವರು ದಿನಾಂಕ: 01.01.2025 ಬುಧವಾರ ದೈವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ತತ್ಸಂಬಂಧ ಮೃತರ ಉತ್ತರ ಕ್ರಿಯಾದಿ ಕಾರ್ಯವನ್ನು ದಿನಾಂಕ: 11.01.2025 ಶನಿವಾರ ಬೆಳಿಗ್ಗೆ 11 ಗಂಟೆಗೆ ಮೃತರ ಸ್ವಗೃಹ #16, 2ನೆ ಕ್ರಾಸ್, ಮಾರಿಗುಡಿ ರಸ್ತೆ, ಕುಂಬಾರಕೊಪ್ಪಲು, ಮೈಸೂರು ಇಲ್ಲಿ ಏರ್ಪಡಿಸಿರುವುದರಿಂದ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

ದುಃಖತಪ್ತರು:
ಶ್ರೀಮತಿ ಪವಿತ್ರ ಮತ್ತು
ಶ್ರೀ ಕೃಷ್ಣ, ಲೇಟ್ ಸೀತಾರಾಮೇಗೌಡರ ಕುಟುಂಬದವರು ಹಾಗೂ ಬಂಧು-ಮಿತ್ರರು

ಭೋಜನ: ಮಧ್ಯಾಹ್ನ 1.00 ಗಂಟೆಗೆ

COMMERCIAL SPACE AVAILABLE FOR RENT
Basement - 1200 sq ft
Ground floor - 1600 sq ft
First floor - 1600 sq ft
Houses for Rent - 1 & 2 BHK



For Enquiry Contact :
+91 9035379769/ 9845289330



ಯುರೋಗ್ರಿಪ್ ಟೈಯರ್ ಎಕ್ಸ್‌ಕ್ಲೂಸಿವ್ ಸ್ಟೋರ್

ಸೇವೆಗಳು ಲಭ್ಯವಿದೆ

- ಟಯರ್ ಫಿಟ್‌ಮೆಂಟ್ ಮತ್ತು ವೀಲ್ ಬ್ಯಾಲೆನ್ಸಿಂಗ್
- ಟೈಯರ್‌ಗಳು, ಟ್ಯೂಬುಗಳು ಮತ್ತು ಲೂಬ್ರಿಕೆಂಟ್‌ಗಳು
- ಬೈಕ್‌ಗಳ ಅಸಸರೀಸ್ ಮತ್ತು ಸರಕು

2 ಟೈರ್‌ಗಳನ್ನು ಖರೀದಿಸಿ ಮತ್ತು ಉಚಿತ ಫಿಟ್‌ಮೆಂಟನ್ನು ಪಡೆಯಿರಿ
ಎಲ್ಲಾ ಖ್ಖಖ ಆಕ್ಸೆಸರಿಗಳ ಮೇಲೆ 25% ರಿಯಾಯಿತಿ

ಟೈರ್ ಹೌಸ್

ಚಾಮರಾಜ ಡಬಲ್ ರಸ್ತೆ (100 ಅಡಿ ರಸ್ತೆ)
ಕೆ.ಆರ್.ಮೊಹಲ್ಲಾ, ಮೈಸೂರು
ಮೊಬೈಲ್ - 94834 25100

ಉಚಿತ ಉಡುಗೊರೆಗಳು!

T&C apply.

ಯುರೋಗ್ರಿಪ್ ಟೈರ್‌ಗಳು, ಭಾರತದ ಪ್ರಮುಖ ದ್ವಿಚಕ್ರ ವಾಹನದ ಟೈರ್ ತಯಾರಕರು.

ಉತ್ತರ ಕ್ರಿಯಾದಿ ಆಹ್ವಾನ



ಶ್ರೀಮತಿ ಚಾಮಮ್ಮ ರವರು

ಇವರು ದಿನಾಂಕ 01-01-2025ನೇ ಬುಧವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ಉತ್ತರ ಕ್ರಿಯಾದಿ ಭೂಶಾಂತಿ ಕಾರ್ಯವನ್ನು ದಿನಾಂಕ 11-01-2025ರ ಶನಿವಾರ ಬೆಳಗ್ಗೆ 10-00 ಗಂಟೆಗೆ ಗೋಕುಲಂನ ರುದ್ರಭೂಮಿಯಲ್ಲಿ ಏರ್ಪಡಿಸಿರುವುದರಿಂದ ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.
ದುಃಖತಪ್ತರು: ಮೃತರ ಗಂಡುಮಕ್ಕಳು, ಹೆಣ್ಣುಮಕ್ಕಳು ಹಾಗೂ ಕುಟುಂಬವರ್ಗದವರು.

ಭೋಜನ: ಮಧ್ಯಾಹ್ನ: 12.30 ಗಂಟೆಗೆ | ಸ್ಥಳ: ನಮ್ಮ ಸ್ವಗೃಹ, ಪಡುವಾರಹಳ್ಳಿ, ಮೈಸೂರು.

Exchange your old sofa set to brand new sofa set. Also repair Done, Contact
9591012944

Tele Sales Executives Salary + Incentives
Work from Home/Office — Kannada, Tamil, Malayalam, Hindi, Telugu
Mysore 8748886600

SITES FOR SALE
20X30 & 30X40
- Near Srinagara
- Near Uttanahalli Temple
- All Dimension Sites Available

NIDHI ESTATES 99018 48182 / 88927 48934

100% NEEM WOOD PLYWOOD & DOORS
@ FACTORY DEPOT RATES
NEEM BOND PLATINUM® 10yrs WARRANTY
ISO 9001:2015 Certified Depot
CALL 99012 91267 / 98454 26862




2024-25 ನೇ ಸಾಲಿನ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳ ಫಲಿತಾಂಶವನ್ನು ಉತ್ತಮಪಡಿಸಲು

ಕಲಿಕಾ ಬೆಂಬಲ

- ಉತ್ತೀರ್ಣನಾಗು
- ಹೆಚ್ಚು ಅಂಕಗಳಸು
- ಸಾಧನೆ ಮಾಡು

ಕನ್ನಡ
English
हिंदी
Mathematics
Science
Social Science

ಇಂಗ್ಲಿಷ್ ಮಾಧ್ಯಮ
10ನೇ ತರಗತಿ



ಎಸ್. ಎಸ್. ಎಲ್. ಸಿ. ಫಲಿತಾಂಶವನ್ನು ಉತ್ತಮಪಡಿಸಲು "ಕಲಿಕಾ ಬೆಂಬಲ" ಎಂಬ ಎಲ್ಲಾ ವಿಷಯಗಳನ್ನು ಒಳಗೊಂಡ ಸಂಪನ್ಮೂಲ ಪುಸ್ತಕವನ್ನು ವಿತರಿಸುವ ಹಾಗೂ ಎಸ್. ಎಸ್. ಎಲ್. ಸಿ. ವಿದ್ಯಾರ್ಥಿಗಳಿಗೆ ಶುಭ ಸಂದೇಶ ಪತ್ರ ನೀಡುವ ಕಾರ್ಯಕ್ರಮಕ್ಕೆ ಸರ್ಕಾರಿ ಪ್ರೌಢಶಾಲೆ, ಕುಂಬಾರಕೊಪ್ಪಲಿಗೆ ಆಗಮಿಸುತ್ತಿರುವ

ಚಾಮರಾಜ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ
ಕೆ ಹರೀಶ್ ಗೌಡ ರವರಿಗೆ ಸುಸ್ವಾಗತ
ಸ್ವಾಗತ ಬಯಸುವವರು : ಕಾಂಗ್ರೆಸ್‌ನ ಮಾಜಿ ನಗರಪಾಲಿಕೆ ಸದಸ್ಯರುಗಳು, ಕಾರ್ಯಕರ್ತರುಗಳು ಹಾಗೂ ಕುಂಬಾರಕೊಪ್ಪಲಿನ ಗ್ರಾಮಸ್ಥರು

